23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 309 | ನವದೆಹಲಿ | ಬೆಲೆ ₹10 | ಮೇ 15 2026, ಶುಕ್ರವಾರ



## ನಿತ್ಯ ಪಂಚಾಂಗ 15.05.2026 ಶುಕ್ರವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ-ವಸಂತ ಋತು, ಚಾಂದ್ರಮಾನ, ಚೈತ್ರ-ವೈಶಾಖ ಮಾಸ

ವೈಶಾಖ ಬಹುಳ, ತ್ರಯೋದಶಿ, ಅಶ್ವಿನಿ ನಕ್ಷತ್ರ, ಚತುರ್ದಶಿ , ವೃಷಭ ಸಂಕ್ರಮಣ, ಭಾಗಮಂಡಲ ತಾವೂರು ಜಾತ್ರೆ, ಮಾಸ ಶಿವರಾತ್ರಿ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| | ರಾಹುಕಾಲ | ಯಮಗಂಡ | ಗುಳಿಕಕಾಲ |
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 –12.00 | 1.30 – 3.00 |
| ಮಂಗಳ | 3.00 – 4.30 | 9.00 –10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 –12.00 |
| ಗುರು | 1.30 – 3.00 | 6.00 – 7.30 | 9.00 –10.30 |
| ಶುಕ್ರ | 10.30 –12.00 | 3.00 – 4.30 | 7.30 – 9.00 |
| ಶನಿ | 9.00 –10.30 | 1.30 – 3.00 | 6.00 – 7.30 |

# ನೀಟ್-ಯುಜಿ ಪರೀಕ್ಷೆ ರದ್ದು: ಕೇಂದ್ರ ಸರ್ಕಾರದ ವೈಫಲ್ಯ, ದೇಶದ ಯುವಜನತೆಗೆ ಬಗೆದ ದ್ರೋಹ ಸಿಎಂ ಸಿದ್ದರಾಮಯ್ಯ ವಾಗ್ದಾಳಿ



**ಬೆಂಗಳೂರು, ಮೇ 14:** ದೇಶಾದ್ಯಂತ 22 ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳು ಬರೆದಿದ್ದ ನೀಟ್-ಯುಜಿ ಪರೀಕ್ಷೆಯನ್ನು ರದ್ದುಗೊಳಿಸಿರುವ ಕೇಂದ್ರ ಸರ್ಕಾರದ ನಿರ್ಧಾರವು ಆಡಳಿತಾತ್ಮಕ ವೈಫಲ್ಯ ಮಾತ್ರವಲ್ಲ, ದೇಶದ ಯುವಜನತೆಗೆ ಬಗೆದ ಕ್ರೂರ ದ್ರೋಹವಾಗಿದೆ ಎಂದು ಸಿಎಂ ಸಿದ್ದರಾಮಯ್ಯ ವಾಗ್ದಾಳಿ ನಡೆಸಿದ್ದಾರೆ.

ಈ ಬಗ್ಗೆ ಹೇಳಿಕೆ ನೀಡಿರುವ ಅವರು, ಕರ್ನಾಟಕದ ಒಂದು ಲಕ್ಷಕ್ಕೂ ಅಧಿಕ ವಿದ್ಯಾರ್ಥಿಗಳು ಸೇರಿದಂತೆ ದೇಶದ 22 ಲಕ್ಷಕ್ಕೂ ಹೆಚ್ಚಿನ ವಿದ್ಯಾರ್ಥಿಗಳು ತಿಂಗಳುಗಟ್ಟಲೆ ಶ್ರಮಪಟ್ಟು ಈ ಪರೀಕ್ಷೆ ಬರೆದಿದ್ದರು. ಪೋಷಕರು ಮಕ್ಕಳ ಭವಿಷ್ಯಕ್ಕಾಗಿ ತರಬೇತಿ, ಪ್ರಯಾಣ ಸೇರಿದಂತೆ ಸಾಕಷ್ಟು ಖರ್ಚುಗಳನ್ನು ಮಾಡಿದ್ದರು. ಆದರೆ ಕೇಂದ್ರದ ಒಂದು ನಿರ್ಧಾರ ಇಡೀ ವಿದ್ಯಾರ್ಥಿ ಸಮುದಾಯವನ್ನು ಅನಿಶ್ಚಿತತೆ ಮತ್ತು ಸಂಕಷ್ಟಕ್ಕೆ ತಳ್ಳಿದೆ ಎಂದು ದೂರಿದ್ದಾರೆ. 2024ರಲ್ಲೇ ನಮ್ಮ ಸರ್ಕಾರವು ನೀಟ್ ಪರೀಕ್ಷೆಯು ಗ್ರಾಮೀಣ ಮತ್ತು ಬಡ ವಿದ್ಯಾರ್ಥಿಗಳಿಗೆ ಅನ್ಯಾಯ ಮಾಡುತ್ತದೆ. ಶಾಲಾ ಶಿಕ್ಷಣ ವ್ಯವಸ್ಥೆಯನ್ನು ದುರ್ಬಲಗೊಳಿಸುತ್ತದೆ ಮತ್ತು ದಾಖಲಾತಿ ವಿಚಾರದಲ್ಲಿ ರಾಜ್ಯಗಳ ಅಧಿಕಾರವನ್ನು ಕಸಿದುಕೊಳ್ಳುತ್ತದೆ ಎಂದು ಆಕ್ಷೇಪ ವ್ಯಕ್ತಪಡಿಸಿ ಸದನದಲ್ಲಿ ನಿರ್ಣಯ ಕೈಗೊಂಡಿದ್ದೆವು. ಅಂದಿನ ನಮ್ಮ ಕಾಳಜಿ ಎಷ್ಟು ಸತ್ಯ ಮತ್ತು ಅನಿವಾರ್ಯವಾಗಿತ್ತು ಎನ್ನುವುದನ್ನು ಇಂದಿನ ಪರೀಕ್ಷಾ ರದ್ದತಿಯು ಸಾಬೀತುಪಡಿಸಿದೆ ಎಂದು ಸಿದ್ದರಾಮಯ್ಯ ಕಿಡಿ ಕಾರಿದ್ದಾರೆ.

### ಧರ್ಮೇಂದ್ರ ಪ್ರಧಾನ್ ರಾಜೀನಾಮೆಗೆ ಆಗ್ರಹ

ನೇಮಕಾತಿ ಪರೀಕ್ಷೆಗಳಿಂದ ಹಿಡಿದು ರಾಷ್ಟ್ರೀಯ ಪ್ರವೇಶ ಪರೀಕ್ಷೆಗಳವರೆಗೆ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣಗಳು ಪ್ರತಿಭಾವಂತ ವಿದ್ಯಾರ್ಥಿಗಳ ಹಿತರಕ್ಷಣೆಯಲ್ಲಿ ನರೇಂದ್ರ ಮೋದಿ ಸರ್ಕಾರದ ವೈಫಲ್ಯಕ್ಕೆ ಸಾಕ್ಷಿಯಾಗಿವೆ. ಹೊಣೆ ಹೊರಬೇಕಾದ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರು ಮಾಧ್ಯಮಗಳಿಂದ ದೂರ ಉಳಿದಿದ್ದಾರೆ. ಯುವಜನತೆಯ ಬಗ್ಗೆ ಕಿಂಚಿತ್ತೂ ಕಾಳಜಿಯಿಲ್ಲದ ಅವರು ಕೂಡಲೇ ರಾಜೀನಾಮೆ ನೀಡಬೇಕು ಎಂದು ಸಿಎಂ ಆಗ್ರಹಿಸಿದ್ದಾರೆ. ಈ ಬಗ್ಗೆ ಪಾರದರ್ಶಕ, ಕಾಲಮಿತಿಯ ತನಿಖೆ ನಡೆಸಬೇಕು. ತಪ್ಪಿತಸ್ಥರಿಗೆ ಕಠಿಣ ಶಿಕ್ಷೆ ನೀಡಬೇಕು. ಹೊಸ ಪರೀಕ್ಷಾ ವೇಳಾಪಟ್ಟಿಯ ಬಗ್ಗೆ ಕೂಡಲೇ ಸ್ಪಷ್ಟನೆ ನೀಡಬೇಕು ಮತ್ತು ಅಂತಹ ಪ್ರವೇಶ ಪರೀಕ್ಷೆಗಳನ್ನು ನಡೆಸುವ ರಾಜ್ಯಗಳ ಅಧಿಕಾರವನ್ನು ಪುನಃಸ್ಥಾಪಿಸಬೇಕು ಎಂಬುದು ನಮ್ಮ ಒತ್ತಾಯವಾಗಿದೆ. ಪ್ರಶ್ನೆಪತ್ರಿಕೆ ಸೋರಿಕೆಯಿಂದ ತೊಂದರೆಗೀಡಾಗಿರುವ ಪ್ರತಿಯೊಬ್ಬ ವಿದ್ಯಾರ್ಥಿ ಮತ್ತು ಪೋಷಕರ ಜೊತೆ ನಾವಿದ್ದೇವೆ. ಅವರ ಪರಿಶ್ರಮಕ್ಕೆ ತಕ್ಕ ಫಲ ಸಿಗುವಂತೆ ಮಾಡುವುದು ಮತ್ತು ವಿದ್ಯಾರ್ಥಿಗಳ ಭವಿಷ್ಯವನ್ನು ರಕ್ಷಿಸುವುದು ನಮ್ಮ ಕರ್ತವ್ಯ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದ್ದಾರೆ.

## ದಾವಣಗೆರೆ ಫಲಿತಾಂಶದಿಂದ ಕಾಂಗ್ರೆಸ್‌ಗೆ ದಿಢೀರ್ ಜ್ಞಾನೋದಯ

# ಒಂದು ವರ್ಗವನ್ನು ಓಲೈಕೆ, ಸಮಾಧಾನ ಮಾಡಲು ಹಿಜಾಬ್ ನಿರ್ಧಾರ: ಎಚ್‌ಡಿಕೆ



**ಬೆಂಗಳೂರು, ಮೇ 14:** ದಾವಣಗೆರೆ ಉಪಚುನಾವಣೆಯ ಫಲಿತಾಂಶ ಹೊರಬಂದ ನಂತರ ಕಾಂಗ್ರೆಸ್ ಪಕ್ಷಕ್ಕೆ ದಿಢೀರ್ ಜ್ಞಾನೋದಯವಾಗಿ ವಿವಾದಿತ ಹಿಜಾಬ್ ವಿಷಯವನ್ನು ಮತ್ತೆ ಮುನ್ನೆಲೆಗೆ ತಂದಿದೆ ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಗಂಭೀರ ಆರೋಪ ಮಾಡಿದರು.

ಜೆಡಿಎಸ್ ರಾಜ್ಯ ಕಚೇರಿ ಜೆಪಿ ಭವನದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿ, ಹಿಜಾಬ್ ಬಗ್ಗೆ ವಿಧಾನಸಭೆಯಲ್ಲಿ ಹಿಂದೆಯೇ ಚರ್ಚೆ ಮಾಡಿದ್ದೇನೆ.. ನಾನು ಏನು ಹೇಳಿದ್ದೇನೆ ಎಂಬುದು ಎಲ್ಲರಿಗೂ ತಿಳಿದಿದೆ. ಹೊಸದಾಗಿ ಹೇಳುವುದು ಏನು ಇಲ್ಲ.

ಇತ್ತೀಚಿಗೆ ನಡೆದ ಪರೀಕ್ಷೆಯಲ್ಲಿ ಒಬ್ಬ ಹುಡುಗನ ಮೈಮೇಲಿದ್ದ ಜನಿವಾರ ತೆಗೆಸಿದರು. ಸಮರ್ಥನೆ ಮಾಡಲು ಆಗುಗುತ್ತದೆಯೇ, ಎಲ್ಲವನ್ನು ರಾಜಕೀಯಕ್ಕಾಗಿ ಮಾಡುತ್ತಿದ್ದಾರೆ. ಕಾಂಗ್ರೆಸ್ ಪಕ್ಷಕ್ಕೆ ರಾಜಕೀಯ ಲಾಭದ ದೃಷ್ಟಿ ಬಿಟ್ಟರೆ ಸಮಾಜದ ಶಾಂತಿ ಮುಖ್ಯವಲ್ಲ.

ದಾವಣಗೆರೆ ಉಪ ಚುನಾವಣೆಯಲ್ಲಿ ಒಂದು ಸಮುದಾಯದ ಜನರು ಮತ ಚಲಾವಣೆ ಮಾಡಿರುವ ರೀತಿಯನ್ನು ನೋಡಿ ಗಾಬರಿಗೊಂಡು ಈ ರೀತಿ ಮಾಡುತ್ತಿದ್ದಾರೆ ಎಂದು ದೂರಿದರು.

ಅಧಿಕಾರಕ್ಕೆ ಬಂದು ಮೂರು ವರ್ಷವಾಗಿದೆ. ಅಂದಿನಿಂದ ಹಿಜಾಬ್ ವಿಚಾರದಲ್ಲಿ ಏನು ಮಾಡುತ್ತಿದ್ದರು. ದಾವಣಗೆರೆ ದಕ್ಷಿಣ ಕ್ಷೇತ್ರದ ಉಪಚುನಾವಣೆ ಫಲಿತಾಂಶ ನೋಡಿ ನೋಡಿ ಈ ನಿರ್ಧಾರ ಮಾಡಿದ್ದಾರೆ. 16ನೇ ತಾರೀಖು ಮುಸ್ಲಿಂ ಸಮಾವೇಶ ಇದೆ, ಅದಕ್ಕೆ ಹೆದರಿ ಈ ನಿರ್ಧಾರ ಮಾಡಿದ್ದಾರೆ. ಅಷ್ಟು ಧೈರ್ಯ ಇದ್ದಿದ್ದರೆ ಅಧಿಕಾರಕ್ಕೆ ಬಂದ ಕೂಡಲೇ ಈ ಬಗ್ಗೆ ನಿರ್ಧಾರ ಕೈಗೊಳ್ಳಬೇಕಾಗಿತ್ತು. ಮೂರು ವರ್ಷದಿಂದ ಯಾಕೆ ಸುಮ್ಮನೆ ಇದ್ದರು. ಒಂದು ವರ್ಗವನ್ನು ಸಮಾಧಾನ, ಓಲೈಕೆ ಮಾಡುವುದಕ್ಕೆ ಈ ನಿರ್ಧಾರ ಮಾಡಿದ್ದಾರೆ. ಈ ಪ್ರಕರಣ ನ್ಯಾಯಾಲಯದಲ್ಲಿ ಇನ್ನೂ ವಿಚಾರಣೆಯಲ್ಲಿದೆ. ಹಿಜಾಬ್ ಬಗ್ಗೆ ತಡೆಯಾಜ್ಞೆ ಜಾರಿಯಲ್ಲಿದೆ. ಅದು ತೆರವಾಗದೇ ಇವರು ಇಂಥ ಆದೇಶ ಮಾಡುತ್ತಾರೆ. ನ್ಯಾಯಾಂಗಕ್ಕೂ ಈ ಸರಕಾರ ಅಪಚಾರ ಮಾಡುತ್ತಿದೆ ಎಂದು ಎಂದು ಕೇಂದ್ರ ಕಟುಶಬ್ದಗಳಲ್ಲಿ ಟೀಕಿಸಿದರು.

# ಕೇಂದ್ರ ಸರ್ಕಾರದ ವೈಫಲ್ಯ ಮುಚ್ಚಿಕೊಳ್ಳಲು ಹಿಜಾಬ್‌ಗೆ ಬಿಜೆಪಿ ವಿರೋಧ: ಪ್ರಿಯಾಂಕ್ ಖರ್ಗೆ ಟೀಕೆ



**ಬೆಂಗಳೂರು, ಮೇ 14:** ಹಿಜಾಬ್ ವಿವಾದದ ಕುರಿತು ಬಿಜೆಪಿ ನಾಯಕರ ವಿರುದ್ಧ ಸಚಿವ ಪ್ರಿಯಾಂಕ್ ಖರ್ಗೆ ವಾಗ್ದಾಳಿ ನಡೆಸಿದ್ದಾರೆ. ಬಿಜೆಪಿ ನಾಯಕರ ಮಕ್ಕಳು ಕೇಸರಿ ಶಾಲು ಧರಿಸಿ ಶಾಲೆಗೆ ಹೋಗುತ್ತಾರಾ ಎಂದು ಪ್ರಶ್ನಿಸುವ ಮೂಲಕ ಕೇಸರಿ ಪಡೆಯ ಆರೋಪಗಳಿಗೆ ತಿರುಗೇಟು ನೀಡಿದ್ದು, ಹಿಜಾಬ್ ಧರಿಸಲು ಅವಕಾಶ ನೀಡಿರುವ ಸರ್ಕಾರದ ನಡೆಯನ್ನು ಸಮರ್ಥಿಸಿಕೊಂಡರು.

ಪ್ರತಿಯೊಬ್ಬರಿಗೂ ಅವರದ್ದೇ ಆದ ಧಾರ್ಮಿಕ ಆಚರಣೆ ಮತ್ತು ಸಂಪ್ರದಾಯಗಳಿರುತ್ತವೆ. ಸಂವಿಧಾನವು ಎಲ್ಲಾ ಧರ್ಮದವರಿಗೆ ಅವರ ಆಚರಣೆಗಳನ್ನು ಪಾಲಿಸಲು ಅವಕಾಶ ನೀಡಿದೆ. ಜನಿವಾರ ಧರಿಸುವುದು ಅಥವಾ ಕುಂಕುಮ ಇಡುವುದನ್ನು ನಿಷೇಧಿಸಲು ಸಾಧ್ಯವೇ, ಅದೇ ರೀತಿ ಮುಸ್ಲಿಂ ಸಮುದಾಯದ ಆಚರಣೆಗಳನ್ನು ಗೌರವಿಸಬೇಕು, ಎಂದರು. ಬಿಜೆಪಿ ನಾಯಕರ ಎಷ್ಟು ಮಕ್ಕಳಿಗೆ ಹನುಮಾನ್ ಚಾಲೀಸಾ ಬರುತ್ತದೆ. ಅವರ ಮಕ್ಕಳೆಲ್ಲಾ ವಿದೇಶಗಳಲ್ಲಿ ಉತ್ತಮ ಶಿಕ್ಷಣ ಪಡೆಯುತ್ತಿದ್ದಾರೆ. ಆದರೆ ಇಲ್ಲಿನ ಮಕ್ಕಳ ಕೈಗೆ ಶಾಲು ನೀಡಿ ಅವರ ಭವಿಷ್ಯವನ್ನು ಹಾಳು ಮಾಡುತ್ತಿದ್ದಾರೆ ಎಂದು ಕಿಡಿಕಾರಿದರು.

ಬರಿ ಶಾಲು ಹಾಕುವುದರಿಂದ ಉದ್ಯೋಗ ಸಿಗುತ್ತದೆಯೇ, ವೈಜ್ಞಾನಿಕ ಮನೋಭಾವದೊಂದಿಗೆ ಬೆಳೆಯುತ್ತಿರುವ ಚೀನಾ ದೇಶದ ಮಕ್ಕಳನ್ನು ನೋಡಿ ಕಲಿಯುವುದು ಸಾಕಷ್ಟಿದೆ. ಶಾಲೆಗಳಿರುವುದು ಮಕ್ಕಳ ಉಜ್ವಲ ಭವಿಷ್ಯಕ್ಕಾಗಿ. ಅಲ್ಲಿ ಆಚರಣೆಗಳಿಗಿಂತ ವಿದ್ಯಾಭ್ಯಾಸಕ್ಕೆ ಆದ್ಯತೆ ನೀಡಬೇಕು. ಬಿಜೆಪಿ ನಾಯಕರು ಮೊದಲು ಸರ್ಕಾರದ ಆದೇಶವನ್ನು ಸರಿಯಾಗಿ ಓದಿ ಅರ್ಥ ಮಾಡಿಕೊಳ್ಳಲಿ. ಪ್ರಧಾನಿ ಮೋದಿ ಅವರ ಕಾರ್ಯವೈಖರಿಯ ವೈಫಲ್ಯಗಳನ್ನು ಮುಚ್ಚಿಡಲು ಇಂತಹ ವಿವಾದಗಳನ್ನು ಸೃಷ್ಟಿಸಲಾಗುತ್ತಿದೆ ಎಂದು ಅವರು ಆರೋಪಿಸಿದರು.

ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಉಡುಪಿಯಿಂದ ಆರಂಭವಾದ ಹಿಜಾಬ್ ವಿವಾದವು ಸುಪ್ರೀಂ ಕೋರ್ಟ್ ಮೆಟ್ಟಿಲೇರಿದೆ. ಸದ್ಯ ಈ ಪ್ರಕರಣವು ಸುಪ್ರೀಂ ಕೋರ್ಟ್‌ನ ವಿಸ್ತೃತ ಪೀಠದ ಮುಂದಿದ್ದು, ವಿಚಾರಣೆ ಬಾಕಿ ಉಳಿದಿದೆ. ಈ ನಡುವೆ ಕಾಂಗ್ರೆಸ್ ಸರ್ಕಾರವು ಹಿಜಾಬ್‌ಗೆ ಅವಕಾಶ ನೀಡಿದೆ ಎಂಬ ಚರ್ಚೆಗಳು ರಾಜ್ಯ ರಾಜಕೀಯದಲ್ಲಿ ಮತ್ತೆ ಬೆಂಕಿ ಹಚ್ಚಿವೆ.

# ಡ್ರಗ್ಸ್, ಹಿಂಸಾಚಾರ, ಅಪರಾಧಗಳ ಕೇಂದ್ರ ಬೆಂಗಳೂರು: ಅಶೋಕ್



**ಬೆಂಗಳೂರು, ಮೇ14:** ರಾಜಧಾನಿ ಬೆಂಗಳೂರನ್ನು, ಸ್ಟಾರ್ಟ್ ಅಪ್ ಹಬ್‌ನಿಂದ, ಡ್ರಗ್ಸ್, ಹಿಂಸಾಚಾರ ಮತ್ತು ಅಪರಾಧಗಳ ಕೇಂದ್ರವನ್ನಾಗಿ ಮಾಡಿರುವುದು ಕಾಂಗ್ರೆಸ್ ಸರ್ಕಾರದ ನಿಜವಾದ ಸಾಧನೆ ಎಂದು ವಿಧಾನಸಭೆ ಪ್ರತಿಪಕ್ಷ ನಾಯಕ ಆರ್. ಅಶೋಕ್ ಆರೋಪಿಸಿದ್ದಾರೆ.

ತಮ್ಮ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣ ಕುಸಿದಿರುವುದಕ್ಕೆ ಕೇಂದ್ರೀಯ ಅಪರಾಧ ದಾಖಲೆಗಳ ಬ್ಯೂರೋ ಅಂಕಿ-ಅಂಶಗಳೇ ಸಾಕ್ಷಿ. 2021ರಲ್ಲಿ 15 ಸಾವಿರದ 277 ಇದ್ದ ಅಪರಾಧ ಪ್ರಕರಣಗಳು, ನಾಲ್ಕು ವರ್ಷಗಳಲ್ಲಿ 31 ಸಾವಿರದ 223ಕ್ಕೆ ಏರಿಕೆಯಾಗಿದೆ. ರಾಜಧಾನಿಯಲ್ಲಿ 5 ಸಾವಿರದ 612 ಹಿಂಸಾತ್ಮಕ ಪ್ರಕರಣಗಳು ದಾಖಲಾಗಿದ್ದು, ಹಿಂದಿನ ವರ್ಷಗಳಿಗೆ ಹೋಲಿಸಿದರೆ, ಭಾರಿ ಪ್ರಮಾಣದಲ್ಲಿ ಹೆಚ್ಚಳವಾಗಿದೆ ಎಂದು ಹೇಳಿದ್ದಾರೆ.

ಇದು ಅಭಿವೃದ್ಧಿಯ ಕರ್ನಾಟಕವಲ್ಲ, ಇದು ಕಾಂಗ್ರೆಸ್ ಆಡಳಿತದಲ್ಲಿ ಅಪರಾಧಿಗಳ ಸ್ವರ್ಗವಾಗಿ ಬದಲಾಗುತ್ತಿರುವ ಕರ್ನಾಟಕ. ಗೃಹ ಸಚಿವರಿಗೆ, ರಾಜ್ಯದಲ್ಲಿ ನಡೆಯುತ್ತಿರುವ ಅಪರಾಧಗಳ ಬಗ್ಗೆ ಕೇಳಿದರೆ, ತಮಗೆ ಗೊತ್ತಿಲ್ಲ ಎನ್ನುವ ಉತ್ತರ ಮಾತ್ರ ಸಿಗಬಹುದು. ಜನರ ಸುರಕ್ಷತೆ, ಅವರಿಗೆ ಕೇವಲ ಆಯ್ಕೆಯಾಗಿರುವುದು, ಕರ್ನಾಟಕದ ದುರಂತ ಎಂದು ಟೀಕಿಸಿದ್ದಾರೆ. ಕಾನೂನು ಸುವ್ಯವಸ್ಥೆ ಕಾಪಾಡಲು ಸಂಪೂರ್ಣ ವಿಫಲವಾದ ಸರ್ಕಾರಕ್ಕೆ, ಅಧಿಕಾರದಲ್ಲಿ ಮುಂದುವರಿಯುವ ಯಾವುದೇ ನೈತಿಕತೆ ಉಳಿದಿಲ್ಲ ಎಂದು ಆರ್. ಅಶೋಕ್ ಟೀಕಿಸಿದ್ದಾರೆ.

# ಗುಣಮಟ್ಟವಲ್ಲದ ಔಷಧಿಗಳ ನಿಯಂತ್ರಣಕ್ಕಾಗಿ ವಿಶೇಷ ಪೋರ್ಟಲ್ ಅಭಿವೃದ್ಧಿ: ದಿನೇಶ್ ಗುಂಡೂರಾವ್



**ಬೆಂಗಳೂರು, ಮೇ.13:** ಗುಣಮಟ್ಟವಲ್ಲದ ಔಷಧಿಗಳನ್ನು ಪತ್ತೆಹಚ್ಚಲು ಮತ್ತು ನಿಯಂತ್ರಿಸಲು ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆವತಿಯಿಂದ ವಿಶೇಷ ಪೋರ್ಟಲ್ ಅಭಿವೃದ್ಧಿ ಪಡಿಸಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದರು.

ಆರೋಗ್ಯ ಸೌಧದಲ್ಲಿ ಹಮ್ಮಿಕೊಳ್ಳಲಾಗಿದ್ದ ಗುಣಮಟ್ಟದ ಮಾನದಂಡವನ್ನು ಪೂರೈಸದ (ಎನ್‌ಎಸ್‌ಕ್ಯೂ) ಔಷಧಗಳನ್ನು ಮಾರುಕಟ್ಟೆಯಲ್ಲಿ ನಿಖರವಾಗಿ ಪತ್ತೆಹಚ್ಚಲು ಮತ್ತು ಎನ್‌ಡಿಪಿಎಸ್ ಔಷಧಗಳ ದುರುಪಯೋಗ ತಡೆಯಲು ಅಭಿವೃದ್ಧಿ ಪಡಿಸಿರುವ ಪೋರ್ಟಲ್‌ಗೆ ಚಾಲನೆ ನೀಡಿದ ನಂತರ ಮಾತನಾಡಿದ ಸಚಿವರು, ಈ ಪೋರ್ಟಲ್ ಮೂಲಕ ಸಗಟು ಮತ್ತು ಚಿಲ್ಲರೆ ಔಷಧಿ ಮಳಿಗೆಗಳಲ್ಲಿ ಲಭ್ಯವಿರುವ ಗುಣಮಟ್ಟದ ಮಾನದಂಡವನ್ನು ಪೂರೈಸದ ಔಷಧಿಗಳ ಬ್ಯಾಚ್‌ಗಳನ್ನು ಪತ್ತೆ ಹಚ್ಚಲಾಗುತ್ತದೆ. ಹೀಗೆ ಗುರುತಿಸಲಾದ ಔಷಧಿಗಳ ಮಾರಾಟವನ್ನು ತಕ್ಷಣವೇ ಸ್ಥಗಿತಗೊಳಿಸಲಾಗುವುದು ಎಂದರು.

ವಾರ್ಷಿಕವಾಗಿ 450 ಔಷಧಗಳು ಸರಾಸರಿ ಪ್ರಮಾಣಿತ ಗುಣಮಟ್ಟವನ್ನು ಹೊಂದಿರುವುದಿಲ್ಲ. 2025-26ನೇ ಸಾಲಿನಲ್ಲಿ ರೂ.1.85 ಕೋಟಿ ಔಷಧಿಗಳನ್ನು ಹಿಂಪಡೆಯಲಾಗಿದೆ. ಗುಣಮಟ್ಟವಲ್ಲದ ಔಷಧಿಗಳನ್ನು ಮುಕ್ತ ಮಾರುಕಟ್ಟೆಯಲ್ಲಿ ಮಾರಾಟ ಮಾಡುವಂತಿಲ್ಲ. ತಯಾರಕರು ಮತ್ತು ಸಗಟು ವ್ಯಾಪಾರಿಗಳಿಂದ ಇಂತಹ ಔಷಧಿಗಳು ಪತ್ತೆಯಾದರೆ ಆ ಔಷಧಿಗಳನ್ನು ಹಿಂಪಡೆಯಲಾಗುವುದು ಎಂದರು.

ಈ ಪೋರ್ಟಲ್ ಮುಖಾಂತರ ಇಲಾಖೆಗೆ ಲಭ್ಯವಿರುವ ಸ್ಟಾಕ್ ವಿವರಗಳು ಹಾಗೂ ಸರಬರಾಜುದಾರರಿಗೆ ಹಿಂತಿರುಗಿಸಿದ ಪ್ರಮಾಣದ ಮಾಹಿತಿಯನ್ನು ರಿಯಲ್ ಟೈಮ್ಸ್ ನಲ್ಲಿ ಒದಗಿಸುವ ಮೂಲಕ ಉತ್ತಮ ಮೇಲ್ವಿಚಾರಣೆ, ಪಾರದರ್ಶಕತೆ ಮತ್ತು ಸಾರ್ವಜನಿಕ ಸುರಕ್ಷತೆಯನ್ನು ಖಚಿತಪಡಿಸುತ್ತದೆ. ಹಾಗಾಗಿ ಇದು ಸಾರ್ವಜನಿಕರಿಗೆ ಸುರಕ್ಷಿತ ಔಷಧಿಗಳನ್ನು ಖಚಿತಪಡಿಸುತ್ತದೆ ಎಂದು ಸಚಿವರು ಮಾಹಿತಿ ನೀಡಿದರು.

ಇಲಾಖೆಯಿಂದ ನಾರ್ಕೋಟಿಕ್ ಡ್ರಗ್ಸ್ ಮತ್ತು ಸೈಕೋಟ್ರೋಫಿಕ್ ಸಬ್ ಸ್ಟಾನ್ಸಸ್ ಔಷಧಿಗಳ ಮಾರಾಟದ ಮೇಲೆ ನಿಗವಹಿಸಲಾಗುತ್ತಿದೆ. ಅನಧಿಕೃತ ಬಳಕೆಯನ್ನು ತಡೆಯುವ ಉದ್ದೇಶದಿಂದ ಎಫ್‌ಡಿಎ ಇಲಾಖೆ ಈ ಔಷಧಿಗಳ ಮೇಲ್ವಿಚಾರಣೆಯನ್ನು ಮತ್ತಷ್ಟು ಬಲಪಡಿಸಿದೆ.

ಎನ್ ಡಿಪಿಎಸ್ ಔಷಧಿಗಳ ದುರುಪಯೋಗವನ್ನು ನಿಯಂತ್ರಿಸಲು ಈ ಇಲಾಖೆಯು ವಿಶೇಷ ಮಾನಿಟರಿಂಗ್ ಪೋರ್ಟಲ್ ಪರಿಚಯಿಸಿದೆ. ಈ ವ್ಯವಸ್ಥೆಯಿಂದ ಎನ್ ಡಿಪಿಎಸ್ ಔಷಧಿಗಳನ್ನು ವಿತರಿಸುವ ಸಂದರ್ಭದಲ್ಲಿ ರೋಗಿ ಮತ್ತು ವೈದ್ಯರ ಮಾಹಿತಿಯನ್ನು ಪಡೆಯುವ ಜೊತೆಗೆ ಸಲಹಾ ಚೀಟಿಯನ್ನು ಕಡ್ಡಾಯವಾಗಿ ಸಂಗ್ರಹಿಸಿ ಪರಿಶೀಲಿಸಲಾಗುತ್ತದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆ ಆಯುಕ್ತ ಶ್ರೀನಿವಾಸ್, ಅಪರ ಔಷಧ ನಿಯಂತ್ರಕ ಉಮೇಶ್, ಉಪ ಔಷಧ ನಿಯಂತ್ರಕ ಕೆಂಪಯ್ಯ, ಸಹಾಯಕ ನಿರ್ದೇಶಕ ಗೋವಿಂದ ರಾಜು ಉಪಸ್ಥಿತರಿದ್ದರು.

## ರಾಜ್ಯದಲ್ಲಿ ಅಶಾಂತಿ ಸೃಷ್ಟಿಸಲು ಕಾಂಗ್ರೆಸ್ ಹುನ್ನಾರ

# ಸರ್ಕಾರದ ಹಿಜಾಬ್ ಆದೇಶಕ್ಕೆ ಈಶ್ವರಪ್ಪ ಆಕ್ಷೇಪ



**ಶಿವಮೊಗ್ಗ, ಮೇ 14:** ಹಿಜಾಬ್ ವಿಚಾರದಲ್ಲಿ ಕಾಂಗ್ರೆಸ್ ಸರ್ಕಾರವು ಬಿಜೆಪಿ ಸರ್ಕಾರದ ಆದೇಶ ಹಿಂಪಡೆದಿದೆ ಅನ್ನೋದಕ್ಕಿಂತಲೂ ಹೈಕೋರ್ಟ್ ತೀರ್ಪನ್ನು ಉಲ್ಲಂಘನೆ ಮಾಡಿದ್ದಾರೆ ಎಂದು ಮಾಜಿ ಉಪಮುಖ್ಯಮಂತ್ರಿ ಕೆ.ಎಸ್. ಈಶ್ವರಪ್ಪ ಕಾಂಗ್ರೆಸ್ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಶಾಲಾ – ಕಾಲೇಜುಗಳಲ್ಲಿ ಹಿಜಾಬ್ ಧರಿಸುವಂತಿಲ್ಲ ಎಂದು ಹೈಕೋರ್ಟ್ ತೀರ್ಪು ನೀಡಿತ್ತು. ಆದರೆ ಈಗ ಅದನ್ನು ಉಲ್ಲಂಘನೆ ಮಾಡಲಾಗುತ್ತಿದೆ. ಸಿಎಂ, ಗೃಹ ಮಂತ್ರಿಗಳು ಏನ್ ಮಾಡ್ತಾ ಇದ್ದಾರೆ. ಸರ್ವ ಜನಾಂಗದ ಕರ್ನಾಟಕದಲ್ಲಿ ಅಶಾಂತಿ ಉಂಟುಮಾಡಲು ಈ ಆದೇಶ ಮಾಡಿದ್ದಾರೆ. ಉಪ ಚುನಾವಣೆಯಿಂದ ಮುಸ್ಲಿಮರು ಕಾಂಗ್ರೆಸ್ ಪಕ್ಷಕ್ಕೆ ವಿರೋಧವಾಗಿದ್ದಾರೆ ಎಂದು ಆರೋಪಿಸಿದರು.

ಪಶ್ಚಿಮಬಂಗಾಳ, ತಮಿಳುನಾಡಿನಲ್ಲಿ ಹಿಂದೂಗಳಿಗೆ ಅಪಮಾನ ಉಂಟು ಮಾಡಿದ ಹಾಗೆ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಕೊನೆಯಾಗಲಿದೆ. ಮುಸ್ಲಿಂ ಹೆಣ್ಣುಮಕ್ಕಳು ಹಿಜಾಬ್ ಹಾಕಿಕೊಂಡು ಬಂದರೆ, ಎಲ್ಲಾ ಶಾಲಾ-ಕಾಲೇಜು ಕೇಸರಿಮಯವಾಗುತ್ತವೆ ಮುಂದೆ ಯಾವಾಗಲಾದರೂ ಚುನಾವಣೆ ಬಂದರೂ ಸಹ ಶಾಲಾ-ಕಾಲೇಜು ಅಷ್ಟೇ ಅಲ್ಲ ವಿಧಾನಸೌಧವು ಸಹ ಕೇಸರಿಮಯವಾಗುತ್ತದೆ ಎಂದು ಎಚ್ಚರಿಕೆ ರವಾನಿಸಿದರು. ಸರ್ಕಾರ ಹಿಜಾಬ್ ಕುರಿತಾದ ಆದೇಶ ಹಿಂಪಡೆಯಬೇಕು, ಹೈಕೋರ್ಟ್ ಆದೇಶವನ್ನು ಜಾರಿ ಮಾಡಬೇಕು ಎಂದು ಈಶ್ವರಪ್ಪ ಒತ್ತಾಯಿಸಿದರು.


**ರಾಜ್ಯದಲ್ಲಿ ಕಾಂಗ್ರೆಸ್ ನಿರ್ನಾಮ**

ರಾಜ್ಯದಲ್ಲಿ ಮುಂದೆ ಕಾಂಗ್ರೆಸ್ ನಿರ್ನಾಮವಾಗುತ್ತದೆ. ಹಿಂದುಪರ ಸರ್ಕಾರ ಬರುತ್ತದೆ ಎಂದು ಈಶ್ವರಪ್ಪ ಭವಿಷ್ಯ ನುಡಿದರು. ಸನಾತನ ಧರ್ಮದ ಬಗ್ಗೆ ಮಾಜಿ ಸಿಎಂ ಸ್ಟಾಲಿನ್ ಪುತ್ರ, ತಮಿಳುನಾಡು ಪ್ರತಿಪಕ್ಷ ನಾಯಕ ಉದಯನಿಧಿ ಹೇಳಿಕೆ ಖಂಡನೀಯ. ಸ್ಟಾಲಿನ್ ಪತ್ನಿ ಅವರ ಚುನಾವಣೆಗೂ ಮುನ್ನ ಕೊಲ್ಲೂರಿಗೆ ಬಂದು ಹೋಗಿದ್ದರು. ಇದಕ್ಕೆ ಆದಿಯೂ ಇಲ್ಲ ಅಂತ್ಯವೂ ಇಲ್ಲ. ಇಂತಹ ಹೇಳಿಕೆ ನೀಡುವವರು ಮೂರ್ಖರು ಎಂದು ಟೀಕಿಸಿದರು.

800 ವರ್ಷ ಆಳಿದ ಘಜ್ನಿ, ಮಹಮ್ಮದ್ ಘೋರಿ ಅಂತಹವರಿಂದಲೇ ಏನೂ ಆಗಿಲ್ಲ. ಇವರು ಕ್ಷುಲ್ಲಕ ರಾಜಕೀಯಕ್ಕೆ ಬಳಸಿಕೊಳ್ಳುತ್ತಿದ್ದಾರೆ. ಇದರಿಂದ ಅವರ ಪಕ್ಷವೇ ಅಧಿಕಾರದಿಂದ ದೂರವಾಗಿದೆ. ಕಾಶಿ, ಮಥುರಾ, ಅಯೋಧ್ಯೆ ನಾಶ ಮಾಡುತ್ತೇವೆ ಎಂದವರು ನಾಶವಾಗಿದ್ದಾರೆ. ಸನಾತನ ಧರ್ಮ ನಾಶ ಮಾಡಲು ಯಾರಿದಂಲೂ ಸಾಧ್ಯವಿಲ್ಲ. ಪಾಕ್ ಹಾಗೂ ಬಂಗಾಳದವರು ಅವರೇ ಹೊಡೆದಾಡಿಕೊಳ್ಳುತ್ತಿದ್ದಾರೆ. ಉದಯನಿಧಿ ಸ್ಟಾಲಿನ್ ತಕ್ಷಣ ದೇಶದ ಜನರ ಕ್ಷಮೆ ಕೇಳಬೇಕು ಎಂದು ಕೆ.ಎಸ್.ಈಶ್ವರಪ್ಪ ಆಗ್ರಹಿಸಿದರು.

# ಮುಸ್ಲಿಂ ತುಷ್ಟೀಕರಣ ಪರಾಕಾಷ್ಟೆ ತಲುಪಿದೆ

### ಮತಬ್ಯಾಂಕ್ ಮಾಡಿಕೊಳ್ಳಲು ಕಾಂಗ್ರೆಸ್‌ನ ಪಿತೂರಿ: ಮಾಜಿ ಗೃಹಸಚಿವ ಆರಗ ಜ್ಞಾನೇಂದ್ರ ಕಿಡಿ



**ತೀರ್ಥಹಳ್ಳಿ, ಮೇ 14:** ಬಿಜೆಪಿ ಸರ್ಕಾರ ಇದ್ದಾಗ ಹಿಜಾಬ್ ನಿಷೇಧ ಮಾಡಿ ಶಾಲೆಗಳಲ್ಲಿ ಹಿಜಾಬ್ ಹಾಕಬಾರದು ಶಾಲೆಯ ಸಮವಸ್ತ್ರಕ್ಕೆ ಆದ್ಯತೆ ನೀಡಬೇಕು ಎಂದು ನಮ್ಮ ಸರ್ಕಾರ ಆದೇಶ ಮಾಡಿತ್ತು. ಈಗಿನ ಕಾಂಗ್ರೆಸ್ ಸರ್ಕಾರ ಹಿಜಾಬ್ ಧರಿಸಲು ಆದೇಶ ನೀಡಿದೆ. ಜನಿವಾರವನ್ನು ಹಾಕಲು ಹಾಗೂ ಹಿಜಾಬನ್ನು ಹಾಕಲು ಎರಡಕ್ಕೂ ಅವಕಾಶ ಕೊಡುತ್ತೇವೆ ಎಂದು ಹೇಳಿದೆ ನಾಚಿಕೆ ಇಲ್ಲದ ಕಾಂಗ್ರೆಸ್ ಸರ್ಕಾರ ಎಂದು ಶಾಸಕ ಹಾಗೂ ಮಾಜಿ ಗೃಹ ಸಚಿವ ಆರಗ ಜ್ಞಾನೇಂದ್ರ ವಾಗ್ದಾಳಿ ನಡೆಸಿದರು.

ಗುರುವಾರ ಮಾಧ್ಯಮಗಳಿಗೆ ವಿಡಿಯೋ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಮುಸ್ಲಿಂ ತುಷ್ಟೀಕರಣ ಪರಾಕಾಷ್ಟೆ ತಲುಪಿದೆ. ಇತ್ತೀಚೆಗೆ 600 ಕೋಟಿ ರೂ.ಗಳನ್ನು ಮುಸ್ಲಿಂ ಕಾನೂನಿನ ಅಭಿವೃದ್ಧಿಗೋಸ್ಕರ ಇಟ್ಟಿದ್ದಾರೆ. ಕಳೆದ ಮೂರು ಬಜೆಟ್‌ನ ಪ್ರತಿಯೊಂದು ಬಜೆಟ್‌ನಲ್ಲೂ 1600 ಕೋಟಿ ರೂ.ಮುಸ್ಲಿಂ ಮಕ್ಕಳಿಗೆ ಓದಲು ಶಾಲೆ-ಕಾಲೇಜು ತೆರೆಯಲು ಇಟ್ಟಿದ್ದಾರೆ.. ಈ ದೇಶದಲ್ಲಿ ಮುಸ್ಲಿಮರನ್ನು ಎಲ್ಲರ ಜೊತೆ ಸೇರಲು ಬಿಡುವುದಿಲ್ಲ ಎಳೆಯ ಮನಸ್ಸುಗಳನ್ನು ಒಡೆದು ಹೊರಗಿಡಲು, ಕಾಂಗ್ರೆಸ್ ಮತ ಬ್ಯಾಂಕ್ ಮಾಡಿಕೊಳ್ಳುವ ಪಿತೂರಿ ಇದಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಶಾಲೆಗೆ ಬರುವ ಮಕ್ಕಳು ಸಮವಸ್ತ್ರ ಧರಿಸಿ ನಾನು ಬೇರೆಯಲ್ಲ, ನೀನು ಬೇರೆಯಲ್ಲ ಜಾತ್ಯತೀತ ಮಕ್ಕಳಾಗಬೇಕು ಎನ್ನುವಂತಹದ್ದು ಒಂದು ಕಲ್ಪನೆ. ಅನೇಕ ಮುಸ್ಲಿಂ ರಾಷ್ಟ್ರಗಳಲ್ಲೇ ಹಿಜಾಬ್ ನಿಷೇಧ ಮಾಡಿದ್ದಾರೆ. ಇವತ್ತು ಕರ್ನಾಟಕದಲ್ಲಿ ಹಿಜಾಬ್ ಇಡಲು ಕಾಯ್ದೆ ಮಾಡುತ್ತಿದ್ದಾರೆ. ಹಿಜಾಬ್ ನಿಷೇಧ ಕಾಯ್ದೆಯನ್ನು ತೆಗೆದು ಹಾಕಿದ್ದಾರೆ.

ಕಾಂಗ್ರೆಸ್ ಸರಕಾರ ಒಂದೊಂದು ದಿನವೂ ಇದ್ದಂತೆಯೂ ಅನಾಹುತ ಮಾಡುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ದಾವಣಗೆರೆಯ ಉಪಚುನಾವಣೆ ಸಂದರ್ಭದಲ್ಲಿ ಮುಸ್ಲಿಮರಿಗೆ ಅಸಮಾಧಾನವಾಗಿದೆ ಎಂದು, ಕಾಂಗ್ರೆಸ್ ಏನೆಲ್ಲಾ ಮಾಡಿದೆ ಎಂಬ ವಿಮರ್ಶೆಯ ಕುರಿತು ಮುಸ್ಲಿಂ ಧರ್ಮ ಗುರುಗಳು ಸದ್ಯದಲ್ಲೇ ದೊಡ್ಡ ಸಮಾವೇಶವ ಒಂದನ್ನ ಮಾಡುತ್ತಿದ್ದಾರೆ. ಈ ಎಲ್ಲಾ ಕಾರಣದಿಂದ ಮುಸ್ಲಿಂ ತುಷ್ಟೀಕರಣದ ವ್ಯವಸ್ಥೆ ಆಗುತ್ತಿದೆ. ಹಿಂದುಗಳ ಮತಗಳು ಇವರಿಗೆ ಬೇಡ ಬರಿ ಮುಸ್ಲಿಂ ಮತಗಳಿಂದಲೇ ನಾವು ಅಧಿಕಾರಕ್ಕೆ ಬರುತ್ತೇವೆ ಎಂಬ ನಂಬಿಕೆಯಲ್ಲಿದ್ದಾರೆ. ಸರ್ಕಾರದ ನಿರ್ಧಾರವನ್ನು ಖಂಡಿಸುತ್ತೇನೆ ಈ ನಿರ್ಧಾರ ಮುಂದಿನ ದಿನಗಳಲ್ಲಿ ಒಳ್ಳೆಯ ಪರಿಣಾಮ ಬೀರುವುದಿಲ್ಲ ಎಂದು ಜ್ಞಾನೇಂದ್ರ ತಿಳಿಸಿದರು.

# ಮಾರ್ನಾಮಿಬೈಲು ಕಿರುಚಿತ್ರೋತ್ಸವ ಮೊದಲ ಪೋಸ್ಟರ್ ಬಿಡುಗಡೆಗೊಳಿಸಿದ ಮಾಜಿ ಡಿಸಿಎಂ ಕೆ.ಎಸ್.ಈಶ್ವರಪ್ಪ




**ಶಿವಮೊಗ್ಗ, ಮೇ 14:** ನಗರದ ಪತ್ರಿಕಾ ಭವನದಲ್ಲಿ ಗಾರಾ ಗ್ರೂಪ್ ಸಂಸ್ಥೆಯ ಮಾಧ್ಯಮ ವಿಭಾಗವಾದ ಸೂರ್ಯಗಗನ ನಿಯತಕಾಲಿಕೆ ಹಾಗೂ ಇತ್ಯಾದಿ ಪಾಕ್ಷಿಕ ಪತ್ರಿಕೆ ಆಯೋಜಿಸುತ್ತಿರುವ ಮಾರ್ನಾಮಿಬೈಲ್ ಕಿರುಚಿತ್ರೋತ್ಸವದ ಮೊದಲ ಪೋಸ್ಟರ್ ಮಾಜಿ ಉಪಮುಖ್ಯಮಂತ್ರಿ ಕೆ.ಎಸ್ ಈಶ್ವರಪ್ಪನವರು ಬಿಡುಗಡೆಗೊಳಿಸಿದರು.

ಬಳಿಕ ಮಾತನಾಡಿದ ಅವರು ಮಾರ್ನಾಮಿಬೈಲ್ ಕಿರುಚಿತ್ರೋತ್ಸವ ಸಾಂಸ್ಕೃತಿಕ ಹೆಜ್ಜೆಯಾಗಿದ್ದು ಕಾರ್ಯಕ್ರಮ ಯಶಸ್ವಿಯಾಗಿ ಜರುಗಲಿ ಎಂದು ಹಾರೈಸಿದರು. ಪೋಸ್ಟರ್ ಬಿಡುಗಡೆ ಕಾರ್ಯಕ್ರಮದಲ್ಲಿ ಆಯೋಜಕ ಗಾರಾ ಶ್ರೀನಿವಾಸ್, ಅಚ್ಚೆ ಸಿನಿಮಾ ನಿರ್ದೇಶಕ ಯಶೋಧರ್, ಖಳನಟ ಶ್ರೀನಿವಾಸ್ ಶರ್ಮಾ, ಪತ್ರಕರ್ತರಾದ ದೇಶಾದ್ರಿ, ಬಹುಮುಖಿ ನವೀನ್ ತಲಾರಿ, ಕಿರುಚಿತ್ರ ನಿರ್ದೇಶಕ ನಿತಿನ್, ಕ್ರಿಯೇಟಿವ್ ಗ್ರೂಪ್ ಪರಮೇಶ್ವರ್, ಸಿವಿಲ್ ಇಂಜಿನಿಯರ್ ಭರತ್ ಗುತ್ತಿ, ಕರವೇ ಸ್ವಾಭಿಮಾನಿ ಬಣದ ಸಯ್ಯದ್ ಮುಜಿಬುಲ್ಲಾ ಸೇರಿದಂತೆ ಇತರರು ಹಾಜರಿದ್ದರು.

# ಕನ್ನಡದಲ್ಲಿ ಮಾತನಾಡಿದರೆ ದಂಡ: ಶಿಕ್ಷಣ ಸಂಸ್ಥೆಗಳ ವಿರುದ್ಧ ಬಿಳಿಮಲೆ ಆಕ್ರೋಶ

### ಕ್ರಮ ಕೈಗೊಳ್ಳಲು ಶಿಕ್ಷಣ ಇಲಾಖೆಗೆ ಆಗ್ರಹ



**ಬೆಂಗಳೂರು, ಮೇ 14;** ಇತ್ತೀಚಿನ ದಿನಗಳಲ್ಲಿ ರಾಜ್ಯದ ಕೆಲವು ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ವಿದ್ಯಾರ್ಥಿಗಳು ತಮ್ಮ ತಾಯ್ನುಡಿಯಾದ ಕನ್ನಡದಲ್ಲಿ ಮಾತನಾಡಿದರೆ ಶಾಲಾ ಆಡಳಿತ ಮಂಡಳಿಗಳು ದಂಡ ವಿಧಿಸುತ್ತಿರುವ ದೂರುಗಳು ಪ್ರಾಧಿಕಾರದ ಗಮನಕ್ಕೆ ಬಂದಿವೆ. ಈ ಕ್ರಮವು ಕೇವಲ ಶಿಕ್ಷಣ ವಿರೋಧಿಯಲ್ಲದೆ, ಸಾಂವಿಧಾನಿಕ ಹಕ್ಕುಗಳ ಉಲ್ಲಂಘನೆಯೂ ಆಗಿದೆ ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಪುರುಷೋತ್ತಮ ಬಿಳಿಮಲೆ ತೀವ್ರ ಆತಂಕ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಶಿಕ್ಷಣ ಸಚಿವ ಮಧು ಬಂಗಾರಪ್ಪನವರಿಗೆ ಪತ್ರ ಬರೆದಿರುವ ಅವರು, "ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ಅಧಿನಿಯಮ 2022ರ ಪ್ರಕಾರ ಕರ್ನಾಟಕದ ಎಲ್ಲಾ ಶಿಕ್ಷಣ ಸಂಸ್ಥೆಗಳಲ್ಲಿ ಕನ್ನಡ ಭಾಷೆಯ ಬಳಕೆಗೆ ಮತ್ತು ಪ್ರಸಾರಕ್ಕೆ ಪೂರಕವಾದ ವಾತಾವರಣವಿರಬೇಕು. ತಾಯ್ನುಡಿಯಲ್ಲಿ ಮಾತನಾಡುವುದನ್ನು ನಿರ್ಬಂಧಿಸುವುದು ಅಥವಾ ದಂಡ ವಿಧಿಸುವುದು ಕಾನೂನುಬಾಹಿರ ಕ್ರಮವಾಗಿದೆ ಎಂದಿದ್ದಾರೆ.

ಮಗುವಿನ ಸಾಮಾಜಿಕ, ಭಾವನಾತ್ಮಕ ಮತ್ತು ಸಾಂಸ್ಕೃತಿಕ ಬೆಳವಣಿಗೆಯಲ್ಲಿ ತಾಯ್ನುಡಿಯು ಪ್ರಮುಖ ಪಾತ್ರ ವಹಿಸುತ್ತದೆ. ಮಾತೃಭಾಷೆಯಲ್ಲಿ ಸಂವಹನ ನಡೆಸುವುದರಿಂದ ವಿದ್ಯಾರ್ಥಿಗಳ ಪದಸಂಪತ್ತು ಮತ್ತು ಆತ್ಮವಿಶ್ವಾಸ ಹೆಚ್ಚುತ್ತದೆ ಎಂದು ಅನೇಕ ಶೈಕ್ಷಣಿಕ ಅಧ್ಯಯನಗಳು ದೃಢಪಡಿಸಿವೆ ಎಂದು ಹೇಳಿದ್ದಾರೆ.

ಈ ಹಿಂದೆ ಬೆಂಗಳೂರಿನ ಸಿಂಧಿ ಶಾಲೆಯಂತಹ ಪ್ರಕರಣಗಳಲ್ಲಿ ಪ್ರಾಧಿಕಾರವು ಮಧ್ಯಪ್ರವೇಶಿಸಿ ತನಿಖೆ ನಡೆಸಿ, ಸಮಸ್ಯೆಯನ್ನು ಬಗೆಹರಿಸಿದೆ. ಇಂತಹ ಘಟನೆಗಳು ಮರುಕಳಿಸಬಾರದು ಎಂದು ಪ್ರಾಧಿಕಾರವು ಎಚ್ಚರಿಸುತ್ತದೆ.

ರಾಜ್ಯದ ಎಲ್ಲಾ ಇಂಗ್ಲಿಷ್ ಮಾಧ್ಯಮ ಶಾಲೆಗಳೂ ಸೇರಿದಂತೆ ಪ್ರತಿಯೊಂದು ಶಿಕ್ಷಣ ಸಂಸ್ಥೆಯು ಈ ಕೂಡಲೇ ಜಾರಿಗೆ ಬರುವಂತೆ ಕನ್ನಡ ಮಾತನಾಡಿದ ವಿದ್ಯಾರ್ಥಿಗಳಿಗೆ ದಂಡ ವಿಧಿಸುವ ಅಮಾನವೀಯ ಪದ್ಧತಿಯನ್ನು ಕೈಬಿಡಬೇಕು.

ಈ ಬಗ್ಗೆ ಸಂಬಂಧಪಟ್ಟ ಶಿಕ್ಷಣ ಇಲಾಖೆಯ ಅಧಿಕಾರಿಗಳ ಮೂಲಕ ಎಲ್ಲಾ ಶಾಲೆಗಳಿಗೆ ಸುತ್ತೋಲೆ ಹೊರಡಿಸಬೇಕೆಂದು ಶಿಕ್ಷಣ ಸಚಿವರಿಗೆ ಪತ್ರದ ಮೂಲಕ ಬಿಳಿಮಲೆ ಸೂಚಿಸಿದ್ದಾರೆ.

ತಾಯ್ನುಡಿಯಲ್ಲಿ ಮಾತನಾಡುವುದು ಮಗುವಿನ ಜನ್ಮಸಿದ್ಧ ಹಕ್ಕು. ಈ ಹಕ್ಕನ್ನು ಕಸಿದುಕೊಳ್ಳುವ ಅಥವಾ ಕನ್ನಡವನ್ನು ಅಪರಾಧದಂತೆ ಕಾಣುವ ಯಾವುದೇ ಶಾಲೆಯ ವಿರುದ್ಧ ಕಾನೂನು ರೀತಿಯ ಕಠಿಣ ಕ್ರಮ ಜರುಗಿಸಲು ಪ್ರಾಧಿಕಾರವು ಶಿಫಾರಸು ಮಾಡುತ್ತದೆ. ಕರ್ನಾಟಕದ ಮಣ್ಣಿನಲ್ಲಿ ಕನ್ನಡವು ಸಾರ್ವಭೌಮ ಭಾಷೆಯಾಗಿದ್ದು, ಶಾಲಾ ಆವರಣಗಳು ಕನ್ನಡದ ಕಲಿಕೆಗೆ ಪೂರಕವಾಗಿರಬೇಕೇ ಹೊರತು ದಂಡನೆಯ ತಾಣಗಳಾಗಬಾರದು ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು ತಿಳಿಸಿದ್ದಾರೆ.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

ಮೇ 15 2026, ಶುಕ್ರವಾರ

## ಒಳಪುಟಗಳಲ್ಲಿ

ಸಮಾಜ ಒಗ್ಗೂಡಿಸುವಲ್ಲಿ ನಾರಾಯಣಗುರು ತತ್ವಾದರ್ಶಗಳ ಪಾತ್ರ ಅನನ್ಯ - ಪು.5

ಪೋಕ್ಸೋ ಪ್ರಕರಣ: ಪೊಲೀಸರಿಂದ ವಚನಾನಂದಶ್ರೀ ವಿಚಾರಣೆ - ಪು.6

# ಹೊಸ ಶಾಸಕರಿಂದ ಪ್ರಮಾಣವಚನ ಸ್ವೀಕಾರ

**ಬೆಂಗಳೂರು, ಮೇ, 14:** ಇತ್ತೀಚೆಗೆ ನಡೆದ ಬಾಗಲಕೋಟೆ ವಿಧಾನ ಸಭಾ ಕ್ಷೇತ್ರ ಹಾಗೂ ದಾವಣಗೆರೆ ದಕ್ಷಿಣ ವಿಧಾನ ಸಭಾ ಕ್ಷೇತ್ರದಿಂದ ಉಪ ಚುನಾವಣೆಯಲ್ಲಿ ಆಯ್ಕೆಯಾದ ಉಮೇಶ ಹುಲ್ಲಪ್ಪ ಮೇಟಿ ಹಾಗೂ ಸಮರ್ಥ್ ಶಾಮನೂರು ಮಲ್ಲಿಕಾರ್ಜುನ್ ರವರುಗಳು ವಿಧಾನ ಸೌಧದ ಸಮ್ಮೇಳನ ಸಭಾಂಗಣದಲ್ಲಿ ನಡೆದ ಪ್ರಮಾಣ ವಚನ ಸ್ವೀಕಾರ ಕಾರ್ಯಕ್ರಮದಲ್ಲಿ ವಿಧಾನಸಭಾ ಸದಸ್ಯರಾಗಿ ಪ್ರಮಾಣ ವಚನ ಸ್ವೀಕಾರ ಮಾಡಿದರು. ಈ ಸಂದರ್ಭದಲ್ಲಿ, ವಿಧಾನ ಸಭೆಯ ಸಭಾಧ್ಯಕ್ಷರಾದ ಯು.ಟಿ.ಖಾದರ್ ಫರೀದ್, ಉಪ ಸಭಾಧ್ಯಕ್ಷರಾದ ರುದ್ರಪ್ಪ ಲಮಾಣಿ, ಕರ್ನಾಟಕ ಸರ್ಕಾರದ ಲೋಕೋಪಯೋಗಿ ಸಚಿವರಾದ ಸತೀಶ್ ಜಾರಕಿಹೊಳಿ, ಸಂಸದರಾದ ಪ್ರಭಾ ಮಲ್ಲಿಕಾರ್ಜುನ್ ಸೇರಿದಂತೆ ಇತರೆ ಗಣ್ಯರು ಉಪಸ್ಥಿತರಿದ್ದರು.

# ದೆಹಲಿಯಲ್ಲಿ ವಾರಕ್ಕೆ 2 ದಿನ ವರ್ಕ್ ಫ್ರಂ ಹೋಂ, ಕಡ್ಡಾಯ ಮೆಟ್ರೋ ಬಳಕೆ

## ಪ್ರಧಾನಿ ಮನವಿಯ ಬೆನ್ನಲ್ಲೇ ರೇಖಾ ಗುಪ್ತಾ ಸರ್ಕಾರದಿಂದ ನಿಯಮ ಜಾರಿ

**ನವದೆಹಲಿ, ಮೇ 14 (ಯುಎನ್ಐ): ಇಂಧನ ಉಳಿತಾಯ ಮತ್ತು ಸಾರ್ವಜನಿಕ ವೆಚ್ಚಕ್ಕೆ ಕಡಿವಾಣ ಹಾಕುವಂತೆ ಪ್ರಧಾನಿ ನರೇಂದ್ರ ಮೋದಿ ಅವರು ನೀಡಿದ್ದ ಕರೆಯನ್ನು ಬೆಂಬಲಿಸಿ, ದೆಹಲಿ ಸರ್ಕಾರವು ಗುರುವಾರ ಮಹತ್ವದ ನಿರ್ಧಾರಗಳನ್ನು ಪ್ರಕಟಿಸಿದೆ.**




ಇಂಧನ ಸಂರಕ್ಷಣೆ, ಮನೆಯಿಂದ ಕೆಲಸ ಮಾಡುವ ಸಂಸ್ಕೃತಿ, ವಿದೇಶಿ ಪ್ರಯಾಣವನ್ನು ಕಡಿಮೆ ಮಾಡುವುದು ಮತ್ತು ಮೇಡ್ ಇನ್ ಇಂಡಿಯಾ ಉತ್ಪನ್ನಗಳ ಬಳಕೆಯನ್ನು ಉತ್ತೇಜಿಸುವ ಗುರಿಯನ್ನು ಹೊಂದಿರುವ 90 ದಿನಗಳ 'ಮೇರಾ ಭಾರತ್ ಮೇರಾ ಯೋಗದಾನ್' (ನನ್ನ ಭಾರತ, ನನ್ನ ಕೊಡುಗೆ) ಅಭಿಯಾನದ ಕುರಿತು ಗುರುವಾರ ನವದೆಹಲಿಯ ದೆಹಲಿ ಸಚಿವಾಲಯದಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಮತ್ತು ಸಂಪುಟ ಸಚಿವರು ಪತ್ರಿಕಾಗೋಷ್ಠಿ ನಡೆಸಿದರು.

ಸರ್ಕಾರಿ ಕಚೇರಿಗಳಲ್ಲಿ ವಾರಕ್ಕೆ ಎರಡು ದಿನ ಕಡ್ಡಾಯ 'ಮನೆಯಿಂದ ಕೆಲಸ' ಅಧಿಕೃತ ಪ್ರವಾಸಗಳ ಕಡಿತ ಮತ್ತು ಕಚೇರಿ ಸಮಯ ಬದಲಾವಣೆಯಂತಹ ಕಟ್ಟುನಿಟ್ಟಿನ ಕ್ರಮಗಳನ್ನು ಜಾರಿಗೊಳಿಸಲಾಗಿದೆ.

ಮುಖ್ಯಮಂತ್ರಿ ರೇಖಾ ಗುಪ್ತಾ ಅವರು ಈ ಕ್ರಮಗಳನ್ನು ಘೋಷಿಸಿದ್ದು, ಸಂಚಾರ ದಟ್ಟಣೆ ಕಡಿಮೆ ಮಾಡುವುದು, ಇಂಧನ ಬಳಕೆ ತಗ್ಗಿಸುವುದು ಮತ್ತು ಆಡಳಿತಾತ್ಮಕ ಶಿಸ್ತನ್ನು ಪ್ರದರ್ಶಿಸುವುದು ಇದರ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದ್ದಾರೆ.

### ಸರ್ಕಾರದ ಪ್ರಮುಖ ನಿರ್ಧಾರ

ಮೆಟ್ರೋ ಸೋಮವಾರ:

ಸಚಿವರು, ಹಿರಿಯ ಅಧಿಕಾರಿಗಳು ಮತ್ತು ನೌಕರರು ಪ್ರತಿ ಸೋಮವಾರ ಕಡ್ಡಾಯವಾಗಿ ದೆಹಲಿ ಮೆಟ್ರೋ ಬಳಸುವಂತೆ ಸೂಚಿಸಲಾಗಿದೆ. ಈ ಅಭಿಯಾನಕ್ಕೆ 'ಮೆಟ್ರೋ ಮಂಡೇ' ಎಂದು ಹೆಸರಿಸಲಾಗಿದೆ.

ಕಚೇರಿ ಸಮಯ ಬದಲಾವಣೆ: ಸಂಚಾರ ದಟ್ಟಣೆ ತಪ್ಪಿಸಲು ಕಚೇರಿ ಸಮಯವನ್ನು ಬದಲಿಸಲಾಗಿದೆ. ಹೆಚ್ಚಿನ ಇಲಾಖೆಗಳು ಬೆಳಗ್ಗೆ 10:30 ರಿಂದ ಸಂಜೆ 7 ರವರೆಗೆ ಕಾರ್ಯನಿರ್ವಹಿಸಿದರೆ, ದೆಹಲಿ ಮಹಾನಗರ ಪಾಲಿಕೆಯು ಬೆಳಗ್ಗೆ 8:30 ರಿಂದ ಸಂಜೆ 5 ರವರೆಗೆ ಕಾರ್ಯನಿರ್ವಹಿಸಲಿದೆ.

ಭತ್ಯೆಕಡಿತ: ಅಧಿಕಾರಿಗಳ ಪೆಟ್ರೋಲ್ ಭತ್ಯೆಯನ್ನು ಶುಕ್ರವಾರದಿಂದಲೇ ಜಾರಿಗೆ ಬರುವಂತೆ ಶೇ. 20 ರಷ್ಟು ಕಡಿತಗೊಳಿಸಲಾಗಿದೆ.

ವಿದೇಶ ಪ್ರವಾಸಕ್ಕೆ ನಿಷೇಧ: ಗುರುವಾರದಿಂದ ಒಂದು ವರ್ಷದವರೆಗೆ ಯಾವುದೇ ಸಚಿವರು ಅಥವಾ ಅಧಿಕಾರಿಗಳು ಅಧಿಕೃತ ವಿದೇಶ ಪ್ರವಾಸ ಕೈಗೊಳ್ಳುವಂತಿಲ್ಲ. ಅಲ್ಲದೆ, ಅನಗತ್ಯ ಸರ್ಕಾರಿ ಕಾರ್ಯಕ್ರಮಗಳು ಮತ್ತು ಸಮ್ಮೇಳನಗಳನ್ನು ರದ್ದುಗೊಳಿಸಲಾಗಿದೆ.

ವಾಹನ ಖರೀದಿ ಸ್ಥಗಿತ: ಮುಂದಿನ ಆರು ತಿಂಗಳವರೆಗೆ ದೆಹಲಿ ಸರ್ಕಾರದಲ್ಲಿ ಯಾವುದೇ ಹೊಸ ಪೆಟ್ರೋಲ್, ಡೀಸೆಲ್, ಹೈಬ್ರಿಡ್ ಅಥವಾ ಸಿಎನ್‌ಜಿ ವಾಹನಗಳನ್ನು ಖರೀದಿಸದಿರಲು ನಿರ್ಧರಿಸಲಾಗಿದೆ.

ಖಾಸಗಿ ವಲಯಕ್ಕೂ ಮನವಿ:

ಸಾಧ್ಯವಿರುವ ಕಡೆಗಳಲ್ಲಿ ಖಾಸಗಿ ಕಂಪನಿಗಳೂ ಸಹ ವಾರಕ್ಕೆ ಎರಡು ದಿನ 'ಮನೆಯಿಂದ ಕೆಲಸ' ನೀಡುವಂತೆ ಸರ್ಕಾರ ಸಲಹೆ ನೀಡಿದೆ. ಅಲ್ಲದೆ, ನ್ಯಾಯಾಲಯಗಳಲ್ಲಿಯೂ ಹೆಚ್ಚಿನ ವಿಚಾರಣೆಗಳನ್ನು ಆನ್‌ಲೈನ್ ಮೂಲಕ ನಡೆಸುವಂತೆ ವಿನಂತಿಸಲಾಗಿದೆ.

ಮೇರಾ ಭಾರತ್ ಮೇರಾ ಯೋಗದಾನ್' ಅಭಿಯಾನ:

90 ದಿನಗಳ ಕಾಲ ನಡೆಯಲಿರುವ ಈ ಸಾರ್ವಜನಿಕ ಅಭಿಯಾನದ ಅಡಿಯಲ್ಲಿ ಸಾರ್ವಜನಿಕ ಸಾರಿಗೆ ಬಳಸುವುದು, ಖಾಸಗಿ ವಾಹನಗಳ ಅನಗತ್ಯ ಬಳಕೆ ತಪ್ಪಿಸುವುದು, ಅನಗತ್ಯವಾಗಿ ಬಂಗಾರ ಖರೀದಿಸದಿರುವುದು ಮತ್ತು ಭಾರತೀಯ ಉತ್ಪನ್ನಗಳನ್ನೇ ಬಳಸುವಂತೆ ಜನರಲ್ಲಿ ಜಾಗೃತಿ ಮೂಡಿಸಲಾಗುತ್ತದೆ.


ಸಾಂಕೇತಿಕವಾಗಿ ಮುಖ್ಯಮಂತ್ರಿಗಳು ತಮ್ಮ ಬೆಂಗಾವಲು ವಾಹನಗಳ ಸಂಖ್ಯೆಯನ್ನು ಅರ್ಧಕ್ಕಿಂತ ಹೆಚ್ಚು ಕಡಿತಗೊಳಿಸಿದ್ದು, ಇನ್ನು ಮುಂದೆ ಎಲೆಕ್ಟ್ರಿಕ್ ವಾಹನಗಳನ್ನು ಮಾತ್ರ ಬಳಸುವುದಾಗಿ ತಿಳಿಸಿದ್ದಾರೆ.

# ಆಡಳಿತಕ್ಕೆ ಚೈತನ್ಯ ನೀಡಲು ಸಂಪುಟ ಪುನಾರಚನೆ ಅಗತ್ಯವಿದೆ: ಸಿದ್ದರಾಮಯ್ಯ

**ವರಿಷ್ಠರಿಂದ ಅಧಿಕೃತ ಕರೆ ಬಂದರಷ್ಟೇ ದೆಹಲಿಗೆ ಹೋಗುವೆ**

**ಸಚಿವ ಸ್ಥಾನದ ಆಕಾಂಕ್ಷಿಗಳಲ್ಲಿ ಹೊಸ ಸಂಚಲನ ಮೂಡಿಸಿದ ಹೇಳಿಕೆ**





**ಮೈಸೂರು, ಮೇ 14:** ರಾಜ್ಯ ರಾಜಕಾರಣದಲ್ಲಿ ಸಚಿವ ಸಂಪುಟ ಪುನಾರಚನೆ ಚರ್ಚೆಗಳು ಮತ್ತೆ ಮುನ್ನೆಲೆಗೆ ಬಂದಿವೆ. ಮೈಸೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಆಡಳಿತ ಯಂತ್ರಕ್ಕೆ ಹೊಸ ಚೈತನ್ಯ ನೀಡಲು ಸಂಪುಟ ಪುನಾರಚನೆಯ ಅಗತ್ಯವಿದೆ ಎಂದು ಹೇಳುವ ಮೂಲಕ ಸಚಿವ ಸ್ಥಾನದ ಆಕಾಂಕ್ಷಿಗಳಲ್ಲಿ ಹೊಸ ಸಂಚಲನ ಮೂಡಿಸಿದ್ದಾರೆ.

ದೆಹಲಿ ಭೇಟಿ ಬಗೆಗಿನ ವದಂತಿಗಳಿಗೆ ಸ್ಪಷ್ಟನೆ ನೀಡಿದ ಮುಖ್ಯಮಂತ್ರಿಗಳು, ಇದೇ ತಿಂಗಳ 15ನೇ ತಾರೀಖು ದೆಹಲಿಗೆ ಹೋಗುತ್ತಿಲ್ಲ. ಸದ್ಯಕ್ಕೆ ಅಂತಹ ಯಾವುದೇ ಪೂರ್ವನಿರ್ಧರಿತ ಕಾರ್ಯಕ್ರಮಗಳಿಲ್ಲ. ಹೈಕಮಾಂಡ್‌ನಿಂದ ಅಧಿಕೃತ ಕರೆ ಬಂದರೆ ಮಾತ್ರ ಹೋಗುತ್ತೇನೆ ಎಂದು ಹೇಳುವ ಮೂಲಕ ಸಂಪುಟ ಬದಲಾವಣೆಯ ಅಂತಿಮ ನಿರ್ಧಾರ ಪಕ್ಷದ ವರಿಷ್ಠರ ಕೈಯಲ್ಲಿದೆ ಎಂಬುದನ್ನು ಸ್ಪಷ್ಟಪಡಿಸಿದ್ದಾರೆ.

ಸಂಪುಟದಲ್ಲಿ ಬದಲಾವಣೆ ತರುವ ಮೂಲಕ ಸರ್ಕಾರದ ಕಾರ್ಯಕ್ಷಮತೆಯನ್ನು ಹೆಚ್ಚಿಸುವ ಇರಾದೆಯನ್ನು ಮುಖ್ಯಮಂತ್ರಿಗಳು ವ್ಯಕ್ತಪಡಿಸಿದ್ದಾರೆ.

ಲೋಕಸಭಾ ಚುನಾವಣೆಗಳ ನಂತರ ಆಡಳಿತದಲ್ಲಿ ವೇಗ ತರಲು ಕೆಲವು ಸಚಿವರಿಗೆ ಕೋಕ್ ನೀಡಿ, ಹೊಸಬರಿಗೆ ಅವಕಾಶ ನೀಡುವ ಸಾಧ್ಯತೆಗಳಿವೆ ಎನ್ನಲಾಗುತ್ತಿದೆ. ಈ ಹೇಳಿಕೆಯು ಈಗಿನ ಸಚಿವರಲ್ಲಿ ನಡುಕ ಹುಟ್ಟಿಸಿದ್ದರೆ, ಶಾಸಕರಲ್ಲಿ ಸಚಿವ ಸ್ಥಾನದ ಆಸೆಯನ್ನು ಚಿಗುರಿಸಿದೆ. ಸಿದ್ದರಾಮಯ್ಯ ಅವರ ದೆಹಲಿ ಭೇಟಿ ಸದ್ಯಕ್ಕೆ ಮುಂದೂಡ ಲ್ಪಟ್ಟಿದ್ದರೂ, ಮುಂದಿನ ದಿನಗಳಲ್ಲಿ ಹೈಕಮಾಂಡ್ ಜೊತೆಗಿನ ಮಾತುಕತೆ ಈ ಬದಲಾವಣೆಗೆ ಅಂತಿಮ ಮುದ್ರೆ ಒತ್ತಲಿದೆ. ಯಾರಿಗೆ ಮಂತ್ರಿ ಪಟ್ಟ ಸಿಗಲಿದೆ ಮತ್ತು ಯಾರನ್ನು ಕೈಬಿಡಲಾಗುವುದು ಎಂಬ ಲೆಕ್ಕಾಚಾರಗಳು ಈಗ ಹಸ್ತ ಪಡೆಯಲ್ಲಿ ಜೋರಾಗಿ ನಡೆಯುತ್ತಿವೆ.

## ಕೇಸರಿ ಶಾಲು ಧರಿಸಲು ಅವಕಾಶವಿಲ್ಲ

ರಾಜ್ಯದ ಶಾಲಾ–ಕಾಲೇಜುಗಳಲ್ಲಿ ಕೇಸರಿ ಶಾಲು ಧರಿಸಲು ಅವಕಾಶವಿಲ್ಲದಂತೆ ಈಗ ಹೊಸದಾಗಿ ಧರಿಸಲಾಗುತ್ತಿರುವ 'ಕೇಸರಿ ಪೇಟ'ಕ್ಕೂ ಅವಕಾಶವಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ. ಮೈಸೂರಿನಲ್ಲಿ ಮಾಧ್ಯಮಗಳೊಂದಿಗೆ ಗುರುವಾರ ಮಾತನಾಡಿದ ಅವರು, ಮೊದಲಿನಿಂದಲೂ ಯಾವ ಪೇಟಗಳನ್ನು ಧರಿಸಚುವ ಪದ್ಧತಿ ಇದೆಯೋ, ಅಂತಹ ಪೇಟಗಳಿಗೆ ಮಾತ್ರ ಅವಕಾಶ ನೀಡಲಾಗಿದೆ. ಜನಿವಾರ, ಶಿವಧಾರ ಮತ್ತು ಸಾಂಪ್ರದಾಯಿಕ ಪೇಟಗಳನ್ನು ಧರಿಸಲು ಯಾವುದೇ ಅಡ್ಡಿಯಿಲ್ಲ. ಬಣ್ಣ ಬದಲಾಯಿಸಿಕೊಂಡು ಹೊಸ ರೂಪದಲ್ಲಿ ಕೇಸರಿ ಪೇಟ ಧರಿಸಿ ಬರುವುದಕ್ಕೆ ಅವಕಾಶ ನೀಡುವುದಿಲ್ಲ ಎಂದು ಸಿಎಂ ಹೇಳಿದ್ದಾರೆ.

# ಕರ್ನಾಟಕ ಸೇರಿ 16 ರಾಜ್ಯಗಳಲ್ಲಿಬ ಎಸ್‌ಐಆರ್

**ಜೂನ್ 30ರಿಂದ ಪ್ರಕ್ರಿಯೆ । ಅಕ್ಟೋಬರ್ 7 ರಂದು ಅಂತಿಮ ಹಂತದ ಮತದಾರರ ಪಟ್ಟಿ ಬಿಡುಗಡೆ**

**ನವದೆಹಲಿ, ಮೇ 14:** ಕರ್ನಾಟಕ ಸೇರಿದಂತೆ ಒಟ್ಟು 16 ರಾಜ್ಯ/ಕೇಂದ್ರಾಡಳಿತ ಪ್ರದೇಶಗಳಲ್ಲಿ ಎಸ್‌ಐಆರ್ ಪ್ರಕ್ರಿಯೆ ನಡೆಯಲಿದ್ದು, ಪ್ರಕ್ರಿಯೆಯು ಮೇ 30ರಂದು ಹಂತಹಂತವಾಗಿ ಆರಂಭವಾಗಲಿದೆ. ಕರ್ನಾಟಕದಲ್ಲಿ ಜೂನ್ 30ರಿಂದ ಪ್ರಕ್ರಿಯೆಯು ಅಧಿಕೃತವಾಗಿ ಆರಂಭವಾಗಲಿದೆ ಎಂದು ಚುನಾವಣಾ ಆಯೋಗ ತಿಳಿಸಿದೆ.

ಈಗಾಗಲೇ ದೇಶದ ಒಟ್ಟು 99 ಕೋಟಿ ಮತದಾರರ ಪೈಕಿ ಸುಮಾರು 60 ಕೋಟಿ ಜನರನ್ನು ಮೊದಲ ಎರಡು ಹಂತಗಳ ಎಸ್‌ಐಆರ್ ಪ್ರಕ್ರಿಯೆಯಲ್ಲಿ ಒಳಗೊಳ್ಳಲಾಗಿದೆ. ಉಳಿದ 40 ಕೋಟಿ ಮತದಾರರನ್ನು ಎಸ್‌ಐಆರ್‌ಗೆ ಒಳಪಡಿಸಲು ಮೂರನೇ ಹಂತದಲ್ಲಿ ಪ್ರಕ್ರಿಯೆ ಆರಂಭವಾಗಿದೆ.

3ನೇ ಹಂತದಲ್ಲಿ ಕರ್ನಾಟಕ, ದೆಹಲಿ, ಒಡಿಶಾ, ಮಿಜೋರಾಂ, ಸಿಕ್ಕಿಂ, ಮಣಿಪುರ, ಉತ್ತರಾಖಂಡ, ಆಂಧ್ರಪ್ರದೇಶ, ಅರುಣಾಚಲ ಪ್ರದೇಶ, ಹರಿಯಾಣ, ಚಂಡೀಗಢ, ತೆಲಂಗಾಣ, ಪಂಜಾಬ್, ಮೇಘಾಲಯ, ಮಹಾರಾಷ್ಟ್ರ, ಜಾರ್ಖಂಡ್, ನಾಗಾಲ್ಯಾಂಡ್, ತ್ರಿಪುರಾ ಹಾಗೂ ದಾದರ್ ಮತ್ತು ನಗರ ಹವೇಲಿ, ದಮನ್ ಮತ್ತು ಡಿಯುಗಳಲ್ಲಿ ಪ್ರಕ್ರಿಯೆ ನಡೆಯಲಿದೆ.

16 ರಾಜ್ಯ/ಕೇಂದ್ರಾಡಳಿತ ಪ್ರದೇಶಗಳಲ್ಲಿ ನಡೆಯಲಿರುವ ಎಸ್‌ಐಆರ್ ಪ್ರಕ್ರಿಯೆಯಲ್ಲಿ ಸುಮಾರು 3.94 ಲಕ್ಷಕ್ಕೂ ಹೆಚ್ಚು ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಕಾರ್ಯನಿರ್ವಹಿಸಲಿದ್ದಾರೆ. ಈ ಅಧಿಕಾರಿಗಳು ಒಟ್ಟು 36.73 ಕೋಟಿ ಮತದಾರರ ಮನೆ ಬಾಗಿಲಿಗೆ ತೆರಳಿ, ದಾಖಲೆಗಳನ್ನು ಪರಿಶೀಲಿಸಿ ಮತದಾರರ ಪಟ್ಟಿಯನ್ನು ಅಂತಿಮಗೊಳಿಸಲಿದ್ದಾರೆ ಎಂದು ಆಯೋಗ ತಿಳಿಸಿದೆ.

ಹಿಮಾಚಲ ಪ್ರದೇಶ, ಜಮ್ಮು ಮತ್ತು ಕಾಶ್ಮೀರ ಹಾಗೂ ಲಡಾಖ್‌ನಂತಹ ಪ್ರದೇಶಗಳಲ್ಲಿ ಪ್ರಸ್ತುತ ಹವಾಮಾನ ವೈಪರೀತ್ಯ ಹಾಗೂ ಹಿಮಪಾತದ ಸಾಧ್ಯತೆ ಇರುವುದರಿಂದ, ಅಲ್ಲಿನ ಎಸ್‌ಐಆರ್ ವೇಳಾಪಟ್ಟಿಯನ್ನು ಸದ್ಯಕ್ಕೆ ತಡೆಹಿಡಿಯಲಾಗಿದೆ. ಪರಿಸ್ಥಿತಿ ಸುಧಾರಿಸಿದ ನಂತರ ಆ ಭಾಗದ ದಿನಾಂಕಗಳನ್ನು ಪ್ರತ್ಯೇಕವಾಗಿ ಘೋಷಿಸಲಾಗುತ್ತದೆ ಎಂದು ಆಯೋಗ ಹೇಳಿದೆ.

ಈಗಾಗಲೇ, ಉತ್ತರ ಪ್ರದೇಶ, ಪಶ್ಚಿಮ ಬಂಗಾಳ, ತಮಿಳುನಾಡು, ಕೇರಳ ಮತ್ತು ಗುಜರಾತ್ ಸೇರಿದಂತೆ 13 ರಾಜ್ಯಗಳಲ್ಲಿ ಎಸ್‌ಐಆರ್ ಪ್ರಕ್ರಿಯೆ ಪೂರ್ಣಗೊಂಡಿದ್ದು, ಒಟ್ಟು 5.6 ಕೋಟಿ ಮತದಾರರನ್ನು ಮತಪಟ್ಟಿಯಿಂದ ಹೊರಹಾಕಲಾಗಿದೆ. ಇವರಲ್ಲಿ ಹೆಚ್ಚಿನವರು ದಲಿತರು, ಹಿಂದುಳಿದವರು, ಅಲ್ಪಸಂಖ್ಯಾತರು ಹಾಗೂ ಮಹಿಳೆಯರೇ ಆಗಿದ್ದಾರೆ.

ಗಮನಾರ್ಹವಾಗಿ, ವಿಪಕ್ಷಗಳಿಗೆ ಮತ ಚಲಾಯಿಸುವವರಾಗಿದ್ದಾರೆ ಎಂದು ಹೇಳಲಾಗಿದೆ. ಇದೇ ತಿಂಗಳು ಆರಂಭವಾಗಲಿರುವ 16 ರಾಜ್ಯಗಳಲ್ಲಿ ಮತ್ತೂ 5 ಕೋಟಿಗೂ ಹೆಚ್ಚು ಮತದಾರರನ್ನು ಆಯೋಗವು ಹೊರಗಟ್ಟುವ ಆತಂಕವಿದೆ. ಆದ್ದರಿಂದ, ಎಸ್‌ಐಆರ್ ವಿರುದ್ಧ ದೇಶಾದ್ಯಂತ ಭಾರೀ ಆಕ್ರೋಶ–ವಿರೋಧ ವ್ಯಕ್ತವಾಗುತ್ತಿದೆ.

- **ಜೂನ್ 30 ರಿಂದ ಜುಲೈ 29 ವರೆಗೆ ಬಿಎಲ್‌ಓ ಗಳಿಂದ ಮನೆಗಳ ಭೇಟಿ**
- **29 ಜುಲೈ ಯಿಂದ ಮತಗಟ್ಟೆಗಳ ಪುನರ್ ವಿಂಗಡನೆ**
- **ಅಗಸ್ಟ್ 5 ರಂದು ಮತದಾರ ಪಟ್ಟಿಯ ಕರಡು ಪ್ರತಿ ಬಿಡುಗಡೆ**
- **ಅಗಸ್ಟ್ 5 ರಿಂದ ಸೆಪ್ಟೆಂಬರ್ 4 ತಕರಾರು ಅರ್ಜಿ ಸಲ್ಲಿಕೆಗೆ ಅವಕಾಶ**
- **ಸೆಪ್ಟೆಂಬರ್ 5 ರಿಂದ ಅಕ್ಟೋಬರ್ 3 ವರೆಗೂ ತಕರಾರು ಅರ್ಜಿಗಳ ಇತ್ಯರ್ಥ**
- **ಅಕ್ಟೋಬರ್ 7 ರಂದು ಅಂತಿಮ ಹಂತದ ಮತದಾರರ ಪಟ್ಟಿ ಬಿಡುಗಡೆ**

# ಕಾಂಗ್ರೆಸ್ ಸರ್ಕಾರದಿಂದ ಶೈಕ್ಷಣಿಕ ಅಂಗಳಕ್ಕೂ ತುಷ್ಟೀಕರಣ ಹೇರಿಕೆ

**ವಿವಾದ ಸುಪ್ರೀಂ ಪೀಠದಲ್ಲಿ ಇರುವಾಗಲೇ ನಿಷೇಧ ಹಿಂಪಡೆದು ನ್ಯಾಯಾಂಗ ವ್ಯವಸ್ಥೆಗೆ ಅಪಮಾನ**

**ಹಿಜಾಬ್ ನಿಷೇಧ ಹಿಂಪಡೆದ ರಾಜ್ಯ ಸರ್ಕಾರದ ವಿರುದ್ಧ ಪ್ರಲ್ಹಾದ ಜೋಶಿ ಕಿಡಿ**



**ನವದೆಹಲಿ, ಮೇ 14:** ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಹಿಜಾಬ್ ನಿಷೇಧ ಹಿಂಪಡೆದು ತನ್ನ ತುಷ್ಟೀಕರಣ ನೀತಿಯನ್ನು ಶೈಕ್ಷಣಿಕ ಅಂಗಳಕ್ಕೂ ಹೇರಿದೆ ಎಂದು ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಹಿಜಾಬ್ ವಿವಾದದ ಅರ್ಜಿಗಳು ಸುಪ್ರೀಂ ಕೋರ್ಟ್ ಸಾಂವಿಧಾನಿಕ ಪೀಠದಲ್ಲಿ ಬಾಕಿ ಇರುವಾಗಲೇ ರಾಜ್ಯ ಸರ್ಕಾರ ಹಿಜಾಬ್ ನಿಷೇಧ ಹಿಂಪಡೆದಿರುವುದು ಅತ್ಯಂತ ದುರದೃಷ್ಟಕರ ಸಂಗತಿ ಎಂದು ಖಂಡಿಸಿದ್ದಾರೆ.

ಶಾಲಾ–ಕಾಲೇಜುಗಳಲ್ಲಿ 'ಸಮವಸ್ತ್ರ ಸಂಹಿತೆ' ವಿದ್ಯಾರ್ಥಿಗಳಲ್ಲಿ ಸಮಾನತೆ ಬೆಳೆಸುವ ಮೂಲ ಉದ್ದೇಶವಾಗಿದೆ. ಆದರೆ ಕಾಂಗ್ರೆಸ್ ಸರ್ಕಾರ ಧರ್ಮಾಧಾರಿತ ಎನ್ನುವಂತೆ ಸಮವಸ್ತ್ರ ಸಂಹಿತಿಗೆ ಧಕ್ಕೆ ತರುತ್ತಿದೆ. ಸಮಾನತೆ ಬದಲು ತಾರತಮ್ಯ ತೋರುತ್ತಿದೆ ಎಂದು ಆರೋಪಿಸಿದ್ದಾರೆ.

**ನ್ಯಾಯಾಂಗ ವ್ಯವಸ್ಥೆಗೆ ಅಪಮಾನ:** ನ್ಯಾಯಾಂಗದ ಪ್ರಕ್ರಿಯೆಯನ್ನು ಕಡೆಗಣಿಸಿ ಸರ್ಕಾರ ಹಿಜಾಬ್ ನಿಷೇಧ ಹಿಂಪಡೆದಿರುವುದು ನ್ಯಾಯಾಂಗ ವ್ಯವಸ್ಥೆಗೆ ಮಾಡುವ ಅಪಮಾನವಾಗಿದೆ. ಒಂದು ನಿರ್ದಿಷ್ಟ ವರ್ಗವನ್ನು ಓಲೈಸಲು ಹೋಗಿ ಇಡೀ ಶೈಕ್ಷಣಿಕ ವಾತಾವರಣವನ್ನೇ ಹಾಳುಮಾಡುತ್ತಿದೆ ಎಂದು ಸಚಿವರು ಕಿಡಿಕಾರಿದ್ದಾರೆ.

ರಾಜ್ಯ ಕಾಂಗ್ರೆಸ್ ಸರ್ಕಾರ ವಿದ್ಯಾರ್ಥಿಗಳಲ್ಲೂ 'ವಿಭಜಕ ನೀತಿ' ಅನುಸರಿಸಿ ಶಾಲಾ ಶಿಸ್ತನ್ನು ಹದಗೆಡಿಸುವ ಹುನ್ನಾರಕ್ಕೆ ಮುಂದಾಗಿರುವುದು ನಿಜಕ್ಕೂ ಶೋಚನೀಯ ಎಂದು ಹರಿಹಾಯ್ದಿದ್ದಾರೆ.

ಕೇಂದ್ರ ಸರ್ಕಾರ ದೇಶದೆಲ್ಲೆಡೆ ಏಕರೂಪ ನಾಗರಿಕ ಸಂಹಿತೆ ಜಾರಿ ತರುತ್ತಿರುವ ಬೆನ್ನಲ್ಲೇ ಕರ್ನಾಟಕದ ಕಾಂಗ್ರೆಸ್ ಸರ್ಕಾರ ಧರ್ಮಗಳನ್ನು ಒಡೆದಾಳುವ ನೀತಿಗೆ ಕೈ ಹಾಕಿದೆ ಎಂದು ವಾಗ್ದಾಳಿ ನಡೆಸಿದ್ದಾರೆ.

ಕೇಸರಿ ಶಾಲು ಧಾರ್ಮಿಕವಲ್ಲ, ಆದರೆ, ರಾಜ್ಯ ಕಾಂಗ್ರೆಸ್ ಸರ್ಕಾರ ಯಾವ ಬಣ್ಣ ಹಾಕಬೇಕು, ಹಾಕಬಾರದೆಂಬ ಹಕ್ಕನ್ನೇ ಕಸಿದುಕೊಳ್ಳುವ ಸರ್ವಾಧಿಕಾರಿ ಧೋರಣೆ ಪ್ರದರ್ಶಿಸುತ್ತಿದೆ ಎಂದು ಸಚಿವ ಪ್ರಲ್ಹಾದ ಜೋಶಿ ಆರೋಪಿಸಿದ್ದಾರೆ.




ಉತ್ತರ ಪ್ರದೇಶದ ಗಾಜಿಯಾಬಾದ್‌ನಲ್ಲಿರುವ NDRF ಕ್ಯಾಂಪಸ್‌ನಲ್ಲಿ ಗುರುವಾರ ಕೇಂದ್ರ ಗೃಹ ಸಚಿವ ಮತ್ತು ಸಹಕಾರ ಸಚಿವ ಅಮಿತ್ ಶಾ ಅವರು ರುದ್ರಾಕ್ಷಿ ಸಸಿಯನ್ನು ನೆಟ್ಟರು.

# ಸುಪ್ರೀಂನಲ್ಲಿ ಇಂದು ನಟ ದರ್ಶನ್ ಜಾಮೀನು ಭವಿಷ್ಯ





**ನವದೆಹಲಿ, ಮೇ 14:** ಕೊಲೆ ಆರೋಪದ ಮೇಲೆ ಜೈಲು ಸೇರಿರುವ ನಟ ದರ್ಶನ್ ಜಾಮೀನು ಕೋರಿ ಎರಡನೇ ಬಾರಿಗೆ ಸುಪ್ರೀಂಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ. ದರ್ಶನ್ ಸಲ್ಲಿರುವ ಅರ್ಜಿಯನ್ನು ನ್ಯಾ. ಪರ್ದಿವಾಲ ನೇತೃತ್ವದ ದ್ವಿ ಸದಸ್ಯ ಪೀಠ ಇಂದು ವಿಚಾರಣೆ ನಡೆಸಲಿದೆ.

ಸೆಷನ್ಸ್ ಕೋರ್ಟ್‌ನಲ್ಲಿ ಕೇಸ್ ವಿಚಾರಣೆ ವಿಳಂಬವಾಗುತ್ತಿದೆ. 273 ಸಾಕ್ಷ್ಯಗಳ ಪೈಕಿ ಈತನಕ 10 ಮಂದಿಯ ವಿಚಾರಣೆಯನ್ನೂ ಮುಗಿಸಿಲ್ಲ. ಹೀಗಾಗಿ ನಾನು ಜೈಲು ಸೇರಿ ಈಗಾಗಲೇ 8 ತಿಂಗಳು ಆಗಿದೆ. ಇದರಿಂದಾಗಿ ನನಗೆ ಜಾಮೀನು ಮಂಜೂರು ಮಾಡುವಂತೆ ಕೋರಿ ದರ್ಶನ್ ಸುಪ್ರೀಂಕೋರ್ಟ್‌ಗೆ ಕೋ ರಿದ್ದಾರೆ.

ನನ್ನನ್ನ ಜೈಲಲ್ಲಿ ಅಮಾನವೀಯವಾಗಿ ನಡೆಸಿಕೊಳ್ಳಲಾಗುತ್ತಿದೆ. ಕ್ವಾರಂಟೈನ್ ಸೆಲ್‌ನಲ್ಲಿ ಇಡಲಾಗಿದೆ. ಆದ್ದರಿಂದ ಮಾನಸಿಕವಾಗಿ, ದೈಹಿಕವಾಗಿ ನನಗೆ ತೀರ ಹಿಂಸೆಯಾಗುತ್ತಿದೆ. ಸಹ–ಕೈದಿಗಳು ನಿಂದನೆ, ಮೂದಲಿಸುವುದು ಸೇರಿ ಹಲವು ರೀತಿ ಪ್ರಚೋದನೆ ನೀಡುತ್ತಿದ್ದಾರೆ. ಮಾಧ್ಯಮದಲ್ಲಿ ಕೆಟ್ಟ ಪ್ರಚಾರದಿಂದ ಸಮಸ್ಯೆ ಬಿಗಡಾಯಿಸಿದೆ ಎಂದು ಜಾಮೀನು ಅರ್ಜಿಯಲ್ಲಿ ದರ್ಶನ್ ಅವರು ಕಷ್ಟ ಹೇಳಿಕೊಂಡಿದ್ದರು.

ಅಷ್ಟೇ ಅಲ್ಲ, ಜೈಲಿನಲ್ಲಿ ತಾರತಮ್ಯ ಮಾಡಲಾಗುತ್ತಿದೆ. ಕುಟುಂಬದವರನ್ನು ಭೇಟಿ ಮಾಡಲು ಸಮಾನ ಸಮಯ ನೀಡುತ್ತಿಲ್ಲ. ಸೆಲ್‌ನ ಕಾರಿಡಾರ್‌ನಲ್ಲಿ ಮಾತ್ರ ವಾಕ್ ಮಾಡಲು ಅವಕಾಶ ನೀಡಿದ್ದಾರೆ. ಬೆನ್ನು ನೋವಿದ್ದರೂ ಸರಿಯಾಗಿ ಫಿಸಿಯೋಥೆರಪಿ ಮಾಡಿಲ್ಲ. ಸುದೀರ್ಘ ಜೈಲುವಾಸದಿಂದ ಜೀವನೋಪಾಯಕ್ಕೂ ಸಮಸ್ಯೆ ಆಗಿದೆ ಎಂದೂ ಹೇಳಿದ್ದಾರೆ. ಈ ಆರೋಪಗಳಿಗೂ ಕಳೆದ ವಿಚಾರಣೆಯಲ್ಲಿ ಸುಪ್ರೀಂಕೋರ್ಟ್ ರಾಜ್ಯ ಸರ್ಕಾರ ಮತ್ತು ಕೆಳಹಂತದ ನ್ಯಾಯಲಯದಿಂದ ಮಾಹಿತಿ ಕೋರಿತ್ತು.

ಇದಕ್ಕೆ ರಾಜ್ಯ ಸರ್ಕಾರ ಉತ್ತರ ನೀಡಿದೆ, ದರ್ಶನ್ ಇರುವ ಸೆಲ್ ವಿಡಿಯೋ, ಸಿಸಿಟಿವಿ ದೃಶ್ಯಾವಳಿ, ದರ್ಶನ್‌ಗೆ ನೀಡಿರುವ ಸಂಪೂರ್ಣ ವ್ಯವಸ್ಥೆ ಎಲ್ಲದರ ಬಗ್ಗೆ ಸಾಕ್ಷ್ಯ ಸಮೇತ ಕಾರಾಗೃಹ ಇಲಾಖೆ ಮಾಹಿತಿ ನೀಡಿದೆ. ಈ ವರದಿಯಲ್ಲಿ ಪ್ರಕರಣದ ವಿಚಾರಣೆ ಕಳೆದ ಡಿಸೆಂಬರ್‌ನಲ್ಲಿ ಆರಂಭವಾಗಿತ್ತು.

ರೇಣುಕಾಸ್ವಾಮಿ ಪ್ರಕರಣದಲ್ಲಿ ವಾರದಲ್ಲಿ ಎರಡು ದಿನ ವಿಚಾರಣೆ ನಡೆಸುತ್ತಿದ್ದೇವೆ ವಿಳಂಬ ಎನ್ನಲು ಕಾರಣಗಳು ಯಾವುದು ಇಲ್ಲ ಎಂದು ಹೇಳಿದೆ. ಈ ಎಲ್ಲ ಮಾಹಿತಿ ಆಧರಿಸಿ ಇಂದು ಕೋರ್ಟ್ ವಿಚಾರಣೆ ನಡೆಸಲಿದೆ.

# ಶಿಕ್ಷಣ, ಧರ್ಮಕ್ಕೆ ಕೈಹಾಕಬೇಡಿ ಸಚಿವ ಮಧು ಬಂಗಾರಪ್ಪ

**ಮಕ್ಕಳ ಹಿತದೃಷ್ಟಿಯಿಂದ ಶಾಲಾ-ಕಾಲೇಜುಗಳಲ್ಲಿ ಹಿಜಾಬ್‌ಗೆ ಅನುಮತಿ**




**ಬೆಂಗಳೂರು, ಮೇ 14:** ಹಿಜಾಬ್ ಅನುಮತಿ ಆದೇಶ ಮಕ್ಕಳ ಹಿತದೃಷ್ಟಿಯಿಂದ ಮಾಡಿದ್ದು, ಶಿಕ್ಷಣ, ಧರ್ಮಕ್ಕೆ ಕೈಹಾಕಲು ಹೋಗಬೇಡಿ ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ತಿಳಿಸಿದರು.

ಶಾಲಾ – ಕಾಲೇಜುಗಳಲ್ಲಿ ಹಿಜಾಬ್‌ಗೆ ಅನುಮತಿ ವಿಚಾರವಾಗಿ ಪ್ರತಿಕ್ರಿಯಿಸುತ್ತಾ, ಬರೀ ಹಿಜಾಬ್ ಅಂತ ಯಾಕೆ ಮಾತನಾಡ್ತೀರಾ. ನಿಮಗೆ ಯಾಕೆ ಜನಿವಾರ ಕಾಣಿಸಲಿಲ್ವಾ. ಯಾಕೆ ಯಾವಾಗ್ಲೂ ಹಿಜಾಬ್ ಬಗ್ಗೆ ಕೇಳ್ತೀರಾ. ಯಾರೋ ಸರ್ಕಾರದ ಆದೇಶವನ್ನು ವಿರೋಧಿಸ್ತಾರೆ. ಅವರು ನೀಟ್ ಪರೀಕ್ಷೆಯಲ್ಲಿ ತೊಂದರೆ ಕೊಟ್ರು. ಅದು ನಿಮಗೆ ಕಾಣ್ತಿಲ್ವಾ?. ಒಂದೂವರೆ ಲಕ್ಷ ಮಕ್ಕಳು ತೊಂದರೆಗೊಳಗಾದರು. ಧರ್ಮೇಂದ್ರ ಪ್ರಧಾನ್ ದೇಶದ ಶಿಕ್ಷಣ ಸಚಿವರಲ್ವೇ. ಅವರೇಕೆ ಕಾರಲ್ಲಿ ಹತ್ತಿ ಓಡಿಹೋದರು ರಾಜಸ್ಥಾನ್, ಗುಜರಾತ್‌ನಲ್ಲಿ ಸಿಕ್ಕಿಹಾಕಿಕೊಂಡವರು ಬಿಜೆಪಿಯವರಲ್ವೇ ಎಂದು ತಿರುಗೇಟು ನೀಡಿದರು.

ಆದೇಶ ವಿರೋಧಿಸೋರಿಗೆ ಒಂದೇ ಹೇಳೋದು. ನೀಟ್‌ನಿಂದ 25 ಲಕ್ಷ ಮಕ್ಕಳು ತೊಂದರೆಗೊಳಗಾದರು. ಅವರ ಕಾಲ ಕೆಳಗೆ ಇವರು ನುಸುಳಲಿ. ಕೇಂದ್ರೀಯ ವಿವಿಯಲ್ಲೂ ನಾವು ಮಾಡಿದ ಆದೇಶವಿದೆ. ಮೋದಿಯವರೇ ಈ ಕಾನೂನು ಮಾಡಿದ್ದಾರೆ. ಮಹಾರಾಷ್ಟ್ರದಲ್ಲೂ ಇದೇ ಕಾನೂನಿದೆ ಎಂದಿದ್ದಾರೆ.

ಎಸ್ಸಿ, ಎಸ್ಟಿಯವರು, ಓಬಿಸಿ, ಅಲ್ಪಸಂಖ್ಯಾತರು ಹೆಚ್ಚು ತೇರ್ಗಡೆ ಆಗಿದ್ದಾರೆ. ಅದಕ್ಕೆ ಬಿಜೆಪಿಯವರಿಗೆ ಹೊಟ್ಟೆಕಿಚ್ಚು ಎಂದು ಕಿಡಿಕಾರಿದರು. ಸುರೇಶ್ ಕುಮಾರ್, ಕಾಗೇರಿ ಎಲ್ಲಾ ಹಾಳು ಮಾಡಿದರಲ್ಲ ಚುನಾವಣಾ ಭರವಸೆ ಮೇಲೆ ತಾನೇ ಮತ ಬರೋದು. ಪುಕ್ಕಟೆ ಮತ ಬರುತ್ತಾ. ನಾನು ಹೋರಾಟಗಾರರಿಗೂ ಮನವಿ ಮಾಡುತ್ತೇನೆ. ಮಕ್ಕಳ ವಿದ್ಯಾಭ್ಯಾಸಕ್ಕೆ ದ್ವೇಷ ಮಾಡಬೇಡಿ. ಅದನ್ನು ಮೋದಿ ವಿರುದ್ಧ ಅಂತಾನೆ ಅಂದುಕೊಳ್ಳಿ. ಹಿಂದಿನ ಸರ್ಕಾರದ ಆದೇಶವನ್ನು ವಿತ್‌ಡ್ರಾ ಮಾಡುತ್ತೇವೆ. ಕಾನೂನು ಹೋರಾಟವನ್ನು ಕಾನೂನು ಇಲಾಖೆ ನೋಡುತ್ತದೆ ಎಂದು ತಿಳಿಸಿದರು.

**ಬಿಜೆಪಿಯವರು ನಿಷೇಧ ಮಾಡಿದ್ರು, ನಾವು ತೆಗೆದಿದ್ದೇವೆ**

ಸಚಿವ ಸತೀಶ್ ಜಾರಕಿಹೊಳಿ ಅವರು ಹಿಜಾಬ್ ನಿಷೇಧ ವಾಪಸ್ ತೆಗೆದ ವಿಚಾರವಾಗಿ ಮಾತನಾಡಿ, ಹಿಜಾಬ್ ಏನೂ ವಿವಾದ ಇಲ್ಲ. ಮುಂಚೆಯಿಂದಲೂ ಇತ್ತು. ಬಿಜೆಪಿಯವರು ಬ್ಯಾನ್ ಮಾಡಿದ್ರು. ನಾವು ತೆರವು ಮಾಡಿದ್ದೇವೆ. ಒಂದೇ ಧರ್ಮಕ್ಕೆ ಮಾಡಿಲ್ಲ. ಇನ್ನೊಂದು ಧರ್ಮದ್ದು ಮಾಡಿದ್ದೇವೆ. ಸಣ್ಣ ಪುಟ್ಟ ಗೊಂದಲ ಸರಿಮಾಡಿದ್ದೇವೆ. ಬಿಜೆಪಿ ನಾಯಕರು ಇನ್ನೇನು ಮಾಡ್ತಾರೆ. ಎರಡು ವರ್ಷ ಅದನ್ನೇ ಮಾಡ್ತಾರೆ ಎಂದು ವಾಗ್ದಾಳಿ ನಡೆಸಿದರು.ಸರ್ಕಾರದ್ದು ಏನಿದೆ, ಎಲ್ಲವನ್ನೂ ತೆಗೆಯುತ್ತಾರೆ. ಇನ್ನೆರಡು ವರ್ಷ ಅದೇ ಕೆಲಸ ಮಾಡ್ತಾರೆ. ಜನರು ಬಹಳ ಹುಷಾರಾಗಿರಬೇಕು. ಬಿಜೆಪಿಯವರ ಬಗ್ಗೆ ಹುಷಾರಾಗಿರಬೇಕು. ನಮ್ಮ ಪಕ್ಷ ಅವರಿಗೆ ಭರವಸೆ ನೀಡಿತ್ತು. ಈಗ ಅದನ್ನು ಮಾಡಿದ್ದೇವೆ. ಅದರಲ್ಲಿ ತಪ್ಪೇನಿದೆ? ಕೊಟ್ಟ ಮಾತು ಈಡೇರಿಸಿದ್ದೇವೆ. ದಾವಣಗೆರೆ ಅಲ್ಪಸಂಖ್ಯಾತರ ವಿಚಾರಕ್ಕೆ ಮಾಡಿಲ್ಲ ಎಂದು ಸಚಿವ ಸತೀಶ್ ಜಾರಕಿಹೊಳಿ ಸರ್ಕಾರದ ಕ್ರಮವನ್ನು ಸಮರ್ಥಿಸಿಕೊಂಡರು.

# ಬ್ರಿಕ್ಸ್ ಅಧ್ಯಕ್ಷತೆಯಲ್ಲಿ ಅಂತರ್ಗತ ಜಾಗತಿಕ ವ್ಯವಸ್ಥೆಗೆ ಒತ್ತು: ಮೋದಿ

**ನವದೆಹಲಿ, ಮೇ 14:** ಈ ವರ್ಷದ ಬ್ರಿಕ್ಸ್ ಒಕ್ಕೂಟದ ಅಧ್ಯಕ್ಷತೆಯ ಅವಧಿಯಲ್ಲಿ ಭಾರತವು ಬಹುಪಕ್ಷೀಯತೆಯನ್ನು ಬಲಪಡಿಸಲು, ಸುಸ್ಥಿರ ಅಭಿವೃದ್ಧಿಯನ್ನು ಉತ್ತೇಜಿಸಲು ಮತ್ತು ಹೆಚ್ಚು ಅಂತರ್ಗತ ಜಾಗತಿಕ ವ್ಯವಸ್ಥೆಯನ್ನು ನಿರ್ಮಿಸಲು ಶ್ರಮಿಸಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದ್ದಾರೆ.



ಬ್ರಿಕ್ಸ್ ರಾಷ್ಟ್ರಗಳ ವಿದೇಶಾಂಗ ಸಚಿವರು ಮತ್ತು ನಿಯೋಗದ ಮುಖ್ಯಸ್ಥರೊಂದಿಗೆ ಗುರುವಾರ ಸಂವಹನ ನಡೆಸಿದ ನಂತರ ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಮೋದಿ, ಉದಯೋನ್ಮುಖ ಆರ್ಥಿಕತೆಗಳು ಮತ್ತು 'ಗ್ಲೋಬಲ್ ಸೌತ್' ರಾಷ್ಟ್ರಗಳ ಹಿತಾಸಕ್ತಿ ಹಾಗೂ ಆಕಾಂಕ್ಷೆಗಳನ್ನು ಪ್ರತಿನಿಧಿಸುವ ಪ್ರಮುಖ ವೇದಿಕೆಯಾಗಿ ಬ್ರಿಕ್ಸ್ ಹೊರಹೊಮ್ಮಿದೆ ಎಂದು ಶ್ಲಾಘಿಸಿದರು. "ಬ್ರಿಕ್ಸ್ ದೇಶಗಳ ವಿದೇಶಾಂಗ ಸಚಿವರು ಮತ್ತು ನಿಯೋಗದ ಮುಖ್ಯಸ್ಥರೊಂದಿಗೆ ಸಂವಹನ ನಡೆಸಲು ಸಂತೋಷವಾಗಿದೆ." ಎಂದು ಪ್ರಧಾನಿ ತಿಳಿಸಿದರು. ಜಾಗತಿಕ ಆರ್ಥಿಕ ಮತ್ತು ಭೌಗೋಳಿಕ ರಾಜಕೀಯ ಸವಾಲುಗಳ ನಡುವೆ ಸದಸ್ಯ ರಾಷ್ಟ್ರಗಳ ನಡುವಿನ ಸಹಕಾರವನ್ನು ಬಲಪಡಿಸುವುದರ ಮೇಲೆ ಭಾರತದ ಅಧ್ಯಕ್ಷತೆಯು ಗಮನ ಹರಿಸಲಿದೆ ಎಂದು ಮೋದಿ ಹೇಳಿದರು. "ಈ ವರ್ಷ ಭಾರತದ ಅಧ್ಯಕ್ಷತೆಯಡಿಯಲ್ಲಿ, ನಾವು ಬಹುಪಕ್ಷೀಯತೆಯನ್ನು ಬಲಪಡಿಸಲು, ಸುಸ್ಥಿರ ಅಭಿವೃದ್ಧಿಯನ್ನು ಉತ್ತೇಜಿಸಲು, ಆರ್ಥಿಕ ಸ್ಥಿತಿಸ್ಥಾಪಕತ್ವವನ್ನು ಹೆಚ್ಚಿಸಲು ಮತ್ತು ಹೆಚ್ಚು ಅಂತರ್ಗತ ಜಾಗತಿಕ ವ್ಯವಸ್ಥೆಯನ್ನು ನಿರ್ಮಿಸಲು ಒಟ್ಟಾಗಿ ಕೆಲಸ ಮಾಡುತ್ತೇವೆ," ಎಂದು ಅವರು ತಿಳಿಸಿದರು.

ನವದೆಹಲಿಯಲ್ಲಿ ಬ್ರಿಕ್ಸ್ ವಿದೇಶಾಂಗ ಸಚಿವರ ಸಭೆಯನ್ನು ಆಯೋಜಿಸುತ್ತಿರುವ ಸಂದರ್ಭದಲ್ಲಿ ಪ್ರಧಾನಿಯವರ ಈ ಹೇಳಿಕೆ ಹೊರಬಿದ್ದಿದೆ. ಅಭಿವೃದ್ಧಿಶೀಲ ರಾಷ್ಟ್ರಗಳು ಎದುರಿಸುತ್ತಿರುವ ಪ್ರಮುಖ ಅಂತರರಾಷ್ಟ್ರೀಯ ಮತ್ತು ಆರ್ಥಿಕ ಸಮಸ್ಯೆಗಳ ಬಗ್ಗೆ ಚರ್ಚಿಸಲು ಈ ಸಭೆಯಲ್ಲಿ ಸದಸ್ಯ ರಾಷ್ಟ್ರಗಳ ಹಿರಿಯ ರಾಜತಾಂತ್ರಿಕರು ಭಾಗವಹಿಸಿದ್ದಾರೆ.

2026ರ ಜನವರಿ 1 ರಿಂದ ಭಾರತವು ಬ್ರಿಕ್ಸ್ ಅಧ್ಯಕ್ಷತೆಯನ್ನು ವಹಿಸಿಕೊಂಡಿದ್ದು, 2026ರ ಬ್ರಿಕ್ಸ್ ಶೃಂಗಸಭೆ ಮತ್ತು ಸಂಬಂಧಿತ ಸಭೆಗಳು ಭಾರತದ ನೇತೃತ್ವದಲ್ಲಿ ನಡೆಯಲಿವೆ.

ಮೂಲತಃ ಬ್ರೆಜಿಲ್, ರಷ್ಯಾ, ಭಾರತ, ಚೀನಾ ಮತ್ತು ದಕ್ಷಿಣ ಆಫ್ರಿಕಾವನ್ನು ಒಳಗೊಂಡಿದ್ದ ಬ್ರಿಕ್ಸ್ ಒಕ್ಕೂಟವು ಇತ್ತೀಚಿನ ವರ್ಷಗಳಲ್ಲಿ ಹೊಸ ಸದಸ್ಯರ ಸೇರ್ಪಡೆಯೊಂದಿಗೆ ವಿಸ್ತರಣೆಗೊಂಡಿದ್ದು, ತನ್ನ ಭೌಗೋಳಿಕ ರಾಜಕೀಯ ಮತ್ತು ಆರ್ಥಿಕ ಪ್ರಭಾವವನ್ನು ಹೆಚ್ಚಿಸಿಕೊಂಡಿದೆ. ಜಾಗತಿಕ ಆಡಳಿತ ಸಂಸ್ಥೆಗಳಲ್ಲಿ ಸುಧಾರಣೆ ತರಲು ಮತ್ತು ಅಂತರರಾಷ್ಟ್ರೀಯ ನಿರ್ಧಾರ ತೆಗೆದುಕೊಳ್ಳುವ ಸಂಸ್ಥೆಗಳಲ್ಲಿ ಅಭಿವೃದ್ಧಿಶೀಲ ರಾಷ್ಟ್ರಗಳಿಗೆ ಹೆಚ್ಚಿನ ಪ್ರಾತಿನಿಧ್ಯ ನೀಡುವಂತೆ ಈ ಒಕ್ಕೂಟವು ನಿರಂತರವಾಗಿ ಪ್ರತಿಪಾದಿಸುತ್ತಾ ಬಂದಿದೆ. ಅಭಿವೃದ್ಧಿ ಹಣಕಾಸು, ಹವಾಮಾನ ನ್ಯಾಯ, ಆಹಾರ ಮತ್ತು ಇಂಧನ ಭದ್ರತೆ ಹಾಗೂ ಸಮಾನ ಆರ್ಥಿಕ ಬೆಳವಣಿಗೆಗೆ ಸಂಬಂಧಿಸಿದ ವಿಷಯಗಳಲ್ಲಿ ಜಾಗತಿಕ ಚರ್ಚೆಯನ್ನು ರೂಪಿಸುವಲ್ಲಿ 'ಗ್ಲೋಬಲ್ ಸೌತ್'ನ ಪ್ರಾಮುಖ್ಯತೆಯನ್ನು ಭಾರತವು ಪದೇ ಪದೇ ಪ್ರತಿಪಾದಿಸುತ್ತಿದೆ.



ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಗುರುವಾರ ನವದೆಹಲಿಯ 10 ಜನಪಥ್‌ನಲ್ಲಿ ಪಶ್ಚಿಮ ಬಂಗಾಳದ ಚುನಾಯಿತ ಕಾಂಗ್ರೆಸ್ ಶಾಸಕರನ್ನು ಭೇಟಿಯಾದರು.

# ಆರ್ಥಿಕ ಅನಿಶ್ಚಿತ ಪರಿಸ್ಥಿತಿ: ಬ್ರಿಕ್ಸ್ ಪಾತ್ರ ಮಹತ್ವದ್ದು– ಜೈಶಂಕರ್

**ನವದೆಹಲಿ, ಮೇ 14:** ಜಗತ್ತು ಪ್ರಮುಖ ಭೌಗೋಳಿಕ ರಾಜಕೀಯ ಮತ್ತು ಆರ್ಥಿಕ ಬದಲಾವಣೆಗಳನ್ನು ನೋಡುತ್ತಿರುವ ಸಮಯದಲ್ಲಿ ಬ್ರಿಕ್ಸ್ ಬಣವು, ವಿಶೇಷವಾಗಿ ಉದಯೋನ್ಮುಖ ಮಾರುಕಟ್ಟೆಗಳು ಮತ್ತು ಅಭಿವೃದ್ಧಿಶೀಲ ರಾಷ್ಟ್ರಗಳಿಂದ, ರಚನಾತ್ಮಕ ಮತ್ತು ಸ್ಥಿರಗೊಳಿಸುವ ಪಾತ್ರವನ್ನು ವಹಿಸುವ ನಿರೀಕ್ಷೆ ಹೆಚ್ಚುತ್ತಿದೆ ಎಂದು ವಿದೇಶಾಂಗ ಸಚಿವ ಎಸ್. ಜೈಶಂಕರ್ ಗುರುವಾರ ಹೇಳಿದ್ದಾರೆ. ವ್ಯಾಪಾರ, ತಂತ್ರಜ್ಞಾನ ಮತ್ತು ಹವಾಮಾನ ಬದಲಾವಣೆಗೆ ಸಂಬಂಧಿಸಿದ ನಡೆಯುತ್ತಿರುವ ಸಂಘರ್ಷಗಳು, ಆರ್ಥಿಕ ಅನಿಶ್ಚಿತತೆಗಳು ಮತ್ತು ಸವಾಲುಗಳು ಜಾಗತಿಕ ಭೂದೃಶ್ಯವನ್ನು ರೂಪಿಸುತ್ತಿವೆ ಎಂದು ಅವರು ಹೇಳಿದರು. ಬ್ರಿಕ್ಸ್ ವಿದೇಶಾಂಗ ಸಚಿವರ ಸಭೆಯಲ್ಲಿ ತಮ್ಮ ಸ್ವಾಗತಾರ್ಹ ಹೇಳಿಕೆಗಳನ್ನು ನೀಡಿದ ಜೈಶಂಕರ್, ಅಧ್ಯಕ್ಷರಾಗಿ ಭಾರತವು ಪಾಲುದಾರ ರಾಷ್ಟ್ರಗಳೊಂದಿಗೆ ನಿರಂತರ ಮಾತುಕತೆಗಳ ಮೂಲಕ ಗುಂಪಿಗೆ ಹೆಚ್ಚು ಸಮಗ್ರ ಮತ್ತು ಸಹಯೋಗದ ಚೌಕಟ್ಟನ್ನು ಉತ್ತೇಜಿಸಲು ಕೆಲಸ ಮಾಡುತ್ತಿದೆ ಎಂದು ಹೇಳಿದರು. "ಅಂತರರಾಷ್ಟ್ರೀಯ ಸಂಬಂಧಗಳಲ್ಲಿ ಗಣನೀಯ ಏರಿಳಿತದ ಸಮಯದಲ್ಲಿ ನಾವು




ಭೇಟಿಯಾಗುತ್ತೇವೆ. ವ್ಯಾಪಾರ, ತಂತ್ರಜ್ಞಾನ ಮತ್ತು ಹವಾಮಾನದಲ್ಲಿನ ನಡೆಯುತ್ತಿರುವ ಸಂಘರ್ಷಗಳು, ಆರ್ಥಿಕ ಅನಿಶ್ಚಿತತೆಗಳು ಮತ್ತು ಸವಾಲುಗಳು ಜಾಗತಿಕ ಭೂದೃಶ್ಯವನ್ನು ರೂಪಿಸುತ್ತಿವೆ. ವಿಶೇಷವಾಗಿ ಉದಯೋನ್ಮುಖ ಮಾರುಕಟ್ಟೆಗಳು ಮತ್ತು ಅಭಿವೃದ್ಧಿಶೀಲ ರಾಷ್ಟ್ರಗಳಿಂದ, ಬ್ರಿಕ್ಸ್ ರಚನಾತ್ಮಕ ಮತ್ತು ಸ್ಥಿರಗೊಳಿಸುವ ಪಾತ್ರವನ್ನು ವಹಿಸುತ್ತದೆ ಎಂಬ ನಿರೀಕ್ಷೆ ಹೆಚ್ಚುತ್ತಿದೆ" ಎಂದು ಜೈಶಂಕರ್ ಹೇಳಿದರು. "ಈ ಹಿನ್ನೆಲೆಯಲ್ಲಿ, ಇಂದಿನ ನಮ್ಮ ಚರ್ಚೆಗಳು ಜಾಗತಿಕ ಮತ್ತು ಪ್ರಾದೇಶಿಕ ಬೆಳವಣಿಗೆಗಳ ಬಗ್ಗೆ ಚಿಂತಿಸಲು ಮತ್ತು ನಮ್ಮ ಸಹಕಾರವನ್ನು ಬಲಪಡಿಸುವ ಪ್ರಾಯೋಗಿಕ ಮಾರ್ಗಗಳನ್ನು ಪರಿಗಣಿಸಲು ಒಂದು ಅವಕಾಶವಾಗಿದೆ."

ಇಂಧನ, ಆಹಾರ, ರಸಗೊಬ್ಬರ ಮತ್ತು ಆರೋಗ್ಯ ಭದ್ರತೆ ಹಾಗೂ ಹಣಕಾಸಿನ ಪ್ರವೇಶಕ್ಕೆ ಸಂಬಂಧಿಸಿದ ಸವಾಲುಗಳನ್ನು ಎದುರಿಸುತ್ತಿರುವ ಅನೇಕ ದೇಶಗಳಿಗೆ ಅಭಿವೃದ್ಧಿ ಸಮಸ್ಯೆಗಳು ಕೇಂದ್ರಬಿಂದುವಾಗಿವೆ ಎಂದು ಅವರು ಗಮನಿಸಿದರು.

ಸಚಿವರ ಪ್ರಕಾರ, ಈ ಕಾಳಜಿಗಳಿಗೆ ಹೆಚ್ಚು ಪರಿಣಾಮಕಾರಿಯಾಗಿ ಪ್ರತಿಕ್ರಿಯಿಸಲು ರಾಷ್ಟ್ರಗಳಿಗೆ ಸಹಾಯ ಮಾಡುವಲ್ಲಿ ಬ್ರಿಕ್ಸ್ ಪ್ರಮುಖ ಪಾತ್ರ ವಹಿಸಬಹುದು. ಹೆಚ್ಚು ಸಮಗ್ರ ಮತ್ತು ಸಹಯೋಗದ ಬ್ರಿಕ್ಸ್ ಚೌಕಟ್ಟನ್ನು ಉತ್ತೇಜಿಸಲು ಭಾರತವು ಪಾಲುದಾರ ರಾಷ್ಟ್ರಗಳನ್ನು ಸಹ ತೊಡಗಿಸಿಕೊಂಡಿದೆ ಎಂದು ಅವರು ಹೇಳಿದರು. ಶಾಂತಿ ಮತ್ತು ಭದ್ರತೆಯು ಜಾಗತಿಕ ಕ್ರಮದ ಕೇಂದ್ರಬಿಂದುವಾಗಿದೆ ಎಂದು ಜೈಶಂಕರ್ ಒತ್ತಿ ಹೇಳಿದರು, ನಡೆಯುತ್ತಿರುವ ಸಂಘರ್ಷಗಳು ಸಂವಾದ ಮತ್ತು ರಾಜತಾಂತ್ರಿಕತೆಯ ಮಹತ್ವವನ್ನು ಒತ್ತಿಹೇಳುತ್ತವೆ ಎಂದು ಹೇಳಿದರು. ಭಯೋತ್ಪಾದನೆಯ ವಿರುದ್ಧ ಸಹಕಾರವನ್ನು ಬಲಪಡಿಸುವಲ್ಲಿ ಬ್ರಿಕ್ಸ್ ರಾಷ್ಟ್ರಗಳ ನಡುವಿನ ಹಂಚಿಕೆಯ ಆಸಕ್ತಿಯನ್ನು ಎಂದು ಜೈಶಂಕರ್ ಉಲ್ಲೇಖಿಸಿದರು.

# ಬಸ್‌ನಲ್ಲಿ ಸಾಮೂಹಿಕ ಅತ್ಯಾಚಾರ ಚಾಲಕ, ನಿರ್ವಾಹಕ ಬಂಧನ

**ನವದೆಹಲಿ, ಮೇ 14:** ರಸ್ತೆ ಬದಿ ನಿಂತಿದ್ದ ಸ್ಲೀಪರ್ ಬಸ್ ಒಳಗೆ ಮಹಿಳೆಯೊಬ್ಬರ ಮೇಲೆ ಸಾಮೂಹಿಕ ಅತ್ಯಾಚಾರ ಎಸಗಿರುವ ಘಟನೆ ದೆಹಲಿಯಲ್ಲಿ ಸೋಮವಾರ ನಡೆದಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿಗಳಾದ ಚಾಲಕ ಮತ್ತು ನಿರ್ವಾಹಕನನ್ನು ಗುರುವಾರ ಪೊಲೀಸರು ಬಂಧಿಸಿದ್ದಾರೆ. ಪೀತಾಮ್‌ಪುರದ ಕೊಳೆಗೇರಿ ನಿವಾಸಿಯಾಗಿರುವ ಸಂತ್ರಸ್ತೆ, ಮಂಗೋಲ್ ಪುರಿಯ ಕಾರ್ಖಾನೆಯೊಂದರಲ್ಲಿ ಕೆಲಸ ಮಾಡುತ್ತಿದ್ದಾರೆ. ಅವರು ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದು, ಸೋಮವಾರ ರಾತ್ರಿ ದೆಹಲಿಯ ರಾಣಿಬಾಗ್ ಪ್ರದೇಶದಲ್ಲಿ ಬಸ್ಸಿನೊಳಗೆ ಇಬ್ಬರು ವ್ಯಕ್ತಿಗಳು ತನ್ನ ಮೇಲೆ ಅತ್ಯಾಚಾರ ಎಸಗಿದ್ದಾರೆ ಎಂದು ಆರೋಪಿಸಿದ್ದಾರೆ.

ಸಂತ್ರಸ್ತೆ ಮೇ 11ರ ರಾತ್ರಿ ಕೆಲಸ ಮುಗಿಸಿ ಎಂದಿನಂತೆ ಮನೆಗೆ ನಡೆದು ಹೋಗುತ್ತಿದ್ದರು. ಸರಸ್ವತಿ ವಿಹಾರ್‌ನ ಬಸ್ ನಿಲ್ದಾಣದಲ್ಲಿ ಸ್ಲೀಪರ್ ಬಸ್ಸೊಂದು ನಿಂತಿತ್ತು. ಸಮಯ ಕೇಳಲೆಂದು ಸಂತ್ರಸ್ತೆ ಬಸ್ಸಿನ ಬಾಗಿಲಲ್ಲಿ ನಿಂತಿದ್ದ ವ್ಯಕ್ತಿಯನ್ನು ಸಮೀಪಿಸಿದಾಗ, ಆಕೆಯನ್ನು ಬಲವಂತವಾಗಿ ವಾಹನದೊಳಗೆ ಎಳೆದುಕೊಂಡಿದ್ದಾರೆ. ನಂತರ ಆರೋಪಿಗಳು ಬಸ್ಸನ್ನು ನಂಗ್ಲೋಯಿ ಕಡೆಗೆ ಚಲಾಯಿಸಿದ್ದು, ಅಲ್ಲಿ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ ಎಂದು ಪೊಲೀಸರು ತಿಳಿಸಿರುವುದಾಗಿ ಐಎಎನ್‌ಎಸ್ ಸುದ್ದಿ ಸಂಸ್ಥೆ ವರದಿ ಮಾಡಿದೆ. ಅಪರಾಧಕ್ಕೆ ಬಳಸಲಾದ ವಾಹನವನ್ನು ವಶಪಡಿಸಿಕೊಳ್ಳಲಾಗಿದೆ ಎಂದು ದೆಹಲಿ ಪೊಲೀಸರು ತಿಳಿಸಿದ್ದಾರೆ. ತನಿಖೆ ನಡೆಯುತ್ತಿದೆ. ಎಲ್ಲ ಸಂಭಾವ್ಯ ಆಯಾಮಗಳನ್ನು ಪರಿಶೀಲಿಸಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಪೊಲೀಸರ ಮಾಹಿತಿಯ ಪ್ರಕಾರ, ಮಹಿಳೆಯನ್ನು ವೈದ್ಯಕೀಯ ಪರೀಕ್ಷೆಗೆ ಒಳಪಡಿಸಲಾಗಿದೆ. ನಂತರ ಎಫ್‌ಐಆರ್ ದಾಖಲಿಸಲಾಗಿದ್ದು, ಆರೋಪಿಗಳನ್ನು ಬಂಧಿಸಲಾಗಿದೆ.

# ದೆಹಲಿ ಕೆಂಪುಕೋಟೆ ಬಳಿ ಸ್ಫೋಟ ಪ್ರಕರಣ 7,500 ಪುಟಗಳ ಚಾರ್ಜ್‌ಶೀಟ್ ಸಲ್ಲಿಕೆ

**ನವದೆಹಲಿ,ಮೇ 14:** ಕಳೆದ ವರ್ಷ ನವೆಂಬರ್ 10 ರಂದು ದೆಹಲಿಯ ಕೆಂಪುಕೋಟೆ ಬಳಿ ನಡೆದ ಸ್ಫೋಟ ಪ್ರಕರಣಕ್ಕೆ ಸಂಬಂಧಿಸಿದಂತೆ 10 ಆರೋಪಿಗಳ ವಿರುದ್ಧ ರಾಷ್ಟ್ರೀಯ ತನಿಖಾ ಸಂಸ್ಥೆ ಬರೋಬ್ಬರಿ 7,500 ಪುಟಗಳ ಚಾರ್ಜ್‌ಶೀಟ್ ಸಲ್ಲಿಸಿದೆ.

ಆರೋಪಪಟ್ಟಿಯಲ್ಲಿ 588 ಸಾಕ್ಷಿಗಳ ಹೇಳಿಕೆಗಳು, 395ಕ್ಕೂ ಹೆಚ್ಚು ದಾಖಲೆಗಳು ಮತ್ತು 200ಕ್ಕೂ ಹೆಚ್ಚು ವಶಪಡಿಸಿಕೊಂಡ ವಸ್ತುಗಳನ್ನ ಮಾಹಿತಿಯನ್ನು ದಾಖಲಿಸಲಾಗಿದೆ. ಒಟ್ಟು 11 ಜನರನ್ನ ಬಂಧಿಸಿದ್ದು, ಉಳಿದ ಆರೋಪಿಗಳ ಬಂಧನಕ್ಕೆ ಎನ್‌ಐಎ ಶೋಧ ಕಾರ್ಯ ಮುಂದುವರಿಸಿದೆ ಎಂದು ಆರೋಪ ಪಟ್ಟಿಯಲ್ಲಿ ತಿಳಿಸಿದೆ.

2025 ರ ನವೆಂಬರ್ 10 ರಂದು ಸಂಜೆ ಕೆಂಪುಕೋಟೆ ಬಳಿ ಹುಂಡೈ I20 ಕಾರು ಸ್ಫೋಟಗೊಂಡು 11 ಮಂದಿ ಮೃತಪಟ್ಟಿದ್ದರು. 20ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದರು. ಸ್ಫೋಟದ ತೀವ್ರತೆಗೆ ಸುತ್ತಮುತ್ತಲಿನ ಹಲವಾರು ವಾಹನಗಳು ಹಾನಿಗೊಳಗಾಗಿದ್ದವು. ಈ ಪ್ರಕರಣದ ತನಿಖೆ ಹೊಣೆ ಹೊತ್ತಿದ್ದ ಎನ್‌ಐಎ ಗುರುವಾರ ಪಟಿಯಾಲ ಹೌಸ್ ಕೋರ್ಟ್‌ನಲ್ಲಿರುವ ಎನ್‌ಐಎ ವಿಶೇಷ ನ್ಯಾಯಾಲಯದ ಮುಂದೆ ಆರೋಪ ಪಟ್ಟಿ ಸಲ್ಲಿಕೆ ಮಾಡಿದೆ.

ಕಾನೂನುಬಾಹಿರ ಚಟುವಟಿಕೆಗಳ ತಡೆ ಕಾಯ್ದೆ, ಭಾರತೀಯ ನ್ಯಾಯ ಸಂಹಿತೆ, ಸ್ಫೋಟಕ ವಸ್ತುಗಳ ಕಾಯ್ದೆ, ಶಸ್ತ್ರಾಸ್ತ್ರ ಕಾಯ್ದೆ ಮತ್ತು ಸಾರ್ವಜನಿಕ ಆಸ್ತಿಗೆ ಹಾನಿ ತಡೆಗಟ್ಟುವಿಕೆ ಕಾಯ್ದೆಯ ಬಹು ನಿಬಂಧನೆಗಳ ಅಡಿಯಲ್ಲಿ ಆರೋಪಪಟ್ಟಿಯನ್ನ ಸಲ್ಲಿಕೆ ಮಾಡಲಾಗಿದೆ. ಬಂಧಿತ ಆರೋಪಿಗಳು ಅಲ್–ಖೈದಾದ ಜೊತೆ ಲಿಂಕ್ ಹೊಂದಿರುವ ಅನ್ಸಾರ್ ಘಜ್ವತ್–ಉಲ್–ಹಿಂದ್ ಭಯೋತ್ಪಾದಕ ಸಂಘಟನೆ ಜೊತೆಗೆ ಸಂಪರ್ಕ ಹೊಂದಿದ್ದರು ಎಂದು ಎನ್‌ಐಎ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಪ್ರಕರಣದ ಪ್ರಮುಖ ಆರೋಪಿ ಪುಲ್ವಾಮಾ ನಿವಾಸಿ ಮತ್ತು ಫರಿದಾಬಾದ್ನ ಅಲ್–ಫಲಾಹ್ ವಿಶ್ವವಿದ್ಯಾಲಯದ ಮಾಜಿ ಸಹಾಯಕ ಪ್ರಾಧ್ಯಾಪಕ ಡಾ. ಉಮರ್ ಉನ್ ನಬಿ ಸ್ಫೋಟದಲ್ಲಿ ಸಾವನ್ನಪ್ಪಿದ್ದಾರೆ. ತನಿಖಾಧಿಕಾರಿಗಳು ಬೆರಳಚ್ಚು ಮೂಲಕ ಆರೋಪಿ ಗುರುತನ್ನ ಪತ್ತೆ ಮಾಡಿದ್ದರು. ಇತರ 9 ಆರೋಪಿಗಳಲ್ಲಿ ಅಮೀರ್ ರಶೀದ್ ಮಿರ್, ಜಾಸಿರ್ ಬಿಲಾಲ್ ವಾನಿ, ಡಾ. ಮುಜಾಮಿಲ್ ಶಕೀಲ್, ಡಾ. ಅದೀಲ್ ಅಹ್ಮದ್ ರಾಥರ್, ಡಾ. ಶಾಹೀನ್ ಸಯೀದ್, ಮುಫ್ತಿ ಇರ್ಫಾನ್ ಅಹ್ಮದ್ ವಾಗೆ, ಸೋಯಾಬ್, ಡಾ. ಬಿಲಾಲ್ ನಸೀರ್ ಮಲ್ಲಾ ಮತ್ತು ಯಾಸಿರ್ ಅಹ್ಮದ್ ದರ್ ಸೇರಿದ್ದಾರೆ.

ಎನ್‌ಐಎ ಪ್ರಕಾರ, ಬಂಧಿತ ಆರೋಪಿಗಳು ಅಲ್–ಖೈದಾ ಸಿದ್ಧಾಂತಗಳಿಂದ ಪ್ರೇರಿತವಾಗಿದ್ದರು.

## ಸತತ ಪ್ರಯೋಗಗಳ ನಂತರ ಬ್ಲಾಸ್ಟ್‌ಗೆ ತಯಾರಿ

**ತನಿಖೆ ವೇಳೆ ಅಚ್ಚರಿ ಸತ್ಯವೊಂದು ಬಹಿರಂಗವಾಗಿದೆ. ಆರೋಪಿ ಕಾರು ಬಾಂಬ್ ಸ್ಫೋಟಕ್ಕೆ ಟ್ರಯಾಸೆಟೋನ್ ಟ್ರೈಪೆರಾಕ್ಸೈಡ್ ಬಳಸಲಾಗಿದೆ. ರಾಸಾಯನಿಕವನ್ನು ಸಂಗ್ರಹಿಸಿ ಸತತ ಪ್ರಯೋಗಗಳನ್ನು ನಡೆಸಿದ್ದಾರೆ, ಅದು ಯಶಸ್ವಿಯಾದ ಬಳಿಕ ಸ್ಫೋಟಕ್ಕೆ ತಯಾರಿ ಮಾಡಿ ಕೊಳ್ಳಲಾಗಿತ್ತು. ಇದರೊಂದಿಗೆ ಡ್ರೋನ್, ರಾಕೆಟ್ ಆಧಾರಿತ ಸ್ಫೋಟಕ ಸಾಧನ ಐಇಡಿ ಮಾಡ್ಯೂಲ್‌ಗಳನ್ನು ಪರೀಕ್ಷಿಸಿದ್ದರು ಎಂದು ಎನ್‌ಐಎ ಚಾರ್ಜ್‌ಶೀಟ್‌ನಲ್ಲಿ ಉಲ್ಲೇಖಿಸಿದೆ.**

ಘಜ್ವತ್–ಉಲ್–ಹಿಂದ್ ಉಗ್ರಸಂಘಟನೆಯ ಜಾಲವನ್ನ ನಿರಂತರವಾಗಿ ಸಂಘಟಿಸುವಲ್ಲಿ ತೊಡಗಿಕೊಂಡಿದ್ದರು. 2022 ರಲ್ಲಿ ಶ್ರೀನಗರದಲ್ಲಿ ರಹಸ್ಯ ಸಭೆ ನಡೆದಿದ್ದ ಭಯೋತ್ಪಾದಕರು ಟರ್ಕಿ ಮೂಲಕ ಅಫ್ಘಾನಿಸ್ತಾನಕ್ಕೆ ಪ್ರಯಾಣಿಸಲು ವಿಫಲಯತ್ನ ನಡೆಸಿದ್ದರು. ಭಾರತದಲ್ಲಿ ಶರಿಯಾ ಆಡಳಿತ ಸ್ಥಾಪಿಸುವ ಉದ್ದೇಶದಿಂದ ಆಪರೇಷನ್ ಹೆವೆನ್ಲಿ ಹಿಂದ್ ಹೆಸರಿನಲ್ಲಿ ದುಷ್ಕೃತ್ಯಗಳ ಅಭಿಯಾನ ನಡೆಸಲು ತಂತ್ರ ರೂಪಿಸಿದ್ದರು. ಅದಕ್ಕಾಗಿ ಬೃಹತ್ ಪ್ರಮಾಣದ ಶಸ್ತ್ರಾಸ್ತ್ರಗಳು ಮತ್ತು ಸ್ಫೋಟಕಗಳನ್ನ ಸಂಗ್ರಹಿಸಿದ್ದರು.

# ಉ.ಪ್ರ.ದಲ್ಲಿ ಮಳೆ: 100ಕ್ಕೂ ಸಾವು

**ಲಖನೌ ಮೇ 14:** ಉತ್ತರ ಪ್ರದೇಶದಲ್ಲಿ ಬುಧವಾರ ಬೀಸಿದ ಭೀಕರ ಬಿರುಗಾಳಿ, ಮಳೆ ಮತ್ತು ಆಲಿಕಲ್ಲು ಮಳೆಗೆ ಇಡೀ ರಾಜ್ಯವೇ ತತ್ತರಿಸಿದೆ. ಪ್ರಕೃತಿಯ ಈ ರೌದ್ರಾವತಾರಕ್ಕೆ ವಿವಿಧ ಜಿಲ್ಲೆಗಳಲ್ಲಿ ಗೋಡೆ ಕುಸಿತ, ಮರಗಳು ಬಿದ್ದಿರುವುದು ಮತ್ತು ಸಿಡಿಲು ಬಡಿದ ಘಟನೆಗಳಲ್ಲಿ ಇದುವರೆಗೆ 100ಕ್ಕೂ ಮಂದಿ ಮೃತಪಟ್ಟಿದ್ದಾರೆ. ನೂರಾರು ಜನರು ಗಾಯಗೊಂಡಿದ್ದು, ಸಾವಿನ ಸಂಖ್ಯೆ ಇನ್ನಷ್ಟು ಹೆಚ್ಚಾಗುವ ಭೀತಿ ಎದುರಾಗಿದೆ.

ಹವಾಮಾನ ಇಲಾಖೆಯ ವರದಿಯಂತೆ, ಪಶ್ಚಿಮ ಉತ್ತರ ಪ್ರದೇಶ ವ್ಯಾಪ್ತಿಯಲ್ಲಿ ಚಂಡಮಾರುತ ಮತ್ತು ದಕ್ಷಿಣ ರಾಜಸ್ಥಾನದಿಂದ ಬೀಸುತ್ತಿರುವ ಗಾಳಿಯ ಪ್ರಭಾವದಿಂದಾಗಿ ಗಂಟೆಗೆ 80 ರಿಂದ 100 ಕಿಲೋಮೀಟರ್ ವೇಗದಲ್ಲಿ ಬಿರುಗಾಳಿ ಬೀಸಿದೆ. ಬುಧವಾರ ಮಧ್ಯಾಹ್ನ ಆರಂಭವಾದ ಈ ಹವಾಮಾನ ವೈಪರೀತ್ಯ ಸಂಜೆ ವೇಳೆಗೆ ಭೀಕರ ಚಂಡಮಾರುತವಾಗಿ ಮಾರ್ಪಟ್ಟು ಭಾರಿ ಅವಾಂತರ ಸೃಷ್ಟಿಸಿದೆ. ಭೀಕರ ಮಳೆಗೆ ಪ್ರಯಾಗ್ರಾಜ್ ಜಿಲ್ಲೆ ಅತಿ ಹೆಚ್ಚು ಹಾನಿಗೊಳಗಾಗಿದ್ದು, ಅಲ್ಲಿ 17 ಜನರು ಮೃತಪಟ್ಟಿದ್ದಾರೆ. ಮೃತರ ಪೈಕಿ ಐವರು ಮಹಿಳೆಯರು ಮತ್ತು ನಾಲ್ವರು ಮಕ್ಕಳು ಸೇರಿದ್ದಾರೆ. ಉಳಿದಂತೆ ಭದೋಹಿಯಲ್ಲಿ 10, ಫತೇಪುರ್ 8, ಉನ್ನಾವ್ 7, ಬದಾಯೂನ್ 6 ಮತ್ತು ಬರೇಲಿಯಲ್ಲಿ 4 ಜನರು ಸಾವನ್ನಪ್ಪಿದ್ದಾರೆ. ಉನ್ನಾವ್ ಜಿಲ್ಲೆಯ ದಹಿ ಎಂಬಲ್ಲಿ ಮರ ಬಿದ್ದು 70 ವರ್ಷದ ರೈತ ಮೃತಪಟ್ಟರೆ, ಅಸಿವಾನ್ನಲ್ಲಿ 9 ವರ್ಷದ ಬಾಲಕ ಬಲಿಯಾಗಿದ್ದಾನೆ. ಬಿರುಗಾಳಿಯ ಆರ್ಭಟಕ್ಕೆ ನೂರಾರು ಮರಗಳು ಮತ್ತು ವಿದ್ಯುತ್ ಕಂಬಗಳು ನೆಲಕ್ಕುರುಳಿದ್ದು, ಅನೇಕ ಜಿಲ್ಲೆಗಳಲ್ಲಿ ವಿದ್ಯುತ್ ಸರಬರಾಜು ಸಂಪೂರ್ಣ ಸ್ಥಗಿತಗೊಂಡಿದೆ. ರಸ್ತೆಗಳ ಮೇಲೆ ಮರಗಳು ಬಿದ್ದಿದ್ದರಿಂದ ವಾಹನ ಸಂಚಾರಕ್ಕೆ ಅಡ್ಡಿಯುಂಟಾಗಿದ್ದು, ಹಲವಾರು ಕಾರುಗಳು ಮತ್ತು ಮನೆಗಳಿಗೆ ಹಾನಿಯಾಗಿದೆ. ಮುಂದಿನ ಕೆಲವು ಗಂಟೆಗಳಲ್ಲಿ ಲಖನೌ, ಉನ್ನಾವ್, ಸೀತಾಪುರ ಮತ್ತು ಪ್ರಯಾಗ್ರಾಜ್ ಸೇರಿದಂತೆ 38 ಜಿಲ್ಲೆಗಳಲ್ಲಿ ಭಾರಿ ಮಳೆ ಮತ್ತು ಸಿಡಿಲು ಸಹಿತ ಬಿರುಗಾಳಿ ಬೀಸುವ ಸಾಧ್ಯತೆ ಇರುವುದರಿಂದ ಹವಾಮಾನ ಇಲಾಖೆ ಯೆಲ್ಲೋ ಅಲರ್ಟ್ ಘೋಷಿಸಿದೆ. ಮೇ 15 ರಿಂದ ಮತ್ತೆ ತಾಪಮಾನ ಏರಿಕೆಯಾಗಲಿದ್ದು, ಉಷ್ಣಾಂಶ 45 ಡಿಗ್ರಿ ಸೆಲ್ಸಿಯಸ್ ದಾಟುವ ನಿರೀಕ್ಷೆಯಿದೆ. ಮುಖ್ಯಮಂತ್ರಿ ಕಚೇರಿಯು ಜಿಲ್ಲಾಧಿಕಾರಿಗಳಿಗೆ ಪರಿಹಾರ ಕಾರ್ಯಾಚರಣೆಯನ್ನು ಚುರುಕುಗೊಳಿಸಲು ಮತ್ತು ಸಂತ್ರಸ್ತರಿಗೆ ತಕ್ಷಣದ ನೆರವು ನೀಡಲು ಸೂಚಿಸಿದೆ.

# ಪ್ರತೀಕ್ ಯಾದವ್ ಅಂತ್ಯಕ್ರಿಯೆ: ಅಗ್ನಿ ಸ್ಪರ್ಶ ಮಾಡಿದ ಪತ್ನಿ ಅರವಿಂದ್ ಬಿಶ್ತ್

**ಲಖನೌ, ಮೇ 14:** ಉತ್ತರ ಪ್ರದೇಶದ ಮಾಜಿ ಮುಖ್ಯಮಂತ್ರಿ ಅಖಿಲೇಶ್ ಯಾದವ್ ಅವರ ಮಲಸಹೋದರ ಪ್ರತೀಕ್ ಯಾದವ್ ಅವರ ಅಂತ್ಯಕ್ರಿಯೆ ಇಂದು ನಡೆಯಿತು. ಪ್ರತೀಕ್ ಯಾದವ್ ಅವರ ಪತ್ನಿ ಅಪರ್ಣಾ ಯಾದವ್ ಅವರ ತಂದೆ ಅರವಿಂದ್ ಬಿಶ್ತ್ ಅವರು ಬೈಕುಂಠ್‌ಧಾಮ್ ಭೈನ್‌ಸಕುಂಡ್ ಸ್ಮಶಾನದಲ್ಲಿ ಚಿತೆಗೆ ಅಗ್ನಿಸ್ಪರ್ಶ ಮಾಡಿದರು. ಈ ನಡುವೆ ಪ್ರತೀಕ್ ಮರಣೋತ್ತರ ಪರೀಕ್ಷೆಯ ವರದಿಯ ಬಗ್ಗೆ ಚರ್ಚೆ ನಡೆಯುತ್ತಿದೆ. ವರದಿಗಳ ಪ್ರಕಾರ ಕಾರ್ಡಿಯೋರೆಸ್ಪಿರೇಟರಿ ವೈಫಲ್ಯದಿಂದ ಹೃದಯಸ್ತಂಭನವಾಗಿ ಮೃತಪಟ್ಟಿದ್ದಾರೆ ಎಂದು ಲಖನೌದ ಕಿಂಗ್ ಜಾರ್ಜ್ ವೈದ್ಯಕೀಯ ವಿಶ್ವವಿದ್ಯಾಲಯ ತಿಳಿಸಿದೆ. ಅಲ್ಲದೆ, ಪ್ರತೀಕ್ ಸಾವಿಗೂ ಮುನ್ನ ಅವರ ದೇಹದ ಮೇಲೆ ಆರು ಕಡೆ ಗಾಯಗಳಾಗಿದ್ದವು ಎಂಬ ಆಘಾತಕಾರಿ ಅಂಶವನ್ನೂ ಉಲ್ಲೇಖಿಸಲಾಗಿದೆ.

ಶ್ವಾಸಕೋಶದಲ್ಲಿ ರಕ್ತ ಹೆಪ್ಪುಗಟ್ಟುವಿಕೆಯಿಂದಾಗಿ ಉಸಿರಾಟ ಮತ್ತು ರಕ್ತ ಪರಿಚಲನೆಯಲ್ಲಿ ವ್ಯತ್ಯಯ ಉಂಟಾಗಿ ಸಾವು ಸಂಭವಿಸಿದೆ. ಹೃದಯ ಮತ್ತು ಶ್ವಾಸಕೋಶದ ಮಾದರಿಗಳನ್ನು ಹೆಚ್ಚಿನ ಪರೀಕ್ಷೆಗೆ ಕಳುಹಿಸಲಾಗಿದ್ದು, ರಾಸಾಯನಿಕ ವಿಶ್ಲೇಷಣೆಗಾಗಿ ವಿಸೇರಾ ಮಾದರಿಯನ್ನು ಸಂರಕ್ಷಿಸಲಾಗಿದೆ' ಎಂದು ವರದಿ ತಿಳಿಸಿದೆ. ಮರಣೋತ್ತರ ಪರೀಕ್ಷೆಯ ವೇಳೆ ಪ್ರತೀಕ್ ಅವರ ಎದೆ, ಬಲಗೈ ಕೆಳಭಾಗ, ಬಲ ಮೊಣಕೈ ಮತ್ತು ಎಡ ಮಣಿಕಟ್ಟಿನ ಮೇಲೆ ಗಾಯದ ಗುರುತುಗಳು ಪತ್ತೆಯಾಗಿವೆ. ಇದರಲ್ಲಿ ಮೂರು ಗಾಯಗಳು 5 ರಿಂದ 7 ದಿನಗಳ ಹಳೆಯದಾಗಿದ್ದರೆ, ಉಳಿದ ಮೂರು ಗಾಯಗಳು ಕೇವಲ ಒಂದು ದಿನದ ಹಿಂದಿನವು ಎಂದು ವೈದ್ಯರು ತಿಳಿಸಿದ್ದಾರೆ.

ಪ್ರತೀಕ್ ಅವರು ಕಳೆದ ಕೆಲವು ದಿನಗಳಿಂದ ಯಕೃತ್ತು ಮತ್ತು ಶ್ವಾಸಕೋಶಕ್ಕೆ ಸಂಬಂಧಿಸಿದ ಸಮಸ್ಯೆಯಿಂದ ಬಳಲುತ್ತಿದ್ದರು. ಬುಧವಾರ ಮುಂಜಾನೆ ಮನೆಯವರು ಅವರನ್ನು ಆಸ್ಪತ್ರೆಗೆ ಕರೆದೊಯ್ದರಾದರೂ, ಮಾರ್ಗಮಧ್ಯೆಯೇ ಅವರು ಮೃತಪಟ್ಟಿದ್ದರು. ಘಟನೆ ನಡೆದ ವೇಳೆ ಅವರ ಪತ್ನಿ, ಬಿಜೆಪಿ ನಾಯಕಿ ಅಪರ್ಣಾ ಯಾದವ್ ನಗರದಲ್ಲಿ ಇರಲಿಲ್ಲ.

# ಅಭಿವೃದ್ಧಿಗೆ ಸಹಕಾರ, ಮರುವಿಂಗಡಣೆಗೆ ಧಿಕ್ಕಾರ: ಟಿವಿಕೆ ಸರ್ಕಾರದ ನಿಲುವು ಸ್ಪಷ್ಟನೆ

**ಚೆನ್ನೈ, ಮೇ 14:** ತಮಿಳುನಾಡು ರಾಜ್ಯದ ಸರ್ವಾಂಗೀಣ ಅಭಿವೃದ್ಧಿಗಾಗಿ ಕೇಂದ್ರ ಸರ್ಕಾರದೊಂದಿಗೆ ಸಕಾರಾತ್ಮಕವಾಗಿ ಸಹಕರಿಸಲಾಗುವುದು, ಆದರೆ ರಾಜ್ಯದ ಪ್ರಾತಿನಿಧ್ಯವನ್ನು ಮೊಟಕುಗೊಳಿಸುವ ಕ್ಷೇತ್ರ ಮರುವಿಂಗಡಣೆ ಪ್ರಕ್ರಿಯೆಯನ್ನು ನಮ್ಮ ಸರ್ಕಾರ ಸಾರಾಸಗಟಾಗಿ ತಿರಸ್ಕರಿಸುತ್ತದೆ ಎಂದು ದಳಪತಿ ವಿಜಯ್ ನೇತೃತ್ವದ ತಮಿಳಗ ವೆಟ್ರಿ ಕಳಗಂ ಸರ್ಕಾರದ ಸಚಿವ ಅರುಣ್ ರಾಜ್ ಸ್ಪಷ್ಟಪಡಿಸಿದ್ದಾರೆ.

ನೂತನ ಸರ್ಕಾರದ ನೀತಿ ನಿರೂಪಣೆ ಮತ್ತು ರಾಜಕೀಯ ನಿಲುವಿನ ಕುರಿತು ಚೆನ್ನೈನಲ್ಲಿ ಮಾತನಾಡಿದ ಅವರು, ಡಿಎಂಕೆ ಮತ್ತು ಎಐಎಡಿಎಂಕೆ ಪಕ್ಷಗಳ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು. ದಶಕಗಳ ಕಾಲ ಹುಸಿ ದ್ರಾವಿಡ ಸಿದ್ಧಾಂತವನ್ನು ಪ್ರತಿಪಾದಿಸುತ್ತಾ, ಅಧಿಕಾರ ಅನುಭವಿಸಿದ ಈ ಎರಡೂ ಸಾಂಪ್ರದಾಯಿಕ ಪಕ್ಷಗಳನ್ನು ತಮಿಳುನಾಡಿನ ಪ್ರಜ್ಞಾವಂತ ಮತದಾರರು ಈ ಬಾರಿಯ ಚುನಾವಣೆಯಲ್ಲಿ ಸಂಪೂರ್ಣವಾಗಿ ತಿರಸ್ಕರಿಸಿದ್ದಾರೆ. ಇದು ಭ್ರಷ್ಟಾಚಾರ ಮುಕ್ತ ಮತ್ತು ನೈಜ ಆಡಳಿತಕ್ಕೆ ಸಿಕ್ಕ ಜಯವಾಗಿದೆ ಎಂದು ಅರುಣ್ ರಾಜ್ ತಿಳಿಸಿದರು.

ಜನಸಂಖ್ಯೆ ಆಧಾರದ ಮೇಲೆ ಲೋಕಸಭಾ ಕ್ಷೇತ್ರಗಳ ಮರುವಿಂಗಡಣೆ ಮಾಡುವ ಭವಿಷ್ಯದ ಪ್ರಸ್ತಾಪವನ್ನು ಕಟುವಾಗಿ ಟೀಕಿಸಿದ ಸಚಿವರು, ?ಕುಟುಂಬ ಯೋಜನೆ ಮತ್ತು ಜನಸಂಖ್ಯಾ ನಿಯಂತ್ರಣವನ್ನು ಯಶಸ್ವಿಯಾಗಿ ಜಾರಿಗೊಳಿಸಿದ ತಮಿಳುನಾಡಿನಂತಹ ದಕ್ಷಿಣ ಭಾರತದ ರಾಜ್ಯಗಳಿಗೆ ಕ್ಷೇತ್ರ ಮರುವಿಂಗಡಣೆಯಿಂದ ತೀವ್ರ ಅನ್ಯಾಯವಾಗಲಿದೆ. ನಮ್ಮ ರಾಜ್ಯದ ಸಂಸದೀಯ ಬಲವನ್ನು ಕುಗ್ಗಿಸುವ ಇಂತಹ ಯಾವುದೇ ಅಸಮಾನತೆಯ ನಡೆಯನ್ನು ಟಿವಿಕೆ ಸರ್ಕಾರ ಎಂದಿಗೂ ಒಪ್ಪುವುದಿಲ್ಲ. ರಾಜ್ಯದ ಹಕ್ಕುಗಳ ರಕ್ಷಣೆಯಲ್ಲಿ ನಮ್ಮ ನಿಲುವು ಸ್ಪಷ್ಟವಾಗಿದೆ ಎಂದು ಹೇಳಿದರು.

ನಮ್ಮದು ಜನಪರ ಮತ್ತು ಪ್ರಗತಿಪರ ರಾಜಕಾರಣ. ತಮಿಳುನಾಡಿನ ಮೂಲಸೌಕರ್ಯ, ಶಿಕ್ಷಣ, ಉದ್ಯಮ ಮತ್ತು ಉದ್ಯೋಗ ಸೃಷ್ಟಿಗಾಗಿ ನಾವು ಒಕ್ಕೂಟ ಸರ್ಕಾರದೊಂದಿಗೆ ಕೈಜೋಡಿಸುತ್ತೇವೆ ಮತ್ತು ಅನುದಾನ ತರುತ್ತೇವೆ. ಆದರೆ, ಭಾಷೆ, ಸಂಸ್ಕೃತಿ ಮತ್ತು ರಾಜ್ಯದ ಸ್ವಾಯತ್ತತೆಯ ವಿಚಾರದಲ್ಲಿ ಯಾವುದೇ ರಾಜಿ ಇಲ್ಲ. ಟಿವಿಕೆ ಪಕ್ಷವು ನೈಜ ಜಾತ್ಯತೀತ ಮತ್ತು ಸಮಾನತೆಯ ಸಿದ್ಧಾಂತದಡಿ ಕಾರ್ಯನಿರ್ವಹಿಸಲಿದ್ದು, ಹಿಂದಿನ ಸರ್ಕಾರಗಳಂತೆ ದ್ರಾವಿಡದ ಮುಖವಾಡ ಧರಿಸಿ ಜನರನ್ನು ವಂಚಿಸುವುದಿಲ್ಲ ಎಂದು ಸಚಿವ ಅರುಣ್ ರಾಜ್ ಭರವಸೆ ನೀಡಿದರು.

# ಮೋದಿ ಮಿತವ್ಯಯ ನೀತಿ ಭಾಗವತ್ ಝೆಡ್ ಪ್ಲಸ್ ಭದ್ರತೆಗೆ ಅನ್ವಯವಾಗದೇ?

**ನವದೆಹಲಿ, ಮೇ 14:** ಪ್ರಧಾನಿ ನರೇಂದ್ರ ಮೋದಿಯವರು ಅಧಿಕಾರಕ್ಕೆ ಬಂದಾಗಿನಿಂದಲೂ ಸಾರ್ವಜನಿಕ ಹಣದ ಮಿತವ್ಯಯ ಮತ್ತು ವಿಐಪಿ ಸಂಸ್ಕೃತಿಯ ನಿರ್ಮೂಲನೆಯ ಬಗ್ಗೆ ನಿರಂತರವಾಗಿ ಪ್ರತಿಪಾದಿಸುತ್ತಲೇ ಬಂದಿದ್ದಾರೆ. ವಾಹನಗಳ ಮೇಲಿನ ಕೆಂಪುದೀಪಗಳ ತೆರವು ಸೇರಿದಂತೆ ಹಲವು ಕ್ರಮಗಳ ಮೂಲಕ ಸರಳತೆಯ ಸಂದೇಶ ಸಾರಿದ್ದಾರೆ. ಆದರೆ, ಇದೇ ವೇಳೆ ರಾಷ್ಟ್ರೀಯ ಸ್ವಯಂಸೇವಕ ಸಂಘದ (ಆರ್‌ಎಸ್‌ಎಸ್) ಸರಸಂಘಚಾಲಕ ಮೋಹನ್ ಭಾಗವತ್ ಅವರಿಗೆ ಕೇಂದ್ರ ಸರ್ಕಾರ ಒದಗಿಸಿರುವ ಅತ್ಯುನ್ನತ ಮಟ್ಟದ ಭದ್ರತೆಯು ಸಾರ್ವಜನಿಕ ಹಾಗೂ ರಾಜಕೀಯ ವಲಯದಲ್ಲಿ ದೊಡ್ಡ ಚರ್ಚೆಗೆ ಗ್ರಾಸವಾಗಿದೆ.

ಸಂವಿಧಾನಿಕ ಅಥವಾ ಯಾವುದೇ ಸರ್ಕಾರಿ ಹುದ್ದೆಯಲ್ಲಿ ಇಲ್ಲದಿದ್ದರೂ, ಖಾಸಗಿ ಸಂಘಟನೆಯೊಂದರ ಮುಖ್ಯಸ್ಥರಾಗಿರುವ ಮೋಹನ್ ಭಾಗವತ್ ಅವರು ಝೆಡ್ ಪ್ಲಸ್ ಭದ್ರತೆಯನ್ನು ಹೊಂದಿದ್ದಾರೆ. ಕೇಂದ್ರ ಗುಪ್ತಚರ ಇಲಾಖೆಯ ವರದಿಗಳ ಪ್ರಕಾರ, ಭಾಗವತ್ ಅವರ ಜೀವಕ್ಕೆ ಉಗ್ರರ ಬೆದರಿಕೆ ಇದೆ ಎಂಬ ಕಾರಣ ನೀಡಿ ಈ ಉನ್ನತ ಮಟ್ಟದ ಭದ್ರತೆ ಒದಗಿಸಲಾಗಿದೆ.

ಅವರ ಭದ್ರತೆಯ ಜವಾಬ್ದಾರಿಯನ್ನು ಕೇಂದ್ರ ಕೈಗಾರಿಕಾ ಭದ್ರತಾ ಪಡೆ ನಿರ್ವಹಿಸುತ್ತಿದ್ದು, ಇತ್ತೀಚೆಗೆ ಅವರ ಭದ್ರತಾ ಶಿಷ್ಟಾಚಾರವನ್ನು ಅಮಿತ್ ಶಾ ಅವರ ಭದ್ರತೆಗೆ ಸಮಾನವಾದ ಎಎಸ್‌ಎಲ್ ಮಟ್ಟಕ್ಕೂ ಮೇಲ್ದರ್ಜೆಗೇರಿಸಲಾಗಿದೆ. ಇದರರ್ಥ, ಅವರು ಭೇಟಿ ನೀಡುವ ಪ್ರತಿಯೊಂದು ಸ್ಥಳವನ್ನೂ ಮುಂಚಿತವಾಗಿಯೇ ತಪಾಸಣೆಗೆ ಒಳಪಡಿಸಲಾಗುತ್ತದೆ. ಈ ಹೈಟೆಕ್ ಭದ್ರತಾ ವ್ಯವಸ್ಥೆಗೆ ಸರ್ಕಾರಿ ಬೊಕ್ಕಸದಿಂದ ವಾರ್ಷಿಕ ಕೋಟ್ಯಂತರ ರೂಪಾಯಿ ತೆರಿಗೆ ಹಣ ವೆಚ್ಚವಾಗುತ್ತಿದೆ. ಅಂದಾಜಿನ ಪ್ರಕಾರ 50–60 ಸುರಕ್ಷಾ ಸಿಬ್ಬಂದಿ,



ವಾಹನಗಳು, ಸಂವಹನ ವ್ಯವಸ್ಥೆ, ತಪಾಸಣೆ ಇತ್ಯಾದಿ ಸೇರಿ ವರ್ಷಕ್ಕೆ 5ರಿಂದ 6ಕೋಟಿ ಹಣ ರೂ. ವೆಚ್ಚವಾಗುತ್ತದೆ. ಸರ್ಕಾರದ ನೀತಿಗೂ ಮತ್ತು ವಾಸ್ತವದ ಆಚರಣೆಗೂ ಇರುವ ಈ ವ್ಯತ್ಯಾಸವೇ ವಿಪಕ್ಷಗಳ ಕಟು ಟೀಕೆಗೆ ಕಾರಣವಾಗಿದೆ. ಪ್ರಧಾನಿ ಮೋದಿಯವರು ಒಂದು ಕಡೆ ಮಿತವ್ಯಯದ ಬಗ್ಗೆ ಮಾತನಾಡುತ್ತಾ, ಸಾರ್ವಜನಿಕ ವಲಯದ ಅನಗತ್ಯ ಖರ್ಚುಗಳಿಗೆ ಕಡಿವಾಣ ಹಾಕುವ ಮಾತುಗಳನ್ನಾಡುತ್ತಾರೆ. ಆದರೆ, ಮತ್ತೊಂದೆಡೆ ಯಾವುದೇ ಸಾಂವಿಧಾನಿಕ ಹುದ್ದೆಯಲ್ಲಿರದ ವ್ಯಕ್ತಿಗೆ ಕೋಟ್ಯಂತರ ರೂಪಾಯಿ ವೆಚ್ಚದ ವಿಐಪಿ ಭದ್ರತೆ ಒದಗಿಸುವುದು ಮಿತವ್ಯಯದ ವ್ಯಾಖ್ಯಾನಕ್ಕೆ ವಿರುದ್ಧವಲ್ಲವೇ ಎಂಬುದು ಪ್ರಮುಖ ಪ್ರಶ್ನೆಯಾಗಿದೆ.

ವ್ಯಕ್ತಿಯ ಜೀವ ಬೆದರಿಕೆಯ ಆಧಾರದ ಮೇಲೆ ಭದ್ರತೆ ಒದಗಿಸುವುದು ಸರ್ಕಾರದ ಆಂತರಿಕ ಭದ್ರತೆಯ ಜವಾಬ್ದಾರಿಯಾದರೂ, ಮಿತವ್ಯಯದ ಆದರ್ಶಗಳನ್ನು ಸಾರುವ ಸರ್ಕಾರದ ನಡೆಯು, ತನ್ನ ಸೈದ್ಧಾಂತಿಕ ಮಾತೃಸಂಸ್ಥೆಯ ಮುಖ್ಯಸ್ಥರ ವಿಚಾರದಲ್ಲಿ ಭಿನ್ನ ನಿಲುವು ತಳೆದಿದೆಯೇ ಎಂಬ ಅನುಮಾನಗಳನ್ನು ಹುಟ್ಟುಹಾಕಿದೆ. ಪ್ರಜಾಪ್ರಭುತ್ವದಲ್ಲಿ ತೆರಿಗೆ ಹಣದ ಬಳಕೆಯ ಸಮರ್ಥನೆ ಮತ್ತು ವಿಐಪಿ ಸಂಸ್ಕೃತಿಯ ವಾಸ್ತವಿಕತೆಯ ನಡುವಿನ ಅಂತರವನ್ನು ಈ ವಿದ್ಯಮಾನ ಸ್ಪಷ್ಟವಾಗಿ ಬಿಂಬಿಸುತ್ತಿದೆ.

# ಕೇರಳದ ಸಿಎಂ ಆಗಿ ವಿ.ಡಿ.ಸತೀಶನ್ ಆಯ್ಕೆ: ಕೈ ಹೈಕಮಾಂಡ್ ಘೋಷಣ

**ನವದೆಹಲಿ,ಮೇ 14:** 10 ದಿನಗಳಿಂದ ನಡೆಯುತ್ತಿದ್ದ ಹೈಡ್ರಾಮಕ್ಕೆ ತೆರೆ ಬಿದ್ದಿದ್ದು ಕೇರಳದ ನೂತನ ಮುಖ್ಯಮಂತ್ರಿಯಾಗಿ ವಿ.ಡಿ. ಸತೀಶನ್ ಆಯ್ಕೆಯಾಗಿದ್ದಾರೆ. ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಹಾಗೂ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ದೆಹಲಿಯಲ್ಲಿ ನಿರಂತರ ಸಭೆಗಳನ್ನು ನಡೆಸಿದ ಬಳಿಕ ವಿ.ಡಿ. ಸತೀಶನ್ ಹೆಸರನ್ನು ಅಂತಿಮಗೊಳಿಸಿದ್ದಾರೆ.



ಕೇರಳ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ನೇತೃತ್ವದ ಯುಡಿಎಫ್ ಮೈತ್ರಿಕೂಟ 102 ಸ್ಥಾನಗಳೊಂದಿಗೆ ಭರ್ಜರಿ ಬಹುಮತ ಪಡೆದಿದ್ದರೂ ಮುಖ್ಯಮಂತ್ರಿ ಆಯ್ಕೆ ಮಾಡಿರಲಿಲ್ಲ. ಸಿಎಂ ಗಾದಿಗಾಗಿ ಪಕ್ಷದ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆಸಿ ವೇಣುಗೋಪಾಲ್, ಕೇರಳ ವಿಧಾನಸಭೆಯ ವಿರೋಧ ಪಕ್ಷದ ನಾಯಕ ವಿಡಿ ಸತೀಶನ್ ಮಧ್ಯೆ ತೀವ್ರ ಪೈಪೋಟಿ ಏರ್ಪಟ್ಟಿತ್ತು.

ಅಂತಿಮ ನಿರ್ಧಾರ ಕೈಗೊಳ್ಳಲು ಭಾರೀ ಕಸರತ್ತು ನಡೆಸಿದ ಹೈಕಮಾಂಡ್ ಕೇರಳದ ಕೈ ನಾಯಕರ ಮಾತಿಗೆ ಬೆಲೆ ನೀಡಿ ವಿ.ಡಿ. ಸತೀಶನ್ ಅವರನ್ನೇ ಅಂತಿಮಗೊಳಿಸಿದೆ. ಯುಡಿಎಫ್ ಮೈತ್ರಿಕೂಟದ ಪ್ರಮುಖ ಪಾಲುದಾರ ಪಕ್ಷವಾದ ಇಂಡಿಯನ್ ಯೂನಿಯನ್ ಮುಸ್ಲಿಂ ಲೀಗ್ ವಿ.ಡಿ. ಸತೀಶನ್ ಅವರ ಆಯ್ಕೆಗೆ ಪ್ರಬಲ ಬೆಂಬಲ ವ್ಯಕ್ತಪಡಿಸಿತ್ತು.

ಎಐಸಿಸಿ ಪ್ರಧಾನ ಕಾರ್ಯದರ್ಶಿಯಾಗಿದ್ದ ಕೆಸಿ ವೇಣುಗೋಪಾಲ್ ಹೈಕಮಾಂಡ್ ಹಾಗೂ ರಾಹುಲ್ ಗಾಂಧಿ ಅವರ ಆಪ್ತ ವಲಯದಲ್ಲಿ ಗುರುತಿಸಿಕೊಂಡಿದ್ದರು. ಶಾಸಕರ ಬೆಂಬಲ ಹಾಗೂ ಹೈಕಮಾಂಡ್ ಒಲವು ಇವರ ಪರ ಹೆಚ್ಚಾಗಿತ್ತು. ಕೇರಳ ವಿಧಾನಸಭೆಯ ವಿರೋಧ ಪಕ್ಷದ ನಾಯಕರಾಗಿ ಎಲ್‌ಡಿಎಫ್ ಸರ್ಕಾರದ ವಿರುದ್ಧ ಮುಂಚೂಣಿಯಲ್ಲಿ ಹೋರಾಡಿದ್ದ ವಿ.ಡಿ. ಸತೀಶನ್ ತನಗೆ ಸಿಎಂ ಪಟ್ಟ ನೀಡದಿದ್ದರೆ ಬೇರೆ ಯಾವುದೇ ಸಚಿವ ಸ್ಥಾನ ಬೇಡ ಎಂಬ ಬಿಗಿ ನಿಲುವನ್ನು ತಳೆದಿದ್ದರು.

ಕಾಂಗ್ರೆಸ್ನ ಮತ್ತೊಬ್ಬ ಹಿರಿಯ ನಾಯಕ ರಮೇಶ್ ಚೆನ್ನಿತ್ತಲ ಇವರೂ ಸಹ ಮುಖ್ಯಮಂತ್ರಿ ಹುದ್ದೆಯ ಪ್ರಬಲ ಆಕಾಂಕ್ಷಿಯಾಗಿದ್ದರು. ಆದರೆ ಶಾಸಕರ ಬೆಂಬಲ ವಿ.ಡಿ. ಸತೀಶನ್ ಮತ್ತು ಕೆಸಿ ವೇಣುಗೋಪಾಲ್ ಅವರಿಗೆ ಇದ್ದ ಕಾರಣ ಸಿಎಂ ರೇಸ್‌ನಲ್ಲಿ ಇವರು ಹಿಂದೆ ಸರಿದಿದ್ದರು. ಮೂವರಲ್ಲಿ ಯಾರನ್ನೇ ಒಬ್ಬರನ್ನು ಆಯ್ಕೆ ಮಾಡಿದರೂ ಪಕ್ಷದಲ್ಲಿ ಬಣ ರಾಜಕೀಯ ತೀವ್ರಗೊಳ್ಳುವ ಸಾಧ್ಯತೆ ಇರುವುದರಿಂದ, ಎಲ್ಲರನ್ನೂ ಒಟ್ಟಿಗೆ ಕರೆದೊಯ್ಯುವ ಸರ್ವಸಮ್ಮತ ಸೂತ್ರಕ್ಕಾಗಿ ಹೈಕಮಾಂಡ್ ಹೆಣಗಾಟ ನಡೆಸಿತ್ತು.

ಸಿಎಂ ಆಯ್ಕೆ ವಿಳಂಬವಾಗುತ್ತಿರುವುದಕ್ಕೆ ಬೇಸತ್ತು ವಯನಾಡ್ ಸೇರಿದಂತೆ ಹಲವು ಭಾಗಗಳಲ್ಲಿ ನಾಯಕರ ಪರ–ವಿರೋಧದ ಪೋಸ್ಟರ್‌ಗಳು ಪ್ರತ್ಯಕ್ಷವಾಗುವ ಮೂಲಕ ಕಾಂಗ್ರೆಸ್‌ನ ಒಳಜಗಳ ಬೀದಿಗೆ ಬಂದಿತ್ತು

# ಸಮಾಜ ಒಗ್ಗೂಡಿಸುವಲ್ಲಿ ನಾರಾಯಣಗುರು ತತ್ವಾದರ್ಶಗಳ ಪಾತ್ರ ಅನನ್ಯ: ಸಭಾಧ್ಯಕ್ಷ ಯು.ಟಿ. ಖಾದರ್ ಪ್ರಶಂಸೆ

**ಬೆಂಗಳೂರು, ಮೇ 15:** ಬ್ರಹ್ಮಶ್ರೀ ನಾರಾಯಣ ಗುರುಗಳು ಮಹಾ ಪುರುಷರ ಸಾಲಿನಲ್ಲಿ ಮುಂಚೂಣಿಯ ವ್ಯಕ್ತಿತ್ವದವರಾಗಿದ್ದರು. ಇವರ ತತ್ವಗಳು ಮತ್ತು ಆದರ್ಶಗಳು ಇಡೀ ಸಮಾಜ ವನ್ನು ಒಟ್ಟು ಗೂಡಿಸುವಲ್ಲಿ ಪ್ರಮುಖ ಪಾತ್ರವಹಿಸಿದೆ. ಯಾವ ಜಾತಿ, ಧರ್ಮ, ಪಂಥ ದೊಡ್ಡದಲ್ಲ ಚಿಕ್ಕದೂ ಅಲ್ಲ ಎನ್ನುವ ಉದ್ಘೋಷವನ್ನು ಅವರು ನೀಡಿದ್ದು ಅದು ಇಂದಿಗೂ ಪ್ರಸ್ತುತವಾಗಿದೆ ಎಂದು ವಿಧಾನ ಸಭಾಧ್ಯಕ್ಷ ಯು.ಟಿ.ಖಾದರ್ ಹೇಳಿದರು.

ಮೈಸೂರು ಬ್ಯಾಂಕ್ ವೃತ್ತದ ಕರ್ನಾಟಕ ಗೃಹಮಂಡಳಿಯ ಕಟ್ಟಡದಲ್ಲಿ ಅಸ್ತಿತ್ವಕ್ಕೆ ಬಂದಿರುವ ನಾರಾಯಣ ಗುರು ನಿಗಮದ ಕಚೇರಿಯನ್ನು ಗುರುವಾರ ಉದ್ಘಾಟಿಸಿ ಮಾತನಾಡಿದ ಅವರು, ನಿಗಮದ ಅಧ್ಯಕ್ಷ ಮಂಜುನಾಥ್ ಪೂಜಾರಿ ಅತ್ಯಂತ ಸಭ್ಯ ವ್ಯಕ್ತಿಯಾಗಿದ್ದು, ಅವರು ತಮಗೆ ನೀಡಿರುವ ಜವಾಬ್ದಾರಿಯ ಮೂಲಕ ನಾರಾಯಣ ಗುರುಗಳ ಆದರ್ಶವನ್ನು ಸರ್ವ ಸಮಾಜಕ್ಕೆ ತೆಗೆದುಕೊಂಡು ಹೋಗುವ ಕೆಲಸವನ್ನು ಮಾಡಲಿದ್ದಾರೆ. ಕೊಟ್ಟಿರುವ ಅನುದಾನವನ್ನು ಬಳಸಿಕೊಂಡು ಸಮಾಜದ ಕಟ್ಟಕಡೆಯ ವ್ಯಕ್ತಿಯನ್ನು ಮೇಲೆತ್ತುವ ಕಾರ್ಯಕ್ಕೆ ಮುನ್ನುಡಿ ಬರೆಯಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ನಮ್ಮ ಕಾಂಗ್ರೆಸ್ ಪಕ್ಷ ವಿಶೇಷವಾಗಿ ನಾರಾಯಣ ಗುರುಗಳ ನಿಗಮವನ್ನು ಸ್ಥಾಪಿಸುವ ವಾಗ್ದಾನವನ್ನು ಪೂರೈಸಿದೆ. ಜನಾನುರಾಗಿಯಾದ ಮಂಜುನಾಥ್ ಪೂಜಾರಿ ಅವರನ್ನು ಮೊಟ್ಟ ಮೊದಲ ಅಧ್ಯಕ್ಷರನ್ನಾಗಿ ಸರ್ವರನ್ನೂ ಮೇಲೆತ್ತುವ ಕೆಲಸಕ್ಕೆ ಅತಿದೊಡ್ಡ ಮುನ್ನುಡಿಯನ್ನು ಬರೆದಿದೆ ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ನುಡಿದರು.

ನಾರಾಯಣಗುರು ನಿಗಮ ಅತ್ಯಂತ ಪ್ರಮುಖವಾದ ನಿಗಮವಾಗಿದೆ. ಮಹಾತ್ಮಾ ಗಾಂಧಿ ಅವರು ಅತ್ಯಂತ ಗೌರವದಿಂದ ನಾರಾಯಣಗುರುಗಳನ್ನು ಕಂಡಿದ್ದು, ಇಂದಿಗೂ ನಿದರ್ಶನವಾಗಿರುವ ಸಂದರ್ಭದಲ್ಲಿ ನೂತನ ಕಛೇರಿ ಅಸ್ಥಿತ್ವಕ್ಕೆ ಬಂದಿರುವುದು ಸಮಸ್ತ ಜಾತಿ, ವರ್ಗ ಮತ್ತು ಪಂಥ ಒಂದುಗೂಡಿಸುವ ಕಾರ್ಯಕ್ಕೆ ಮುನ್ನುಡಿಯಾಗಿದೆ ಎಂದು ಕಾರ್ಯಕ್ರಮದಲ್ಲಿ ಮಾಜಿ ಮುಖ್ಯಮಂತ್ರಿ ವೀರಪ್ಪ ಮೊಯ್ಲಿ ಅಭಿಪ್ರಾಯಿಸಿದರು.



ಮಾಜಿ ಸಚಿವ ರಾಮನಾಥ್ ರೈ, ನಾರಾಯಣಗುರು ಅಭಿವೃದ್ಧಿ ನಿಗಮದ ಅಧ್ಯಕ್ಷ ಮಂಜುನಾಥ್ ಪೂಜಾರಿ, ಕೆಪಿಸಿಸಿ ಕಾರ್ಯಾಧ್ಯಕ್ಷ ವಿನಯ್‌ಕುಮಾರ್ ಸೊರಕೆ, ಬೆಳ್ತಂಗಡಿ ಕ್ಷೇತ್ರದ ಕಾಂಗ್ರೆಸ್ ಯುವ ಮುಖಂಡ ರಕ್ಷಿತ್ ಶಿವರಾಂ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ತುಳಸೀ ಮುದ್ದನೇನಿ, ನಿಗಮದ ವ್ಯವಸ್ಥಾಪಕ ನಿರ್ದೇಶಕ ರಾಜೀವ್ ಕೂಲೇರ, ಕರಾವಳಿ ಅಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಎಂ.ಎ. ಗಫೂರ್ ಸೇರಿದಂತೆ ಸಮಾಜದ ವಿವಿಧ ಹಿರಿಯ ಮುಖಂಡರು ಹಾಜರಿದ್ದರು.

> ಮೂರ್ತೇದಾರರ ಪುನರ್ವಸತಿಗಾಗಿ ನಾರಾಯಣ ಗುರು ಅಭಿವೃದ್ಧಿ ನಿಗಮದಿಂದ ಪೈಲಟ್ ಯೋಜನೆಯನ್ನು ಸಿದ್ಧಪಡಿಸಲಾಗಿದ್ದು, ಇದರ ಅನ್ವಯ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಮೊದಲ ಹಂತವಾಗಿ ಯೋಜನೆಯನ್ನು ಜಾರಿಗೆ ತರಲಾಗುತ್ತಿದೆ. ಇದರ ಯಶಸ್ಸಿನ ಬಳಿಕ ರಾಜ್ಯದ ಇತರ ಜಿಲ್ಲೆಗಳಿಗೂ ವಿಸ್ತರಿಸಲಾಗುವುದು. ಈ ಯೋಜನೆಗಾಗಿ 1.50 ಕೋಟಿ ರೂ ಗಳನ್ನು ತೆಗೆದಿರಿಸಲಾಗಿದ್ದು, ಸ್ವಂತ ಉದ್ಯೋಗಕ್ಕಾಗಿ ಫಲಾನುಭವಿಗಳಿಗೆ 5 ಲಕ್ಷ ರೂ ನೀಡಲಾಗುತ್ತಿದೆ. ಸರ್ಕಾರ ನಿಗಮಕ್ಕೆ 10 ಕೋಟಿ ರೂ ವಾರ್ಷಿಕ ಅನುದಾನ ನೀಡಿದೆ. ಇದರಲ್ಲಿ ಪ್ರಮುಖವಾಗಿ ಅರಿವು ಶಿಕ್ಷಣ ಕಾರ್ಯಕ್ರಮಕ್ಕೆ 4 ಕೋಟಿ ರೂ ಮತ್ತು ಗಂಗಾ ಕಲ್ಯಾಣ ಯೋಜನೆಗೆ 2.5 ಕೋಟಿ ರೂ ಗಳನ್ನು ತೆಗೆದಿರಿಸಲಾಗಿದೆ.
>
> –ಮಂಜುನಾಥ್ ಪೂಜಾರಿ, ನಾರಾಯಣ ಗುರು ಅಭಿವೃದ್ಧಿ ನಿಗಮದ ಅಧ್ಯಕ್ಷ




ಪ್ರಶ್ನೆಪತ್ರಿಕೆ ಸೋರಿಕೆ ಆರೋಪದ ಮೇಲೆ NEET UG 2026 ಪರೀಕ್ಷೆಯನ್ನು ರದ್ದುಗೊಳಿಸಿದ್ದನ್ನು ವಿರೋಧಿಸಿ ಅಖಿಲ ಭಾರತ ಪ್ರಜಾಸತ್ತಾತ್ಮಕ ವಿದ್ಯಾರ್ಥಿ ಸಂಘಟನೆಯ ಕಾರ್ಯಕರ್ತರು ಗುರುವಾರ ಕಲಬುರಗಿಯಲ್ಲಿ ಪ್ರತಿಭಟನೆ ನಡೆಸಿದರು.

### ನ್ಯಾಯಾಂಗದ ನಿರ್ದೇಶನ ಉಲ್ಲಂಘಿಸಿ ಏಕಪಕ್ಷೀಯ ತೀರ್ಮಾನ ಆರೋಪ

# ಹಿಜಾಬ್‌ಗೆ ಅವಕಾಶ: ಸರ್ಕಾರದ ವಿರುದ್ಧ ಕಾನೂನು ಹೋರಾಟಕ್ಕೆ ಹಿಂದುಪರ ಸಂಘಟನೆಗಳ ನಿರ್ಧಾರ

**ಬೆಂಗಳೂರು, ಮೇ 14:** ಸರ್ಕಾರಿ, ಅನುದಾನಿತ ಹಾಗೂ ಅನುದಾನರಹಿತ ಶಾಲಾ–ಕಾಲೇಜುಗಳಲ್ಲಿ ವಿದ್ಯಾರ್ಥಿನಿಯರು ಹಿಜಾಬ್ ಧರಿಸಲು ಅವಕಾಶ ನೀಡಿರುವ ಸರ್ಕಾರದ ವಿರುದ್ಧ ಕಾನೂನು ಹೋರಾಟ ನಡೆಸಲು ಹಿಂದೂಪರ ಸಂಘಟನೆಗಳು ಮುಂದಾಗಿವೆ. ಪ್ರಕರಣವು ಸುಪ್ರೀಂ ಕೋರ್ಟ್‌ನಲ್ಲಿ ವಿಚಾರಣಾ ಹಂತದಲ್ಲಿರುವಾಗಲೇ ಸರ್ಕಾರ ನ್ಯಾಯಾಂಗ ಉಲ್ಲಂಘಿಸಿ ಏಕಪಕ್ಷೀಯವಾಗಿ ತೀರ್ಮಾನ ತೆಗೆದುಕೊಂಡಿದೆ ಎಂದು ರಿಟ್ ಅರ್ಜಿ ಸಲ್ಲಿಸಲು ತೀರ್ಮಾನಿಸಿವೆ.

ವಿಶ್ವ ಹಿಂದೂ ಪರಿಷತ್, ಹಿಂದೂ ಜಾಗರಣಾ ವೇದಿಕೆ ಸೇರಿದಂತೆ ಕೆಲವು ಸಂಘಟನೆಗಳು ಕರ್ನಾಟಕ ಸರ್ಕಾರದ ವಿವಾದಾತ್ಮಕ ಆದೇಶವನ್ನು ಪ್ರಶ್ನಿಸಿ ಕಾನೂನು ಸಮರಕ್ಕೆ ಸಜ್ಜಾಗಿವೆ. ಈ ಹಿಂದೆ 2022ರ ಮಾ. 15ರಂದು ಕರ್ನಾಟಕ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಗಳ ನೇತೃತ್ವದ ತ್ರಿಸದಸ್ಯ ಪೀಠ ಅಂದು ಹಿಜಾಬ್ ನಿಷೇಧ ಮಾಡಿ ರಾಜ್ಯಸರ್ಕಾರ ಹೊರಡಿಸಿದ್ದ ಆದೇಶವನ್ನು ಎತ್ತಿಹಿಡಿದಿತ್ತು.

ಹೈಕೋರ್ಟ್‌ನ ತೀರ್ಪನ್ನು ಪ್ರಶ್ನಿಸಿ ಕೆಲವು ಮುಸ್ಲಿಂ ಸಂಘಟನೆಗಳು ಸುಪ್ರೀಂಕೋರ್ಟ್ ಮೆಟ್ಟಿಲೇರಿದ್ದವು. ಅಂತಿಮವಾಗಿ ವಾದ–ಪ್ರತಿವಾದ ನಡೆದು ಸುಪ್ರೀಂಕೋರ್ಟ್ ನ್ಯಾಯಮೂರ್ತಿಗಳಾದ ಹೇಮಂತ್ ಗುಪ್ತಾ ಮತ್ತು ಸುಧಾಂಶು ಧುಲಿಯಾ ನೇತೃತ್ವದ ದ್ವಿಸದಸ್ಯ ಪೀಠ ವಿಭಿನ್ನವಾದ ತೀರ್ಪು ನೀಡಿತ್ತು.

ನ್ಯಾ. ಹೇಮಂತ್ ಗುಪ್ತಾ ಕರ್ನಾಟಕ ಹೈಕೋರ್ಟ್ ಆದೇಶವನ್ನು ಎತ್ತಿಹಿಡಿದರೆ ಮತ್ತೊಬ್ಬ ನ್ಯಾ. ಸುಧಾಂಶು ಧುಲಿಯಾ ಹೈಕೋರ್ಟ್ ಆದೇಶವನ್ನು ರದ್ದುಗೊಳಿ ಸಿದ್ದರು. ಅಂತಿಮವಾಗಿ ಮುಖ್ಯ ನ್ಯಾಯಮೂರ್ತಿಗಳ ನೇತೃತ್ವದ ಸಾಂವಿಧಾನಿಕ ಪೀಠಕ್ಕೆ ವರ್ಗಾವಣೆ ಮಾಡಿದ್ದು, ಈಗಲೂ ವಿಚಾರಣಾ ಹಂತದಲ್ಲಿದೆ.ಸರ್ವೋಚ್ಚ ನ್ಯಾಯಾಲಯ ಯಾವುದೇ ಅಂತಿಮ ತೀರ್ಪು ನೀಡದೇ ಇರುವಾಗ ರಾಜ್ಯಸರ್ಕಾರ ಹಿಂದಿನ ಬಿಜೆಪಿ ಸರ್ಕಾರ ಹೊರಡಿಸಿದ್ದ ಆದೇಶವನ್ನು ರದ್ದುಪಡಿಸಿರುವುದೇ ನ್ಯಾಯಾಂಗ ನಿಂದನೆ ಎಂಬುದು ಹಿಂದೂಪರ ಸಂಘಟನೆಗಳ ವಾದವಾಗಿದೆ. ಸರ್ಕಾರದ ಈ ಕ್ರಮವನ್ನು ಪ್ರಶ್ನಿಸಿ ನ್ಯಾಯಾಲಯದಲ್ಲಿ ನ್ಯಾಯಾಂಗ ನಿಂದನೆ ಅರ್ಜಿಯನ್ನು ಸಲ್ಲಿಸುವುದಾಗಿ ಸಂಘಟನೆಗಳ ಮುಖಂಡರು ಹೇಳಿದ್ದಾರೆ.

ಹಿಜಾಬ್ ಧರಿಸುವುದು ಮುಸ್ಲಿಂ ಮಹಿಳೆಯರ ಅತ್ಯಗತ್ಯ ಧಾರ್ಮಿಕ ಆಚರಣೆಯ ಭಾಗವಲ್ಲ ಎಂದು ಹೈಕೋರ್ಟ್ ಹೇಳಿದೆ.

ಈ ಕುರಿತು ಸರ್ಕಾರ ನೀಡಿದ ಆದೇಶ ಕಾನೂನುಬದ್ಧವಾಗಿದೆ. ಫೆಬ್ರವರಿ 5ರಂದು ಸರ್ಕಾರ ನೀಡಿದ ಆದೇಶವನ್ನು ಅಮಾನ್ಯಗೊಳಿಸಲು ಸಾಧ್ಯವಿಲ್ಲ ಎಂದು ಹೇಳಿದೆ.

ಶಾಲಾ–ಕಾಲೇಜುಗಳಲ್ಲಿ ಅಂದಿನ ಬಿಜೆಪಿ ಸರ್ಕಾರ ಹಿಜಾಬ್ ಧರಿಸುವುದನ್ನು ನಿಷೇಧಿಸಿ ಹೊರಡಿಸಿದ್ದ ಆದೇಶವನ್ನು ಕರ್ನಾಟಕ ಹೈಕೋರ್ಟ್ ಎತ್ತಿಹಿಡಿದಿತ್ತು.ಹಿಜಾಬ್ ಧರಿಸುವ ವಿಚಾರದಲ್ಲಿ ರಾಜ್ಯ ಸರ್ಕಾರ ನೀಡಿರುವ ಆದೇಶ ಕಾನೂನು ಬದ್ಧವಾಗಿದೆ ಎಂದು ಹೇಳಿತ್ತು.

ಮುಸ್ಲಿಂ ವಿದ್ಯಾರ್ಥಿನಿಯರು, ಶಾಲಾ ಆಡಳಿತ ಮಂಡಳಿಗಳು, ಶಿಕ್ಷಕರು ಮತ್ತು ಸರ್ಕಾರದ ಪರ ನಡೆದ ಸುದೀರ್ಘ ವಾದಗಳ ವಿಚಾರಣೆ ನಡೆಸಿದ್ದ ಹೈಕೋರ್ಟ್‌ನ ವಿಸ್ತೃತ ಪೀಠ, ತೀರ್ಪು ಪ್ರಕಟಿಸಿತ್ತು.ಹಿಜಾಬ್ ಧರಿಸುವುದು ಮುಸ್ಲಿಂ ಮಹಿಳೆಯರ ಅತ್ಯಗತ್ಯ ಧಾರ್ಮಿಕ ಆಚರಣೆಯ ಭಾಗವಲ್ಲ ಎಂದು ಹೈಕೋರ್ಟ್ ಹೇಳಿದೆ.

ಈ ಕುರಿತು ಸರ್ಕಾರ ನೀಡಿದ ಆದೇಶ ಕಾನೂನುಬದ್ಧವಾಗಿದೆ. ಫೆಬ್ರವರಿ 5ರಂದು ಸರ್ಕಾರ ನೀಡಿದ ಆದೇಶವನ್ನು ಅಮಾನ್ಯಗೊಳಿಸಲು ಸಾಧ್ಯವಿಲ್ಲ ಎಂದು ಹೇಳಿತ್ತು. ಸಮವಸ್ತ್ರಗಳನ್ನು ಕಡ್ಡಾಯಗೊಳಿಸುವ ಸರ್ಕಾರದ ಆದೇಶದಿಂದ ಮೂಲಭೂತ ಹಕ್ಕುಗಳ ಸಾಂವಿಧಾನಿಕ ಉಲ್ಲಂಘನೆ ಆಗಿಲ್ಲ.ಹಿಜಾಬ್ ಧಾರಣೆಯು ಮುಸ್ಲಿಂ ಧರ್ಮದ ಪ್ರಕಾರ ಅತ್ಯಗತ್ಯ ಧಾರ್ಮಿಕ ಆಚರಣೆಯ ಭಾಗ ಎಂಬ ಎಲ್ಲ ಅರ್ಜಿಗಳನ್ನೂ ವಜಾಗೊಳಿಸಿತ್ತು. ಅಂದಿನ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ಋತುರಾಜ್ ಅವಸ್ಥಿ, ನ್ಯಾ. ಕೃಷ್ಣ ಎಸ್ ದೀಕ್ಷಿತ್ ಮತ್ತು ನ್ಯಾ. ಖಾಜಿ ಜೈಬುನ್ನಿಸಾ ಮೊಹಿಯುದ್ದೀನ್ ಅವರ ಪೂರ್ಣ ಪೀಠ ತೀರ್ಪು ನೀಡಿತ್ತು.

# ಬೆಂಗಾವಲು ಪಡೆಯ ಗಾತ್ರ ಅರ್ಧದಷ್ಟು ಕಡಿತ ರಾಜ್ಯಪಾಲ ಗೆಹ್ಲೋತ್ ಮಿತವ್ಯಯ ಕ್ರಮ



**ಬೆಂಗಳೂರು, ಮೇ 14:** ತೈಲ ಬಿಕ್ಕಟ್ಟಿನ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಇಂಧನ ಉಳಿತಾಯಕ್ಕಾಗಿ ಕರೆ ನೀಡಿರುವುದನ್ನು ಅನುಸರಿಸಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋತ್ ಅವರು ತಮ್ಮ ಅಧಿಕೃತ ಬೆಂಗಾವಲು ಪಡೆಯ ಗಾತ್ರವನ್ನು ಅರ್ಧದಷ್ಟು ಕಡಿಮೆ ಮಾಡಿದ್ದಾರೆ.

ಪಶ್ಚಿಮ ಏಷ್ಯಾ ಬಿಕ್ಕಟ್ಟಿನ ಮಧ್ಯೆ ಇಂಧನ ಸಂರಕ್ಷಣೆ ಮತ್ತು ವಿದೇಶಿ ವಿನಿಮಯ ವೆಚ್ಚವನ್ನು ಕಡಿಮೆ ಮಾಡುವ ಪ್ರಧಾನಿಯವರ ಮನವಿಗೆ ಪ್ರತಿಕ್ರಿಯೆಯಾಗಿ ಗೆಹ್ಲೋತ್ ಈ ಕ್ರಮ ಕೈಗೊಂಡಿದ್ದಾರೆ ಎಂದು ಲೋಕಭವನ ತಿಳಿಸಿದೆ.

### ಜಿಬಿಎ, ಇಂಟಿಗ್ರೇಟೆಡ್ ಟೌನ್‌ಶಿಪ್ ಯೋಜನೆ ರೈತರ ಭೂಮಿ ಕಬಳಿಸುವ ಮಾಫಿಯಾ

# ಸರ್ಕಾರ, ಡಿಕೆಶಿ ವಿರುದ್ಧ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ವಾಗ್ದಾಳಿ



**ಬೆಂಗಳೂರು, ಮೇ 14:** ರಾಜ್ಯ ರಾಜಕೀಯದ ಬದ್ಧ ಎದುರಾಳಿಗಳಾದ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಮತ್ತು ಡಿಸಿಎಂ ಡಿ.ಕೆ. ಶಿವಕುಮಾರ್ ನಡುವಿನ ವಾಗ್ಯುದ್ಧ ಈಗ ಮತ್ತೊಂದು ಹಂತಕ್ಕೆ ತಲುಪಿದೆ.

ಜೆಡಿಎಸ್ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕುಮಾರಸ್ವಾಮಿ, ರಾಜ್ಯ ಸರ್ಕಾರ ಮತ್ತು ಡಿಕೆಶಿ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಬೆಂಗಳೂರು ಅಭಿವೃದ್ಧಿಯ ಹೆಸರಿನಲ್ಲಿ ಡಿ.ಕೆ. ಶಿವಕುಮಾರ್ ಘೋಷಿಸಿರುವ ಗ್ರೇಟರ್ ಬೆಂಗಳೂರು ಮತ್ತು ಇಂಟಿಗ್ರೇಟೆಡ್ ಟೌನ್‌ಶಿಪ್ ಯೋಜನೆಯು ರೈತರ ಭೂಮಿಯನ್ನು ಕಬಳಿಸುವ ರಿಯಲ್ ಎಸ್ಟೇಟ್ ಮಾಫಿಯಾ ಎಂದು ಟೀಕಿಸಿದ್ದಾರೆ. ಬಿಡದಿಯ 8 ಹಳ್ಳಿಗಳನ್ನು ಸೇರಿಸಿ ಟೌನ್‌ಶಿಪ್ ಮಾಡುವ ಯೋಜನೆಗೆ, ಇದು ಕುಮಾರಸ್ವಾಮಿ ಕೂಸು ಎಂದು ಸುಳ್ಳು ಹೇಳಲಾಗುತ್ತಿದೆ. ಇದು ರೈತರನ್ನು ಒಕ್ಕಲೆಬ್ಬಿಸುವ ಸಂಚು, ಎಂದು ಗುಡುಗಿದ್ದಾರೆ. ಯುವಕರಿಗೆ ಉದ್ಯೋಗ ನೀಡಲು ಕೈಗಾರಿಕೆ ಸ್ಥಾಪನೆಗೆ ಜಾಗ ಕೇಳಿದರೆ ಸರ್ಕಾರ ಸ್ಪಂದಿಸುತ್ತಿಲ್ಲ. ನಾನು ರೈತರ ಫಲವತ್ತಾದ ಭೂಮಿ ಕೇಳಿಲ್ಲ, ಒಣ ಭೂಮಿ ಅಥವಾ ಸರ್ಕಾರಿ ಜಮೀನು ಕೇಳಿದ್ದೇನೆ. ಆದರೆ ಸರ್ಕಾರ ಜಾಗ ನೀಡದೆ ಅಭಿವೃದ್ಧಿಗೆ ಅಡ್ಡಿಪಡಿಸುತ್ತಿದೆ ಎಂದು ಸರ್ಕಾರದ ವಿರುದ್ಧ ಕುಮಾರಸ್ವಾಮಿ ಕಿಡಿಕಾರಿದ್ದಾರೆ.

# ಸರ್ಕಾರದಿಂದ ಮತೀಯ ಓಲೈಕೆ ರಾಜಕಾರಣ: ಸಿ.ಟಿ.ರವಿ

**ಬೆಂಗಳೂರು, ಮೇ.14:** ಶಾಲೆಗಳಲ್ಲಿ ವಸ್ತ್ರಸಂಹಿತೆ ಇರಬೇಕೇ ಬೇಡವೇ ಎಂದು ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ ಪ್ರಶ್ನಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹಿಜಾಬ್‌ಗೆ ಅನುಮತಿ ನೀಡಿ, ಜನಿವಾರ–ರುದ್ರಾಕ್ಷಿಯನ್ನೂ ಎಳೆದು ತಂದು, ಕೇಸರಿ ಶಾಲಿಗೆ ನಿಷೇಧ ಹೇರಿ ಒಂದು ಸುತ್ತೋಲೆಯನ್ನು ಸರಕಾರ ಹೊರಡಿಸಿದೆ. ಬಿಜೆಪಿ, ಹಿಜಾಬ್ ವಿರೋಧಿಯಲ್ಲ; ನಾವು ಹಿಜಾಬ್ ವಿರೋಧಿಸಿಲ್ಲ ಎಂದರು.

ಯಾವಾಗಿನಿಂದ ಯೂನಿಫಾರಂ (ವಸ್ತ್ರಸಂಹಿತೆ) ಆರಂಭವಾಗಿದೆ. ಯಾವ ಉದ್ದೇಶಕ್ಕೆ ಅದು ಪ್ರಾರಂಭವಾಗಿದೆ ಎಂದು ಕೇಳಿದ ಅವರು, ಅಕ್ಷರ ಮತ್ತು ಜ್ಞಾನ ಹೆಚ್ಚಿಸಬೇಕಾದ ಶಿಕ್ಷಣ ಸಚಿವರಿಗೆ ಅದರ ಉದ್ದೇಶದ ಬಗ್ಗೆಯೂ ಸ್ಪಷ್ಟತೆ ಇಲ್ಲ. ಅದರ ಇತಿಹಾಸದ ಅರಿವೂ ಇಲ್ಲ. ಕೇವಲ ಮತೀಯ ಓಲೈಕೆಯ ರಾಜನೀತಿಯ ಭಾಗವಾಗಿ ಶಾಲೆಗಳಲ್ಲಿ ಮತೀಯ ಭಾವನೆಗಳಿಗೆ ಜಾತ್ಯತೀತತೆಯ ಹೆಸರಿನಲ್ಲಿ ಅನುಮತಿ ಕೊಟ್ಟಿದ್ದಾರೆ ಎಂದರು. ಶಾಲೆಗಳಲ್ಲಿ ಎಲ್ಲ ಮಕ್ಕಳೂ ಸಮಾನರು. ಅವರು ಬೇರೆ ಬೇರೆ ಮತ, ಸಂಪ್ರದಾಯಗಳಿಗೆ ಸೇರಿದ್ದರೂ ಅವರೆಲ್ಲ ಸಮಾನವಾಗಿ ಗುರುತಿಸಿಕೊಳ್ಳಬೇಕೆಂಬ ಉದ್ದೇಶದಿಂದ ಶಾಲಾ, ಕಾಲೇಜುಗಳಲ್ಲಿ ಯೂನಿಫಾರಂ ಅಳವಡಿಸಲಾಗಿದೆ ಎಂದು ವಿವರಿಸಿದರು.

ಸ್ವಾತಂತ್ರ್ಯ ಪೂರ್ವದಲ್ಲಿ ಮಿಷನರಿಗಳು, ಮೈಸೂರು ಸಂಸ್ಥಾನದ ಕಾಲಘಟ್ಟದಲ್ಲೂ ಸ್ವಾತಂತ್ರ್ಯ ಪೂರ್ವದಲ್ಲೇ ನಮ್ಮಲ್ಲಿ ಯೂನಿಫಾರಂ ವ್ಯವಸ್ಥೆಯನ್ನು ಜಾರಿಗೆ ತರಲಾಯಿತು. ಯಾವುದೇ ಸಂದರ್ಭದಲ್ಲಿ ಯೂನಿಫಾರಂ ಒಳಗೆ ಹಿಜಾಬ್ ಪ್ರವೇಶ ಮಾಡಿರಲಿಲ್ಲ ಎಂದು ವಿಶ್ಲೇಷಿಸಿದರು. 1983ರಲ್ಲಿ ಕರ್ನಾಟಕ ಶಿಕ್ಷಣ ಕಾಯ್ದೆಯ ಮೂಲಕ ವಸ್ತ್ರಸಂಹಿತೆಯ ಉದ್ದೇಶವನ್ನು ಸ್ಪಷ್ಟಪಡಿಸಲಾಗಿದೆ. ಆಯಾ ಶಾಲಾ, ಕಾಲೇಜಿನ ಆಡಳಿತ ಮಂಡಳಿಗೆ ಸ್ವಾಯತ್ತತೆ, ಜವಾಬ್ದಾರಿ ಕೊಟ್ಟಿದ್ದಾರೆ. ಆದರೆ, ಈಗ

ಸರಕಾರ ಇದೀಗ ಮತೀಯ ಓಲೈಕೆ ರಾಜಕಾರಣ ಮುಂದುವರಿಸಿದೆ. ಅದರ ಪರಿಣಾಮವಾಗಿ ಶಾಲೆಗಳಲ್ಲಿ ಹಿಜಾಬ್‌ಗೆ ಅನುಮತಿ ಕೊಟ್ಟಿದ್ದಾರೆ ಎಂದು ಆಕ್ಷೇಪಿಸಿದರು.



ಭಾರತ ಎಂದರೆ ಒಂದು ಪುಸ್ತಕ, ಒಂದು ಪ್ರವಾದಿ, ಒಬ್ಬ ದೇವರು ಎಂಬ ಸಿದ್ಧಾಂತದ ಮೇಲೆ ನಂಬಿಕೆ ಇಟ್ಟ ರಾಷ್ಟ್ರ ಅಲ್ಲ ಎಂದ ಅವರು, ಭಾರತವು ದೇವನೊಬ್ಬ ನಾಮ ಹಲವು ಎಂಬ ನಂಬಿಕೆಯ ದೇಶ. ಭಾರತವೆಂದರೆ ಸಾವಿರಾರು ಜನ ಮತ ಪ್ರವರ್ತಕರು, ಋಷಿಮುನಿಗಳ ದೇಶ. ಒಬ್ಬೊಬ್ಬರ ವಿಚಾರವು ಕೂಡ ಆಂತರಿಕವಾಗಿ ಏಕರೂಪತೆ ಹೊಂದಿದ್ದರೂ ಬಾಹ್ಯವಾಗಿ ಬಹುಮುಖವನ್ನು ಹೊಂದಿರುವ ವಿಚಾರಧಾರೆ ಎಂದು ವಿಶ್ಲೇಷಿಸಿದರು.

ಎಲ್ಲ ಮತ ಸಂಪ್ರದಾಯಕ್ಕೆ ಆದ್ಯತೆ ನೀಡಿದರೆ ಅವರವರ ಮತ ಸಂಪ್ರದಾಯದಂತೆ ಅವರವರು ಬರುತ್ತಾರೆ. ಆಗ, ಎಲ್ಲ ಮಕ್ಕಳು ಶಾಲೆಗಳಲ್ಲಿ ಸಮಾನರಾಗಿ ಇರಬೇಕೆಂಬ ದೃಷ್ಟಿಯಿಂದ ವಸ್ತ್ರಸಂಹಿತೆ ರೂಪಿಸಿದವರ ಮಹತ್ವಾಕಾಂಕ್ಷೆ ಎಲ್ಲವೂ ಮಣ್ಣುಪಾಲಾಗುತ್ತದೆ. ಹಿಜಾಬ್ ಸಂಪ್ರದಾಯ ಅವರ ಮನೆಯಲ್ಲಿ ಇಟ್ಟುಕೊಳ್ಳಲಿ. ಎಲ್ಲೆಲ್ಲಿ ಅನುಮತಿ ಇದೆಯೋ ಅಲ್ಲಿ ಬಳಸಲಿ. ಶಾಲೆಗಳಲ್ಲಿ ಹಿಜಾಬ್ ಯೂನಿಫಾರಂನ ಭಾಗ ಆಗಿದ್ದರೆ ಹಿಜಾಬ್ ಹಾಕಿಕೊಂಡು ಬರಲಿ. ಹಿಜಾಬ್ ಯೂನಿಫಾರಂನ ಭಾಗ ಆಗದೇ ಇದ್ದಲ್ಲಿ ಹೇಗೆ ಎಂದರು. ನಾಳೆ ಯಾವುದಾದರೂ ಶಾಲೆಯ ಆಡಳಿತ ಮಂಡಳಿಯು ಕೇಸರಿ ಶಾಲನ್ನು ಯೂನಿಫಾರಂನ ಭಾಗವಾಗಿ ಮಾಡಿದರೆ ನೀವು ಹೇಗೆ ನಿರಾಕರಿಸುತ್ತೀರಿ ಎಂದು ಕೇಳಿದರು.

ಕೇಸರಿ ಶಾಲು ನಿರಾಕರಿಸುವುದು ನಿಮ್ಮ ಜಾತ್ಯತೀತತೆಯೇ ಹಾಗಿದ್ದರೆ ಎಲ್ಲ ಮತ ಸಂಪ್ರದಾಯಕ್ಕೆ ಗೌರವ ಕೊಟ್ಟಂತೆ ಹೇಗಾಗಲಿದೆ ಎಂದು ಪ್ರಶ್ನೆ ಹಾಕಿದರು. ಈ ಮೂಲಕ ನೀವು ಒಂದು ಕಣ್ಣಿಗೆ ಬೆಣ್ಣೆ, ಒಂದು ಕಣ್ಣಿಗೆ ಸುಣ್ಣದ ನೀತಿಯನ್ನು ಅನುಸರಿಸಿದ್ದೀರಿ ಎಂದು ರವಿ ಆಕ್ಷೇಪಿಸಿದರು.

ಶಾಲೆಗಳಲ್ಲಿ 1983ರ ಕರ್ನಾಟಕ ಶಿಕ್ಷಣ ಕಾಯ್ದೆಗೆ ಅನುಗುಣವಾಗಿ ಯಾವ ಯೂನಿಫಾರಂ ಪದ್ಧತಿ ಜಾರಿಗೆ ತಂದಿದ್ದರೋ ಅದನ್ನೇ ಮುಂದುವರಿಸುವುದು ಸೂಕ್ತ ಎಂದರು. ಇಲ್ಲವಾದರೆ, ನೀವು ಶಾಲೆಗಳನ್ನು ಮತೀಯವಾಗಿ ವಿಭಜಿಸುವ ಕಾರ್ಯಕ್ಕೆ ಕೈಹಾಕುತ್ತೀರಿ ಎಂದು ತಿಳಿಸಿದರು.

ಶಾಸಕ ಯಶ್‌ಪಾಲ್ ಸುವರ್ಣ ಮತ್ತು ರಾಜ್ಯ ವಕ್ತಾರ ಡಾ. ನರೇಂದ್ರ ರಂಗಪ್ಪ ಅವರು ಉಪಸ್ಥಿತರಿದ್ದರು.

# ಜಾತಿ ವಿಷಬೀಜ ಬಿತ್ತಲು ಹೊರಟ ಸರ್ಕಾರ: ಮಹೇಶ್ ಟೆಂಗಿನಕಾಯಿ




**ಬೆಂಗಳೂರು, ಮೇ 14:** ಕಾಂಗ್ರೆಸ್ ಸರ್ಕಾರ ಹಿಜಾಬ್ ವಿಷಯವನ್ನು ಮತ್ತೆ ಮುನ್ನೆಲೆಗೆ ತಂದು ಮಕ್ಕಳಲ್ಲಿ ಮತೀಯ ವಿಷಬೀಜ ಬಿತ್ತಲು ಶುರು ಮಾಡಿದೆ ಎಂದು ಶಾಸಕ ಮಹೇಶ್ ಟೆಂಗಿನಕಾಯಿ ಆರೋಪಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 2022ರಲ್ಲಿ ಬಿಜೆಪಿ ಸರ್ಕಾರ ಅಧಿಕಾರದಲ್ಲಿ ಇದ್ದಾಗ ವಸ್ತ್ರಸಂಹಿತೆ ಬೇಕು ಎಂದು ನ್ಯಾಯಾಲಯವು ಸಹ ಎತ್ತಿ ಹಿಡಿದಿತ್ತು. ಆದರೆ ಇಂದು ಕಾಂಗ್ರೆಸ್ ಸರ್ಕಾರ ಹಿಜಾಬ್ ಧರಿಸಲು ತೀರ್ಮಾನ ಕೈಗೊಂಡಿದೆ ಎಂದು ದೂರಿದರು. ದಾವಣಗೆರೆ ಉಪ ಚುನಾವಣೆ ನಂತರ ಸರ್ಕಾರಕ್ಕೆ ಹೆದರಿಕೆ, ಅಂಜಿಕೆ ಆರಂಭವಾಗಿದೆ. ಅಲ್ಪ ಸಂಖ್ಯಾತರನ್ನು ಓಲೈಸಲು ಯತ್ನಿಸುತ್ತಿದೆ. ಅದಕ್ಕಾಗಿ ಇಂತಹ ಪ್ರಯತ್ನ ಮಾಡುತ್ತಿದೆ ಎಂದರು.

ಶಿಕ್ಷಣ ಸಚಿವರು ಮತ್ತು ಸರ್ಕಾರ ಒಂದನ್ನು ಅರ್ಥ ಮಾಡಿಕೊಳ್ಳಬೇಕು. ಮಕ್ಕಳಲ್ಲಿ ಮತೀಯ ಭಾವನೆ ಬಿತ್ತಬಾರದು ಎಂದರು. ಶಿಕ್ಷಣ ಕಲಿಯಲು ಬರುವವರು ಜಾತಿ, ಮತ, ಪಂಥ ಬಿಟ್ಟು ಬರಬೇಕು ಎನ್ನುತ್ತಾರೆ. ಒಂದೆ ರೀತಿಯ ಸಮವಸ್ತ್ರ ಹಾಕಿದಾಗ ನಾವೆಲ್ಲ ಒಂದೇ ಎಂಬ ಭಾವನೆ ಬರುತ್ತದೆ. ಎಲ್ಲರೂ ಒಂದಾಗಿ ಶಿಕ್ಷಣ ಕಲಿಯುತ್ತಾರೆ. ಆದರೆ ಯಾವುದೇ ಅಲ್ಪಸಂಖ್ಯಾತರು ಕೇಳದೆ ಇದ್ದರೂ ಹಿಜಾಬ್ ಧರಿಸಲು ಅವಕಾಶ ಮಾಡಿಕೊಡಲು ಸರ್ಕಾರ ಮುಂದಾಗಿದೆ ಎಂದರು.

ಶಾಲೆಗಳಲ್ಲಿ ಹಿಜಾಬ್‌ಗೆ ಯಾರೇ ಅವಕಾಶ ಕೇಳದೇ ಇದ್ದರೂ ಕಾಂಗ್ರೆಸ್, ಹಳೇ ವಿವಾದವನ್ನು ಮುನ್ನೆಲೆಗೆ ತರಬೇಕು ಎಂದು ಈ ರೀತಿ ಮಾಡುತ್ತಿದೆ ಎಂದು ಹೇಳಿದರು.

ದಾವಣಗೆರೆಯಲ್ಲಿ ನಡೆದ ಉಪ ಚುನಾವಣೆ ನಂತರ ಆಂತರಿಕ ಘರ್ಷಣೆ ಮುಚ್ಚಿ ಹಾಕಲು ಸರ್ಕಾರ ಹಿಜಾಬ್ ಗೆ ಅವಕಾಶ ನೀಡಿದೆ. ಇದಕ್ಕೆ ಬಿಜೆಪಿ ವಿರೋಧವಿದೆ. ಇದಕ್ಕೆ ಹೋರಾಟ ಮಾಡೇ ಮಾಡುತ್ತೇವೆ ಎಂದರು.

ಅನೇಕ ಹಿಂದೂಪರ ಸಂಘಟನೆಗಳು ಇದಕ್ಕೆ ವಿರೋಧ ವ್ಯಕ್ತಪಡಿಸಿವೆ. ಸರ್ಕಾರ ಅನಗತ್ಯ ಗೊಂದಲ ಸೃಷ್ಟಿ ಮಾಡುತ್ತಿದೆ. ಸರ್ಕಾರ ಹಿಜಾಬ್ ಸಂಬಂಧ ಹೊರಡಿಸಿದ ನಿರ್ಣಯವನ್ನು ಹಿಂದಕ್ಕೆ ಪಡೆಯಬೇಕು. ನ್ಯಾಯಾಲಯ ಏನು ಹೇಳಿತ್ತೋ ಅದರಂತೆ ನಡೆದುಕೊಳ್ಳಬೇಕು ಎಂದು ಒತ್ತಾಯಿಸಿದರು.

ಕೋರ್ಟ್ ಹೇಳಿದ್ದನ್ನು ಪಾಲನೆ ಮಾಡುವುದು ಸರ್ಕಾರದ ಕರ್ತವ್ಯ. ಈ ರೀತಿ ಅನಗತ್ಯ ಹೇರಿಕೆ ಮಾಡಿ ವಿದ್ಯಾರ್ಥಿಗಳಲ್ಲಿ ಒಡೆದಾಳುವ ನೀತಿ ಮೂಲಕ ಮತೀಯ ಭಾವನೆ ಹರಡಲು ಸರ್ಕಾರ ಮುಂದಾಗಬಾರದು ಎಂದರು.

# ಮೇ–17ರವರೆಗೆ ರಾಜಧಾನಿ ಬೆಂಗಳೂರಿನಲ್ಲಿ ಮಳೆ ಸಾಧ್ಯತೆ

**ಬೆಂಗಳೂರು, ಮೇ 14:** ಈ ವಾರಾಂತ್ಯದಲ್ಲಿ ಮುಂಗಾರು ಪೂರ್ವ ಮಳೆಯ ಚಟುವಟಿಕೆ ಬೆಂಗಳೂರಲ್ಲಿ ಹೆಚ್ಚುವ ಸಾಧ್ಯತೆ ಇದ್ದು, ಮೇ 15ರಿಂದ 17ರವರೆಗೆ ಮಧ್ಯಮದಿಂದ ಭಾರೀ ಮಳೆಯಾಗುವ ನಿರೀಕ್ಷೆ ಇದೆ. ಕಳೆದ ಸುಮಾರು ಒಂದು ವಾರದದಿಂದ ಬಿಸಿಲಿನ ಬೇಗೆಗೆ ತತ್ತರಿಸಿರುವ ನಗರದ ಜನತೆಗೆ ವರುಣ ತಂಪೆರೆಯಲಿದ್ದಾನೆ ಎಂದು ಹವಾಮಾನ ವೀಕ್ಷಣಾ ಕೇಂದ್ರಗಳು ಮಾಹಿತಿ ನೀಡಿವೆ. ವಾರಾಂತ್ಯದಲ್ಲಿ ಮುಂಗಾರು ಪೂರ್ವ ಮಳೆ ಚಟುವಟಿಕೆ ಹೆಚ್ಚಳ ಮೇ 15ರಿಂದ 17ರವರೆಗೆ ಬೆಂಗಳೂರಿನಲ್ಲಿ ಮಳೆಯ ಸಾಧ್ಯತೆ ರಾಜ್ಯದ ಹಲವೆಡೆ ಮಳೆ ಸಾಧ್ಯತೆ ಎಂದ ಹವಾಮಾನ ಇಲಾಖೆ ಏಪ್ರಿಲ್ 30ರಂದು ಬೆಂಗಳೂರಿನಲ್ಲಿ ಸುಮಾರು 111 ಮಿ.ಮೀ ಮಳೆಯಾಗಿತ್ತು. ಇದರಿಂದ ನಗರದ ಹಲವೆಡೆ ನೀರು ನಿಂತು ಸಂಚಾರ ದಟ್ಟಣೆ ಉಂಟಾಗಿತ್ತು. ಆದರೆ ಬಳಿಕ ಮಳೆಯ ಚಟುವಟಿಕೆ ಗಣನೀಯವಾಗಿ ಕುಂಠಿತಗೊಂಡಿತ್ತು.

ಮಾಹಿತಿ ಪ್ರಕಾರ, ಮೇ ಮೊದಲ 13 ದಿನಗಳಲ್ಲಿ ಬೆಂಗಳೂರು ನಗರ ವೀಕ್ಷಣಾಲಯದಲ್ಲಿ ಕೇವಲ 31 ಮಿ.ಮೀ ಮಳೆಯಾಗಿದ್ದು, HAL ವೀಕ್ಷಣಾಲಯದಲ್ಲಿ ಮಾಸಿಕ ಸರಾಸರಿ ಕೇವಲ 8.2 ಮಿ.ಮೀ ಮಳೆಯಾಗಿದೆ. ಮಳೆಯ ಕೊರತೆಯ ಕಾರಣ ನಗರ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ತಾಪಮಾನ ಮತ್ತೆ ಏರಿಕೆಯಾಗಿದೆ. ಈ ನಡುವೆ ಹವಾಮಾನ ಇಲಾಖೆ ಉತ್ತಮ ಮಳೆಯ ಮುನ್ಸೂಚನೆ ನೀಡಿದೆ.

ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಮೇಲ್ವಿಚಾರಣಾ ಕೇಂದ್ರಕೂಡ ರಾಜ್ಯದ ಹಲವೆಡೆ ಗುಡುಗು ಸಹಿತ ಮಳೆಯ ಎಚ್ಚರಿಕೆ ನೀಡಿದೆ.

# ವಿದ್ಯುತ್ ಉತ್ಪಾದನಾ ಕ್ಷೇತ್ರದಲ್ಲಿ ಕೆಪಿಸಿಎಲ್ ಮಹಿಳಾ ಸಿಬ್ಬಂದಿ ಸಾಧನೆಗೆ ಗೌರವ್‌ಗುಪ್ತ ಶ್ಲಾಘನೆ

**ಬೆಂಗಳೂರು, ಮೇ 14:** ರಾಜ್ಯದ ವಿದ್ಯುತ್ ಉತ್ಪಾದನಾ ಕ್ಷೇತ್ರದಲ್ಲಿ ಕರ್ನಾಟಕ ವಿದ್ಯುತ್ ನಿಗಮ ನಿಯಮಿತ (ಕೆಪಿಸಿಎಲ್)ದ ಮಹಿಳಾ ಸಿಬ್ಬಂದಿ ಮತ್ತು ಅಧಿಕಾರಿಗಳ ಸಾಧನೆಯನ್ನು ಇಂಧನ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿಗಳೂ ಆದ ನಿಗಮದ ವ್ಯವಸ್ಥಾಪಕ ನಿರ್ದೇಶಕ ಗೌರವ್ ಗುಪ್ತ ಶ್ಲಾಘಿಸಿದ್ದಾರೆ.

ಕೆಪಿಸಿಎಲ್ ವತಿಯಿಂದ ಭಾರತೀಯ ವಿದ್ಯಾಭವನದ ಖಿಂಚಾ ಸಭಾಂಗಣದಲ್ಲಿ ಗುರುವಾರ ಆಯೋಜಿಸಿದ್ದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, "ರಾಜ್ಯಕ್ಕೆ ಬೇಕಾದ ವಿದ್ಯುತ್ ಉತ್ಪಾದನೆ ಮಾಡುವ ಕೆಪಿಸಿಎಲ್‌ನಲ್ಲಿ ಸಾಕಷ್ಟು ಸಂಖ್ಯೆಯಲ್ಲಿ ಮಹಿಳಾ ಅಧಿಕಾರಿಗಳು, ಸಿಬ್ಬಂದಿ ಇದ್ದಾರೆ. ಪುರುಷರಿಗಿಂತ ಕಮ್ಮಿ ಇಲ್ಲ ಎಂಬ ರೀತಿಯಲ್ಲಿ ಕೆಲಸ ಮಾಡಿ ಗರಿಷ್ಠ ಪ್ರಮಾಣದಲ್ಲಿ ವಿದ್ಯುತ್ ಉತ್ಪಾದನೆಗೆ ಶ್ರಮಿಸಿದ್ದಾರೆ," ಎಂದು ಹೇಳಿದರು.

40 ವರ್ಷಗಳ ಹಿಂದೆ ನಾನು ಐಐಟಿಯಲ್ಲಿ ಓದುತ್ತಿದ್ದಾಗ 300ಕ್ಕೂ ಹೆಚ್ಚು ವಿದ್ಯಾರ್ಥಿಗಳ ಪೈಕಿ ಕೇವಲ 8 ಮಂದಿ ಹೆಣ್ಣು ಮಕ್ಕಳಿದ್ದರು. ಆದರೆ, ಈಗ ಕಾಲ ಬದಲಾಗಿದೆ. ಸಾಕಷ್ಟು ಹೆಣ್ಣು ಮಕ್ಕಳು ಇಂಜಿನಿಯರಿಂಗ್ ಓದಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡುತ್ತಿದ್ದಾರೆ. ಕೆಪಿಸಿಎಲ್ ನಲ್ಲೂ ಸಾಕಷ್ಟು ಮಹಿಳಾ ಇಂಜಿನಿಯರ್ ಗಳು ನಾಯಕತ್ವ ವಹಿಸಿ ಕೆಲಸ ಮಾಡುತ್ತಿದ್ದಾರೆ," ಎಂದರು.



"ಕೆಪಿಸಿಎಲ್ ಎಂದರೆ ಕೇವಲ ಒಂದು ವಿದ್ಯುತ್ ಉತ್ಪಾದನಾ ಸಂಸ್ಥೆಯಲ್ಲ, ಅದೊಂದು ಕುಟುಂಬದ ರೀತಿ. ಪರಸ್ಪರ ಸಹಕಾರ ದೊಂದಿಗೆ ಸಮಾನವಾಗಿ ಕೆಲಸ ಮಾಡುತ್ತಿದ್ದಾರೆ," ಎಂದು ಹೇಳಿದ ಅವರು, ನಿಗಮದ ಎಲ್ಲಾ ಮಹಿಳಾ ಸಿಬ್ಬಂದಿಗೆ ಮಹಿಳಾ ದಿನಾ ಚರಣೆಯ ಶುಭ ಕೋರಿದರು.

**ಮಹಿಳೆಯರಿಗೆ ಅವಕಾಶ ಸಿಗದಿದ್ದರೆ ದೇಶ ಹಿಂದುಳಿಯುತ್ತಿತ್ತು**

ರಾಜಾಜಿನಗರದ ಎಸ್ ಜೆಆರ್ ಮಹಿಳಾ ಪದವಿ ಕಾಲೇಜಿನ ಪ್ರಾಂಶುಪಾಲರಾದ ಡಾ. ಪ್ರೇಮಾ ಸಿದ್ದರಾಜು ಮಾತನಾಡಿ, "ಸಮಾಜದಲ್ಲಿ ಸ್ತ್ರೀ ಮತ್ತು ಪುರುಷರು ಸುಶಿಕ್ಷಿತರಾಗಿ ಸಮಾನತೆ ಎಂಬುದು ಅಚ್ಚುಕಟ್ಟಾಗಿ ಜಾರಿಯಾಗಿ ಆರ್ಥಿಕವಾಗಿಯೂ ಸಮಾನತೆ ಬಂದಾಗ ಯಾವುದೇ ರಾಷ್ಟ್ರ ಮುಂದುವರಿದ ರಾಷ್ಟ್ರವಾಗಿ ಹೊರಹೊಮ್ಮುತ್ತದೆ.

ಭಾರತದಲ್ಲಿ ಹೆಣ್ಣು ಮಕ್ಕಳಿಗೆ ಪುರುಷರಷ್ಟೇ ಸಮಾನ ಅವಕಾಶ ಸಿಗದೇ ಇದ್ದಿದ್ದರೆ ದೇಶ ಇಂದಿಗೂ ಹಿಂದುಳಿದ ರಾಷ್ಟ್ರವಾಗಿಯೇ ಉಳಿಯುತ್ತಿತ್ತು. ಹೆಣ್ಣುಮಕ್ಕಳು ಯಾವುದೇ ಕ್ಷೇತ್ರದಲ್ಲಿ ಶೇ. 100ರಷ್ಟು ಸಾಮರ್ಥ್ಯದೊಂದಿಗೆ ಕೆಲಸ ಮಾಡುತ್ತಾರೆ. ಹೀಗಾಗಿ ಭಾರತ ಮುಂದುವರಿಯುತ್ತಿರುವ ರಾಷ್ಟ್ರವಾಗಿದೆ" ಎಂದರು.

**ಮಹಿಳೆಯರನ್ನು ಗೌರವಿಸುವ ಸಂಸ್ಕೃತಿ ಮಕ್ಕಳಿಗೆ ಕಲಿಸಬೇಕು:**

ಪ್ರಧಾನ ಭಾಷಣ ಮಾಡಿದ ಸಾರಿಗೆ ಇಲಾಖೆ ಅಪರ ಸಾರಿಗೆ ಆಯುಕ್ತೆ ಎಂ.ಪಿ.ಓಂಕಾರೇಶ್ವರಿ ಅವರು ಮಹಿಳಾ ದಿನದ ವಿಶೇಷ ಮತ್ತು ಸಾಧಕಿಯರ ಬಗ್ಗೆ ಮಾತನಾಡಿದರಲ್ಲದೆ, ಸಮಾಜದಲ್ಲಿ ಎಲ್ಲರನ್ನೂ ಗೌರವಿಸುವ, ಅದರಲ್ಲೂ ಮಹಿಳೆಯರನ್ನು ಗೌರವಿಸುವ ಸಂಸ್ಕೃತಿಯನ್ನು ಮಕ್ಕಳಿಗೆ ಕಲಿಸಿಕೊಡಬೇಕು," ಎಂದು ಹೇಳಿದರು.


ಅಂತಾರಾಷ್ಟ್ರೀಯ ಮಹಿಳಾ ದಿನದ ಅಂಗವಾಗಿ ರಂಗಕರ್ಮಿ, ನಟಿ, ಸಂಚಾರಿ ಥಿಯೇಟರ್ ಸಂಸ್ಥಾಪಕಿ ಮಂಗಳಾ ಎನ್. ಅವರನ್ನು ಗೌರವಿಸಲಾಯಿತು. ಮಹಿಳಾ ದಿನಾಚರಣೆ ಅಂಗವಾಗಿ ನಿಗಮದ ಮಹಿಳಾ ಸಿಬ್ಬಂದಿಗೆ ಆಯೋಜಿಸಿದ್ದ ವಿವಿಧ ಚಟುವಟಿಕೆಗಳಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು.

ಕೆಪಿಸಿಎಲ್ ಹಣಕಾಸು ನಿರ್ದೇಶಕ ಆರ್. ನಾಗರಾಜ, ತಾಂತ್ರಿಕ ನಿರ್ದೇಶಕ ಎಂ.ಆರ್.ಗಂಗಾಧರ್, ಮಾನವ ಸಂಪನ್ಮೂಲ ವಿಭಾಗದ ನಿರ್ದೇಶಕಿ ರೇಖಾ ಟಿ., ಕೆಪಿಸಿಎಲ್ ಮುಖ್ಯ ಜಾಗೃತ ಅಧಿಕಾರಿ ಸಿರಿಗೌರಿ ಡಿ.ಜಿ. ಮತ್ತಿತರರು ಪಾಲ್ಗೊಂಡಿದ್ದರು.

# ರಾಷ್ಟ್ರೀಯ ವಸ್ತುಸಂಗ್ರಹಾಲಯಕ್ಕೆ ಎಚ್.ಕೆ.ಪಾಟೀಲ್ ಭೇಟಿ

**ನವದೆಹಲಿ, ಮೇ. 14:** ದೆಹಲಿಯ ರಾಷ್ಟ್ರೀಯ ವಸ್ತು ಸಂಗ್ರಹಾಲಯಕ್ಕೆ ಗುರುವಾರ ಭೇಟಿ ನೀಡಿದ್ದ ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ್ ಅವರು ಗದಗ ಜಿಲ್ಲೆಯ ಐತಿಹಾಸಿಕ ಲಕ್ಕುಂಡಿ ಪ್ರದೇಶಕ್ಕೆ ಸೇರಿದ ಅಪರೂಪದ ಪುರಾತನ ವಿಗ್ರಹವನ್ನು ವೀಕ್ಷಿಸಿದರು.

1976 ರ ಅಕ್ಟೋಬರ್ 16 ರಂದು ಡಿ.ಕೆ. ಹೆಬ್ಬೂರ್ ಮತ್ತು ಟಿ.ಕೆ. ನಾಯಕ್ ಅವರು ಅಂದಿನ ಪ್ರಧಾನಿ ಇಂದಿರಾ ಗಾಂಧಿಯವರಿಗೆ ಹಸ್ತಾಂತರಿಸಿದ್ದ 150ಕ್ಕೂ ಹೆಚ್ಚು ಅಮೂಲ್ಯ ಕಲಾಕೃತಿಗಳು ಇಲ್ಲಿದ್ದು, ಪ್ರಾಚೀನ ಶಸ್ತ್ರಾಸ್ತ್ರಗಳು, ಅಪರೂಪದ ಚಿನ್ನ–ಬೆಳ್ಳಿ ನಾಣ್ಯಗಳು, ಸೂಕ್ಷ್ಮ ಕೆತ್ತನೆಯ ಆಭರಣಗಳು ಮತ್ತು ಐತಿಹಾಸಿಕ ಹಸ್ತಪ್ರತಿಗಳು ನಮ್ಮ ನಾಡಿನ ಭವ್ಯ ಇತಿಹಾಸವನ್ನು ಸಾರುವಂತಿವೆ. ಲಾಕರ್‌ನಲ್ಲಿ ಸುರಕ್ಷಿತವಾಗಿರುವ ಈ 150 ಹೆಚ್ಚು ಅಪರೂಪದ ವಸ್ತುಗಳನ್ನು ಸಾರ್ವಜನಿಕರ ವೀಕ್ಷಣೆಗಾಗಿ ದೆಹಲಿಯಲ್ಲೇ ಪ್ರತ್ಯೇಕ ಗ್ಯಾಲರಿಯಲ್ಲಿ ಪ್ರದರ್ಶಿಸಲು ರಾಷ್ಟ್ರೀಯ ವಸ್ತುಸಂಗ್ರಹಾಲಯದೊಂದಿಗೆ ಅಗತ್ಯ ಸಮನ್ವಯ ಸಾಧಿಸುವುದು ಹಾಗೂ ಈ ಅಮೂಲ್ಯ ಕಲಾಕೃತಿಗಳನ್ನು ಶಾಶ್ವತವಾಗಿ ಕರ್ನಾಟಕಕ್ಕೆ ಅದರಲ್ಲೂ ವಿಶೇಷವಾಗಿ ಲಕ್ಕುಂಡಿಗೆ ಮರಳಿ ತರಲು ಕೇಂದ್ರ ಸರ್ಕಾರ ಮತ್ತು ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆಯೊಂದಿಗೆ ಅಧಿಕೃತ ಮಾತುಕತೆ ಹಾಗೂ ಕಾನೂನಾತ್ಮಕ ಪ್ರಕ್ರಿಯೆಗಳನ್ನು ತಕ್ಷಣವೇ ಪ್ರಾರಂಭಿಸಲಾಗುವುದು ಎಂದು ಸಚಿವರು ತಿಳಿಸಿದರು.



# ಕುಡಿಯುವ ನೀರು ಕೊಡಲಾಗದ ಪುಕ್ಕಟೆ ಪ್ರಚಾರ ಮಂತ್ರಿ, ಪ್ರಿಯಾಂಕ್ ಖರ್ಗೆ: ಛಲವಾದಿ ನಾರಾಯಣಸ್ವಾಮಿ ಆಕ್ರೋಶ

**ಕಲಬುರಗಿ, ಮೇ. 14:** ಕಲ್ಯಾಣ ಕರ್ನಾಟಕಕ್ಕೆ ಶುದ್ಧವಾದ ಕುಡಿಯುವ ನೀರು ಕೊಡಲಾಗದ ಪುಕ್ಕಟೆ ಪ್ರಚಾರ ಮಂತ್ರಿ ಪ್ರಿಯಾಂಕ್ ಖರ್ಗೆಯವರೇ, ನಿಮ್ಮ ಅಂಕಿ–ಅಂಶಗಳ ವೈಫಲ್ಯಕ್ಕೆ ಉತ್ತರವಿದೆಯೇ? ನಿಮ್ಮ ಸ್ವಕ್ಷೇತ್ರ ಚಿತ್ತಾಪುರದಲ್ಲಿ ಅದೆಷ್ಟು ಗ್ರಾಮಗಳು ಕುಡಿಯುವ ನೀರಿಲ್ಲದೇ ಬಳಲುತ್ತಿವೆ ಗೊತ್ತಿದೆಯೇ? ತಿಂಗಳಲ್ಲಿ ಎಷ್ಟು ಸಲ ಕ್ಷೇತ್ರಕ್ಕೆ ಹೋಗ್ತೀರಿ? ಬೆಂಗಳೂರಲ್ಲೇ ಕುಳಿತು ಪತ್ರಿಕಾಗೋಷ್ಠಿಗಳ ಮೂಲಕ ಪುಕ್ಕಟೆ ಪ್ರಚಾರ ಪಡೆಯುವ ನಿಮ್ಮ ಕ್ಷೇತ್ರದ ಬಗ್ಗೆ ಒಂದಿಷ್ಟು ಹೇಳಿ ಎಂದು ರಾಜ್ಯ ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಚಲವಾದಿ ನಾರಾಯಣಸ್ವಾಮಿ, ಸಚಿವ ಪ್ರಿಯಾಂಕ್ ಖರ್ಗೆಗೆ ಖಾರವಾಗಿ ಪ್ರಶ್ನಿಸಿದರು.

ಸುದ್ದಿಗೋಷ್ಠಿಯಲ್ಲಿ, ಕಲ್ಯಾಣ ಕರ್ನಾಟಕ ಭಾಗದ ಜನರು ಇಂದು ಕುಡಿಯುವ ನೀರಿನಂತಹ ಮೂಲಭೂತ ಸೌಲಭ್ಯಕ್ಕಾಗಿ ಪರದಾಡುತ್ತಿರುವುದು ಅತ್ಯಂತ ದುಃಖಕರ ಮತ್ತು ಆತಂಕಕಾರಿ ಸಂಗತಿಯಾಗಿದೆ. ನಿಮ್ಮ ತಂದೆ ಐದು ದಶಕಗಳ ಕಾಲ ಕಲ್ಯಾಣ ಕರ್ನಾಟವನ್ನು ಆಳಿದರು. ಅವರೂ ಸಸೌಲಭ್ಯ ಒದಗಿಸದಿದ್ದರೂ ಪುಕ್ಕಟೆ ಪ್ರಚಾರ ಪಡೆಯುವಂಥ ಬಿಟ್ಟಿ ಪತ್ರಿಕಾಗೋಷ್ಠಿ ನಡೆಸುತ್ತಿರಲಿಲ್ಲ. ಆದರೆ ನೀವು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತಿ ರಾಜ್ ಇಲಾಖೆಯ ಸಚಿವರಾಗಿ ಅಭಿವೃದ್ಧಿಯ ದೊಡ್ಡ ದೊಡ್ಡ ಭಾಷಣಗಳನ್ನು ಮಾಡುತ್ತಾ, ಸಾಮಾಜಿಕ ಜಾಲತಾಣಗಳಲ್ಲಿ "ಫ್ಯಾಕ್ಟ್ ಚೆಕ್" ರಾಜಕಾರಣದಲ್ಲಿ ತೊಡಗಿಸಿಕೊಂಡು, ಅವರದೇ ಇಲಾಖೆಯ ಅಂಕಿ–ಅಂಶಗಳು ಆಡಳಿತದ ಭೀಕರ ವೈಫಲ್ಯವನ್ನು ಬಹಿರಂಗಪಡಿಸುತ್ತಿವೆ

ಒಬ್ಬ ಸಚಿವರ ಕರ್ತವ್ಯವೆಂದರೆ ಕೇವಲ ಸಿದ್ಧಾಂತಗಳ ಮೇಲೆ ಭಾಷಣ ಮಾಡುವುದಲ್ಲ. ಬದಲಾಗಿ ಸಾಮಾನ್ಯ ಜನರ ಮೂಲಭೂತ ಅವಶ್ಯಕತೆಗಳನ್ನು ಪೂರೈಸುವುದಾಗಿದೆ. ಆದರೆ ಕಲ್ಯಾಣ ಕರ್ನಾಟಕದ ಭಾಗದವರೇ ಆದ ಸಚಿವರು ತಮ್ಮ ಸ್ವಂತ ಜಿಲ್ಲೆ ಮತ್ತು ಇಲಾಖೆಯ ವ್ಯಾಪ್ತಿಯಲ್ಲೇ ಕುಡಿಯುವ ನೀರಿನಂತಹ ಕನಿಷ್ಠ ಸೌಲಭ್ಯ ಒದಗಿಸುವಲ್ಲೂ ವಿಫಲರಾಗಿರುವುದು ಸದನದಲ್ಲಿ ನೀಡಿರುವ ಅಧಿಕೃತ ಅಂಕಿ–ಅಂಶಗಳಿಂದಲೇ ಸಾಬೀತಾಗಿದೆ ಎಂದು ಕಿಡಿಕಾರಿದರು.

ಕಲ್ಯಾಣ ಕರ್ನಾಟಕ ವ್ಯಾಪ್ತಿಯಲ್ಲಿ ಒಟ್ಟು 3965 ಶುದ್ಧ ಕುಡಿಯುವ ನೀರಿನ ಘಟಕಗಳಿದ್ದು, ಗ್ರಾಮ ಪಂಚಾಯಿತಿ ಸುಪರ್ದಿಯಲ್ಲಿರುವ 2987 ಘಟಕಗಳಲ್ಲಿ ಕಾರ್ಯನಿರ್ವಹಿಸುತ್ತಿರುವುದು ಕೇವಲ 1708 ಮಾತ್ರ. ಅಂದರೆ ಶೇ.43 ರಷ್ಟು ಘಟಕಗಳು ಇಂದು ಸ್ಥಗಿತಗೊಂಡು ಧೂಳು ಹಿಡಿಯುತ್ತಿವೆ. ಕಳೆದ ಮೂರು ವರ್ಷಗಳಲ್ಲಿ ಘಟಕಗಳ ನಿರ್ವಹಣೆ ಮತ್ತು ದುರಸ್ತಿ ಹೆಸರಿನಲ್ಲಿ 17 ಕೋಟಿಗೂ ಅಧಿಕ ಹಣ ಖರ್ಚಾಗಿದೆ. ಈ ಹಣ ಯಾರ ಜೇಬಿಗೆ ಸೇರಿದೆ? ಇಷ್ಟೊಂದು ಹಣ ಖರ್ಚಾದರೂ 1279 ಘಟಕಗಳು ಏಕೆ ಸ್ಥಗಿತಗೊಂಡಿವೆ? ದುರಸ್ತಿಗೆ ಆದೇಶ ನೀಡಲು ನಿಮಗೆ ಪುರುಸೊತ್ತಿಲ್ಲವೇ? ಸರ್ಕಾರದ ಖಜಾನೆ ಖಾಲಿಯಾಗಿದೆಯೇ? ಅಥವಾ ನಿಮ್ಮ 'ಫ್ಯಾಕ್ಟ್ ಚೆಕ್' ಅಭಿವೃದ್ಧಿಯ ಕಡೆಗೆ ತಿರುಗುತ್ತಿಲ್ಲವೇ ಎಂದು ಅವರು ಸರಣಿ ಪ್ರಶ್ನೆಗಳನ್ನು ಹಾಕಿದರು.

ಒಂದು ಕಡೆ ಸರ್ಕಾರ ಅಭಿವೃದ್ಧಿ ಎಂಬ ಬಣ್ಣದ ಜಾಹೀರಾತುಗಳನ್ನು ನೀಡುತ್ತಿದೆ. ಇನ್ನೊಂದೆಡೆ ಜನರು ಹನಿ ನೀರಿಗಾಗಿ ಪರದಾಡುತ್ತಿದ್ದಾರೆ. ಇದು ನಿಮ್ಮ ಅಭಿವೃದ್ಧಿಯೇ?



ಅಥವಾ ಜನರ ದುರಂತದ ಮೇಲೆ ನಡೆಯುತ್ತಿರುವ ಪ್ರಚಾರ ರಾಜಕಾರಣವೇ? ಸ್ವಂತಜಿಲ್ಲೆಯಲ್ಲೇ ಕತ್ತಲೆ ಕಲಬುರಗಿಯ ದುಸ್ಥಿತಿ. ಸಚಿವರ ಉಸ್ತುವಾರಿ ಜಿಲ್ಲೆಯಾದ ಕಲಬುರ್ಗಿಯಲ್ಲೇ ಪರಿಸ್ಥಿತಿ ಇನ್ನೂ ಭೀಕರವಾಗಿದೆ. ಅಲ್ಲಿರುವ 510 ಘಟಕಗಳಲ್ಲಿ ಕಾರ್ಯನಿರ್ವಹಿಸುತ್ತಿರುವುದು ಕೇವಲ 132 ಮಾತ್ರ. ಅಂದರೆ ಶೇ. 75ರಷ್ಟು ಘಟಕಗಳು ಸ್ಥಗಿತಗೊಂಡು ಕೆಟ್ಟುನಿಂತಿವೆ. ಸಚಿವರ ಮೂಗಿನ ನೇರಕ್ಕೇ ಜನರು ಕುಡಿಯುವ ನೀರಿಗಾಗಿ ಸಂಕಷ್ಟ ಅನುಭವಿಸುತ್ತಿದ್ದಾರೆ. ಸಚಿವರಿಗೆ ಗೊತ್ತೇ ಇಲ್ಲವೇ? ಅಥವಾ ಜಾಣ ಕುರುಡುತನವೇ ಎಂದು ಪ್ರಶ್ನಿಸಿದರು.

ಸ್ವಂತ ಜಿಲ್ಲೆಯಲ್ಲೇ ಶೇ.75ರಷ್ಟು ವೈಫಲ್ಯವಿಟ್ಟುಕೊಂಡು ರಾಜ್ಯದ ಅಭಿವೃದ್ಧಿಯ ಬಗ್ಗೆ ದೊಡ್ಡ ದೊಡ್ಡ ಭಾಷಣ ಮಾಡುವುದು ರಾಜಕೀಯ ದುರಹಂಕಾರದ ಪರಮಾವಧಿ ಯಾಗಿದೆ. ಪ್ರಚಾರದ ಮೋಹ – ಕರ್ತವ್ಯದ ದ್ರೋಹ. ಸಚಿವರ ಸಂಪೂರ್ಣ ಗಮನ ಆರ್‌ಎಸ್‌ಎಸ್, ಬಿಜೆಪಿ ನಾಯಕರು ಮತ್ತು ಸಾಮಾಜಿಕ ಜಾಲತಾಣಗಳಲ್ಲಿ 'ಫ್ಯಾಕ್ಟ್ ಚೆಕ್' ಮಾಡುವುದರಲ್ಲೇ ಮುಳುಗಿದೆ. ಅವರು ಗ್ರಾಮೀಣಾಭಿವೃದ್ಧಿ ಸಚಿವರಿಗಿಂತ ಕಾಂಗ್ರೆಸ್ ಸರ್ಕಾರದ 'ಪ್ರಚಾರ ಮಂತ್ರಿ'ಯಾಗಿ ಹೆಚ್ಚು ಕೆಲಸ ಮಾಡುತ್ತಿರುವುದು ಸ್ಪಷ್ಟವಾಗಿದೆ ಎಂದು ಕಟುವಾಗಿ ಟೀಕಿಸಿದರು.

ಕಲ್ಯಾಣ ಕರ್ನಾಟಕದ ಭಾಗದವರೇ ಆದ ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆಯವರೇ, ನಿಮ್ಮ ಇಲಾಖೆಯ ಈ "ಅಭಿವೃದ್ಧಿ" ನೋಡಿ ಜನ ಬೆಚ್ಚಿಬಿದ್ದಿದ್ದಾರೆ. ಪ್ರಚಾರದ ಬೆಳಕಿನಲ್ಲಿ ಆಡಳಿತದ ವೈಫಲ್ಯವನ್ನು ಮರೆಮಾಚಲು ಸಾಧ್ಯವಿಲ್ಲ. ಜನರ ಸಮಸ್ಯೆಗಳಿಗೆ ಉತ್ತರ ಕೊಡಿ. ಅಂಕಿ–ಅಂಶಗಳಿಗೆ ಉತ್ತರ ಕೊಡಿ. ನೀರಿಲ್ಲದೆ ನರಳುತ್ತಿರುವ ಕಲ್ಯಾಣ ಕರ್ನಾಟಕದ ಜನರಿಗೆ ಉತ್ತರ ಕೊಡಿ. ಒಟ್ಟಿನಲ್ಲಿ ನೀವು ಕಾಂಗ್ರೆಸ್ ಸರ್ಕಾರದಲ್ಲಿ ಕೇವಲ ಪ್ರಚಾರ ಮಂತ್ರಿ ಆಗಿ ಕೆಲಸ ಮಾಡುತ್ತಿದ್ದೀರೆ ಹೊರತು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರಾಗಿ ಅಲ್ಲ ಎಂದು ಅವರು ಹರಿಹಾಯ್ದರು.

ನೀವು ಎರಡು ಬಾರಿ ಐಟಿ–ಬಿಟಿ ಸಚಿವರೂ ಆಗಿದ್ದೀರಿ. ನಿಮ್ಮ ಭಾಗಕ್ಕೆ ಎಷ್ಟು ಐಟಿ ಕಂಪನಿಗಳನ್ನು ತಂದಿದ್ದೀರಿ? ಯಾಕೆ ತಂದಿಲ್ಲ. ಆಗಲಿಲ್ಲವೇ? ನಿಮ್ಮೂರಲ್ಲಿ ಕುಡಿಯಲು ನೀರಿಗೂ ಗತಿಯಿಲ್ಲದಿರುವಾಗ ಯಾವ ಕಂಪನಿಯವರು ಬರ್ತಾರೆ ಸ್ವಾಮಿ. ನಿಮ್ಮ ಹಣೆಬರಕ್ಕೆ ಯಡಿಯೂರಪ್ಪ ನಿರ್ಮಿಸಿದ್ದ ವಿಮಾನ ನಿಲ್ದಾಣದಲ್ಲಿ ವಿಮಾನಗಳ ಹಾರಾಟವೂ ಸ್ಥಗಿತಗೊಂಡಿದೆ. ಇಂಥ ಯೋಗ್ಯತೆ ಇಟ್ಟುಕೊಂಡಿರುವ ನೀವು ರಾಷ್ಟ್ರ ನಾಯಕರ ಬಗ್ಗೆ ಮಾತಾಡ್ತೀರಲ್ಲ ನಾಚಿಕೆಯಾಗಲ್ಲವೇ ಎಂದು ಖಾರವಾಗಿ ಪ್ರಶ್ನಿಸಿದರು.

# ಮೃತ್ಯುಕೂಪದಂತಿರುವ ವಿದ್ಯುತ್ ಪರಿವರ್ತಕಗಳು...!



**ರಾಯಚೂರು, ಮೇ. 14:** ಕತ್ತಲು ಕಳೆದು ಬೆಳಕು ಚೆಲ್ಲುವ ನಗರದ ಕೆಲವು ವಿದ್ಯುತ್ ಪರಿವರ್ತಕಗಳ ಸುತ್ತ ತಂತಿ ಬೇಲಿ ಇಲ್ಲ. ಇವುಗಳು ಅಪಾಯ ಆಹ್ವಾನಿಸುತ್ತಿದ್ದರೂ ಜೆಸ್ಕಾಂ ಅಧಿಕಾರಿಗಳು ಎಚ್ಚೆತ್ತುಕೊಳ್ಳದಿರುವುದು ಸಾರ್ವಜನಿಕರ ಆತಂಕಕ್ಕೆ ಕಾರಣವಾಗಿದೆ.

ನಗರದ ಗಂಜ್ ರಸ್ತೆ, ಪಟೇಲ್ ರಸ್ತೆ, ಮಾವಿನ ಕೆರೆ ರಸ್ತೆ, ಸ್ಟೇಷನ್ ರಸ್ತೆ, ಆಜಾದ್ ನಗರ ಹಾಗೂ ಆರ್‌ಟಿಒ ಕಚೇರಿ ಸಮೀಪ ಅಳವಡಿಸಿರುವ ಅನೇಕ ವಿದ್ಯುತ್ ಪರಿವರ್ತಕಗಳಿಗೆ ರಕ್ಷಣಾ ತಂತಿಬೇಲಿ ಇಲ್ಲ. ಸಾರ್ವಜನಿಕರು ಹಾಗೂ ಶಾಲಾ ಮಕ್ಕಳು ಹೆಚ್ಚಾಗಿ ಸಂಚರಿಸುವ ಪ್ರದೇಶಗಳಲ್ಲಿಯೇ ಇಂತಹ ಅಪಾಯಕಾರಿ ಸ್ಥಿತಿಯಲ್ಲಿ ವಿದ್ಯುತ್ ಪರಿವರ್ತಕಗಳಿವೆ.ಪರಿವರ್ತಕಗಳ ಬಳಿ ಎಚ್ಚರಿಕೆ ಫಲಕ ಅಳವಡಿಸಿಲ್ಲ. ಪರಿವರ್ತಕಗಳಿಂದ ವಿದ್ಯುತ್ ಸಾಗಿಸುವ ತಂತಿಗಳು ಕೆಳಮಟ್ಟದಲ್ಲಿ ಹಾದು ಹೋಗಿವೆ. ಕೆಲವು ಕಡೆ ಹಳೆಯ ಹಾಗೂ ಬಾಗಿದ ವಿದ್ಯುತ್ ಕಂಬಗಳ ಮೇಲೆ ಪರಿವರ್ತಕಗಳು ನೇತಾಡುತ್ತಿದ್ದು, ಇನ್ನೂ ಕೆಲವೆಡೆ ನೆಲಮಟ್ಟದಲ್ಲೇ ಇವೆ. ಮಳೆಗಾಲದಲ್ಲಿ ತೇವಾಂಶ ಹೆಚ್ಚಾದರೆ, ವಿದ್ಯುತ್ ಪ್ರವಹಿಸುವ ಸಾಧ್ಯತೆಯೂ ಇದೆ ಎಂದು ಸ್ಥಳೀಯರು ಆತಂಕ ವ್ಯಕ್ತಪಡಿಸುತ್ತಾರೆ.

ಸಣ್ಣಮಕ್ಕಳು ಬೆಳಿಗ್ಗೆ ಮತ್ತು ಸಂಜೆ ರಸ್ತೆ ಬದಿ ಆಟವಾಡುತ್ತಾರೆ. ಆಟದ ಮಧ್ಯೆ ಚೆಂಡು ಪರಿವರ್ತಕದ ಬಳಿ ಹೋಗುವುದು ಸಾಮಾನ್ಯ. ಅಪ್ಪಿತಪ್ಪಿ ಕಂಬ ಅಥವಾ ತಂತಿ ಸ್ಪರ್ಶಿಸಿದರೆ ದೊಡ್ಡ ಅನಾಹುತ ಸಂಭವಿಸಬಹುದು' ಎಂದು ಸ್ಥಳೀಯ ನಿವಾಸಿ ಶೇಕಪ್ಪ ಹೇಳಿದರು.

ಸಾರ್ವಜನಿಕರು ಮನೆಯ ಕಸವನ್ನು ವಿದ್ಯುತ್ ಪರಿವರ್ತಕಗಳ ಸುತ್ತ ಹಾಕುತ್ತಿರುವುದೂ ಮತ್ತೊಂದು ಸಮಸ್ಯೆಯಾಗಿದೆ. ಪ್ಲಾಸ್ಟಿಕ್, ಒಣಕಸ ಹಾಗೂ ತ್ಯಾಜ್ಯಗಳು ಪರಿವರ್ತಕಗಳ ಬಳಿ ರಾಶಿಯಾಗಿ ಬೀಳುತ್ತಿದ್ದು, ಕೆಲವೊಮ್ಮೆ ಕಿಡಿ ಹೊತ್ತಿ ಬೆಂಕಿ ಅವಘಡ ಸಂಭವಿಸುವ ಭೀತಿಯೂ ಇದೆ. ಕಸ ಹಾಕುವವರ ವಿರುದ್ಧ ಕ್ರಮ ಕೈಗೊಳ್ಳಬೇಕು. ಪರಿವರ್ತಕಗಳ ಸುತ್ತ ಸ್ವಚ್ಛತೆ ಕಾಪಾಡದಿದ್ದರೆ ಸಾರ್ವಜನಿಕರ ಜೀವಕ್ಕೆ ಅಪಾಯ ತಪ್ಪದು' ಎಂದು ಸ್ಥಳೀಯ ನಿವಾಸಿ ಯಲ್ಲಪ್ಪ ಆತಂಕ ವ್ಯಕ್ತಪಡಿಸುತ್ತಾರೆ.

ಆಜಾದ್ ನಗರ ಪ್ರದೇಶದಲ್ಲಿ ಪೌರ ಕಾರ್ಮಿಕರು ಕಸ ತೆರವುಗೊಳಿಸಲು ತೆರಳುವಾಗಲೂ ಜೀವಭಯದಲ್ಲೇ ಕೆಲಸ ಮಾಡಬೇಕಾದ ಪರಿಸ್ಥಿತಿ ಇದೆ. ವಿದ್ಯುತ್ ಕಂಬಗಳ ಅಕ್ಕಪಕ್ಕದಲ್ಲೇ ಕಸ ರಾಶಿಯಾಗಿರುವುದರಿಂದ ಸ್ವಚ್ಛತಾ ಸಿಬ್ಬಂದಿಗೂ ಅಪಾಯ ಎದುರಾಗುತ್ತಿದೆ. ಜಾಗೃತಿ ಮೂಡಿಸಿದರೂ ಪ್ರಯೋಜನವಾಗಿಲ್ಲ ಎಂದು ಪೌರ ಕಾರ್ಮಿಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ನಗರದಲ್ಲಿ ಹೆಚ್ಚುತ್ತಿರುವ ಜನಸಂಖ್ಯೆ ಹಾಗೂ ವಾಹನ ಸಂಚಾರದ ನಡುವೆ ಹಳೆ ವಿದ್ಯುತ್ ಪರಿವರ್ತಕಗಳ ನಿರ್ವಹಣೆಯೂ ಸಮರ್ಪಕವಾಗಿ ನಡೆ ಯುತ್ತಿಲ್ಲ ಎಂಬ ಆರೋಪ ಕೇಳಿಬರುತ್ತಿದೆ. ಹಲವೆಡೆ ಪರಿವರ್ತಕಗಳ ಕೆಳಭಾಗದಲ್ಲಿ ಕಳೆ ಬೆಳೆದಿದೆ. ಅನಾಹುತ ಸಂಭವಿಸುವ ಮುನ್ನವೇ ಜೆಸ್ಕಾಂ ಅಧಿಕಾರಿಗಳು ಎಚ್ಚೆತ್ತುಕೊಂಡು ಎಲ್ಲ ಪರಿವರ್ತಕಗಳ ಸುತ್ತ ತಂತಿ ಬೇಲಿ ಅಳವಡಿಸಬೇಕು. ಎಚ್ಚರಿಕೆ ಫಲಕ ಹಾಕಬೇಕು ಹಾಗೂ ಅಪಾಯಕಾರಿ ಸ್ಥಿತಿಯಲ್ಲಿರುವ ಕಂಬ ಮತ್ತು ತಂತಿಗಳನ್ನು ತಕ್ಷಣ ದುರಸ್ತಿ ಮಾಡಬೇಕು ಎಂದು ಸ್ಥಳೀಯ ನಿವಾಸಿ ಶೇಖರಪ್ಪ ಆಗ್ರಹಿಸಿದ್ದಾರೆ.



ಶಾಲಾ–ಕಾಲೇಜುಗಳಲ್ಲಿ ಹಿಜಾಬ್ ಧರಿಸಲು ಅವಕಾಶ ನೀಡುವ ರಾಜ್ಯ ಸರ್ಕಾರದ ನಿರ್ಧಾರವನ್ನು ಖಂಡಿಸಿ ಶ್ರೀರಾಮ ಸೇನೆ ಕಾರ್ಯಕರ್ತರು ಗುರುವಾರ ಹುಬ್ಬಳ್ಳಿಯಲ್ಲಿ ಪ್ರತಿಭಟನೆ ನಡೆಸಿದರು.

# ಸಕ್ಕರೆ ರಫ್ತು ನಿಷೇಧಕ್ಕೆ ರೈತರ ವಿರೋಧ: ತಕ್ಷಣ ಆದೇಶ ಹಿಂಪಡೆಯುವಂತೆ ಒತ್ತಾಯ

**ಬೆಳಗಾವಿ, ಮೇ 14:** ಈ ವರ್ಷದ ಸೆಪ್ಟೆಂಬರ್ 30ರವರೆಗೆ ಸಕ್ಕರೆ ರಫ್ತನ್ನು ನಿಷೇಧಿಸಿ ಕೇಂದ್ರ ಸರ್ಕಾರ ಆದೇಶ ಹೊರಡಿಸಿದ್ದಕ್ಕೆ ರೈತ ಮುಖಂಡರು ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ. ಈಗಾಗಲೇ ರೈತರಿಗೆ ಬಾಕಿ ಇರುವ ಎರಡು ತಿಂಗಳ ಬಿಲ್ ಕೂಡ ಮತ್ತಷ್ಟು ವಿಳಂಬವಾಗುವ ಆತಂಕ ಎದುರಾಗಿದೆ. ಇದು ಅವೈಜ್ಞಾನಿಕ ಕ್ರಮವಾಗಿದ್ದು, ತಕ್ಷಣ ಆದೇಶ ಹಿಂಪಡೆಯುವಂತೆ ರೈತರು ಒತ್ತಾಯಿಸಿದ್ದಾರೆ.

ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯ (ವಿದೇಶಿ ವ್ಯಾಪಾರ ನಿರ್ದೇಶನಾಲಯ) ಮೇ 13ರಂದು ದಿಢೀರ್ ಆದೇಶ ಪ್ರಕಟಿಸಿದೆ. ಈ ತಿದ್ದುಪಡಿಯು ಐಟಿಸಿ ಕೋಡ್‌ಗಳ ಅಡಿ ವರ್ಗೀಕರಿಸಲಾದ ಕಚ್ಚಾ ಸಕ್ಕರೆ, ಬಿಳಿ ಸಕ್ಕರೆ ಮತ್ತು ಸಂಸ್ಕರಿಸಿದ ಸಕ್ಕರೆಯ ಮೇಲೆ ಪರಿಣಾಮ ಬೀರುತ್ತದೆ ಎಂದು ವಿದೇಶಿ ವ್ಯಾಪಾರ ನಿರ್ದೇಶನಾಲಯ ದೃಢಪಡಿಸಿದೆ. ಈ ಆದೇಶದಿಂದಾಗಿ ದೇಶೀಯ ಪೂರೈಕೆಯನ್ನು ನಿರ್ವಹಿಸಲು ಮತ್ತು ಮುಂದಿನ ಎರಡು ವರ್ಷಗಳಲ್ಲಿ ಆಹಾರ ಭದ್ರತೆ ಖಚಿತಪಡಿಸಿಕೊಳ್ಳಲು ತೆಗೆದುಕೊಳ್ಳಲಾದ ಕ್ರಮ ಎಂದು ಕೇಂದ್ರ ಸರ್ಕಾರ ತಿಳಿಸಿದ್ದು, ಸುಂಕ ದರ ಕೋಟಾ ಯೋಜನೆಯಡಿ ಯುರೋಪಿಯನ್ ಒಕ್ಕೂಟ ಮತ್ತು ಅಮೆರಿಕಕ್ಕೆ ರಫ್ತು ಮಾಡಲಾಗುವ ಸಕ್ಕರೆಗೆ ಈ ಆದೇಶ ಅನ್ವಯಿಸುವುದಿಲ್ಲ ಎಂದೂ ಸ್ಪಷ್ಟಪಡಿಸಲಾಗಿದೆ. ಆದರೆ, ಕಬ್ಬು ಬೆಳೆಗಾರರು ಕೇಂದ್ರದ ಈ ನಿರ್ಧಾರವನ್ನು ವಿರೋಧಿಸಿದ್ದಾರೆ.



ಭಾರತೀಯ ಕೃಷಿಕ ಸಮಾಜ ರಾಜ್ಯಾಧ್ಯಕ್ಷ ಸಿದ್ಧಗೌಡ ಮೋದಗಿ, ರಫ್ತಿನಿಂದಾಗಿ ಸಕ್ಕರೆಗೆ ಜಾಗತಿಕ ಮಾರುಕಟ್ಟೆಯಲ್ಲಿ ಒಳ್ಳೆಯ ದರ ಸಿಗುತ್ತಿತ್ತು. ಇದರಿಂದ ದರ ಕುಸಿತ ಆಗಿ, ಕಡಿಮೆ ದರದಲ್ಲಿ ಸಕ್ಕರೆ ಮಾರಾಟ ಮಾಡುವ ಅನಿವಾರ್ಯತೆ ಸೃಷ್ಟಿಯಾಗಲಿದೆ. ಮಾರುಕಟ್ಟೆಯಲ್ಲಿ ದರ ಕುಸಿತವಾದರೆ ಕಬ್ಬು ಬೆಳೆಗಾರರಿಗೆ ಬಿಲ್ ಕೊಡಲು ಕಾರ್ಖಾನೆಗಳಿಗೆ ಸಮಸ್ಯೆ ಆಗುತ್ತದೆ. ಕಾರ್ಖಾನೆಗಳು ಆರ್ಥಿಕ ಸಂಕಷ್ಟಕ್ಕೆ ಸಿಲುಕುತ್ತವೆ. ಅಲ್ಲದೇ ಇದನ್ನೇ ನೆಪ ಮಾಡಿಕೊಂಡು ಕಾರ್ಖಾನೆ ಮಾಲೀಕರು ಮತ್ತಷ್ಟು ತಡವಾಗಿ ಬಿಲ್ ನೀಡಲು ಸರ್ಕಾರವೇ ಅವಕಾಶ ಮಾಡಿಕೊಟ್ಟಂತೆ ಆಗಲಿದೆ. ಕಬ್ಬು ಬೆಳೆಗಾರರ ಮೇಲೆ ನೇರವಾಗಿ ಪರಿಣಾಮ ಬೀರಲಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಪ್ರಸಕ್ತ ವರ್ಷ ಇಡೀ ದೇಶದಲ್ಲಿ ಒಟ್ಟು 275 ಲಕ್ಷ ಮೆಟ್ರಿಕ್ ಟನ್ ಸಕ್ಕರೆ ಉತ್ಪಾದನೆ ಮಾಡಲಾಗಿದೆ. ಕರ್ನಾಟಕದಲ್ಲಿ 31 ಲಕ್ಷ 72 ಸಾವಿರದ 329 ಮೆಟ್ರಿಕ್ ಟನ್, ಬೆಳಗಾವಿ ಜಿಲ್ಲೆಯ 29 ಕಾರ್ಖಾನೆಗಳಲ್ಲಿ 18 ಲಕ್ಷ 97 ಸಾವಿರದ 651 ಮೆಟ್ರಿಕ್ ಟನ್ ಸಕ್ಕರೆ ಉತ್ಪಾದನೆ ಆಗಿದೆ. 2024–25ನೇ ಸಾಲಿನಲ್ಲಿ 10 ಲಕ್ಷ ಮೆಟ್ರಿಕ್ ಟನ್ ಸಕ್ಕರೆ ರಫ್ತು ಮಾಡಲು ಕೇಂದ್ರ ಸರ್ಕಾರ ಅನುಮೋದನೆ ನೀಡಿತ್ತು. ಆದರೆ, 7.75 ಲಕ್ಷ ಮೆಟ್ರಿಕ್ ಟನ್ ಸಕ್ಕರೆ ಮಾತ್ರ ರಫ್ತಾಗಿತ್ತು ಎಂದು ಸಕ್ಕರೆ ಆಯುಕ್ತಾಲಯ ಮಾಹಿತಿ ನೀಡಿದ್ದಾಗಿ ಮೋದಗಿ ವಿವರಿಸಿದರು.ಪ್ರತಿ ತಿಂಗಳು ಇಂತಿಷ್ಟು ಸಕ್ಕರೆ ಮಾತ್ರ ಮಾರಾಟ ಮಾಡಬೇಕು (ಮಾರಾಟ ಪದ್ಧತಿ) ಎಂದು ಕೇಂದ್ರ ಸರ್ಕಾರ ಕಾನೂನು ಮಾಡಿದೆ. ಆ ಪ್ರಕಾರವೇ ಸಕ್ಕರೆ ಮಾರಾಟ ಮಾಡಬೇಕಾಗುತ್ತದೆ. ಈಗ ವಿದೇಶಕ್ಕೆ ರಫ್ತು ರದ್ದುಮಾಡುವುದು ದೇಶದ ಆರ್ಥಿಕತೆ ಮೇಲೂ ಪರಿಣಾಮ ಬೀರುವ ಸಾಧ್ಯತೆ ಇದೆ ಎಂದು ಹೋರಾಟಗಾರರು ಎಚ್ಚರಿಸಿದ್ದಾರೆ.

ಕೇಂದ್ರ ಸರ್ಕಾರ ಹೀಗೆ ದಿಢೀರ್ ಅಂತಾ ಸಕ್ಕರೆ ರಫ್ತು ಆದೇಶ ರದ್ದುಪಡಿಸಿದ್ದು, ಸರಿಯಾದ ಕ್ರಮವಲ್ಲ. ಕಬ್ಬು ಬೆಳೆಗಾರರು ಮತ್ತು ಸಕ್ಕರೆ ಕಾರ್ಖಾನೆ ಮಾಲೀಕರಿಗೂ ಸಮಸ್ಯೆ ಆಗಲಿದೆ. ಕಾರ್ಖಾನೆ ಗೋದಾಮುಗಳಲ್ಲಿ ಸಕ್ಕರೆ ಕೊಳೆಯಲಿದೆ. ಕಬ್ಬು ಒಯ್ದ 14 ದಿನದೊಳಗೆ ಬಿಲ್ ಪಾವತಿಸಬೇಕೆಂಬ ನಿಯಮ ಇದೆ. ಆದರೂ ಈ ನಿಯಮವನ್ನು ಬಹುತೇಕ ಕಾರ್ಖಾನೆಗಳು ಗಾಳಿಗೆ ತೂರಿ, 3–4 ತಿಂಗಳು ಆದರೂ ಬಿಲ್ ಕೊಡುತ್ತಿಲ್ಲ. ಫೆಬ್ರುವರಿ, ಮಾರ್ಚ್ ತಿಂಗಳ ಬಿಲ್ ಬಾಕಿ ಇದೆ. ಆದರೆ, ಸಕ್ಕರೆ ಸಂಸ್ಥೆಗೆ ಮಾಲೀಕರು ಸುಳ್ಳು ಲೆಕ್ಕ ಕೊಟ್ಟು, ಬಿಲ್ ನೀಡಿದ್ದೇವೆ ಅಂತಾ ಸುಳ್ಳು ಹೇಳುತ್ತಾರೆ. ಈಗ ರಫ್ತು ಆದೇಶ ರದ್ದುಪಡಿಸಿರುವುದನ್ನೇ ಮುಂದಿಟ್ಟುಕೊಂಡು ಬಿಲ್ ಪಾವತಿಸಲು ಮತ್ತಷ್ಟು ವಿಳಂಬ ಮಾಡುವ ಸಾಧ್ಯತೆಯಿದೆ ರಾಜ್ಯದ ವಿವಿಧ ಕಾರ್ಖಾನೆಗಳಿಗೆ ಪ್ರಸಕ್ತ ಸಾಲಿನಲ್ಲಿ ಕಬ್ಬು ಕಳಿಸಿದ ರೈತರಿಗೆ ಒಟ್ಟು 23,253 ಕೋಟಿ ಬಿಲ್ ಪಾವತಿಸಬೇಕಾಗಿತ್ತು. ಅದರಲ್ಲಿ 21,982 ಕೋಟಿ ರೂ. ಈಗಾಗಲೇ ನೀಡಲಾಗಿದ್ದು, ಇನ್ನೂ 1,271 ಕೋಟಿ ರೂ. ಬಿಲ್ ಬಾಕಿ ಇದೆ. ಒಟ್ಟು 81 ಕಾರ್ಖಾನೆಗಳು ರಾಜ್ಯದಲ್ಲಿದ್ದು, ಅವುಗಳ ಪೈಕಿ 24 ಕಾರ್ಖಾನೆಗಳು ಶೇ.100ರಷ್ಟು ಬಿಲ್ ಪಾವತಿಸಿವೆ. ಇನ್ನುಳಿದ ಕಾರ್ಖಾನೆಗಳು ಬಾಕಿ ಉಳಿಸಿಕೊಂಡಿವೆ ಎಂಬ ಮಾಹಿತಿ ಲಭ್ಯವಾಗಿದೆ.

# ಯೋಗೇಶ್‌ಗೌಡ ಕೊಲೆ ಪ್ರಕರಣ: ಜಾಮೀನು ಕೋರಿ ಹೈಕೋರ್ಟ್‌ಗೆ ಪೊಲೀಸ್ ಅಧಿಕಾರಿ ಮೇಲ್ಮನವಿ

**ಹುಬ್ಬಳ್ಳಿ, ಮೇ 14:** ಧಾರವಾಡದ ಜಿಲ್ಲಾಪಂಚಾಯತ್ ಸದಸ್ಯ ಯೋಗೇಶ್ ಗೌಡ ಕೊಲೆ ಪ್ರಕರಣದಲ್ಲಿ 7 ವರ್ಷಗಳ ಜೈಲುಶಿಕ್ಷೆಗೆ ಗುರಿಯಾಗಿರುವ ಮಾಜಿ ಪೊಲೀಸ್ ಅಧಿಕಾರಿ ಚನ್ನಕೇಶವ ಟಿಂಗರಿಕರ್ ಅವರು ಶಿಕ್ಷೆ ಪ್ರಶ್ನಿಸಿ ಹೈಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ್ದಾರೆ.

ಹೈಕೋರ್ಟ್‌ನಲ್ಲಿ ಅರ್ಜಿ ವಿಚಾರಣೆ ನಡೆದಿದ್ದು, ಈ ವೇಳೆ 7 ವರ್ಷಗಳ ಜೈಲುಶಿಕ್ಷೆಯನ್ನು ಅಮಾನತ್ತಿನಲ್ಲಿಟ್ಟು ಜಾಮೀನು ಮಂಜೂರು ಮಾಡುವಂತೆ ಚನ್ನಕೇಶವ ಪರ ವಕೀಲರು ಮನವಿ ಮಾಡಿದ್ದಾರೆ. ಇದಕ್ಕೆ ಪ್ರತಿಕ್ರಿಯಿಸಿದ ಹೈಕೋರ್ಟ್, ಸುಲಭವಾಗಿ ಜಾಮೀನು ಪರಿಗಣಿಸಲಾಗದು ಎಂದು ತಿಳಿಸಿದೆ.

ಅರ್ಜಿದಾರರ ಪರ ವಕೀಲ ಪಿ.ಪಿ. ಹೆಗ್ಡೆ ವಾದ ಮಂಡಿಸಿದ್ದು, ಚನ್ನಕೇಶವ ಟಿಂಗರಿಕರ್ ಅವರಿಗೆ ಕೇವಲ 20 ದಿನ ಮಾತ್ರ ತನಿಖೆಯ ಹೊಣೆ ಇತ್ತು ಎಂದು ನ್ಯಾಯಾಲಯಕ್ಕೆ ತಿಳಿಸಿದರು.

ಈ ವೇಳೆ ಅವರ ವಾದಕ್ಕೆ ಸಹಾಯಕ ಸಾಲಿಸಿಟರ್ ಜನರಲ್



ಎಸ್.ವಿ.ರಾಜು ಆಕ್ಷೇಪ ವ್ಯಕ್ತಪಡಿಸಿದರು. ಚನ್ನಕೇಶವ ಟಿಂಗರಿಕರ್ ತನಿಖಾಧಿಕಾರಿಯಾಗಿದ್ದ ಅವಧಿಯಲ್ಲಿ ಕೊಲೆ ಮಾಡಿದ ನಿಜವಾದ ಆರೋಪಿಗಳನ್ನು ಬಂಧಿಸಲಿಲ್ಲ. ಬದಲಿಗೆ, ಕೊಲೆಗೆ ಸಂಬಂಧವಿಲ್ಲದವರನ್ನು ಆರೋಪಿಗಳನ್ನಾಗಿಸುವಲ್ಲಿ ಈತನ ಪಾತ್ರವಿದೆ ಎಂದರು.

ಸಿಸಿಟಿವಿ ದೃಶ್ಯಾವಳಿ ಸಂಗ್ರಹಿಸಿದ್ದರೂ ಅವುಗಳನ್ನು ಪರಿಶೀಲಿಸಿಲ್ಲ. ಕೆಲ ಸಾಕ್ಷಿಗಳಿಗೆ ಬೆದರಿಕೆ ಹಾಕಿದ ಆರೋಪವೂ ಈತನ ಮೇಲಿದೆ. ಪೊಲೀಸ್ ಅಧಿಕಾರಿಯಾಗಿ ನ್ಯಾಯ ಕೊಡಿಸುವ ಕೆಲಸ ಮಾಡಿಲ್ಲವೆಂದು ಎಸ್.ವಿ. ರಾಜು ವಾದಿಸಿದರು.

ವಾದ–ಪ್ರತಿವಾದ ಆಲಿಸಿದ ನ್ಯಾಯಮೂರ್ತಿ ಎಚ್.ಪಿ. ಸಂದೇಶ್ ಮತ್ತು ನ್ಯಾಯಮೂರ್ತಿ ಪಿ. ಶ್ರೀಸುಧಾ ಅವರಿದ್ದ ವಿಭಾಗೀಯ ಪೀಠ, ದೋಷಿ ಎಂದು ಈಗಾಗಲೇ ವಿಚಾರಣಾ ನ್ಯಾಯಾಲಯ ತೀರ್ಪು ನೀಡಿರುವುದರಿಂದ ಜಾಮೀನನ್ನು ಸುಲಭವಾಗಿ ಪರಿಗಣಿಸಲಾಗದು. ಪೊಲೀಸ್ ಅಧಿಕಾರಿಯಾಗಿ ಆರೋಪಿಗಳೊಂದಿಗೆ ಶಾಮೀಲಾಗಿರುವ ಗಂಭೀರ ಆರೋಪವಿದೆ. ಎಂದು ಅಭಿಪ್ರಾಯ ವ್ಯಕ್ತಪಡಿಸಿದೆ. ಅಲ್ಲದೇ ವಿಚಾರಣೆಯನ್ನು ಮೇ 26ಕ್ಕೆ ಮುಂದೂಡಿದೆ.

# ಪೋಕ್ಸೋ ಪ್ರಕರಣ: ಪೊಲೀಸರಿಂದ ವಚನಾನಂದಶ್ರೀ ವಿಚಾರಣೆ

**ದಾವಣಗೆರೆ, ಮೇ 14:** ಬಾಲಕನ ಮೇಲೆ ಲೈಂಗಿಕ ದೌರ್ಜನ್ಯ ನಡೆಸಿದ ಆರೋಪದಡಿ ಹರಿಹರದ ವೀರಶೈವ ಲಿಂಗಾಯತ ಪಂಚಮಸಾಲಿ ಗುರುಪೀಠದ ಪದಚ್ಯುತ ಪೀಠಾಧ್ಯಕ್ಷ ವಚನಾನಂದ ಸ್ವಾಮೀಜಿ ವಿರುದ್ಧ ದಾಖಲಾಗಿರುವ ಪೋಕ್ಸೊ ಪ್ರಕರಣಕ್ಕೆ ಸಂಬಂಧಿಸಿದಂತೆ ಗ್ರಾಮಾಂತರ ಠಾಣೆಯ ಪೊಲೀಸರು ಗುರುವಾರ ಸುದೀರ್ಘ ವಿಚಾರಣೆ ನಡೆಸಿದರು.

ಪ್ರಕರಣದ ತನಿಖೆ ನಡೆಸುತ್ತಿರುವ ಪೊಲೀಸರು, ವಿಚಾರಣೆಗೆ ಹಾಜರಾಗು ವಂತೆ ಸ್ವಾಮೀಜಿಗೆ ನೋಟಿಸ್ ನೀಡಿದ್ದರು. ಬೆಳಗ್ಗೆ 10ಕ್ಕೆ ಠಾಣೆಗೆ ಬಂದ ಸ್ವಾಮೀಜಿ ಅವರನ್ನು ಪೊಲೀಸರು ಮಧ್ಯಾಹ್ನ 2 ಗಂಟೆ ಯವರೆಗೂ ವಿಚಾರಣೆ ನಡೆಸಿದರು. ಹಲವು ಪ್ರಶ್ನೆಗಳನ್ನು ಕೇಳಿ ಉತ್ತರ ಪಡೆದರು. ಮಧ್ಯಾಹ್ನದ ಊಟ ಮುಗಿಸಿದ ಬಳಿಕ ಆಸ್ಪತ್ರೆಗೆ ಕರೆತರಲಾಯಿತು.

ನಗರದ ಸಾರ್ವಜನಿಕ ಆಸ್ಪತ್ರೆಯಲ್ಲಿ ಸ್ವಾಮೀಜಿ ಅವರಿಗೆ ವೈದ್ಯಕೀಯ ಪರೀಕ್ಷೆ ನಡೆಸಲಾಗುತ್ತಿದೆ. ರಕ್ತದ



ಮಾದರಿ ಪಡೆಯಲಾಗುತ್ತಿದೆ.16 ವರ್ಷದ ಬಾಲಕನ ಮೇಲೆ ಲೈಂಗಿಕ ದೌರ್ಜನ್ಯ ನಡೆಸಿದ ಆರೋಪದಡಿ ಲಕ್ಷ್ಮೇಶ್ವರ ಪೊಲೀಸ್ ಠಾಣೆಯಲ್ಲಿ ಪೋಕ್ಸೊ ಪ್ರಕರಣ ದಾಖಲಾಗಿತ್ತು.

ಘಟನೆ ನಡೆದ ಸ್ಥಳದ ವ್ಯಾಪ್ತಿಯ ಹರಿಹರ ಗ್ರಾಮಾಂತರ ಪೊಲೀಸ್ ಠಾಣೆಗೆ ಪ್ರಕರಣ ವರ್ಗಾವಣೆ ಮಾಡಲಾಗಿತ್ತು.

# ಡಿ.ಕೆ.ಶಿವಕುಮಾರ್ ಹುಟ್ಟುಹಬ್ಬ ವಿಜೃಂಭಣೆಯಿಂದ ಆಚರಣೆ ಇಂದು: ಬೋಯಪಾಟಿ ವಿಷ್ಣುವರ್ಧನ್



**ಬಳ್ಳಾರಿ, ಮೇ 14.** ಕೆಪಿಸಿಸಿ ಅಧ್ಯಕ್ಷರು ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಹುಟ್ಟುಹಬ್ಬದ ಪ್ರಯುಕ್ತರ ಶುಕ್ರವಾರ ಬಳ್ಳಾರಿ ಜಿಲ್ಲಾ ಕಾಂಗ್ರೆಸ್ ಸಮಿತಿಯಿಂದ ಹಮ್ಮಿಕೊಳ್ಳುವ ಕಾರ್ಯಕ್ರಮಗಳ ವಿವರಗಳು ಈ ಕೆಳಗಿನಂತಿವೆ.

ಬಳ್ಳಾರಿ ನಗರದ ಕನಕದುರ್ಗಮ್ಮ ದೇವಸ್ಥಾನದಲ್ಲಿ, ಡಿಸಿಎಂ ಹೆಸರಿನಲ್ಲಿ ವಿಶೇಷ ಪೂಜಾ ಕಾರ್ಯಕ್ರಮವನ್ನು ಪೂಜ್ಯ ಮಹಾಪೌರರಾದ ಪಿ.ಗಾದೆಪ್ಪ ಅವರು ಹಮ್ಮಿಕೊಳ್ಳಲಿದ್ದಾರೆ.

ಬಡವರಿಗೆ ಹಾಗೂ ಸಾರ್ವಜನಿಕ ಭಕ್ತಾದಿಗಳಿಗೆ ಅನ್ನ ಪ್ರಸಾದ ಹಾಗೂ ಉಪಹಾರ ವ್ಯವಸ್ಥೆಯನ್ನು ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್.ಆಂಜನೇಯಲು ಅವರು ಏರ್ಪಡಿಸಲಿದ್ದಾರೆ. ಬಳ್ಳಾರಿ ಜಿಲ್ಲಾ ಯೂತ್ ಕಾಂಗ್ರೆಸ್ ಸಮಿತಿಯಿಂದ ಕೇಕ್ ಕತ್ತರಿಸಲಾಗುವುದು.

ಕೆಪಿಸಿಸಿ ವತಿಯಿಂದ ಮತ್ತು ಬಳ್ಳಾರಿ ಜಿಲ್ಲಾ ಕಾಂಗ್ರೆಸ್ ಸಮಿತಿಯ ವತಿಯಿಂದ ಬಡವರಿಗೆ ಕಿಟ್ ವಿತರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಿದ್ದಾರೆ ಡಿಕೆಶಿ ಹುಟ್ಟುಹಬ್ಬದ ಆಚರಣೆಯನ್ನು ಅರ್ಥಪೂರ್ಣವಾಗಿ, ವಿಜೃಂಭಣೆಯಿಂದ ಆಚರಿಸಲಾಗುತ್ತದೆ ಎಂದು ಬೋಯಪಾಟಿ ವಿಷ್ಣುವರ್ಧನ್ ತಿಳಿಸಿದ್ದಾರೆ.

# ಹೆಲ್ಮೆಟ್ ಜಾಗೃತಿಗೆ ಚಾಲನೆ ನೀಡಿ ಬೈಕ್ ಸವಾರಿ ಮಾಡಿದ ಡಿಸಿ

**ಬಳ್ಳಾರಿ, ಮೇ.14–**ಜಿಲ್ಲೆಯಲ್ಲಿ ರಸ್ತೆ ಸುರಕ್ಷತೆ ಮತ್ತು ಸಾರ್ವಜನಿಕರ ಜೀವ ರಕ್ಷಣೆಗಾಗಿ ದ್ವಿಚಕ್ರ ವಾಹನ ಸವಾರರಿಗೆ ಹೆಲ್ಮೆಟ್ ಧರಿಸುವುದನ್ನು ಕಡ್ಡಾಯಗೊಳಿಸಲಾಗಿದೆ. ನಾಗರಿಕರ ಪ್ರಾಣ ರಕ್ಷಣೆಯು ಕಾನೂನಿನ ಮುಖ್ಯ ಉದ್ದೇಶವಾಗಿದ್ದು, ಸಾರ್ವಜನಿಕರು ಪಾಲಿಸಬೇಕು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಹೇಳಿದರು.

ಕಾನೂನು ಎಂಬುದು ಸಾರ್ವಜನಿಕರ ಹಿತರಕ್ಷಣೆಗಾಗಿ ನಾವೇ ಮಾಡಿಕೊಂಡಿರುವುದು ಎಂಬ ಅರಿವು ಎಲ್ಲರಲ್ಲಿ ಇರಬೇಕು. ಹೆಲ್ಮೆಟ್ ಕಡ್ಡಾಯದಿಂದ ವಿನಾಯಿತಿ ನೀಡುವಂತೆ ಯಾರೂ ಮನವಿ ಮಾಡಬಾರದು. ವಿನಾಯಿತಿ ಕೇಳುವುದು ಎಂದರೆ ಜನರ ಪ್ರಾಣ ರಕ್ಷಣೆ ಮಾಡಬೇಡಿ ಮತ್ತು ಕುಟುಂಬದ ಬಗ್ಗೆ ಕಾಳಜಿ ಇಲ್ಲ ಎಂದು ಹೇಳಿದಂತೆ



ಎಂದು ಅವರು ತಿಳಿಸಿದರು.

ಬಳ್ಳಾರಿಯ ಜನರು ಈಗಾಗಲೇ ಸಕಾಲ ಸೇವೆ ಮತ್ತು ಜನಗಣತಿ ಕಾರ್ಯಗಳಲ್ಲಿ ರಾಜ್ಯದಲ್ಲೇ ನಂಬರ್ ಒನ್ ಸ್ಥಾನ ಪಡೆದು ತಮ್ಮ ಇಚ್ಛಾಶಕ್ತಿಯನ್ನು ಸಾಬೀತುಪಡಿಸಿದ್ದಾರೆ. ಅದೇ ರೀತಿ ರಸ್ತೆ ಸುರಕ್ಷತಾ ನಿಯಮಗಳನ್ನು ಪಾಲಿಸುವ ಮೂಲಕ ಜಿಲ್ಲೆಯ ಹೆಸರನ್ನು ಎತ್ತಿಹಿಡಿಯಬೇಕು ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಸುಮನ್ ಡಿ.ಪೆನ್ನೇಕರ್ ಮಾತನಾಡಿ, ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಸಂಭವಿಸಿದ ಬೈಕ್ ಅಪಘಾತಗಳ ಅಂಕಿಅಂಶಗಳು ಆತಂಕಕಾರಿಯಾಗಿದ್ದು, ಪ್ರತಿಯೊಬ್ಬ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸುವ ಮೂಲಕ ತಮ್ಮ ಜೀವ ರಕ್ಷಿಸಿಕೊಳ್ಳಬೇಕು ಎಂದು ಹೇಳಿದರು.

ಬಳ್ಳಾರಿ ಜಿಲ್ಲೆಯೊಂದರಲ್ಲೇ ಕಳೆದ ಮೂರು ವರ್ಷಗಳಲ್ಲಿ (2023 ರಿಂದ 2026ರ ಏಪ್ರಿಲ್ ವರೆಗೆ) ಬೈಕ್ ಅಪಘಾತಗಳಿಂದಾಗಿ ಒಟ್ಟು 462 ಜನರು ಸಾವನ್ನಪ್ಪಿದ್ದಾರೆ. ಜಿಲ್ಲೆಯಲ್ಲಿ ಸರಾಸರಿ ಎರಡು ದಿನಕ್ಕೆ ಒಂದು ಸಾವು ಬೈಕ್ ಅಪಘಾತದಿಂದ ಸಂಭವಿಸುತ್ತಿದೆ.

ಅಂದರೆ ವರ್ಷಕ್ಕೆ 150ಕ್ಕೂ ಹೆಚ್ಚು ಮಂದಿ ಜೀವ ಕಳೆದುಕೊಳ್ಳುತ್ತಿದ್ದಾರೆ ಎಂದು ಅಂಕಿ–ಅಂಶ ವಿವರಿಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ಮಾತನಾಡಿ, ಇಂದಿನ ಕಾಲದಲ್ಲಿ ಜನರು ತಾವು ಬಳಸುವ ಬೆಲೆಬಾಳುವ ಮೊಬೈಲ್ ಫೋನ್‌ಗಳಿಗೆ ನೀಡುವಷ್ಟೂ ಸುರಕ್ಷತೆಯನ್ನು ತಮ್ಮ ಜೀವಕ್ಕೆ ನೀಡುತ್ತಿಲ್ಲ ಎಂಬುದು ವಿಷಾದನೀಯ ಸಂಗತಿಯಾಗಿದೆ ಎಂದು ಹೇಳಿದರು.

# ಒಡಿಶಾ ಮೂಲದ 37 ಜೀತದಾಳುಗಳ ರಕ್ಷಣೆ: ಇಟ್ಟಿಗೆ ಕಾರ್ಖಾನೆಯಲ್ಲಿ ಕೆಲಸ ಮಾಡುತ್ತಿದ್ದವರನ್ನು ರಕ್ಷಿಸಿ ಸ್ವಂತರಾಜ್ಯ ಒಡಿಶಾಗೆ ರವಾನೆ

**ಹೊಸಪೇಟೆ (ವಿಜಯನಗರ), ಮೇ 14:** ತಾಲ್ಲೂಕಿನ ಮರಿಯಮ್ಮನಹಳ್ಳಿ ಹೋಬಳಿಯ ನಂದಿಬಂಡಿ ಎಂಬಲ್ಲಿ ಇಟ್ಟಿಗೆ ಬಟ್ಟಿಯಲ್ಲಿ ಜೀತದಾಳುಗಳಾಗಿದ್ದ ಒಡಿಶಾದ 37 ಮಂದಿಯನ್ನು ಜಿಲ್ಲಾಡಳಿತ ರಕ್ಷಿಸಿದ್ದು, ಗುರುವಾರ ರೈಲಿನಲ್ಲಿ ಅವರ ರಾಜ್ಯಕ್ಕೆ ಕಳುಹಿಸಿಕೊಟ್ಟಿದೆ. ಜೀತ ಪದ್ಧತಿ ನಡೆಯುತ್ತಿರುವ ಕುರಿತು ಸರ್ಕಾರೇತರ ಸಂಘಟನೆ ಬೆಳಗಾವಿಯ ಸ್ಪಂದನ ಅಸೋಸಿಯೇಷನ್ ಜಿಲ್ಲಾಡಳಿತಕ್ಕೆ ಮಾಹಿತಿ ನೀಡಿತ್ತು. ಅದರಂತೆ ಶೆಡ್‌ಗಳಲ್ಲಿ ಕೂಡಿಹಾಕಿ ಬಲವಂತದಿಂದ ಕೆಲಸ ಮಾಡುತ್ತಿದ್ದ 37 ಮಂದಿಯನ್ನು ಮಂಗಳವಾರ ರಕ್ಷಿಸಿ ನಗರದ ಸರ್ಕಾರಿ ಹಾಸ್ಟೆಲ್ ಒಂದರಲ್ಲಿ ಇರಿಸಲಾಗಿತ್ತು. ಗುರುವಾರ ಅವರನ್ನು ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ, ಎಸ್‌ಪಿ ಎಸ್. ಜಾಹ್ನವಿ, ಉಪವಿಭಾಗಾಧಿಕಾರಿ ಪಿ.ವಿವೇಕಾನಂದ ಹಾಗೂ ಇತರ



ಅಧಿಕಾರಿಗಳು ಇಲ್ಲಿನ ರೈಲು ನಿಲ್ದಾಣದ ಮೂಲಕ ಒಡಿಶಾಕ್ಕೆ ಕಳುಹಿಸಿಕೊಟ್ಟರು.

ನಂದಿಬಂಡಿಯ ಸಣ್ಣ ದುರುಗಪ್ಪ ಅವರ 2.64 ಎಕರೆ ಜಮೀನು ಮತ್ತು ಸರ್ಕಾರಕ್ಕೆ ಸೇರಿದ 1.61 ಎಕರೆ ಜಮೀನಿನಲ್ಲಿ ಆಂಧ್ರಪ್ರದೇಶದ ನೆಲ್ಲೂರಿನ ಶ್ರೀನಿವಾಸ ಎಂಬುವವರು ಇಟ್ಟಿಗೆ ಕೆಲಸ ಮಾಡಲು ಈ ಕಾರ್ಮಿಕರನ್ನು ಶೆಡ್‌ನಲ್ಲಿ ಕೂಡಿ ಹಾಕಿದ್ದರು. ಈ ಬಗ್ಗೆ ಮರಿಯಮ್ಮನಹಳ್ಳಿ ಪೊಲೀಸ್ ಠಾಣೆಯಲ್ಲಿ ಕಾರ್ಮಿಕ ಇಲಾಖೆಯ ನಿರೀಕ್ಷಕ ಜಿ.ಬಿ.ದೂಪದ್ ಅವರು ದೂರು ನೀಡಿದ ಮೇರೆಗೆ ಶ್ರೀನಿವಾಸ್, ಮಹಾದೇವರಾವ್ ಮತ್ತು ವೆಂಕಟಪ್ರಸಾದ್ ಎಂಬುವವರ ವಿರುದ್ಧ ಪ್ರಕರಣ ದಾಖಲಾಗಿದೆ. ಜೀತ ಪದ್ಧತಿಗೆ ಸಿಲುಕಿದ್ದ 37 ಮಂದಿಯಲ್ಲಿ 16 ಪುರುಷರು, 11 ಮಹಿಳೆಯರು ಹಾಗೂ 10 ಮಂದಿ ಮಕ್ಕಳು ಇದ್ದರು. ಇವರೆಲ್ಲ ಒಡಿಶಾದ ಬಲಂಗೀರ್ ಮತ್ತು ನವರಂಗ್‌ಪುರ ಜಿಲ್ಲೆಯವರು. ಆರು ತಿಂಗಳ ಹಿಂದೆ ಇವರನ್ನು ಇಲ್ಲಿಗೆ ಕರೆತರಲಾಗಿತ್ತು.ಪ್ರತಿ ವ್ಯಕ್ತಿಗೆ 40,000 ಮುಂಗಡ ಹಣ ನೀಡಿ ಇಲ್ಲಿಗೆ ಕರೆತರಲಾಗಿತ್ತು. ಆರಂಭದಲ್ಲಿ ಆರು ತಿಂಗಳ ಅವಧಿಗೆ ಅಷ್ಟೇ ಕೆಲಸ ಮಾಡಿಸುವುದಾಗಿ ಹೇಳಲಾಗಿತ್ತು ಮತ್ತು ಕೆಲಸದ ಆಧಾರದ ಮೇಲೆ ಹಣ ನೀಡುತ್ತೇವೆ ಎಂಬ ಭರವಸೆ ನೀಡಲಾಗಿತ್ತು. ಅದರಂತೆ ಹಣದ ಆಸೆಗೆ ವಾರವಿಡೀ ಮೈ ಮುರಿದು ಕೆಲಸ ಮಾಡಿದರೂ ಇವರ ಒಂದು ಕುಟುಂಬಕ್ಕೆ ವಾರಕ್ಕೆ ನೀಡುತ್ತಿದ್ದ ಹಣ ಕೇವಲ 500 ಎಂಬುದನ್ನು ಕಾರ್ಮಿಕರು ಹೇಳಿದರು.

ಕಾರ್ಮಿಕರಿಗೆ ನೆಮ್ಮದಿ– ಕವಿತಾ ಎಸ್.ಮನ್ನಿಕೇರಿ, ಜಿಲ್ಲಾಧಿಕಾರಿಇದು ಅತ್ಯಂತ ಆಘಾತಕಾರಿ ಘಟನೆಯಾಗಿದೆ. ಜೀತ ಪದ್ಧತಿಯಂತಹ ಅನಿಷ್ಠ ಪದ್ಧತಿಯನ್ನು ಬೆಂಬಲಿಸುವವರ ವಿರುದ್ಧ ಈಗಾಗಲೇ ಮರಿಯಮ್ಮನಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದ್ದು, ತಪ್ಪಿತಸ್ಥರಿಗೆ ಕಠಿಣ ಶಿಕ್ಷೆಯಾಗುವಂತೆ ಕ್ರಮ ಕೈಗೊಳ್ಳಲಾಗುವುದು.

# ಆದಾಯಕ್ಕೆ ಅಂತಾರಾಜ್ಯ ಸಂಚಾರವೇ ಗತಿ, ರಾಜ್ಯ ಸರಕಾರದಿಂದ ಶಕ್ತಿ ಯೋಜನೆ ಹಣ ವಿಳಂಬ



**ರಾಯಚೂರು, ಮೇ. 14:** ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ವ್ಯಾಪ್ತಿಯ ಜಿಲ್ಲೆಗಳಿಂದ ಆಂಧ್ರ, ತೆಲಂಗಾಣ ಮತ್ತು ಮಹಾರಾಷ್ಟ್ರದತ್ತ ಸಂಚರಿಸುವ ಬಸ್‌ಗಳ ಸಂಖ್ಯೆ ತುಸು ಏರಿಕೆ ಮಾಡಲಾಗಿದೆ. ಶಕ್ತಿ ಯೋಜನೆಯ ಹಣ ಸರಕಾರದಿಂದ ಸಕಾಲಕ್ಕೆ ಬಾರದ ಹಿನ್ನೆಲೆ, ಸೀಜನ್ ವೇಳೆ ಹರಿದುಬರುವ ಆದಾಯ ನೇರವಾಗಿ ಪಡೆಯಲು ಈ ಮಾರ್ಗ ಅನುಸರಿಸಲಾಗುತ್ತಿದೆ. ಸಿಎಂ ಸಿದ್ದರಾಮಯ್ಯನವರ ನೇತೃತ್ವದ ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ ಬಂದ ಬಳಿಕ ಗ್ಯಾರಂಟಿ ಯೋಜನೆಗಳಲ್ಲೊಂದಾದ ಶಕ್ತಿ ಮೂಲಕ ಮಹಿಳೆಯರು ಸರಕಾರಿ ಬಸ್‌ಗಳಲ್ಲಿ ರಾಜ್ಯಾದ್ಯಂತ ಉಚಿತವಾಗಿ ಪ್ರಯಾಣಿಸುತ್ತಿದ್ದಾರೆ. ಆದರೆ, ಶಕ್ತಿ ಯೋಜನೆಗಾಗಿ ವ್ಯಯ ಮಾಡಿದ ಹಣ ಸಾರಿಗೆ ಇಲಾಖೆಗೆ ಕಾಲಕಾಲಕ್ಕೆ ಸಂದಾಯವಾಗುತ್ತಿಲ್ಲ ಎಂಬ ಆರೋಪಗಳಿವೆ.

**ಅಂತಾರಾಜ್ಯ ಬಸ್‌ಗಳ ಸಂಖ್ಯೆ ಏರಿಕೆ:** ಈ ಹಿನ್ನೆಲೆ 'ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ' ಈ ಹೊರೆಯನ್ನು ತಾತ್ಕಾಲಿಕವಾಗಿ ತಗ್ಗಿಸಿಕೊಳ್ಳಲು ಪರ್ಯಾಯ ಮಾರ್ಗ ಕಂಡುಕೊಂಡಿದೆ. ಅಂತಾರಾಜ್ಯದಲ್ಲಿ ಸಂಚರಿಸುವ ಬಸ್‌ಗಳ ಸಂಖ್ಯೆಯನ್ನು ಸ್ವಲ್ಪ ಹೆಚ್ಚಿಸುವ ಮೂಲಕ ನೇರ ಆದಾಯ ಮಾಡಿಕೊಳ್ಳುತ್ತಿದೆ.

ರಾಜ್ಯದೊಳಗೆ ಸಂಚರಿಸುವ ಬಸ್‌ಗಳಿಗಷ್ಟೇ ಉಚಿತ ಪ್ರಯಾಣದ ನಿಯಮ ಅನ್ವಯವಾಗುತ್ತದೆ. ಆಯಾ ಜಿಲ್ಲೆಯ ಸಾರಿಗೆ ಬಸ್‌ಗಳು ಹೊರ ರಾಜ್ಯಕ್ಕೂ ಹೋಗುತ್ತಿದ್ದರೆ ಅಂತಹ ಬಸ್‌ಗಳಲ್ಲಿ ಸಂಚರಿಸುವವರಿಗೆ ಉಚಿತ ನಿಯಮ ಅನ್ವಯವಾಗುವುದಿಲ್ಲ. ಹಾಗಾಗಿ, ಕಲ್ಯಾಣ ಕರ್ನಾಟಕ ಸಾರಿಗೆ ನಿಗಮ ವ್ಯಾಪ್ತಿಯ ವಿಜಯಪುರ, ಕಲಬುರಗಿ, ರಾಯಚೂರು, ಬೀದರ್, ಕೊಪ್ಪಳ, ಯಾದಗಿರಿ, ವಿಜಯನಗರ, ಬಳ್ಳಾರಿ ಜಿಲ್ಲೆಗಳಿಂದ ಕಳೆದ ಒಂದೂವರೆ ತಿಂಗಳಿಂದ ಮಹಾರಾಷ್ಟ್ರ, ತೆಲಂಗಾಣ ಮತ್ತು ಆಂಧ್ರಪ್ರದೇಶಕ್ಕೆ ತೆರಳುವ ಬಸ್‌ಗಳನ್ನು ಓಡಿಸಲಾಗುತ್ತಿದೆ. ಇದರಿಂದ ನಿಗಮಕ್ಕೆ ಕನಿಷ್ಠ ಆದಾಯ ನೇರವಾಗಿ ಬರಲು ಸಾಧ್ಯವಾಗಿದ್ದು, ವ್ಯಾಪ್ತಿಯ ನಾನಾ ಘಟಕಗಳ ಸಣ್ಣಪುಟ್ಟ ಖರ್ಚು ಸರಿದೂಗಿಸಿಕೊಳ್ಳಲು ಇದರಿಂದ ಅನುಕೂಲವಾಗಿದೆ ಎನ್ನುತ್ತವೆ ಮೂಲಗಳು.

**ಏಕೆ ಈ ನಿಯಮ:** ಸಾಮಾನ್ಯವಾಗಿ ಮಾರ್ಚ್, ಏಪ್ರಿಲ್, ಮೇ ಹಾಗೂ ಜೂನ್ ಆರಂಭದವರೆಗೆ ಬೇರೆ ಬೇರೆ ಕಡೆಯ ಶಾಲೆ–ಕಾಲೇಜುಗಳಲ್ಲಿತಮ್ಮ ಮಕ್ಕಳಿಗೆ ಪ್ರವೇಶ ಕೊಡಿಸಲು, ಮದುವೆ, ಗೃಹಪ್ರವೇಶ ಇತ್ಯಾದಿ ಶುಭಕಾರ್ಯಗಳಲ್ಲಿಪಾಲ್ಗೊಳ್ಳಲು, ರಜೆಯ ಮಜಾ ಅನುಭವಿಸಲು ಪಾಲಕರು ತಮ್ಮ ಮಕ್ಕಳೊಂದಿಗೆ ಹೊರರಾಜ್ಯಕ್ಕೂ ಹೊರಡುವುದರಿಂದ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಈ ಅವಧಿಯನ್ನು ಸೀಜನ್ ಎಂದು ಪರಿಗಣಿಸಿದೆ.

ಅಂತಾರಾಜ್ಯಕ್ಕೆ ತೆರಳುವ ಸರಕಾರಿ ಬಸ್‌ಗಳಲ್ಲಿ ಸಂಚರಿಸುವ ಮಹಿಳೆಯರಿಗೆ ಉಚಿತ ನಿಯಮ ಅನ್ವಯವಾಗದೇ ಇರುವುದರಿಂದ ನೇರ ಆದಾಯ ಪಡೆಯಬಹುದು ಎಂಬ ಉದ್ದೇಶ ಹೊಂದಲಾಗಿದೆ ಎನ್ನುತ್ತವೆ ಕೆಕೆಆರ್‌ಟಿಸಿ ಮೂಲಗಳು. ಹಾಗಾಗಿ, ಮಹಾರಾಷ್ಟ್ರ, ಕರ್ನೂಲು, ಹೈದರಾಬಾದ್ ಮತ್ತು ಗದ್ವಾಲ್‌ಗೆ ಸಂಚರಿಸುವ ಬಸ್‌ಗಳ ಸಂಖ್ಯೆ ತುಸು ಹೆಚ್ಚಿಸಲಾಗಿದೆ.

**ಎಲ್ಲಿಗೆ ಎಷ್ಟು ಬಸ್:** ಈ ಮುಂಚೆ ಹೈದರಾಬಾದ್‌ಗೆ ರಾಯಚೂರು ರಸ್ತೆ ಸಾರಿಗೆ ಸಂಸ್ಥೆಯಿಂದ ಪ್ರತಿದಿನ ಹೋಗುವುದಕ್ಕೆ ಹಾಗೂ ಬರುವುದಕ್ಕೆ 9 ಬಸ್ ಬಳಕೆಯಾಗುತ್ತಿದ್ದವು. ಸದ್ಯ ಕಳೆದ ಒಂದೂವರೆ ತಿಂಗಳಿಂದ ಹೆಚ್ಚುವರಿಯಾಗಿ 10 ಬಸ್‌ಗಳು ಈ ಮಾರ್ಗದಲ್ಲಿ ಸಂಚರಿಸುತ್ತಿವೆ. ಇದೇ ವೇಳೆ ಕರ್ನೂಲಿಗೆ ಈ ಹಿಂದೆ 6 ಬಸ್‌ಗಳು ಸಂಚರಿಸುತ್ತಿದ್ದವು. ಇದೀಗ ಹೆಚ್ಚುವರಿ 5 ಬಸ್ ಸಂಚರಿಸುತ್ತಿವೆ. ಗದ್ವಾಲ್‌ಗೆ ಈ ಮುಂಚೆ 3 ಬಸ್ ಸಂಚರಿಸುತ್ತಿದ್ದವು, ಇದೀಗ 4 ಹೆಚ್ಚುವರಿ ಬಸ್‌ಗಳು ಸಂಚರಿಸುತ್ತಿವೆ. ಆಂಧ್ರ ಮತ್ತು ತೆಲಂಗಾಣಗೆ ಒಮ್ಮೆ ಹೋಗಿ ಬರುವ ಬಸ್‌ನಿಂದ ದಿನಕ್ಕೆ ಸರಾಸರಿ 18 ರಿಂದ 20 ಸಾವಿರ ರೂ. ಆದಾಯ ಬರುತ್ತದೆ. ಒಟ್ಟಾರೆ, ರಾಯಚೂರು ಘಟಕವೊಂದಕ್ಕೇ ಪ್ರತಿದಿನ ಸರಾಸರಿ 2.5 ಲಕ್ಷಕ್ಕೂ ಹೆಚ್ಚು ಆದಾಯ ನೇರವಾಗಿ ಬರುತ್ತದೆ. ಈಗಾಗಲೇ ಕಳೆದ ಒಂದೂವರೆ ತಿಂಗಳಿಂದ ಅಂತಾರಾಜ್ಯ ಮಾರ್ಗ ದಲ್ಲಿ ಬಸ್‌ಗಳು ಸಂಚರಿಸುತ್ತಿದ್ದು, ಬಹುತೇಕ ಜೂನ್‌ವರೆಗೆ ಈ ಬಸ್‌ಗಳು ಸಂಚರಿಸಲಿವೆ ಎನ್ನುತ್ತವೆ ಕೆಕೆಆರ್‌ಟಿಸಿ ಮೂಲಗಳು.

**ನಾನಾ ಕಡೆ ಹೆಚ್ಚುವರಿ ಬಸ್ ಸಂಚಾರ:** ರಾಯಚೂರು ಮಾತ್ರವಲ್ಲದೇ ಬೀದರ್‌ನ ಭಾಲ್ಕಿಯಿಂದ ಹೈದರಾಬಾದ್‌ಗೆ – 2, ಬೀದರ್–ಪುಣೆ–5, ಕಲಬುರಗಿ–ಪುಣೆ–5, ಕಲಬುರಗಿ–ಹೈದರಾಬಾದ್–5, ಯಾದಗಿರಿ–ಪುಣೆ–2, ಸುರಪುರ–ಹೈದರಾಬಾದ್–2, ಬಳ್ಳಾರಿ–ಹೈದರಾಬಾದ್–2, ಗಂಗಾವತಿ–ಹೈದರಾಬಾದ್–2, ವಿಜಯಪುರ–ಮುಂಬೈ–1, ತಾಳಿಕೋಟೆ–ಮುಂಬೈ–1, ವಿಜಯಪುರ–ಸೊಲ್ಲಾಪುರ–4 ಬಸ್‌ಗಳು ಒಂದೂವರೆ ತಿಂಗಳಿಂದ ಹೆಚ್ಚುವರಿಯಾಗಿ ಸಂಚರಿಸುತ್ತಿವೆ.



ಮೈಸೂರು ನಗರದಲ್ಲಿ ಗುರುವಾರ ಮಧ್ಯಾಹ್ನ ಮುಂಗಾರುಪೂರ್ವ ಮಳೆ ಬಂದು ವಾತಾವರಣ ತಂಪಾಗಿಸಿತ್ತು.

## ಮೋದಿ ಮಾಸ್ ಲೀಡರ್, ಅವರನ್ನು ಹೊಗಳುತ್ತಿಲ್ಲ, ವಾಸ್ತವ ಹೇಳುತ್ತಿದ್ದೇನೆ: ಕೆ.ಎನ್.ರಾಜಣ್ಣ



**ಮಧುಗಿರಿ, ಮೇ 14:** ಇಂದಿರಾ ಗಾಂಧೀಯವರ ನಂತರ ಮಾಸ್ ಲೀಡರ್ ಯಾರಾದರೂ ಇದ್ದರೆ ಅದು ಮೋದಿ ಅವರೇ ಎಂದು ಮಾಜಿ ಸಚಿವ ಕೆ.ಎನ್. ರಾಜಣ್ಣ ಬಣ್ಣಿಸಿದ್ದಾರೆ.

ಹಾಗೆಂದ ಮಾತ್ರಕ್ಕೆ ನಾನು ಮೋದಿ ಯವರನ್ನು ಹೊಗಳುತ್ತಿಲ್ಲ. ವಾಸ್ತವಾಂಶ ಹೇಳುತ್ತಿದ್ದೇನೆ. ರಾಜಕಾರಣದಲ್ಲಿ ಪಾಪ್ಯುಲಾರಿಟಿ ಯಾರಿಗೂ ಶಾಶ್ವತ ಅಲ್ಲ. ಇದನ್ನು ಮೊದಲು ಮೋದಿ ಯವರು ಅರಿಯಬೇಕು ಎಂದರು.

ಸುದ್ದಿಗಾರರ ಜತೆ ಮಾತನಾಡಿದ ಅವರು, ಈ ಹಿಂದೆ ದಿವಂಗತ ಪ್ರಧಾನಿ ಇಂದಿರಾಗಾಂಧಿಯವರ ಹೆಸರು ಹೇಳಿಕೊಂಡೇ 200 ಎಂಪಿಗಳು ಗೆಲ್ಲುತ್ತಿದ್ದರು. ಅಂತಹವರೇ ಪರಿಸ್ಥಿತಿಯ ಒತ್ತಡಗಳಿಗೆ ಸಿಲುಕಿ ಸ್ವಯಂ ಸೋಲು ಅನುಭವಿಸ ಬೇಕಾಯಿತು. ರಾಜಕಾರಣದಲ್ಲಿ ಜನಪ್ರಿಯತೆ ಯಾರಿಗೂ ಶಾಶ್ವತ ಅಲ್ಲ ಎಂದರು.

**ರಾಜ್ಯದ ಆಂತರಿಕ ವಿಚಾರ ಪ್ರಧಾನಿಗೇಕೆ?:** ಇತ್ತೀಚೆಗೆ ರಾಜ್ಯಕ್ಕೆ ಭೇಟಿ ನೀಡಿದ್ದ ಮೋದಿ ಅವರು, ಸಿಎಂ ಕುರ್ಚಿ ಅಲುಗಾಡುತ್ತಿದೆ ಎಂದಿದ್ದರು. ರಾಜ್ಯ ಕಾಂಗ್ರೆಸ್ ಪಕ್ಷದ ಆಂತರಿಕ ವಿಚಾರ ಪ್ರಧಾನಿಗೇಕೆ. ಸಿಎಂ ಕುರ್ಚಿ ಅಲುಗಾಡುತ್ತಿದೆಯೋ ಇಲ್ಲವೋ ಎಂಬುದು ಪಕ್ಷದ ಆಂತರಿಕ ವಿಚಾರ. ಆಡಳಿತ ಯಂತ್ರ ದುರುಪಯೋಗ ಮಾಡಿಕೊಂಡು ಪಶ್ಚಿಮ ಬಂಗಾಳದಲ್ಲಿ ಚುನಾವಣೆ ಗೆದ್ದಿದ್ದು, ಆದರೂ ಜನಾದೇಶಕ್ಕೆ ತಲೆಬಾಗಲೇಬೇಕು ಎಂದು ರಾಜಣ್ಣ ಹೇಳಿದರು.

**ಮೋದಿ ಭೂಮಿಗಿಳಿದು ಮಾತನಾಡಲಿ:** ಪ್ರಧಾನಿ ಮೋದಿಯವರು ಬಂಗಾರ ಖರೀದಿಸಬೇಡಿ ಎಂದು ಹೇಳಿಕೆ ನೀಡಿರುವ 2ವಿಚಾರದ ಬಗ್ಗೆ ಮಾತನಾಡಿ ಅವರು, ಭೂಮಿಯ ಮೇಲಿಲ್ಲ ಆಕಾಶದಲ್ಲಿದ್ದು, ಆಕಾಶದಿಂದ ಮಾತನಾಡುವ ಗಾಳಿಮಾತುಗಳಿಗೆ ಅರ್ಥವಿಲ್ಲ.

ಮೊದಲು ಅವರು ಆಕಾಶದಿಂದ ಕೆಳಗಿಳಿದು ನಂತರ ಮಾತನಾಡಲಿ ಎಂದರು. ತಮಿಳು ನಾಡಿನ ನೂತನ ಸಿಎಂ ವಿಜಯ್‌ರವರಿಗೆ ರಾಹುಲ್ ಗಾಂಧಿಯವರು ಅಭಿನಂದನೆ ಸಲ್ಲಿಸಿದ್ದು, ಅವರು ಅಭಿನಂದನೆ ಸಲ್ಲಿಸಿದರೆ ದೇಶದ ಎಲ್ಲ ಕಾಂಗ್ರೆಸ್ ನಾಯಕರು ಅಭಿನಂದನೆ ಸಲ್ಲಿಸಿದಂತೆ. ಆದರೆ ವಿಜಯ್ ದಾರಿ ಮುಳ್ಳಿನ ಮೇಲಿನ ನಡಿಗೆಯಂತೆ ಕೆಲಕಾರಣಗಳನ್ನು ನೀಡಿ 700 ಮದ್ಯದಂಗಡಿಗಳನ್ನು ಮುಚ್ಚುವ ತೀರ್ಮಾನ ಕೈಗೊಂಡಿದ್ದು, ರಾಜ್ಯಕ್ಕೆ ಆದಾಯ ತರುವ ದಾರಿಗಳನ್ನೆಲ್ಲ ಮುಂಚಿಕೊಂಡು ಹೋದರೆ ಉಚಿತ ಕೊಡುಗೆಗಳಿಗೆ ಹಣ ಹೊಂದಿಸುವ ದಾರಿ ಎಲ್ಲಿದೆ. ಇದು ಅವರಿಗೆ ಅನುಭವದ ಕೊರತೆ ಇದೆ ಎಂಬುದನ್ನು ತೋರಿಸುತ್ತದೆ ಎಂದರು.

### ಬ್ರಿಮ್ಸ್ ಆವರಣದಲ್ಲಿ 36 ಕೋಟಿ ವೆಚ್ಚ

## ಕಿದ್ವಾಯಿ ಕ್ಯಾನ್ಸರ್ ಚಿಕಿತ್ಸಾ ಘಟಕಕ್ಕೆ ಖಂಡ್ರೆ ಶಂಕುಸ್ಥಾಪನೆ



**ಬೀದರ್, ಮೇ. 14:** ನಗರದ ಬ್ರಿಮ್ಸ್ ಆಸ್ಪತ್ರೆ ಆವರಣದಲ್ಲಿ 36 ಕೋಟಿ ಮೊತ್ತದ 100 ಹಾಸಿಗೆಗಳ ಕಿದ್ವಾಯಿ ಪೆರಿಫರಲ್ ಕ್ಯಾನ್ಸರ್ ಚಿಕಿತ್ಸಾ ಘಟಕ ನಿರ್ಮಾಣ ಕಾಮಗಾರಿಗೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಚಾಲನೆ ನೀಡಿದರು.

ಜಿಲ್ಲಾಡಳಿತ, ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಸಹಯೋಗದಲ್ಲಿ ಏರ್ಪಡಿಸಿದ್ದ ಕಾರ್ಯಕ್ರಮ ಉದ್ಘಾಟಿಸಿದ ಸಚಿವ ಈಶ್ವರ ಖಂಡ್ರೆ, ಇತ್ತೀಚಿನ ದಿನಗಳಲ್ಲಿ ಗುಟಕಾ, ತಂಬಾಕು ಸೇವನೆಯಿಂದ ಬಾಯಿ ಕ್ಯಾನ್ಸರ್ ಪ್ರಕರಣಗಳು ಹೆಚ್ಚುತ್ತಿದೆ. ಮಹಿಳೆಯರ ಸ್ತನ ಕ್ಯಾನ್ಸರ್ ಪ್ರಮಾಣವು ಏರಿಕೆಯಾಗುತ್ತಿರುವುದು ಆತಂಕಕಾರಿ. ಸಾರ್ವಜನಿಕರು ಗುಟ್ಕಾ, ತಂಬಾಕು ಸೇರಿದಂತೆ ಆರೋಗ್ಯಕ್ಕೆ ಹಾನಿಕಾರವಾದ ದುಶ್ಚಟಗಳಿಂದ ದೂರವಿರಬೇಕು. ಕ್ಯಾನ್ಸರ್ ಒಂದು ಅಪಾಯಕಾರಿ ಕಾಯಿಲೆಯಾಗಿದೆ. ಆರಂಭಿಕ ಹಂತದಲ್ಲಿ ಪತ್ತೆಯಾದರೆ ಸಂಪೂರ್ಣವಾಗಿ ಗುಣಪಡಿಸಬಹುದು ಎಂದರು.

ಬೀದರ್‌ನಲ್ಲಿ ಕಿದ್ವಾಯಿ ಸಂಸ್ಥೆಯ ಸಹಯೋಗದೊಂದಿಗೆ ಆಧುನಿಕ ಮತ್ತು ಸುಧಾರಿತ ತಂತ್ರಜ್ಞಾನ ಹೊಂದಿದ ಹೊಸ ಕ್ಯಾನ್ಸರ್ ಚಿಕಿತ್ಸಾ ಘಟಕ ನಿರ್ಮಾಣ ಆಗುತ್ತಿರುವುದು ಜಿಲ್ಲೆಯ ಜನತೆಗೆ ಉತ್ತಮ ಆರೋಗ್ಯ ಸೇವೆಯಾಗಲಿದೆ ಎಂದರು.

ಪೌರಾಡಳಿತ ಹಾಗೂ ಹಜ್ ಸಚಿವ ರಹೀಂ ಖಾನ್ ಮಾತನಾಡಿ, ಜಿಲ್ಲೆಯಲ್ಲಿ ನಾಲ್ಕು ಆಸ್ಪತ್ರೆಗಳು ಪ್ರಾರಂಭವಾಗುತ್ತಿದೆ. ಎಲ್ಲರಿಗೂ ಆರೋಗ್ಯ ಸಿಗುವಂತಾಗಬೇಕು. ಅದೇ ರೀತಿಯಲ್ಲಿ ಜನರಿಗೆ ಕ್ಯಾನ್ಸರ್ ಮಾರಕ ರೋಗದ ಗುಣಮಟ್ಟದ ಚಿಕಿತ್ಸೆ ದೊರೆಯುವಂತಾಗಲಿ ಎಂದರು.

## ಬಾಲ ಭಿಕ್ಷಾಟನೆ, ಬಾಲಕಾರ್ಮಿಕತೆ: ಮಕ್ಕಳನ್ನು ರಕ್ಷಿಸಲು ಹಮ್ಮಿಕೊಂಡ ಕಾರ್ಯಾಚರಣೆಗೆ ಚಾಲನೆ

**ಕಲಬುರಗಿ, ಮೇ. 14:** ನಗರವೂ ಸೇರಿದಂತೆ ಜಿಲ್ಲೆಯಲ್ಲಿ ಬಾಲ ಭಿಕ್ಷಾಟನೆ ಬಾಲಕಾರ್ಮಿಕತೆಯಲ್ಲಿ ತೊಡಗಿರುವ ಮಕ್ಕಳ ರಕ್ಷಿಸಲು ಹಮ್ಮಿಕೊಳ್ಳಲಾದ ಕಾರ್ಯಾಚರಣೆಗೆ ಕಲಬುರಗಿ ದಕ್ಷಿಣ ವಿಭಾಗದ ಎ.ಸಿ.ಪಿ.ರಾದ ಶರಣಪ್ಪ ಅವರು ಕಲಬುರಗಿ ಜಿಲ್ಲಾಧಿಕಾರಿಗಳ ಕಚೇರಿಯ ಮುಂಭಾಗದಲ್ಲಿ ಹಸಿರು ನಿಶಾನೆ ತೋರಿಸುವುದರ ಮೂಲಕ ಚಾಲನೆ ನೀಡಿದರು.

ಈ ಮಕ್ಕಳನ್ನು ಪೋಷಣೆ ಮತ್ತು ರಕ್ಷಣೆಗಾಗಿ ಸರ್ಕಾರಿ ಬಾಲಕರ ಹಾಗೂ ಬಾಲಕಿಯರ ಬಾಲಮಂದಿರಗಳಲ್ಲಿ ದಾಖಲಿಸಲಾಗಿದೆ. ಇದೇ ರೀತಿ ಸಾರ್ವಜನಿಕ ಸ್ಥಳಗಳಲ್ಲಿ ಬಾಲ ಭಿಕ್ಷಾಟನೆ ಮತ್ತು ಬಾಲ ಕಾರ್ಮಿಕತೆ ಮಕ್ಕಳು ಕಂಡು ಬಂದಲ್ಲಿ ಸಾರ್ವಜನಿಕರು ಮಕ್ಕಳ ಸಹಾಯವಾಣಿ 1098/112 ಗೆ ಕರೆ ಮಾಡಿ ತಿಳಿಸಬೇಕು. ಕರೆ ಮಾಡಿದವರ ಮಾಹಿತಿಯು ಗೌಪ್ಯವಾಗಿಡಲಾಗುತ್ತದೆ.



2026–27ನೇ ಸಾಲಿನ ವಾರ್ಷಿಕ ಕ್ರಿಯಾ ಯೋಜನೆಯಂತೆ ಪ್ರತಿ ಮಾಹೆಯ 2ನೇ ಹಾಗೂ 4ನೇ ಜಿಲ್ಲಾ ಹಾಗೂ ತಾಲ್ಲೂಕುಗಳ ಪ್ರಮುಖ ಸಾರ್ವಜನಿಕ ಸ್ಥಳಗಳಲ್ಲಿ ರಕ್ಷಣಾ ಕಾರ್ಯಾಚರಣೆ ಕೈಗೊಳ್ಳಲಾಗುತ್ತಿದ್ದು, ಕಲಬುರಗಿ ನಗರದ ಪ್ರಮುಖ ಸಾರ್ವಜನಿಕ ಸ್ಥಳಗಳಾದ ಶ್ರೀ ಶರಣಬಸವೇಶ್ವರ ದೇವಸ್ಥಾನ, ಮಾರ್ಕೆಟ್, ಗಂಜ, ಹುಮನಾಬಾದ ರಿಂಗ್ ರೋಡ್, ಖರ್ಗೆ ಪೆಟ್ರೋಲ್ ಪಂಪ್, ತಿಮ್ಮಾಪುರ ಸರ್ಕಲ್, ರೈಲ್ವೆ ಸ್ಟೇಷನ್, ರಾಮಮಂದಿರ, ವಿವಿಧ ಸ್ಥಳಗಳಲ್ಲಿ ರಕ್ಷಣಾ ಕಾರ್ಯಾಚರಣೆ ಕೈಗೊಂಡು 4 ಜನ ಮಕ್ಕಳನ್ನು ರಕ್ಷಣೆ ಮಾಡಲಾಗಿದೆ. ಅದರಲ್ಲಿ 1 ಹೆಣ್ಣು ಮಗು ಭಿಕ್ಷಾಟನೆ, 1 ಗಂಡು ಮಗು ಬಾಲಕಾರ್ಮಿಕತೆ ಹಾಗೂ ಎರಡು (1 ಗಂಡು ಮತ್ತು 1 ಹೆಣ್ಣು) ಚಿಂದಿ ಆಯುವ ಮಕ್ಕಳು ಸೇರಿದಂತೆ ಒಟ್ಟು 4 ಜನ ಮಕ್ಕಳನ್ನು ರಕ್ಷಣೆ ಮಾಡಿ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ಮುಂದೆ ಹಾಜರುಪಡಿಸಲಾಗಿದೆ.

ಕಲಬುರಗಿ ಜಿಲ್ಲೆಯಲ್ಲಿ ಬಾಲ ಭಿಕ್ಷಾಟನೆ ಹಾಗೂ ಬಾಲ ಕಾರ್ಮಿಕತೆಗೆ ಸಂಬಂಧಿಸಿದಂತೆ ಭಿಕ್ಷೆ ಬೇಡುವುದು, ಚಿಂದಿ ಆಯುವುದು, ಹೋಟೆಲ್‌ಗಳಲ್ಲಿ ಕೆಲಸ ಮಾಡುವುದು, ವಿವಿಧ ವಲಯಗಳಲ್ಲಿ ಮಕ್ಕಳು ಬಾಲ ಭಿಕ್ಷಾಟನೆ ಹಾಗೂ ಬಾಲ ಕಾರ್ಮಿಕತೆಯಲ್ಲಿ ಹೆಚ್ಚಾಗಿ ಕಂಡು ಬರುತ್ತಿರುವುದರಿಂದ ಜಿಲ್ಲಾಧಿಕಾರಿಗಳ ಆದೇಶದಂತೆ ಭಿಕ್ಷಾಟನೆಯನ್ನು ತಡೆಗಟ್ಟಲು ಹಾಗೂ ನಿಷೇಧಿಸಲು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಸಿಬ್ಬಂದಿಗಳು ಹಾಗೂ ಮಕ್ಕಳ ಸಹಾಯವಾಣಿ ಸಿಬ್ಬಂದಿಗಳು ಕಾರ್ಮಿಕ ಇಲಾಖೆ, ಪೊಲೀಸ್ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಶಿಕ್ಷಣ ಇಲಾಖೆ, ಡಾನ್ ಬಾಸ್ಕೋ ಸಂಸ್ಥೆ, ಮಾರ್ಗದರ್ಶಿ ಸಂಸ್ಥೆ ಹಾಗೂ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಜಿಲ್ಲಾ ಮಟ್ಟದಲ್ಲಿ ಕಾರ್ಯಚರಣೆಯನ್ನು ಕೈಗೊಳ್ಳಲಾಗಿದೆ ಎಂದು ಕಲಬುರಗಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ತಿಳಿಸಿದ್ದಾರೆ.

## ನಿರ್ಗಮಿತ ಜಿಲ್ಲಾಧಿಕಾರಿಗೆ ಆತ್ಮೀಯ ಬೀಳ್ಕೊಡುಗೆ, ನನಗೆ ಬೆಸ್ಟ್ ಅಧಿಕಾರಿಯನ್ನಾಗಿಸಿದ ಕಲಬುರಗಿ ಎಂದೂ ಮರೆಯಲ್ಲ: ಫೌಜಿಯಾ ತರನ್ನುಮ್



**ಕಲಬುರಗಿ, ಮೇ. 14:** ಕಳೆದ ಮೂರು ವರ್ಷಗಳ ಕಾಲ ಕಲಬುರಗಿಯಲ್ಲಿ ಸಲ್ಲಿಸಿದ ಸೇವೆ ತಮಗೆ ಸಂಪೂರ್ಣ ತೃಪ್ತಿ ನೀಡಿದೆ. ಜನರ ಸಹಾಯ ಸಹಕಾರದಿಂದ ನನ್ನನ್ನು ಉತ್ತಮ ಅಧಿಕಾರಿಯನ್ನಾಗಿ ರೂಪಿಸಿದ ಕಲಬುರಗಿ ಜಿಲ್ಲೆಗೆ ಚಿರಋಣಿಯಾಗಿದ್ದೇನೆ ಎಂದು ನಿರ್ಗಮಿತ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅಭಿಪ್ರಾಯಪಟ್ಟರು.

ಕಚೇರಿ ಸಿಬ್ಬಂದಿಗಳಿಂದ ಆಯೋಜಿಸಿದ ಬೀಳ್ಕೊಡುಗೆ ಸಮಾರಂಭದಲ್ಲಿ ಮಾತನಾಡಿದ ಅವರು, ಬಸವಣ್ಣನವರ ಕಾಯಕ ತತ್ವವನ್ನು ಅಕ್ಷರಸ ಪಾಲಿಸಿಕೊಂಡು ಜಿಲ್ಲೆಯ ಅಭಿವೃದ್ಧಿಗೆ ಪ್ರಮಾಣಿಕ ಪ್ರಯತ್ನ ಮಾಡಿದ್ದೇನೆ. ಇದಕ್ಕಾಗಿ ಸಹಕಾರ ನೀಡಿದ ಜಿಲ್ಲೆಯ ಜನಪ್ರತಿನಿಧಿಗಳು, ಆಡಳಿತ ವರ್ಗ, ಕಚೇರಿ ಸಿಬ್ಬಂದಿ, ಸಂಘ,–ಸಂಸ್ಥೆಗಳು, ಮಾಧ್ಯಮದವರು, ಸಾರ್ವಜನಿಕರಿಗೆ ಧನ್ಯವಾದ ತಿಳಿಸಲು ಇಚ್ಛಿಪಡುತ್ತೇನೆ ಎಂದರು.

ಕಲಬುರಗಿ ರೊಟ್ಟಿಗೆ ಬ್ರ್ಯಾಂಡ್ ನೀಡಿದ ಪರಿಣಾಮ ರೊಟ್ಟಿ ವಿದೇಶ ಮಾರಾಟಕ್ಕೆ ಲಗ್ಗೆ ಇಟ್ಟಿದ್ದು, ಇಲ್ಲಿನ ಅನೇಕ ಬಡ ಮಹಿಳೆಯರು ಸ್ವಯಂ ಉದ್ಯೋಗಕ್ಕೆ ಅವರ ಸಬಲೀಕರಣಕ್ಕೆ ಕಾರಣವಾಗಿದೆ. ಕೆಸರಟಗಿಯಲ್ಲಿ ಸುಮಾರು 320 ಬಡವರಿಗೆ ಮನೆ ಹಂಚಿಕೆ ಮಾಡಿದ್ದೇವೆ. ಡಬರಾಬಾದ ನಲ್ಲಿಯೂ ಮನೆ ಹಂಚಿಕೆಗೆ ಸಿದ್ಧವಾಗಿವೆ. ಕಲಬುರಗಿ ಮೃಗಾಲಯ ಉದ್ಘಾನಟೆಗೆ ಸಿದ್ಧಗೊಂಡಿದೆ ಎಂದು ತಮ್ಮ ಅವಧಿಯಲ್ಲಿ ಕೆಲಸ ಕಾರ್ಯಗಳನ್ನು ನೆನೆಸಿಕೊಂಡ ಅವರು, ಒಟ್ಟಿನಲ್ಲಿ ಕಲಬುರಗಿಯಲ್ಲಿ ಕೆಲಸ ನಿರ್ವಹಿಸಲು ಅವಕಾದ ಸಿಕ್ಕಿದಕ್ಕೆ ನಾನೇ ಲಕ್ಕಿ ಎಂದರು.

ನೂತನ ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಮಾತನಾಡಿ, ಜಿಲ್ಲಾಡಳಿತ ಮತ್ತು ಸರ್ಕಾರದ ಮೇಲೆ ಜನರ ಅಶೋತ್ತರಗಳು ಬೆಟ್ಟದಷ್ಟಿವೆ. ಅವುಗಳನ್ನು ಪ್ರಮಾಣಿಕವಾಗಿ ಈಡೇರಿಸಬೇಕಾದ ಜವಾಬ್ದಾರಿ ನಮ್ಮ ಮೇಲಿದೆ. ಕಳೆದ 3 ವರ್ಷ ಕಾಲ ಬಿ.ಫೌಜಿಯಾ ತರನ್ನುಮ್ ಅವರು ಜಿಲ್ಲಾಧಿಕಾರಿಯಾಗಿ ಜಿಲ್ಲೆಯಲ್ಲಿ ಅನೇಕ ಜನಪರ ಕೆಲಸ ಕಾರ್ಯಗಳನ್ನು ಮಾಡಿದ್ದಾರೆ. ಅಭಿವೃದ್ಧಿಶೀಲ ಜಿಲ್ಲೆಯನ್ನಾಗಿಸಲು ಬಹಳಷ್ಟು ಪ್ರಯತ್ನಗಳಾಗಿವೆ. ಈ ಅಭಿವೃದ್ಧಿಯ ರಥವನ್ನು ಹೀಗೆ ಮುಂದುವರಿಸಲು ನಿಮ್ಮೆಲ್ಲರ ಸಹಕಾರ ಅಗತ್ಯವಿದೆ ಎಂದು ಅಧಿಕಾರಿ ವರ್ಗದಲ್ಲಿ ಮನವಿ ಮಾಡಿಕೊಂಡ ಅವರು, ನಾವೆಲ್ಲರು ಸೇರಿ ಜಿಲ್ಲೆಯ ಜನತೆಗೆ ಜನಸ್ನೇಹಿ ಮತ್ತು ಮಾದರಿ ಆಡಳಿತ ನೀಡೋಣ ಎಂದು ಕರೆ ನೀಡಿದರು.

ನಂತರ ನಿರ್ಗಮಿತ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಮತ್ತು ಅವರೊಂದಿಗೆ ಆಗಮಿಸಿ ಅವರ ತಂದೆ–ತಾಯಿಯವರಿಗೆ ಕಚೇರಿ ಸಿಬ್ಬಂದಿಗಳಿಂದ ಫಲ ತಾಂಬೂಲ ಮತ್ತು ಸ್ಮರಣಿಕೆ ನೀಡಿ ಅತ್ಮೀಯವಾಗಿ ಬೀಳ್ಕೊಡಲಾಯಿತು.

## ಕೇಂದ್ರ ಸರ್ಕಾರ ಘೋಷಿಸಿರುವ 14 ಪ್ರಮುಖ ಬೆಳೆಗಳ ಕನಿಷ್ಠ ಬೆಂಬಲ ಬೆಲೆ ಹೆಚ್ಚಳ ಸ್ವಾಗತಾರ್ಹ: ಗುರುಲಿಂಗನಗೌಡ



**ಬಳ್ಳಾರಿ, ಮೇ. 14.––** 2026–27ನೇ ಸಾಲಿನ ಮುಂಗಾರಿ ಹಂಗಾಮಿಗೆ ಕೇಂದ್ರ ಸರ್ಕಾರ ಘೋಷಿಸಿರುವ 14 ಪ್ರಮುಖ ಬೆಳೆಗಳ ಕನಿಷ್ಠ ಬೆಂಬಲ ಬೆಲೆ (MSP) ಹೆಚ್ಚಳವನ್ನು ಬಿಜೆಪಿ ರೈತ ಮೋರ್ಚಾ ಉಪಾಧ್ಯಕ್ಷರಾದ ಗುರುಲಿಂಗನ ಗೌಡ, ಹರ್ಷಭರಿತವಾಗಿ ಸ್ವಾಗತಿಸಿದ್ದಾರೆ.

ಪ್ರಧಾನಮಂತ್ರಿ ಅವರ ದೂರದೃಷ್ಟಿಯ ನಾಯಕತ್ವದಲ್ಲಿ ಕೇಂದ್ರ ಸರ್ಕಾರ ರೈತರ ಬದುಕು ಸುಧಾರಿಸಲು ಹಾಗೂ ಕೃಷಿಯನ್ನು ಲಾಭದಾಯಕ ವೃತ್ತಿಯನ್ನಾಗಿಸಲು ನಿರಂತರವಾಗಿ ಮಹತ್ವದ ನಿರ್ಧಾರಗಳನ್ನು ಕೈಗೊಳ್ಳುತ್ತಿದೆ. 2026–27ನೇ ಸಾಲಿನ ಮುಂಗಾರಿ ಬೆಳೆಗಳಿಗೆ MRP ದರ ಹೆಚ್ಚಳ ಮಾಡಿರುವುದು ರೈತರ ಶ್ರಮಕ್ಕೆ ನೀಡಿರುವ ಗೌರವವಾಗಿದೆ.

ಕೇಂದ್ರ ಸರ್ಕಾರ ಘೋಷಿಸಿರುವ ಹೊಸ MSP ದರಗಳಿಂದ ಭತ್ತ, ಜೋಳ, ರಾಗಿ, ಸಜ್ಜೆ, ಮೆಕ್ಕೆಜೋಳ, ತೊಗರಿಬೇಳೆ,ಉದ್ದು, ಹೆಸರಬೇಳೆ, ನೆಲಗಡಲೆ, ಸೂರ್ಯಕಾಂತಿ, ಸೋಯಾಬಿನ್, ಎಳ್ಳು ಹಾಗೂ ಹತ್ತಿ ಬೆಳೆಗಾರರಿಗೆ ನೇರ ಲಾಭವಾಗಲಿದೆ. ವಿಶೇಷವಾಗಿ ತೊಗರಿಬೇಳೆ, ಹೆಸರಬೇಳೆ, ಉದ್ದು ಹಾಗೂ ಎಣ್ಣೆ ಬೀಜಗಳಿಗೆ ಹೆಚ್ಚಿನ ಪ್ರಮಾಣದಲ್ಲಿ MSP ಹೆಚ್ಚಳ ಘೋಷಿಸಿರುವುದು ರೈತರಲ್ಲಿ ಹೊಸ ವಿಶ್ವಾಸ ಮೂಡಿಸಿದೆ.

ಕಳೆದ ಹಲವು ವರ್ಷಗಳಿಂದ ಕೇಂದ್ರ ಸರ್ಕಾರ ರೈತರ ಉತ್ಪಾದನಾ ವೆಚ್ಚವನ್ನು ವೈಜ್ಞಾನಿಕವಾಗಿ ಪರಿಶೀಲಿಸಿ, ರೈತರಿಗೆ ಕನಿಷ್ಠ ಬೆಂಬಲ ಬೆಲೆಯ ಮೂಲಕ ಭದ್ರ ಆದಾಯ ಒದಗಿಸುವ ಕೆಲಸ ಮಾಡುತ್ತಿದೆ. ರೈತರು ಬೆಳೆದ ಬೆಳೆಗೆ ನ್ಯಾಯಯುತ ಬೆಲೆ ದೊರಕಬೇಕು ಎಂಬುದು ಪ್ರಧಾನಿ ನರೇಂದ್ರ ಮೋದಿ ಅವರ ಸರ್ಕಾರದ ಸ್ಪಷ್ಟ ಸಂಕಲ್ಪವಾಗಿದೆ. ಇದೇ ಕಾರಣಕ್ಕೆ MSP ವ್ಯವಸ್ಥೆಯನ್ನು ಬಲಪಡಿಸುವ ಜೊತೆಗೆ ಕೃಷಿ ಉತ್ಪನ್ನಗಳ ಖರೀದಿ ವ್ಯವಸ್ಥೆಯನ್ನೂ ವಿಸ್ತರಿಸಲಾಗುತ್ತಿದೆ.

ಭತ್ತದ MSPಯನ್ನು 2441ಕ್ಕೆ ಹಾಗೂ ಗ್ರೇಡ್ 'ಎ' ಭತ್ತದ MSP ಅನ್ನು 2461ಕ್ಕೆ ಹೆಚ್ಚಿಸಿರುವುದು ಅಕ್ಕಿ ಬೆಳೆಗಾರರಿಗೆ ನೆರವಾಗಲಿದೆ. ರಾಗಿ ಬೆಲೆಯನ್ನು 5205ಕ್ಕೆ ಏರಿಸಿರುವುದು ಕರ್ನಾಟಕದ ರೈತರಿಗೆ ವಿಶೇಷ ಸಂತಸದ ವಿಚಾರವಾಗಿದೆ. ಜೋಳ, ಸಜ್ಜೆ ಮತ್ತು ಮೆಕ್ಕೆಜೋಳ ಬೆಳೆಗಳಿಗೆ ಹೆಚ್ಚಳ ನೀಡಿರುವುದು ಬರ ಪ್ರದೇಶದ ರೈತರಿಗೆ ಸಹಾಯಕವಾಗಲಿದೆ. ಪಲ್ಸ್ ಹಾಗೂ ಎಣ್ಣೆ ಬೀಜ ಉತ್ಪಾದನೆಯನ್ನು ಉತ್ತೇಜಿಸಲು ತೊಗರಿಬೇಳೆ ರೂ.8450. ಹೆಸರಬೇಳೆ ರೂ.8780, ಉದ್ದು ರೂ.8200, ಸೋಯಾಬಿನ್ 5708, ಸೂರ್ಯಕಾಂತಿ 8343 ಹಾಗೂ ಎಳ್ಳು 10346 ಒಖಿಕ ನಿಗದಿಪಡಿಸಿರುವುದು ದೇಶದ ಕೃಷಿ ಆತ್ಮನಿರ್ಭರತೆಗೆ ಸಹಕಾರಿ ಆಗಲಿದೆ. ಹತ್ತಿ ಬೆಳೆಗಾರರ ಹಿತದೃಷ್ಟಿಯಿಂದ ಮಧ್ಯಮ ಎಳೆಯ ಹತ್ತಿಗೆ 8267 ಹಾಗೂ ಉದ್ದ ಎಳೆಯ ಹತ್ತಿಗೆ 8667 MSP ಘೋಷಿಸಿರುವುದು ರೈತರಿಗೆ ಹೆಚ್ಚಿನ ಪ್ರೋತ್ಸಾಹ ನೀಡಲಿದೆ.

ಕೇಂದ್ರ ಸರ್ಕಾರ ಈಗಾಗಲೇ ಪಿಎಂ ಕಿಸಾನ್ ಸಮ್ಮಾನ್ ನಿಧಿ, ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆ. ಮಣ್ಣಿನ ಆರೋಗ್ಯ ಕಾರ್ಡ್, ಸೂಕ್ಷ್ಮ ನೀರಾವರಿ ಯೋಜನೆಗಳು, ರಸಗೊಬ್ಬರ ಸಹಾಯಧನ ಸೇರಿದಂತೆ ಅನೇಕ ಯೋಜನೆಗಳ ಮೂಲಕ ರೈತರ ಅಭಿವೃದ್ಧಿಗೆ ಬದ್ಧತೆಯಿಂದ ಕಾರ್ಯನಿರ್ವಹಿಸುತ್ತಿದೆ. MSP ಹೆಚ್ಚಳದ ಈ ನಿರ್ಧಾರ ರೈತರ ಆರ್ಥಿಕ ಸ್ಥಿರತೆಯನ್ನು ಮತ್ತಷ್ಟು ಬಲಪಡಿಸುವ ಕೆಲಸ ಮಾಡಲಿದೆ.

ರೈತರ ಬೆವರು ವ್ಯರ್ಥವಾಗ ಬಾರದು. ಕೃಷಿ ಕ್ಷೇತ್ರ ಮತ್ತಷ್ಟು ಅಭಿವೃದ್ಧಿಯಾಗಬೇಕು ಹಾಗೂ ಗ್ರಾಮೀಣ ಆರ್ಥಿಕತೆ ಬಲವಾಗಬೇಕು ಎಂಬ ಉದ್ದೇಶದಿಂದ ಕೇಂದ್ರ ಸರ್ಕಾರ ಕೈಗೊಂಡಿರುವ ಈ ಐತಿಹಾಸಿಕ ನಿರ್ಧಾರವನ್ನು ನಾನು ಅಭಿನಂದಿಸುತ್ತೇನೆ. ದೇಶದ ಅನ್ನದಾತರ ಕಲ್ಯಾಣವೇ ಮೋದಿ ಸರ್ಕಾರದ ಮೊದಲ ಆದ್ಯತೆ ಎಂಬುದು ಮತ್ತೊಮ್ಮೆ ಸಾಬೀತಾಗಿದೆ ಎಂದರು.

## ಡಾ.ಬಸರೆಡ್ಡಿಯವರ ಸೇವೆಯನ್ನು ಗುರುತಿಸಿ ಸನ್ಮಾನ



**ಬಳ್ಳಾರಿ, ಮೇ.14:** ಬಳ್ಳಾರಿ ನಗರದ ಜಿಲ್ಲಾಸ್ಪತ್ರೆಯಲ್ಲಿರುವ ಶಸ್ತ್ರಚಿಕಿತ್ಸಕ ಡಾಬಸರೆಡ್ಡಿರವರನ್ನು ಮಾನವ ಹಕ್ಕುಗಳ ಕಾವಲು ಸಮಿತಿ ವತಿಯಿಂದ ಆತ್ಮೀಯವಾಗಿ ಸನ್ಮಾನಿಸಿ ಸತ್ಕರಿ ಸಲಾಯಿತು.

ಡಾ॥ಬಸರೆಡ್ಡಿಯವರ ಜನ್ಮ ದಿನಾಚರಣೆ ಅಂಗವಾಗಿ ಮತ್ತು ಅವರ ಸೇವೆಯನ್ನು ಗುರುತಿಸಿ ಕಛೇರಿಗೆ ತೆರಳಿದ ಮಾನವ ಹಕ್ಕುಗಳ ಕಾವಲು ಸಮಿತಿಯ ಸಂಸ್ಥಾಪಕ ರಾಜ್ಯಾಧ್ಯಕ್ಷ ಡಾ॥ಉರುಕುಂದ ರೆಡ್ಡಿ, ಉಪ್ಪಾರ ನೌಕರರ ಹಾಗೂ ವೃತ್ತಿಪರ ನೌಕರರ ಸಂಘ(ರಿ)ಅಧ್ಯಕ್ಷರಾದ ಪಿ.ಮಲ್ಲಪ್ಪ ಉಪ್ಪಾರ, ಹಿರಿಯ


ವಕೀಲರಾದ ಕಾಳಿಂಗರಾಜ್, ದತ್ತಾತ್ರೇಯ ರೆಡ್ಡಿ ಮತ್ತಿತರರು ಡಾ.ಬಸರೆಡ್ಡಿಯವರನ್ನು ಸನ್ನಾನಿಸಿದರು.

## ಕನಕದುರ್ಗಮ್ಮ ದೇವಸ್ಥಾನದಲ್ಲಿ ವಿಶೇಷ ಪೂಜೆ ಅನ್ನದಾನ ಕಾರ್ಯಕ್ರಮ-ಅಲ್ಲಂ ಪ್ರಶಾಂತ್



**ಬಳ್ಳಾರಿ, ಮೇ 14.** ಬಳ್ಳಾರಿ ನಗರ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಉಪಮುಖ್ಯಮಂತ್ರಿಗಳು ಹಾಗೂ ಕೆಪಿಸಿಸಿ ಅಧ್ಯಕ್ಷರು ಡಿ.ಕೆ. ಶಿವ ಕುಮಾರ್ ಅವರ 65ನೇ ಹುಟ್ಟುಹಬ್ಬ ಅಂಗವಾಗಿ ದಿನಾಂಕ: 15.05.2026 ಶುಕ್ರವಾರ ರಂದು ಬಳ್ಳಾರಿ ಗ್ರಾಮ ದೇವತೆ ಶ್ರೀ ಕನಕದುರ್ಗಮ್ಮ ದೇವಸ್ಥಾನದಲ್ಲಿ ವಿಶೇಷ ಪೂಜೆ ಮಾಡಿಸಿ ಭಕ್ತರಿಗೆ ಹಾಗೂ ಬಡವರಿಗೆ ಅನ್ನಪ್ರಸಾದ ವಿತರಣೆ ಮಾಡುವುದು ಹಾಗೂ ಇತರೆ ಸಾಮಾಜಿಕ ಸೇವೆ ಮಾಡುವುದರ ಬಗ್ಗೆ ಪೂರ್ವಭಾವಿ ಸಭೆಯನ್ನು ಡಿಸಿಸಿ ಅಧ್ಯಕ್ಷರು ಅಲ್ಲಂ ಪ್ರಶಾಂತ್ ಅವರ ನೇತೃತ್ವದಲ್ಲಿ ನಡೆಸಲಾಯಿತು.

## ಗ್ರಾಮೀಣ ಜನತೆಗೆ ತ್ವರಿತವಾಗಿ ಸ್ಪಂದಿಸಿ: ಜಿ.ಪಂ ಸಿಇಓ ರಿಷಿ ಆನಂದ ಸಿಬ್ಬಂದಿಗೆ ಕಿವಿಮಾತು



**ವಿಜಯಪುರ, ಮೇ.14:** ಸಮಸ್ಯೆ ಹೊತ್ತು ಬರುವ ಗ್ರಾಮೀಣ ಜನತೆಗೆ ತ್ವರಿತವಾಗಿ ಪರಿಹಾರ ಕಲ್ಪಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಕಾಧಿರಿ ರಿಷಿ ಆನಂದ ಹೇಳಿದರು.

ಜಿಲ್ಲೆಯ ತಿಕೋಟಾ ತಾಲೂಕು ಪಂಚಾಯತಿ ಕಾರ್ಯಾಲಯದ ನವೀಕರಣಗೊಂಡ ಪಿಠೋಪಕರಣ ಉದ್ಘಾಟಿಸಿ ಅವರು ಮಾತನಾಡಿದರು. ಕಾರ್ಯಾಲಯವು ಎಷ್ಟು ನಿಟ್ಟಾಗಿ ಅಚ್ಚುಕಟ್ಟಾಗಿ ಹಾಗೂ ಸ್ವಚ್ಚತೆಯಿಂದ ಇರುತ್ತದೆಯೋ ಅಷ್ಟು ಸಿಬ್ಬಂದಿಗಳಿಗೆ ಕೆಲಸ ನಿರ್ವಹಿಸಲು ಪ್ರೇರಣೆ ಸಿಗುತ್ತದೆ. ಇಂತಹ ಒಂದು ಉತ್ತಮ ಯೋಜನೆಯನ್ನು ಹಾಕಿಕೊಂಡು ಹಳೆಯ ಕಟ್ಟಡದಲ್ಲಿಯೇ ಸಿಬ್ಬಂದಿಗೆ ಅವಶ್ಯವಾಗಿ ಬೇಕಾಗಿರುವ ಟೇಬಲ್, ಕುರ್ಚಿ, ಗಣಕಯಂತ್ರ, ಪ್ರಿಂಟರ್ಸ್, ಶೌಚಾಲಯ, ಕುಡಿಯುವ ನೀರು ಮತ್ತು ಉತ್ತಮ ಪರಿಸರ ಓದಗಿಸಿರುವ ತಾಲೂಕು ಪಂಚಾಯತಿಯ ಕಾರ್ಯವನ್ನು ಸಿಇಓ ಪ್ರಶಂಸಿಸಿದರು.


ಮುಂದಿನ ದಿನಮಾನದಲ್ಲಿ ಎಲ್ಲ ಅಧಿಕಾರಿಗಳು ಮತ್ತು ಸಿಬ್ಬಂದಿ ಇನ್ನೂ ಹೆಚ್ಚಿನ ಉತ್ಸಾಹದಿಂದ ಕೆಲಸ ನಿರ್ವಹಿಸಿ ತಿಕೋಟಾ ತಾಲೂಕನ್ನು ಮಾದರಿ ತಾಲೂಕನ್ನಾಗಿಸಲು ಶ್ರಮಿಸಬೇಕು ಎಂದು ಕಿವಿಮಾತು ಹೇಳಿದರು. ಅಧಿಕಾರಿಗಳು ಮತ್ತು ಸಿಬ್ಬಂದಿಗಳು ತಮಗೆ ಒದಗಿಸಿರುವ ಸಲಕರಣೆಗಳನ್ನು ಸರಿಯಾಗಿ ಸದ್ಬಳಕೆ ಮಾಡಿಕೊಳ್ಳಬೇಕು. ಆ ಮೂಲಕ ಸಮಸ್ಯೆ ಹೊತ್ತು ಬರುವ ಗ್ರಾಮೀಣ ಜನರಿಗೆ ಸೂಕ್ತ ಪರಿಹಾರವನ್ನು ತ್ವರಿತವಾಗಿ ಒದಗಿಸಬೇಕು. ಜೊತೆಗೆ ಅವರೊಡನೆ ಅತ್ಯಂತ ಗೌರವಯುತವಾಗಿ ವರ್ತಿಸಬೇಕು ಎಂದರು.

ನಮ್ಮ ಕಾರ್ಯಾಲಯದ ಬಗ್ಗೆ ನಮಗೆಲ್ಲಾ ಹೆಮ್ಮೆಯಿರಬೇಕು. ಜೊತೆಗೆ ಕಾರ್ಯಾಲಯದ ಸ್ವಚ್ಛತೆಗೆ ಎಲ್ಲರೂ ಸಹಕರಿಸಬೇಕು. ಇದೇ ರೀತಿ ಎಲ್ಲಾ ಗ್ರಾಮ ಪಂಚಾಯತಿಗಳೂ ಸಹ ಜನಸ್ನೇಹಿ ಹಾಗೂ ಸಿಬ್ಬಂದಿಗಳ ಸ್ನೇಹಿಯಾಗಿ ನಿರ್ಮಿಸಬೇಕು ಎಂದರು.

# ಹಾರ್ಮುಜ್ ಜಲಸಂಧಿ ಮುಕ್ತಗೊಳಿಸುವ ಪ್ರಸ್ತಾವಕ್ಕೆ ಚೀನಾ ಸಹಮತ: ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್‌ಗೆ ಹೇಳಿಕೆ

**ಬೀಜಿಂಗ್, ಮೇ 14:** ಎರಡು ಮಹಾಶಕ್ತಿಗಳ ನಾಯಕರ ನಡುವಿನ ಮಹತ್ವದ ಸಭೆಯನ್ನು ಜಗತ್ತು ಹೆಚ್ಚಿನ ಆಸಕ್ತಿಯಿಂದ ವೀಕ್ಷಿಸುತ್ತಿದ್ದಂತೆ, ಹಲವಾರು ಪ್ರಮುಖ ವಿಷಯಗಳ ಬಗ್ಗೆ ಚರ್ಚಿಸಲಾಯಿತು. ಚೀನಾದ ನಾಯಕ ಕ್ಸಿ ಜಿನ್ಪಿಂಗ್ ತೈವಾನ್ ಬಗ್ಗೆ ಅಮೆರಿಕಕ್ಕೆ ಎಚ್ಚರಿಕೆ ನೀಡಿದರು, ಆದರೆ ಹಾರ್ಮುಜ್ ಜಲಸಂಧಿಯು ಟೋಲ್‌ಗಳಿಂದ ಮುಕ್ತವಾಗಿರಬೇಕು ಮತ್ತು ಇರಾನ್ ಎಂದಿಗೂ ಪರಮಾಣು ಶಸ್ತ್ರಾಸ್ತ್ರಗಳನ್ನು ಹೊಂದಿರಬಾರದು ಎಂದು ಇಬ್ಬರೂ ನಾಯಕರು ಒಪ್ಪಿಕೊಂಡರು.

ಕ್ಸಿ ಮತ್ತು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಬೀಜಿಂಗ್‌ನ ಗ್ರೇಟ್ ಹಾಲ್ ಆಫ್ ದಿ ಪೀಪಲ್‌ನಲ್ಲಿ ಒಂದು ಹೆಗ್ಗುರುತು ದ್ವಿಪಕ್ಷೀಯ ಶೃಂಗಸಭೆಯನ್ನು ನಡೆಸಿದ ಸಂದರ್ಭದಲ್ಲಿ ಈ ಹೇಳಿಕೆಗಳು ಬಂದವು, ಇದು 2017 ರ ನಂತರ ಚೀನಾದಲ್ಲಿ ಅವರ ಮೊದಲ ಮುಖಾಮುಖಿ ಸಭೆಯಾಗಿದೆ. ಸಮುದ್ರ ಪೂರೈಕೆ ಸರಪಳಿಗಳಲ್ಲಿನ ನಡೆಯುತ್ತಿರುವ ಸಂಘರ್ಷಗಳು ಮತ್ತು ಅಡಚಣೆಗಳಿಂದಾಗಿ ಜಗತ್ತು ಪ್ರಕ್ಷುಬ್ಧತೆ ಮತ್ತು ಆರ್ಥಿಕ ಅನಿಶ್ಚಿತತೆಯನ್ನು ಅನುಭವಿಸುತ್ತಿರುವ ಸಮಯದಲ್ಲಿ ಈ ಸಭೆ ಬಂದಿದೆ. ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರನ್ನು ಬೀಜಿಂಗ್‌ಗ ಸ್ವಾಗತಿಸುವಾಗ ಕ್ಸಿ ಜಿನ್ಪಿಂಗ್ ತೈವಾನ್ ಬಗ್ಗೆ ತೀಕ್ಷ್ಣವಾದ ಎಚ್ಚರಿಕೆ ನೀಡಿದರು, ಇಬ್ಬರೂ ನಾಯಕರು ಉಷ್ಣತೆಯನ್ನು



ನಿರೀಕ್ಷಿಸಿದರು ಮತ್ತು ವಿಶ್ವದ ಎರಡು ದೊಡ್ಡ ಆರ್ಥಿಕತೆಗಳ ನಡುವೆ ಸ್ಥಿರ, ಶಾಶ್ವತ ಪಾಲುದಾರಿಕೆಯನ್ನು ನಿರ್ಮಿಸಲು ಪ್ರತಿಜ್ಞೆ ಮಾಡಿದರು. ಅದೇ ಸಮಯದಲ್ಲಿ, ಕ್ಸಿ ತೈವಾನ್ ಬಗ್ಗೆ ಸ್ಪಷ್ಟ ಎಚ್ಚರಿಕೆ ನೀಡಿದರು, ಅದನ್ನು "ಚೀನಾ–ಅಮೆರಿಕ ಸಂಬಂಧಗಳಲ್ಲಿ ಅತ್ಯಂತ ಪ್ರಮುಖ ವಿಷಯ" ಎಂದು ಬಣ್ಣಿಸಿದರು. ಈ ವಿಷಯವನ್ನು ತಪ್ಪಾಗಿ ನಿರ್ವಹಿಸುವುದರಿಂದ ಎರಡೂ ದೇಶಗಳ ನಡುವೆ "ಘರ್ಷಣೆಗಳು ಮತ್ತು ಸಂಘರ್ಷಗಳು" ಉಂಟಾಗಬಹುದು ಮತ್ತು ವಿಶಾಲ ಸಂಬಂಧವನ್ನು ಅಪಾಯಕ್ಕೆ ಸಿಲುಕಿಸಬಹುದು ಎಂದು ಅವರು ಎಚ್ಚರಿಸಿದರು. ಯುಎಸ್–ಚೀನಾ ಸಂಬಂಧಗಳನ್ನು ಮರುಸ್ಥಾಪಿಸುವ ಪ್ರಯತ್ನದಲ್ಲಿ, ಕ್ಸಿ ಜಿನ್ಪಿಂಗ್ ಪ್ರಸ್ತುತ ಜಾಗತಿಕ ಭೂದೃಶ್ಯವನ್ನು "ಒಂದು ಶತಮಾನದಲ್ಲಿ ಕಾಣದ ರೂಪಾಂತರಗಳಿಗೆ" ಒಳಗಾಗುತ್ತಿದೆ ಎಂದು ನಿರೂಪಿಸಿದರು, ಅಂತರರಾಷ್ಟ್ರೀಯ ಕ್ರಮವು ಹೆಚ್ಚು ಹೆಚ್ಚು "ದ್ರವ ಮತ್ತು ಪ್ರಕ್ಷುಬ್ಧ"ವಾಗುತ್ತಿದೆ ಎಂದು ಎಚ್ಚರಿಸಿದರು. ಈ ಹಿನ್ನೆಲೆಯಲ್ಲಿ, ಅವರು ಎರಡೂ ರಾಷ್ಟ್ರಗಳಿಗೆ ಒಂದು ನಿರ್ಣಾಯಕ ಕಾರ್ಯತಂತ್ರದ ಪ್ರಶ್ನೆಯನ್ನು ಮುಂದಿಟ್ಟರು: ಚೀನಾ ಮತ್ತು ಅಮೆರಿಕ "ಥುಸಿಡೈಡ್ಸ್ ಟ್ರ್ಯಾಪ್" ಎಂದು ಕರೆಯಲ್ಪಡುವದನ್ನು ತಪ್ಪಿಸಬಹುದೇ, ಉದಯೋನ್ಮುಖ ಶಕ್ತಿ ಮತ್ತು ಸ್ಥಾಪಿತ

**"ಚೀನಾ–ಅಮೆರಿಕ ಸಂಬಂಧಗಳಲ್ಲಿ ತೈವಾನ್ ಅತ್ಯಂತ ಪ್ರಮುಖ ವಿಷಯವಾಗಿದೆ" ಎಂದು ಕ್ಸಿ ಹೇಳಿದರು, ಅದನ್ನು ತಪ್ಪಾಗಿ ನಿರ್ವಹಿಸುವುದರಿಂದ "ತುಂಬಾ ಅಪಾಯಕಾರಿ ಪರಿಸ್ಥಿತಿ" ಉಂಟಾಗಬಹುದು ಎಂದು ಎಚ್ಚರಿಸಿದರು. ಈ ಎಚ್ಚರಿಕೆಯು ಗಮನಾರ್ಹವಾಗಿ ಸಮಾಧಾನಕರ ವಾಕ್ಚಾತುರ್ಯದ ಜೊತೆಗೆ ಬಂದಿತು, ಕ್ಸಿ ಎರಡೂ ರಾಷ್ಟ್ರಗಳು "ಅದನ್ನು ಕಾರ್ಯರೂಪಕ್ಕೆ ತರಬೇಕು ಮತ್ತು ಅದನ್ನು ಎಂದಿಗೂ ಹಾಳು ಮಾಡಬಾರದು" ಎಂದು ಘೋಷಿಸಿದರು.**

ಒಂದರ ನಡುವಿನ ಪೈಪೋಟಿಯ ಐತಿಹಾಸಿಕ ಪ್ರವೃತ್ತಿ, ಸಂಘರ್ಷದಲ್ಲಿ ಕೊನೆಗೊಳ್ಳುತ್ತದೆ ಮತ್ತು ಬದಲಿಗೆ "ಪ್ರಮುಖ–ದೇಶ ಸಂಬಂಧಗಳ ಹೊಸ ಮಾದರಿಯನ್ನು" ರೂಪಿಸಬಹುದೇ. "ಥುಸಿಡೈಡ್ಸ್ ಟ್ರ್ಯಾಪ್" ಅಂತರರಾಷ್ಟ್ರೀಯ ಸಂಬಂಧಗಳಲ್ಲಿನ ಒಂದು ಪರಿಕಲ್ಪನೆಯಾಗಿದ್ದು, ಇದು ಉದಯೋನ್ಮುಖ ಶಕ್ತಿಯು ಅಸ್ತಿತ್ವದಲ್ಲಿರುವ ಪ್ರಬಲ ಶಕ್ತಿಯನ್ನು ಸ್ಥಳಾಂತರಿಸಲು ಬೆದರಿಕೆ ಹಾಕುವ ಅಪಾಯಕಾರಿ ಮಾದರಿಯನ್ನು ವಿವರಿಸುತ್ತದೆ. ನಡೆಯುತ್ತಿರುವ ಇರಾನ್ ಸಂಘರ್ಷದ ಕೇಂದ್ರದಲ್ಲಿರುವ ನಿರ್ಣಾಯಕ ತೈಲ–ವ್ಯಾಪಾರದ ಚಾಕ್‌ಪಾಯಿಂಟ್ ಹಾರ್ಮುಜ್ ಜಲಸಂಧಿಯನ್ನು "ಮುಕ್ತವಾಗಿ ಉಳಿಯಬೇಕು" ಎಂದು ಇಬ್ಬರೂ ನಾಯಕರು ಒಪ್ಪಿಕೊಂಡರು.

# ಕ್ಸಿ ಜಿನ್ಪಿಂಗ್ ಶ್ರೇಷ್ಠ ನಾಯಕ: ಟ್ರಂಪ್



**ಬೀಜಿಂಗ್, ಮೇ 14:** ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಮ್ಮ ಚೀನಾದ ಪ್ರತಿರೂಪ ಕ್ಸಿ ಜಿನ್ಪಿಂಗ್ ಅವರನ್ನು ಶ್ರೇಷ್ಠ ನಾಯಕ ಎಂದು ಬಣ್ಣಿಸಿದ್ದಾರೆ. ಬೀಜಿಂಗ್‌ನಲ್ಲಿ ಇಬ್ಬರು ನಾಯಕರು ಉನ್ನತ ಮಟ್ಟದ ಶೃಂಗಸಭೆಯನ್ನು ಪ್ರಾರಂಭಿಸಿದಾಗ ಚೀನಾದೊಂದಿಗೆ ಅದ್ಭುತ ಭವಿಷ್ಯದ ಬಗ್ಗೆ ಮಾತನಾಡಿದರು.

ದ್ವಿಪಕ್ಷೀಯ ಮಾತುಕತೆಗಳಿಗೆ ಮುಂಚಿತವಾಗಿ ತಮ್ಮ ಆರಂಭಿಕ ಭಾಷಣದಲ್ಲಿ, ಟ್ರಂಪ್ ಅವರು ಚೀನಾದ ಅಧ್ಯಕ್ಷರನ್ನು ಭೇಟಿಯಾಗಿ ಅವರನ್ನು ತಮ್ಮ ಸ್ನೇಹಿತ ಎಂದು ಕರೆಯುವುದು ಗೌರವ ಎಂದು ಹೇಳಿದರು. ಅಧ್ಯಕ್ಷ ಕ್ಸಿ ಮತ್ತು ಟ್ರಂಪ್ ಅವರು ಬೀಜಿಂಗ್ನಲ್ಲಿ ಯುಎಸ್–ಚೀನಾ ಶೃಂಗಸಭೆಗಾಗಿ ಭೇಟಿಯಾಗುತ್ತಿದ್ದರು, ಅಲ್ಲಿ ಇರಾನ್ ಯುದ್ಧ, ವ್ಯಾಪಾರ, ತಂತ್ರಜ್ಞಾನ ಮತ್ತು ತೈವಾನ್‌ನಂತಹ ವಿಭಜಕ ವಿಷಯಗಳಲ್ಲಿ ಕೆಲವೇ ಪ್ರಗತಿಗಳು ನಿರೀಕ್ಷಿಸಲ್ಪಡುತ್ತವೆ.

ನಾವು ಹೊಂದಿಕೊಂಡಿದ್ದೇವೆ. ತೊಂದರೆಗಳು ಇದ್ದಾಗ, ನಾವು ಅದನ್ನು ಪರಿಹರಿಸಿದ್ದೇವೆ. ನಾನು ನಿಮಗೆ ಕರೆ ಮಾಡುತ್ತಿದ್ದೆ ಮತ್ತು ನೀವು ನನಗೆ ಕರೆ ಮಾಡುತ್ತಿದ್ದೀರಿ. ಜನರಿಗೆ ತಿಳಿದಿಲ್ಲ, ನಮಗೆ ಸಮಸ್ಯೆ ಬಂದಾಗಲೆಲ್ಲಾ ನಾವು ಅದನ್ನು ಬೇಗನೆ ಪರಿಹರಿಸಿದ್ದೇವೆ ಎಂದು ಅವರು ಹೇಳಿದರು.

ನೀವು ಒಬ್ಬ ಮಹಾನ್ ನಾಯಕ, ಕೆಲವೊಮ್ಮೆ ಜನರು ನಾನು ಅದನ್ನು ಹೇಳುವುದನ್ನು ಇಷ್ಟಪಡುವುದಿಲ್ಲ, ಆದರೆ ನಾನು ಅದನ್ನು ಹೇಗಾದರೂ ಹೇಳುತ್ತೇನೆ, ಏಕೆಂದರೆ ಅದು ನಿಜ ನಿಮ್ಮೊಂದಿಗಿರುವುದು ಒಂದು ಗೌರವ; ನಿಮ್ಮ ಸ್ನೇಹಿತರಾಗಿರುವುದು ಒಂದು ಗೌರವ? ನಾವು ಒಟ್ಟಿಗೆ ಅದ್ಭುತ ಭವಿಷ್ಯವನ್ನು ಹೊಂದಲಿದ್ದೇವೆ. ಈ ಪ್ರವಾಸದಲ್ಲಿ ವಿಶ್ವದ ಅತ್ಯುತ್ತಮ ನಾಯಕರನ್ನು ತಮ್ಮೊಂದಿಗೆ ಕರೆತಂದಿದ್ದೇನೆ ಎಂದು ಅಮೆರಿಕದ ಅಧ್ಯಕ್ಷರು ಹೇಳಿದರು.

ಎರಡು ದಿನಗಳ ಶೃಂಗಸಭೆಯಲ್ಲಿ ಟ್ರಂಪ್ ಅವರೊಂದಿಗೆ ಎನ್ವಿಡಿಯಾದ ಜೆನ್ಸೆನ್ ಹುವಾಂಗ್ ಮತ್ತು ಟೆಸ್ಲಾ ಅವರ ಎಲಾನ್ ಮಸ್ಕ್ ಸೇರಿದಂತೆ ಅಮೆರಿಕದ ಉನ್ನತ ಸಿಇಒಗಳು ಇದ್ದಾರೆ. ಚೀನಾ ಹೆಚ್ಚಿನ ಕೃಷಿ ಉತ್ಪನ್ನಗಳು ಮತ್ತು ಪ್ರಯಾಣಿಕ ವಿಮಾನಗಳನ್ನು ಖರೀದಿಸಲು ವ್ಯಾಪಾರ ಮತ್ತು ಒಪ್ಪಂದಗಳ ಕುರಿತು ಮಾತುಕತೆಗಳನ್ನು ಕೇಂದ್ರೀಕರಿಸಲು ಟ್ರಂಪ್ ಆಶಿಸಿದ್ದಾರೆ, ಅವರ ಭಿನ್ನಾಭಿಪ್ರಾಯಗಳನ್ನು ಪರಿಹರಿಸಲು ಮತ್ತು ಕಳೆದ ವರ್ಷ ಅವರ ಸುಂಕ ಹೆಚ್ಚಳದ ನಂತರ ಭುಗಿಲೆದ್ದ ವ್ಯಾಪಾರ ಯುದ್ಧದ ಪುನರಾವರ್ತನೆಯನ್ನು ತಪ್ಪಿಸಲು ಮಂಡಳಿಯನ್ನು ಸ್ಥಾಪಿಸಿದ್ದಾರೆ.

# ಲೇಬರ್ ಪಾರ್ಟಿಯಲ್ಲಿ ಅಸಮಾಧಾನ ರಾಜೀನಾಮೆ ನೀಡಲು ಕೀರ್ ನಕಾರ

**ಲಂಡನ್, ಮೇ 14:** ಇತ್ತೀಚಿನ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಲೇಬರ್ ಪಾರ್ಟಿ ಹೀನಾಯ ಸೋಲು ಅನುಭವಿಸಿದ ಬೆನ್ನಲ್ಲೇ ಪಕ್ಷದೊಳಗೆ ತೀವ್ರ ಅಸಮಾಧಾನ ಭುಗಿಲೆದ್ದಿದ್ದು, ಈ ನಡುವೆ ಬ್ರಿಟಿಷ್ ಪ್ರಧಾನಿ ಕೀರ್ ಸ್ಟಾರ್ಮರ್ ರಾಜೀನಾಮೆಗೆ ಒತ್ತಡ ಕೇಳಿಬರುತ್ತಿದೆ. ಆದರೆ, ಒತ್ತಾಯಗಳನ್ನು ಕೀರ್ ಸ್ಟಾರ್ಮರ್ ತಳ್ಳಿಹಾಕಿದ್ದಾರೆ.

10 ಡೌನಿಂಗ್ ಸ್ಟ್ರೀಟ್‌ನಲ್ಲಿ ನಡೆದ ಸಂಪುಟ ಸಭೆಯಲ್ಲಿ ಮಾತನಾಡಿದ ಸ್ಟಾರ್ಮರ್, ನಾಯಕತ್ವದ ಬದಲಾವಣೆಗೆ ಬೇಕಾದ ಕನಿಷ್ಠ ಬೆಂಬಲದ ಮಿತಿಯನ್ನು ಯಾರೂ ತಲುಪಿಲ್ಲ, ಹಾಗಾಗಿ ತಾವು ಹೋರಾಟ ಮುಂದುವರಿಸುವುದಾಗಿ ಹೇಳಿದ್ದಾರೆ ಎಂದು ಪತ್ರಿಕೆ ವರದಿ ಮಾಡಿದೆ.

"ನಾಯಕತ್ವಕ್ಕೆ ಸವಾಲು ಹಾಕಲು ಲೇಬರ್ ಪಾರ್ಟಿಯಲ್ಲಿ ಒಂದು ನಿರ್ದಿಷ್ಟ ಪ್ರಕ್ರಿಯೆಯಿದೆ ಮತ್ತು ಅದು ಇನ್ನೂ ಚಾಲನೆಗೊಂಡಿಲ್ಲ. ದೇಶವು ನಮ್ಮಿಂದ ಉತ್ತಮ ಆಡಳಿತವನ್ನು ನಿರೀಕ್ಷಿಸುತ್ತಿದೆ. ಕ್ಯಾಬಿನೆಟ್ ಆಗಿ ನಾವು ಆ ಕೆಲಸವನ್ನೇ ಮಾಡಬೇಕಿದೆ," ಎಂದು ಸ್ಟಾರ್ಮರ್ ಸಚಿವರಿಗೆ ತಿಳಿಸಿದ್ದಾರೆ. ಕಳೆದ 48 ಗಂಟೆಗಳ ರಾಜಕೀಯ ಅಸ್ಥಿರತೆಯು ದೇಶದ ಆರ್ಥಿಕತೆಯ ಮೇಲೆ ವ್ಯತಿರಿಕ್ತ ಪರಿಣಾಮ ಬೀರಲಿದೆ ಎಂದು ಅವರು ಎಚ್ಚರಿಸಿದ್ದಾರೆ.

ಸಭೆಯಲ್ಲಿ ಯಾರೂ ನೇರವಾಗಿ ರಾಜೀನಾಮೆಗೆ ಆಗ್ರಹಿಸದಿದ್ದರೂ, ಸಚಿವರಲ್ಲಿ ಅಸಮಾಧಾನ ಎದ್ದು ಕಾಣುತ್ತಿತ್ತು. ಸಭೆಯ ಗಮನ ಬೇರೆಡೆ ತಿರುಗಿಸಲು ಮುಂದಾದ ಸ್ಟಾರ್ಮರ್ ಅವರು ಆಂತರಿಕ ರಾಜಕೀಯದ ಚರ್ಚೆಯನ್ನು ಬದಿಗೊತ್ತಿ, ಮಧ್ಯಪ್ರಾಚ್ಯದ ಬಿಕ್ಕಟ್ಟಿನ ಬಗ್ಗೆ ಮಾತನಾಡಲು ಆರಂಭಿಸಿದರು. ಇದು ವಿಮರ್ಶಕರಿಗೆ ಪ್ರತಿಕ್ರಿಯಿಸಲು ಅವಕಾಶ ನೀಡದಂತೆ ಮಾಡುವ ತಂತ್ರವಾಗಿತ್ತು ಎನ್ನಲಾಗಿದೆ.



### ಸ್ಟಾರ್ಮರ್ ರಾಜೀನಾಮೆ 80 ಸಂಸದರ ಒತ್ತಾಯ

ಈ ಬೆಳವಣಿಗೆಯ ಬೆನ್ನಲ್ಲೇ ಲೇಬರ್ ಪಾರ್ಟಿಯ ಪ್ರಮುಖ ನಾಯಕಿ ಜೆಸ್ ಫಿಲಿಪ್ಸ್ ತಮ್ಮ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. "ಹಾಲಿ ನಾಯಕತ್ವದ ಅಡಿಯಲ್ಲಿ ದೇಶ ನಿರೀಕ್ಷಿಸಿದ ಬದಲಾವಣೆ ತರಲು ಸಾಧ್ಯವಿಲ್ಲ," ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಅವರ ಬೆನ್ನಲ್ಲೇ ಅಲೆಕ್ಸ್ ಡೇವಿಸ್–ಜೋನ್ಸ್ ಮತ್ತು ಮಿಯಟ್ಟಾ ಫಾನ್ಬುಲ್ಲೆ ಕೂಡ ತಮ್ಮ ಸ್ಥಾನಗಳಿಗೆ ರಾಜೀನಾಮೆ ನೀಡಿದ್ದಾರೆ. ಪ್ರಸ್ತುತ ಸ್ಟಾರ್ಮರ್ ಅವರ ರಾಜೀನಾಮೆಗೆ ಒತ್ತಾಯಿಸುತ್ತಿರುವ ಲೇಬರ್ ಸಂಸದರ ಸಂಖ್ಯೆ 80 ದಾಟಿದೆ ಎಂದು ವರದಿಯಾಗಿದೆ. ವೆಸ್ ಸ್ಟ್ರೀಟಿಂಗ್ ವಿರುದ್ಧ ಆಕ್ರೋಶ: ಸಂಭವನೀಯ ಮುಂದಿನ ನಾಯಕ ಎಂದು ಬಿಂಬಿತವಾಗುತ್ತಿರುವ ವೆಸ್ ಸ್ಟ್ರೀಟಿಂಗ್ ವಿರುದ್ಧ ಸಂಪುಟದ ಹಲವು ಸಚಿವರು ಕೆಂಗಣ್ಣು ಬೀರಿದ್ದಾರೆ. ಅವರು ನಾಯಕತ್ವದ ಆಸೆ ಹೊಂದಿದ್ದರೂ ಸರಿಯಾದ ಯೋಜನೆ ಹೊಂದಿಲ್ಲ ಎಂದು ಕೆಲವು ಸಚಿವರು ಟೀಕಿಸಿದ್ದಾರೆ. ಈ ಎಲ್ಲಾ ಗೊಂದಲಗಳ ನಡುವೆಯೂ ಪ್ಯಾಟ್ ಮೆಕ್‌ಫ್ಯಾಡನ್ ಮತ್ತು ಲಿಜ್ ಕೆಂಡಾಲ್ ಅವರಂತಹ ಹಿರಿಯ ಸಚಿವರು ಪ್ರಧಾನಿ ಸ್ಟಾರ್ಮರ್ ಅವರಿಗೆ ತಮ್ಮ ಬೆಂಬಲ ಸೂಚಿಸಿದ್ದಾರೆ.

# ಬಾಂಗ್ಲಾದಲ್ಲಿ ದಡಾರ ಉಲ್ಬಣ

## 24 ಗಂಟೆಗಳಲ್ಲಿ 7 ಮಕ್ಕಳ ಸಾವು

**ಢಾಕಾ, ಮೇ 14:** ಬಾಂಗ್ಲಾದೇಶದಲ್ಲಿ ದಡಾರ ಮತ್ತು ದಡಾರ ಸದೃಶ ಲಕ್ಷಣಗಳಿಂದ ಕಳೆದ 24 ಗಂಟೆಗಳಲ್ಲಿ ಕನಿಷ್ಠ ಏಳು ಮಕ್ಕಳು ಮೃತಪಟ್ಟಿದ್ದಾರೆ. ಇದರೊಂದಿಗೆ ಇದರೊಂದಿಗೆ ಈ ಕಾಯಿಲೆಯಿಂದ ಮೃತಪಟ್ಟವರ ಒಟ್ಟು ಸಂಖ್ಯೆ 439ಕ್ಕೆ ಏರಿಕೆಯಾಗಿದೆ ಎಂದು ಆರೋಗ್ಯ ಸೇವೆಗಳ ಮಹಾನಿರ್ದೇಶನಾಲಯ ತಿಳಿಸಿದೆ.

ವರದಿಗಳ ಪ್ರಕಾರ, ಇತ್ತೀಚಿನ ಸಾವುಗಳಲ್ಲಿ ಒಂದು ಪ್ರಯೋಗಾಲಯದಲ್ಲಿ ದೃಢಪಟ್ಟ ದಡಾರ ಪ್ರಕರಣವಾಗಿದ್ದರೆ, ಉಳಿದ ಆರು ಸಾವುಗಳು ಶಂಕಿತ ಪ್ರಕರಣಗಳಾಗಿವೆ. ಹೊಸದಾಗಿ ದೃಢಪಟ್ಟ ಸಾವು ಢಾಕಾ ವಿಭಾಗದಲ್ಲಿ ವರದಿಯಾಗಿದ್ದು, ಇದರೊಂದಿಗೆ ದೇಶದ ಒಟ್ಟು ದೃಢಪಟ್ಟ ದಡಾರ ಸಾವಿನ ಸಂಖ್ಯೆ 70ಕ್ಕೇರಿದೆ. ಇನ್ನುಳಿದ ಆರು ಶಂಕಿತ ಸಾವುಗಳೊಂದಿಗೆ ಒಟ್ಟು ಶಂಕಿತ ಸಾವಿನ ಸಂಖ್ಯೆ 369ಕ್ಕೆ ತಲುಪಿದೆ.

ಸೋಂಕಿನ ಸಂಖ್ಯೆಯಲ್ಲಿ ದಾಖಲೆ ಏರಿಕೆ: ಕಳೆದ 24 ಗಂಟೆಗಳಲ್ಲಿ ದಾಖಲೆಯ 155 ಹೊಸ ದಡಾರ ಸೋಂಕು ಪ್ರಕರಣಗಳು ದೃಢಪಟ್ಟಿವೆ. ಇದು ಒಂದೇ ದಿನದಲ್ಲಿ ವರದಿಯಾದ ಅತಿ ಹೆಚ್ಚು ಪ್ರಕರಣಗಳಾಗಿದ್ದು, ಒಟ್ಟು ದೃಢಪಟ್ಟ ಪ್ರಕರಣಗಳ ಸಂಖ್ಯೆ 7,305ಕ್ಕೆ ಏರಿದೆ. ಇದಲ್ಲದೆ, ಒಂದೇ ದಿನದಲ್ಲಿ 1,363 ಶಂಕಿತ ಪ್ರಕರಣಗಳು ದಾಖಲಾಗಿದ್ದು, ದೇಶಾದ್ಯಂತ ಒಟ್ಟು ಶಂಕಿತ ಪ್ರಕರಣಗಳ ಸಂಖ್ಯೆ 54,419ಕ್ಕೆ ತಲುಪಿದೆ.

ಲಸಿಕೆ ವಿತರಣೆಯಲ್ಲಿನ ವ್ಯತ್ಯಯ: ಯುನಿಸೆಫ್ ಮೂಲಕ ಲಸಿಕೆ ಖರೀದಿಸುವುದನ್ನು ಸ್ಥಗಿತಗೊಳಿಸಿ, ಮುಕ್ತ ಟೆಂಡರ್ ವ್ಯವಸ್ಥೆಗೆ ಬದಲಾಯಿಸುವ ಮಧ್ಯಂತರ ಸರ್ಕಾರದ ನಿರ್ಧಾರವೇ ಈ ಬಿಕ್ಕಟ್ಟಿಗೆ ಕಾರಣ ಎಂದು ಆರೋಗ್ಯ ತಜ್ಞರು ಎಚ್ಚರಿಸಿದ್ದಾರೆ. ಈ ಬದಲಾವಣೆಯು ಲಸಿಕೆ ಕಾರ್ಯಕ್ರಮದಲ್ಲಿ ಅಡಚಣೆಯನ್ನುಂಟು ಮಾಡಿದೆ ಎಂದು ಹೇಳಲಾಗುತ್ತಿದೆ. ಆಸ್ಪತ್ರೆಗೆ ದಾಖಲಾದ ರೋಗಿಗಳಲ್ಲಿ ಶೇ. 83 ರಷ್ಟು ಮಂದಿ ಒಂದೋ ಲಸಿಕೆಯನ್ನು ಪಡೆದಿಲ್ಲ ಅಥವಾ ಶಿಫಾರಸು ಮಾಡಿದ ಪೂರ್ಣ ಪ್ರಮಾಣದ ಲಸಿಕೆಯನ್ನು ಪಡೆದಿಲ್ಲ ಎಂಬುದು ವೈದ್ಯಕೀಯ ವರದಿಗಳಿಂದ ತಿಳಿದುಬಂದಿದೆ. ವಿಶೇಷವಾಗಿ 5 ರಿಂದ 15 ವರ್ಷದೊಳಗಿನ ಮಕ್ಕಳಲ್ಲಿ ಹೆಚ್ಚಿನ ಸೋಂಕು ಕಂಡುಬರುತ್ತಿದೆ.

ಅಂತರರಾಷ್ಟ್ರೀಯ ನೆರವು: ತುರ್ತು ಪರಿಸ್ಥಿತಿಯನ್ನು ಎದುರಿಸಲು ಗಾವಿ ಲಸಿಕೆ ಒಕ್ಕೂಟ ಮತ್ತು ಏಷ್ಯನ್ ಡೆವಲಪ್‌ಮೆಂಟ್ ಬ್ಯಾಂಕ್ ಸುಮಾರು 21.9 ದಶಲಕ್ಷ ತುರ್ತು ಲಸಿಕೆ ಡೋಸ್‌ಗಳನ್ನು ಪೂರೈಸಿವೆ. ತುರ್ತು ದಡಾರ–ರುಬೆಲ್ಲಾ ಲಸಿಕೆ ಅಭಿಯಾನವು ಪ್ರಾದೇಶಿಕ ಗುರಿಗಳನ್ನು ತಲುಪಿದ್ದರೂ ಸಹ, ಆಸ್ಪತ್ರೆಗಳು ಮತ್ತು ಆರೋಗ್ಯ ಕಾರ್ಯಕರ್ತರ ಮೇಲೆ ಒತ್ತಡ ಮುಂದುವರಿಯುತ್ತಿದೆ.

# ಚೀನಾ ಹಡಗುಗಳಿಗೆ ಅನುಮತಿ: ಹಾರ್ಮುಜ್ ಜಲಸಂಧಿ ದಾಟಿದ 30 ಹಡಗುಗಳು

**ಟೆಹರಾನ್, ಮೇ 14:** ಚೀನಾದ ವಿದೇಶಾಂಗ ಸಚಿವ ಮತ್ತು ರಾಯಭಾರಿಯೊಂದಿಗೆ ಮಾತುಕತೆ ನಡೆಸಿದ ನಂತರ, ಇರಾನ್ ತನ್ನ ನಿಯಂತ್ರಣದಲ್ಲಿರುವ ಹಾರ್ಮುಜ್ ಜಲಸಂಧಿಯ ಮೂಲಕ ಚೀನಾ ಹಡಗುಗಳ ಸಂಚಾರಕ್ಕೆ ಅನುಮತಿ ನೀಡಿದೆ ಎಂದು ಇರಾನ್‌ನ ಅರೆ–ಅಧಿಕೃತ ಸುದ್ದಿ ಸಂಸ್ಥೆ 'ಫಾರ್ಸ್' ವರದಿ ಮಾಡಿದೆ.



ಈ ಆಯಕಟ್ಟಿನ ಜಲಮಾರ್ಗದ ಮೂಲಕ ಹಾದುಹೋಗುವ ಹಡಗುಗಳಿಗೆ ಇರಾನ್ ಪ್ರಸ್ತುತ ಸುಂಕವನ್ನು ವಿಧಿಸುತ್ತಿದೆ. ಆದರೆ, ಈ ಚೀನಾ ಹಡಗುಗಳು ಹಣ ಪಾವತಿಸಿವೆಯೇ ಅಥವಾ ಇಲ್ಲವೇ ಎಂಬ ಬಗ್ಗೆ ವರದಿಯಲ್ಲಿ ಉಲ್ಲೇಖಿಸಲಾಗಿಲ್ಲ. ಇರಾಕಿ ತೈಲವನ್ನು ಹೊತ್ತ ಚೀನಾದ ಕಚ್ಚಾ ತೈಲ ಟ್ಯಾಂಕರ್ 'ಯುವಾನ್ ಹುವಾ ಹು' ಬುಧವಾರ ಜಲಸಂಧಿಯನ್ನು ದಾಟಿದೆ. ಓಮನ್ ಕರಾವಳಿಯ ಇರಾನ್ ಬಂದರುಗಳ ಬಳಿ ಇರುವ ಅಮೆರಿಕ ನೌಕಾಪಡೆಯ ದಿಗ್ಬಂಧನವನ್ನು ಈ ಹಡಗು ಇನ್ನೂ ದಾಟಬೇಕಿದೆ. ಪ್ರಸ್ತುತ ಈ ಹಡಗು ವೇಗವಾಗಿ ಚೀನಾದತ್ತ ಸಾಗುತ್ತಿದೆ. ಗುರುವಾರ ಇರಾನ್‌ನ ಸರ್ಕಾರಿ ಸ್ವಾಮ್ಯದ ಖಖಖಃ ಟಿವಿ ವರದಿ ಮಾಡಿದಂತೆ, ಬುಧವಾರ ರಾತ್ರಿಯಿಂದೀಚೆಗೆ "ನಮ್ಮ ದೇಶದ ಅಧಿಕಾರಿಗಳು ಮತ್ತು ಕಡಲ ಏಜೆನ್ಸಿಗಳ ಸಮನ್ವಯದೊಂದಿಗೆ" 30ಕ್ಕೂ ಹೆಚ್ಚು ಹಡಗುಗಳಿಗೆ ಜಲಸಂಧಿಯ ಮೂಲಕ ಹಾದುಹೋಗಲು ಅನುಮತಿ ನೀಡಲಾಗಿದೆ.ಈ ಕುರಿತು ಪ್ರತಿಕ್ರಿಯಿಸಿರುವ ಖಖಖಃ ವರದಿಗಾರ, "ಇದರೊಂದಿಗೆ ಹಾರ್ಮುಜ್ ಜಲಸಂಧಿಯಲ್ಲಿ ಹೊಸ ಯುಗ ಆರಂಭವಾಗಿದೆ ಎಂದು ನಾವು ಹೇಳಬಹುದು. ಏಕೆಂದರೆ ಈ ಪ್ರಮುಖ ಜಲಮಾರ್ಗದ ಮೂಲಕ ಸಂಚರಿಸಲು ಇರಾನ್‌ನ ಐಆರ್‌ಜಿಸಿ ನೌಕಾಪಡೆಯೊಂದಿಗೆ ಸಮನ್ವಯ ಸಾಧಿಸುವುದೇ ಅತ್ಯುತ್ತಮ ಮತ್ತು ಸುಲಭವಾದ ಮಾರ್ಗ ಎಂಬುದು ಈಗ ಜಗತ್ತಿನ ದೇಶಗಳಿಗೆ ತಿಳಿದಿದೆ," ಎಂದು ಹೇಳಿದ್ದಾರೆ. ಇದೇ ವೇಳೆ, ಯುಎಇಯ ಫುಜೈರಾ ಕರಾವಳಿಯಲ್ಲಿ ಲಂಗರು ಹಾಕಿದ್ದ ಹಡಗೊಂದನ್ನು "ಅನಧಿಕೃತ ವ್ಯಕ್ತಿಗಳು" ವಶಪಡಿಸಿಕೊಂಡಿದ್ದಾರೆ ಎಂದು ಯುಕೆ ಎಂಟಿಒ ಕಡಲ ಸಂಸ್ಥೆ ವರದಿ ಮಾಡಿದೆ. ಆ ಹಡಗು ಇರಾನ್‌ನತ್ತ ಸಾಗುತ್ತಿತ್ತು ಎಂದು ತಿಳಿದುಬಂದಿದೆ.

# 10ನೇ ಸಂಡಾ ವಿಶ್ವಕಪ್‌ನಲ್ಲಿ ಭಾರತಕ್ಕೆ ಐತಿಹಾಸಿಕ ಚಿನ್ನ

**ನವದೆಹಲಿ, ಮೇ 14:** ಚೀನಾದ ಮಕಾವುನಲ್ಲಿ ನಡೆಯುತ್ತಿರುವ 10ನೇ ಸಂಡಾ ವಿಶ್ವಕಪ್‌ನಲ್ಲಿ ಅಪರ್ಣಾ ಅವರು ಅದ್ಭುತ ಪ್ರದರ್ಶನ ನೀಡುವ ಮೂಲಕ ದೇಶಕ್ಕೆ ಮೊದಲ ಚಿನ್ನದ ಪದಕವನ್ನು ತಂದುಕೊಟ್ಟಿದ್ದಾರೆ. ಇದರೊಂದಿಗೆ ಭಾರತವು ಪದಕಗಳ ಪಟ್ಟಿಯಲ್ಲಿ ಖಾತೆ ತೆರೆದಿದೆ.

ಮಹಿಳೆಯರ 52 ಕೆಜಿ ಸಂಡಾ ವಿಭಾಗದಲ್ಲಿ ಸ್ಪರ್ಧಿಸಿದ ಅಪರ್ಣಾ, ಇಡೀ ಪಂದ್ಯಾವಳಿಯಲ್ಲಿನ ಅಮೋಘ ಪ್ರದರ್ಶನ ನೀಡಿದರು. ಫೈನಲ್ ಪಂದ್ಯದಲ್ಲಿ ಅವರು ವಿಯೆಟ್ನಾಂನ ಹಾಲಿ ವಿಶ್ವ ಚಾಂಪಿಯನ್ ಆಟಗಾರ್ತಿಯನ್ನು ನೇರ ಸೆಟ್‌ಗಳಿಂದ ಸೋಲಿಸಿದರು. ಈ ಮೂಲಕ ತಮ್ಮ ಸಂಯಮ, ನಿಖರತೆ ಮತ್ತು ಯುದ್ಧತಂತ್ರದ ಮೇಲಾಟವನ್ನು ಪ್ರದರ್ಶಿಸಿದರು.

**ಪದಕದ ಹಾದಿಯಲ್ಲಿ ಭಾರತ**

**ಭಾರತವು ತನ್ನ ಬಲಿಷ್ಠ ಪ್ರದರ್ಶನವನ್ನು ಮುಂದುವರಿಸಿದ್ದು, ನಾಳೆ ನಡೆಯಲಿರುವ ಫೈನಲ್‌ನಲ್ಲಿ ಇನ್ನೂ ಇಬ್ಬರು ಕ್ರೀಡಾಪಟುಗಳು ಸ್ಪರ್ಧಿಸಲಿದ್ದಾರೆ. ಪುರುಷರ 48 ಕೆಜಿ ಸಂಡಾ: ಭಾರತದ ಫೈನಲಿಸ್ಟ್ ಕಣದಲ್ಲಿದ್ದರೆ, ಮಹಿಳೆಯರ 75 ಕೆಜಿ ಸಂಡಾ ವಿಭಾಗದಲ್ಲಿ ಭಾರತದ ಫೈನಲಿಸ್ಟ್ ಕಣದಲ್ಲಿದೆ.**

ಈ ಗೆಲುವು ಹೆಚ್ಚಿನ ಮಹತ್ವವನ್ನು ಹೊಂದಿದೆ, ಏಕೆಂದರೆ ಈ ಹಿಂದೆ ಬ್ರೆಜಿಲ್‌ನಲ್ಲಿ ನಡೆದ ವಿಶ್ವ ವುಶು ಚಾಂಪಿಯನ್‌ಶಿಪ್‌ನಲ್ಲಿ ಅಪರ್ಣಾ ಅವರು ಇದೇ ಎದುರಾಳಿಯ ವಿರುದ್ಧ ಸೋತು ಬೆಳ್ಳಿ ಪದಕಕ್ಕೆ ತೃಪ್ತಿಪಟ್ಟಿದ್ದರು.

ಈ ಬಾರಿ ಮಕಾವುನಲ್ಲಿ, ಅವರು ತಮ್ಮ ಎದುರಾಳಿಯನ್ನು ಮಣಿಸುವ ಮೂಲಕ ಸೇಡು ತೀರಿಸಿಕೊಂಡಿದ್ದಾರೆ ಮತ್ತು ಜಾಗತಿಕ ವೇದಿಕೆಯಲ್ಲಿ ಸ್ಮರಣೀಯ ಪುನರಾಗಮನವನ್ನು ಮಾಡುವುದರ ಜೊತೆಗೆ ಚಿನ್ನದ ಪದಕವನ್ನು ಮುಡಿಗೇರಿಸಿಕೊಂಡಿದ್ದಾರೆ.

ಇದಕ್ಕೂ ಮುನ್ನ ನಡೆದ ಸೆಮಿಫೈನಲ್‌ನಲ್ಲಿ ಫಿಲಿಪೈನ್ಸ್‌ನ ಅಥ್ಲೀಟ್ ಅನ್ನು ಸೋಲಿಸಿ ಅವರು ಫೈನಲ್ ಪ್ರವೇಶಿಸಿದ್ದರು.

ಭಾರತೀಯ ವುಶು ಸಂಸ್ಥೆಯು ಅಪರ್ಣಾ ಅವರ ಈ ಮಹೋನ್ನತ ಸಾಧನೆಯನ್ನು ಅಭಿನಂದಿಸಿದ್ದು, ಅವರ ದೃಢಸಂಕಲ್ಪ ಮತ್ತು ಚೇತರಿಸಿಕೊಳ್ಳುವ ಗುಣವನ್ನು ಶ್ಲಾಘಿಸಿದೆ. ಈ ಗೆಲುವು ಏಷ್ಯನ್ ಗೇಮ್ಸ್‌ಗೆ ಮುಂಚಿತವಾಗಿ ಭಾರತದ ಆತ್ಮವಿಶ್ವಾಸವನ್ನು ಹೆಚ್ಚಿಸಿದೆ.

# 14 ಸಾವಿರ ರನ್ ಗಳಿಸಿದ ಮೊದಲ ಭಾರತೀಯ ಬ್ಯಾಟ್ಸ್‌ಮನ್ ಕೊಹ್ಲಿ

**ನವದೆಹಲಿ, ಮೇ 14:** ಕ್ರಿಕೆಟ್ ಜಗತ್ತಿನಲ್ಲಿ ಈಗ ಎಲ್ಲಾ ದಾಖಲೆಗಳು ಕಿಂಗ್ ಕೊಹ್ಲಿ ಅವರ ಹೆಸರಿನಲ್ಲಿಯೇ ಇದೆ ಎಂದರೆ ತಪ್ಪಾಗಲಾರದು. ವಿರಾಟ್ ಕೊಹ್ಲಿ ಟಿ20 ಕ್ರಿಕೆಟ್‌ನಲ್ಲಿ 14,000 ರನ್ ಗಳಿಸಿದ ಮೊದಲ ಭಾರತೀಯ ಬ್ಯಾಟ್ಸ್ಮನ್ ಎನಿಸಿಕೊಂಡರು.

ಕ್ರಿಸ್ ಗೇಲ್ (14,562), ಕೀರನ್ ಪೊಲಾರ್ಡ್ (14,482), ಅಲೆಕ್ಸ್ ಹೇಲ್ಸ್ (14,449), ಡೇವಿಡ್ ವಾರ್ನರ್ (14,284), ಮತ್ತು ಜೋಸ್ ಬಟ್ಲರ್ (14,200) ಸಾರ್ವಕಾಲಿಕ ಟಿ20 ರನ್ ಗಳಿಸಿದ ಪಟ್ಟಿಯಲ್ಲಿ ವಿರಾಟ್ ಕೊಹ್ಲಿಗಿಂತ ಮುಂದಿದ್ದಾರೆ. ಕೊಹ್ಲಿ 14,000 ಟಿ20 ರನ್ ಗಳಿಸಿದ ಅತ್ಯಂತ ವೇಗದ ಆಟಗಾರ ಎಂಬ ಹೆಗ್ಗಳಿಕೆಗೂ ಪಾತ್ರರಾಗಿದ್ದಾರೆ, 409 ಇನ್ನಿಂಗ್ಸ್‌ಗಳಲ್ಲಿ ಮೈಲಿಗಲ್ಲು ಸಾಧಿಸಿದ್ದಾರೆ ಮತ್ತು ಕ್ರಿಸ್ ಗೇಲ್ ಅವರ ಹಿಂದಿನ 423 ಇನ್ನಿಂಗ್ಸ್‌ಗಳ ದಾಖಲೆಯನ್ನು ಮೀರಿಸಿದ್ದಾರೆ.




ಟಿ20 ಕ್ರಿಕೆಟ್‌ನಲ್ಲಿ ಅತಿಹೆಚ್ಚು ಶತಕ ಗಳಿಸಿದವರ ಪಟ್ಟಿಯಲ್ಲಿ ಕ್ರಿಸ್ ಗೇಲ್ 22 ಶತಕಗಳೊಂದಿಗೆ ಅಗ್ರಸ್ಥಾನದಲ್ಲಿದ್ದರೆ, ಬಾಬರ್ ಅಜಮ್ 13 ಶತಕಗಳೊಂದಿಗೆ ಎರಡನೇ ಸ್ಥಾನದಲ್ಲಿದ್ದಾರೆ. ಡೇವಿಡ್ ವಾರ್ನರ್ ಮತ್ತು ವಿರಾಟ್ ಕೊಹ್ಲಿ ತಲಾ 10 ಶತಕಗಳೊಂದಿಗೆ ಜಂಟಿಯಾಗಿ ಮೂರನೇ ಸ್ಥಾನದಲ್ಲಿದ್ದಾರೆ.

ಕಳೆದ ಎರಡು ಪಂದ್ಯಗಳಲ್ಲಿ ನಾನು ಹೆಚ್ಚು ರನ್ ಗಳಿಸಲಿಲ್ಲ ಎಂಬ ಅಂಶವೆಂದರೆ, ನಾನು ಚೆನ್ನಾಗಿ ಆಡಬಲ್ಲೆ ಮತ್ತು ನಾನು ಚೆಂಡನ್ನು ಚೆನ್ನಾಗಿ ಹೊಡೆಯುತ್ತಿದ್ದೇನೆ. ಆದರೂ ಅದು ನನ್ನಿಂದ ಸಾಧ್ಯವಾಗಲಿಲ್ಲ. ಆದರೆ ನಾನು ಎಷ್ಟು ದಿನ ಆಡುತ್ತೇನೆ ಗೊತ್ತಿಲ್ಲ. ಆಡುವ ತನಕ ಚೆನ್ನಾಗಿಯೇ ಆಡುವುದು ನನ್ನ ಉದ್ದೇಶ.

ಶತಕ ಅಥವಾ ಶತಕವಿಲ್ಲದಿದ್ದರೂ, ಹೆಚ್ಚು ಮುಖ್ಯವಾದ ವಿಷಯವೆಂದರೆ ಆಟವನ್ನು ಮುಗಿಸುವುದು, ಆ ಎರಡು ಅಂಕಗಳನ್ನು ಪಡೆಯಲು ನಾನು ಕೊನೆಯವರೆಗೂ ಇದ್ದೇನೆ ಎಂದು ಖಚಿತಪಡಿಸಿಕೊಳ್ಳುವುದು, ಅದು ಮತ್ತೆ ನಮ್ಮನ್ನು ಮೇಜಿನ ಮೇಲ್ಭಾಗದಲ್ಲಿ ಇರಿಸುತ್ತದೆ ಎಂದು ಕೊಹ್ಲಿ ಪಂದ್ಯದ ನಂತರ ಹೇಳಿದರು.

# ಪಂಜಾಬ್ ಕಿಂಗ್ಸ್‌ಗೆ ಸತತ 5ನೇ ಸೋಲು

**ಧರ್ಮಶಾಲಾ, ಮೇ 14:** ಐಪಿಎಲ್ 58ನೇ ಪಂದ್ಯ ಪಂಜಾಬ್ ಕಿಂಗ್ಸ್ ಹಾಗೂ ಮುಂಬೈ ಇಂಡಿಯನ್ಸ್ ನಡುವೆ ನಡೆಯಿತು. ಈ ಪಂದ್ಯ ಪ್ಲೇಆಫ್ ದೃಷ್ಟಿಯಿಂದ ಆತಿಥೇಯ ಪಂಜಾಬ್‌ಗೆ ಅತ್ಯಂತ ನಿರ್ಣಾಯಕವಾಗಿತ್ತು. ಆದರೆ ಪಂಜಾಬ್ ಗೆಲುವಿನ ಕನಸಿಗೆ ನೀರೆರೆಚಿದ ತಿಲಕ್ ವರ್ಮಾ ಏಕಾಂಗಿಯಾಗಿ ನಿಂತು ಮುಂಬೈ ತಂಡಕ್ಕೆ ರೋಚಕ ಜಯ ತಂದುಕೊಟ್ಟರು. ಪ್ಲೇಆಫ್ ರೇಸ್‌ನಿಂದ ಮುಂಬೈ ಅಧಿಕೃತವಾಗಿ ಹೊರಬಿದ್ದಿರುವುದರಿಂದ ಈ ಪಂದ್ಯ ಕೇವಲ ಔಪಚಾರಿಕವಾಗಿತ್ತು.



ಆದರೆ ಮೊಟ್ಟ ಮೊದಲ ಬಾರಿಗೆ ಮುಂಬೈ ತಂಡದ ನಾಯಕತ್ವವಹಿಸಿಕೊಂಡಿದ್ದ ಬುಮ್ರಾ ತಮ್ಮ ನಾಯಕತ್ವದ ಮೊದಲ ಪಂದ್ಯದಲ್ಲೇ ಸತತ ಸೋಲುಗಳಿಂದ ಕಂಗೆಟ್ಟಿದ್ದ ತಂಡಕ್ಕೆ ಗೆಲುವಿನ ರುಚಿ ತೋರಿಸಿದರು. ಈ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಪಂಜಾಬ್ 201 ರನ್ ಗುರಿ ನೀಡಿತು. ಈ ಗುರಿ ಬೆನ್ನಟ್ಟಿದ ಮುಂಬೈ ತಂಡ 20ನೇ ಓವರ್‌ನ 5ನೇ ಎಸೆತದಲ್ಲಿ ಗೆಲುವಿನ ದಡ ಮುಟ್ಟಿತು.

### ಪ್ರಭ್ಸಿಮ್ರಾನ್ ಅರ್ಧಶತಕ

ಈ ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಪಂಜಾಬ್ ಆಕ್ರಮಣಕಾರಿ ಆರಂಭವನ್ನು ಪಡೆಯಿತು. ಆರಂಭಿಕ ಆಟಗಾರ ಪ್ರಭ್ಸಿಮ್ರಾನ್ ಸಿಂಗ್ 32 ಎಸೆತಗಳಲ್ಲಿ ಆರು ಬೌಂಡರಿ ಮತ್ತು ನಾಲ್ಕು ಸಿಕ್ಸರ್‌ಗಳೊಂದಿಗೆ 57 ರನ್ ಗಳಿಸಿದರು. ಪ್ರಿಯಾಂಶ್ ಆರ್ಯ 17 ಎಸೆತಗಳಲ್ಲಿ 22 ರನ್ ಬಾರಿಸಿದರು. ಕೊನೆಯಲ್ಲಿ ಅಜ್ಮತುಲ್ಲಾ ಒಮರ್‌ಜೈ 17 ಎಸೆತಗಳಲ್ಲಿ 38 ರನ್‌ಗಳ ಉಪಯುಕ್ತ ಇನ್ನಿಂಗ್ಸ್ ಆಡಿದರು. ಆದರೆ ಇತರ ಬ್ಯಾಟ್ಸ್‌ಮನ್‌ಗಳು ಮಧ್ಯಮ ಓವರ್‌ಗಳಲ್ಲಿ ರನ್ ವೇಗ ಹೆಚ್ಚಿಸುವಲ್ಲಿ ವಿಫಲರಾದರು.

ನಂತರ ವಿಷ್ಣು ವಿನೋದ್ ಮತ್ತು ಕ್ಸೇವಿಯರ್ ಬಾರ್ಟ್ಲೆಟ್ ಕೊನೆಯ ಮೂರು ಓವರ್‌ಗಳಲ್ಲಿ 53 ರನ್ ಗಳಿಸಿ ತಂಡವನ್ನು 200 ರನ್‌ಗಳಿಗೆ ಕೊಂಡೊಯ್ದರು.

### ಶಾರ್ದೂಲ್‌ಗೆ 4 ವಿಕೆಟ್

ಮುಂಬೈ ಇಂಡಿಯನ್ಸ್ ಪರ ಶಾರ್ದೂಲ್ ಠಾಕೂರ್ 4 ಓವರ್‌ಗಳಲ್ಲಿ 39 ರನ್‌ಗಳಿಗೆ 4 ವಿಕೆಟ್ ಪಡೆದರೆ, ದೀಪಕ್ ಚಾಹರ್ ಕೂಡ 2 ವಿಕೆಟ್ ಪಡೆದರು. ಕಾರ್ಬಿನ್ ಬಾಷ್ 1 ವಿಕೆಟ್ ಪಡೆದರು. ಆದಾಗ್ಯೂ, ನಾಯಕ ಜಸ್ಪ್ರೀತ್ ಬುಮ್ರಾ ಈ ಪಂದ್ಯದಲ್ಲಿಯೂ ವಿಕೆಟ್ ಪಡೆಯಲಿಲ್ಲ.

### ಮುಂಬೈಗೆ ತಿಲಕ್ ಆಸರೆ

ಮುಂಬೈ ಇಂಡಿಯನ್ಸ್ ತಂಡವು ಕೂಡ ರನ್ ಚೇಸಿಂಗ್‌ನಲ್ಲಿ ಉತ್ತಮ ಆರಂಭವನ್ನೇ ಪಡೆಯಿತು. ರಯಾನ್ ರಿಕಲ್ಟನ್ 23 ಎಸೆತಗಳಲ್ಲಿ 48 ರನ್ ಗಳಿಸಿದರೆ, ರೋಹಿತ್ ಶರ್ಮಾ 25 ರನ್‌ಗಳ ಕಾಣಿಕೆ ನೀಡಿದರು. ನಂತರ ತಿಲಕ್ ವರ್ಮಾ ಆಕ್ರಮಣಕಾರಿಯಾಗಿ ಬ್ಯಾಟಿಂಗ್ ಮಾಡಿ ತಂಡವನ್ನು ಗೆಲುವಿನ ದಡ ಮುಟ್ಟಿಸಿದರು. ತಮ್ಮ ಇನ್ನಿಂಗ್ಸ್‌ನಲ್ಲಿ 33 ಎಸೆತಗಳನ್ನು ಎದುರಿಸಿದ ತಿಲಕ್ ಆರು ಬೌಂಡರಿಗಳು ಮತ್ತು ಅಷ್ಟೇ ಸಿಕ್ಸರ್‌ಗಳನ್ನು ಒಳಗೊಂಡಂತೆ ಅಜೇಯ 75 ರನ್ ಗಳಿಸಿದರು. ಹಾಗೆಯೇ ವಿಲ್ ಜ್ಯಾಕ್ಸ್ ಜೊತೆಗೂಡಿ 5ನೇ ವಿಕೆಟ್‌ಗೆ 56 ರನ್‌ಗಳ ಪಾಲುದಾರಿಕೆಯನ್ನು ಹಂಚಿಕೊಂಡರು. ಇದರಿಂದಾಗಿ ತಂಡವು 19.5 ಓವರ್‌ಗಳಲ್ಲಿ ಗುರಿ ತಲುಪಿತು.